23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 248 | ನವದೆಹಲಿ | ₹ಬೆಲೆ 10 | ಮಾರ್ಚ್ 14 2026, ಶನಿವಾರ

## ಒಳಪುಟಗಳಲ್ಲಿ

ಲೋಕಸಭೆಯಲ್ಲಿ ಎಲ್‌ಪಿಜಿ ಕೊರತೆ ಗದ್ದಲ; ಪ್ರತಿಭಟನೆ ನಡುವೆ ಪೂರಕ ಬೇಡಿಕೆಗಳಿಗೆ ಸದನ ಅಂಗೀಕಾರ - ಪು.4

ಕೇಂದ್ರ ಸಚಿವರ ಸೋದರ ಗೋಪಾಲ್ ಜೋಶಿ ಮತ್ತಿತರ ವಿರುದ್ಧದ ಪ್ರಕರಣ ರದ್ದು ಪಡಿಸಿದ ಹೈಕೋರ್ಟ್ - ಪು.5

ಎಲ್ಲ ಧರ್ಮಗಳ ಅಂತಿಮ ಗುರಿ ಪರಮ ಸತ್ಯ- ಜ್ಯೋತಿರ್ಮಯಾನಂದ ಮಹಾರಾಜ್ - ಪು.6

ಎರಡು ವರ್ಷ ಪೂರ್ಣಗೊಳಿಸಿದ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು: ಮಾಜಿ ಸಂಸದ ಡಾ. ಜಾಧವ ಅಭಿನಂದನೆ - ಪು.7

# ಸೋಮವಾರದಿಂದಲೇ ತಂಬಾಕು ಖರೀದಿ: ಬೆಳಗಾರರ ನೆರವಿಗೆ ಧಾವಿಸಿದ ಕೇಂದ್ರ

## ಕೇಂದ್ರ ಸಚಿವ ಪಿಯೂಷ್ ಗೋಯಲ್ ಜತೆ ಎಚ್.ಡಿ. ದೇವೇಗೌಡ, ಎಚ್.ಡಿ. ಕುಮಾರಸ್ವಾಮಿ ಚರ್ಚೆ



**ನವದೆಹಲಿ, ಮಾ.13:** ಕರ್ನಾಟಕವೂ ಸೇರಿ ದೇಶಾದ್ಯಂತ ತಂಬಾಕು ಬೆಳೆಗಾರರ ನೆರವಿಗೆ ಕೇಂದ್ರ ಸರಕಾರ ಧಾವಿಸಿದೆ. ಈ ಸಂಬಂಧ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವರಾದ ಪಿಯೂಷ್ ಗೋಯಲ್ ಅವರ ಜತೆ ಮಾತುಕತೆ ನಡೆಸಿದರು.

ಸಚಿವ ಗೋಯಲ್ ಅವರಿಗೆ ತಂಬಾಕು ಬೆಳೆಗಾರರ ಸಮಸ್ಯೆಗಳನ್ನು ಮನವರಿಕೆ ಮಾಡಿ ಕೊಡಲಾಯಿತು. ಎಲ್ಲ ಮನವಿಗಳನ್ನು ಸಚಿವರು ಆಲಿಸಿ, ಅವುಗಳನ್ನು ಕೂಡಲೇ ಪರಿಹರಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾದರು ಎಂದು ಕುಮಾರಸ್ವಾಮಿ ತಿಳಿಸಿದರು.

ಸೋಮವಾರದಿಂದಲೇ ತಂಬಾಕು ಖರೀದಿ, ವಿದೇಶ ಮಾರುಕಟ್ಟೆಗಳಿಗೆ ರಫ್ತು, ಹೊಸ ವಿದೇಶಿ ಮಾರುಕಟ್ಟೆಗಳ ಅನ್ವೇಷಣೆ ಸೇರಿದಂತೆ ಬೆಳೆಗಾರ ಬೇಡಿಕೆಗಳಿಗೆ ಸಚಿವರು ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದರು. ಅಲ್ಲದೆ, ಈ ಸಂದರ್ಭದಲ್ಲಿ ಸೃಷ್ಟಿಯಾಗಿರುವ ಬಿಕ್ಕಟ್ಟಿನ ಶಮನಕ್ಕೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸಚಿವ ಗೋಯಲ್ ಅವರು ತಮ್ಮ ಸಚಿವಾಲಯದ ಉನ್ನತ ಅಧಿಕಾರಿಗಳು ಹಾಗೂ ತಂಬಾಕು ಖರೀದಿಸುವ ಉದ್ಯಮದ ಪ್ರಮುಖರ ಜತೆ ಮಾತನಾಡಿ ಬೆಳೆಗಾರರ ನೆರವಿಗೆ ಬರುವಂತೆ ಸೂಚಿಸಿದರು ಎಂದು ಕುಮಾರಸ್ವಾಮಿ ಅವರು ಮಾಹಿತಿ ನೀಡಿದರು.

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಉಪಸ್ಥಿತಿಯಲ್ಲಿ ನಡೆದ ಈ ಸಭೆಯಲ್ಲಿ ಮಾಜಿ ಸಚಿವ ಸಾ.ರಾ. ಮಹೇಶ್, ಮೈಸೂರು –ಕೊಡಗು ಸಂಸದ ಯದುವೀರ್ ಚಾಮರಾಜೇಂದ್ರ ಕೃಷ್ಣದತ್ತ ಒಡೆಯರ್, ಶಾಸಕರಾದ ಎ. ಮಂಜು, ಜಿ.ಡಿ. ಹರೀಶ್ ಗೌಡ, ಸಿ.ಎನ್. ಮಂಜೇಗೌಡ, ಮಾಜಿ ಶಾಸಕರಾದ ಮಹದೇವು, ಅಶ್ವಿನ್ ಕುಮಾರ್ , ಜೆಡಿಎಸ್ ಹಿರಿಯ ಮುಖಂಡ ಕೃಷ್ಣನಾಯಕ ಹಾಗೂ ಕೋಲಾರ ಸಂಸದ ಮಲ್ಲೇಶ್ ಬಾಬು ಅವರು ಹಾಗೂ ವಾಣಿಜ್ಯ ಸಚಿವಾಲಯದ ಉನ್ನತ ಅಧಿಕಾರಿಗಳು ಭಾಗಿಯಾಗಿದ್ದರು.

**ಖರೀದಿಗೆ ಸೂಚನೆ: ಸಾ.ರಾ. ಮಹೇಶ್:**

ಸಭೆ ನಂತರ ದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಮಾಜಿ ಸಚಿವ ಸಾ.ರಾ. ಮಹೇಶ್ ಅವರು, ಸೋಮವಾರದಿಂದ ತಂಬಾಕು ಖರೀದಿಗೆ ಸಚಿವ ಪಿಯೂಷ್ ಗೋಯಲ್ ಅವರು ಸೂಚನೆ ನೀಡಿದ್ದಾರೆ ಎಂದು ಹೇಳಿದರು. ಅಲ್ಲದೆ, 190 ದೇಶಗಳ ರಾಯಭಾರಿಗಳಿಗೆ ಪತ್ರ ಬರೆದು ಮುಕ್ತ ಮಾರುಕಟ್ಟೆಯಲ್ಲಿ ತಂಬಾಕು ಖರೀದಿಗೆ ಕೋರಿಕೆ ಸಲ್ಲಿಸಲಾಗುವುದು. ಅಲ್ಲದೆ, ಈವರೆಗೆ ರಫ್ತು ಮಾಡದಿರುವ ದೇಶಗಳಿಗೂ ತಂಬಾಕು ರಫ್ತು ಮಾಡುವ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಕೇಂದ್ರ ವಾಣಿಜ್ಯ ಸಚಿವರು ಭರವಸೆ ನೀಡಿದ್ದಾರೆ. ಹಾಗೆಯೇ, ತಂಬಾಕಿಗೆ ಬೆಂಬಲ ಬೆಲೆ ನೀಡಬೇಕೆಂದು ರಾಜ್ಯ ಸರಕಾರಕ್ಕೆ ಮನವಿ ಮಾಡುತ್ತೇವೆ ಎಂದು ಸಾ.ರಾ. ಮಹೇಶ್ ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಖರೀದಿ ನಿಲ್ಲಿಸಿರುವ ಪರಿಣಾಮದಿಂದ ತಂಬಾಕು ಬೆಲೆಯಲ್ಲಿ ಕುಸಿತ ಆಗಿದೆ. 320ರಿಂದ 250 ರೂ.ವರೆಗೂ ಕುಸಿತ ಕಂಡಿದೆ.

ಈ ಹಿನ್ನಲೆ ಗೋಯಲ್ ಅವರನ್ನು ಭೇಟಿಯಾಗಿ ಬೆಲೆ ಹೆಚ್ಚಿಸುವ ಮತ್ತು ಪರಿಹಾರ ನೀಡುವ ಬಗ್ಗೆ ಮನವಿ ಮಾಡಲಾಗಿದೆ. ಸೂಕ್ತವಾದ ಮಾರುಕಟ್ಟೆ ವ್ಯವಸ್ಥೆ ನೀಡಲು ಕೇಳಿದ್ದೇವೆ. ಅಲ್ಲದೆ, ತಂಬಾಕು ಮಂಡಳಿಯಲ್ಲಿ ಉತ್ತಮ ಮೂಲಸೌಕರ್ಯಗಳು ಅಗತ್ಯವಾಗಿದ್ದು, ಅದರ ಬಗ್ಗೆಯೂ ಕೇಂದ್ರ ಸಚಿವರ ಗಮನ ಸೆಳೆಯಲಾಗಿದೆ ಎಂದು ಸಾ.ರಾ. ಮಹೇಶ್ ಅವರು ಹೇಳಿದರು.

ಶಾಸಕ ಎ. ಮಂಜು ಅವರು ಮಾತನಾಡಿ, ಕರ್ನಾಟಕದಲ್ಲಿ 100 ದಶಲಕ್ಷ ಟನ್ ತಂಬಾಕು ಬೆಳೆಯಲು ತಂಬಾಕು ಮಂಡಳಿ ಅವಕಾಶ ನೀಡಿದೆ. ಈ ವರ್ಷ 80 ದಶಲಕ್ಷ ಟನ್ ತಂಬಾಕು ಬೆಳೆಯಲಾಗಿದೆ. ನಾವು ಬೆಳೆದ ಸೊಪ್ಪನ್ನು ಸರ್ಕಾರ ನಿರ್ಧಾರ ಮಾಡಿದ ಬೆಲೆಯಲ್ಲಿ ಖರೀದಿ ಮಾಡಬೇಕಿದೆ. ಈ ಹಿಂದೆ ಖರೀದಿ ಭರವಸೆ ನೀಡಿದ ಕಂಪನಿಗಳು ಖರೀದಿ ಮಾಡಿಲ್ಲ. ಈಗ ಬೆಳೆದ ಸೊಪ್ಪನ್ನು ಕೂಡಲೇ ಖರೀದಿ ಮಾಡಬೇಕು. ಕೇಂದ್ರ ಸರ್ಕಾರ ಇದರಲ್ಲಿ ಮಧ್ಯ ಪ್ರವೇಶ ಮಾಡಬೇಕು ಎಂದು ಮನವಿ ಮಾಡಿದ್ದೇವೆ ಎಂದು ಹೇಳಿದರು.

### ಎಚ್‌ಎನ್ ವ್ಯಾಲಿ, ಕೆಸಿ ವ್ಯಾಲಿ ತೃತೀಯ ಹಂತದ ಸಂಸ್ಕರಣೆ

# ಯೋಜನೆ ಜಾರಿಯಾಗದಿದ್ದರೆ ರಾಜ್ಯ ಸರ್ಕಾರದ ವಿರುದ್ಧ ಪಾದಯಾತ್ರೆ: ಸಂಸದ ಸುಧಾಕರ್ ಎಚ್ಚರಿಕೆ



**ನವದೆಹಲಿ, ಮಾ.13:** ಎಚ್‌ಎನ್ ವ್ಯಾಲಿ ಹಾಗೂ ಕೆಸಿ ವ್ಯಾಲಿ ಎಸ್‌ಟಿಪಿಗಳ ನೀರನ್ನು ಮೂರನೇ ಹಂತದಲ್ಲಿ ಸಂಸ್ಕರಿಸಲು ಕಾಂಗ್ರೆಸ್ ಸರ್ಕಾರ ಕ್ರಮ ಕೈಗೊಳ್ಳದಿದ್ದರೆ ಪಾದಯಾತ್ರೆ ನಡೆಸಿ ಹೋರಾಟ ಮಾಡುತ್ತೇವೆ ಎಂದು ಸಂಸದ ಡಾ.ಕೆ.ಸುಧಾಕರ್ ಎಚ್ಚರಿಕೆ ನೀಡಿದರು.

ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಚ್‌ಎನ್ ವ್ಯಾಲಿ, ಕೆಸಿ ವ್ಯಾಲಿ ಯೋಜನೆಯಡಿ ಚಿಕ್ಕಬಳ್ಳಾಪುರ, ಕೋಲಾರ ಭಾಗಕ್ಕೆ 2 ಹಂತಗಳಲ್ಲಿ ನೀರು ಸಂಸ್ಕರಣೆಯಾಗಿ ಬರುತ್ತಿದೆ. ಆದರೆ ಇತ್ತೀಚೆಗೆ ಈ ನೀರು ಸರಿಯಾಗಿ ಸಂಸ್ಕರಣೆಯಾಗುತ್ತಿಲ್ಲ ಎಂಬ ದೂರು ಬಂದಿದೆ. ಈ ಬಗ್ಗೆ ಜಲಮಂಡಳಿ ಅಧಿಕಾರಿಗಳಿಗೆ ಸರ್ಕಾರ ಕಟ್ಟುನಿಟ್ಟಾದ ಸೂಚನೆ ನೀಡಬೇಕಿದೆ. ಸಿಂಗಾಪುರದಲ್ಲಿ ಕೊಳಚೆ ನೀರನ್ನು ಕುಡಿಯುವ ಮಟ್ಟಕ್ಕೆ ಶುದ್ಧೀಕರಣ ಮಾಡಲಾಗುತ್ತಿದೆ. ತೃತೀಯ ಹಂತದ ಸಂಸ್ಕರಣೆ ನಂತರ ಇನ್ನಷ್ಟು ಫಿಲ್ಟರ್ ಮಾಡಿ ಕುಡಿಯುವ ನೀರಿಗೆ ಬಳಸಲಾಗುತ್ತಿದೆ. ಆ ನೀರು ಹರಿಯುವ ನದಿಯಷ್ಟು ಶುದ್ಧವಾಗಿದೆ. ನಮೀಬಿಯಾದಲ್ಲೂ ಇದೇ ರೀತಿ ಬಳಸಲಾಗುತ್ತಿದೆ. ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಇನ್ನಷ್ಟು ಶುದ್ಧ ಮಾಡುವ ಅವಕಾಶ ಸರ್ಕಾರಕ್ಕಿದೆ. ಆ ಬದ್ಧತೆ ಹಾಗೂ ಜವಾಬ್ದಾರಿ ಸರ್ಕಾರಕ್ಕೆ ಇರಬೇಕು ಎಂದರು.

ಇದಕ್ಕೆ ಸಂಬಂಧಿಸಿದಂತೆ ಬಿಜೆಪಿ ಹೋರಾಟ ಮಾಡಲಿದೆ. ವಿದ್ಯಾರ್ಥಿಗಳ ಪರೀಕ್ಷೆ ನಡೆಯುತ್ತಿದೆ. ಬೀದಿಬದಿ ವ್ಯಾಪಾರಿಗಳು ಕೆಲಸ ಮಾಡುತ್ತಿದ್ದಾರೆ. ಬಂದ್ ಮಾಡಿದರೆ ಇವರೆಲ್ಲರಿಗೂ ಸಮಸ್ಯೆ ಹೆಚ್ಚಾಗುತ್ತದೆ. ಜನರಿಗೆ ಕಷ್ಟ ಕೊಡದೆ, ಯಾರಿಗೂ ನಷ್ಟ ಉಂಟುಮಾಡದೆ ಹೋರಾಟ ಮಾಡಬೇಕಿದೆ. ಬಂದ್‌ಗೆ ನಾನಾಗಲೀ, ಪಕ್ಷವಾಗಲೀ ಬೆಂಬಲಿಸುವುದಿಲ್ಲ. ಬಯಲುಸೀಮೆಯ ಮೂರು ಜಿಲ್ಲೆಗಳಲ್ಲಿ ಪಾದಯಾತ್ರೆ ಮಾಡಿ ಜನರಿಗೆ ಅರಿವು ಮೂಡಿಸುವ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

ಬಯಲುಸೀಮೆಗೆ ಯಾವುದೇ ನದಿ ಮೂಲಗಳಿಲ್ಲ. ಈ ಬಗ್ಗೆ ನಾನು ಅನೇಕ ಬಾರಿ ವಿಧಾನಸಭೆಯಲ್ಲಿ ಪ್ರಶ್ನೆ ಮಾಡಿದ್ದೆ ಎಂದರು. 2014 ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಳಿ ಚರ್ಚಿಸಿದಾಗ ಎಚ್‌ಎನ್ ವ್ಯಾಲಿ, ಕೆ.ಸಿ.ವ್ಯಾಲಿ ಜಾರಿಗೆ ಸಹಕಾರ ನೀಡಿದ್ದರು. ಅದರಿಂದಾಗಿ 60 ಕೆರೆಗಳಿಗೆ ನೀರು ತುಂಬಿಸುವ ಕೆಲಸವಾಯಿತು. ಅದರಿಂದಾಗಿ 200–300 ಅಡಿಗೆ ಅಂತರ್ಜಲ ದೊರೆಯುತ್ತಿದೆ. ಆಗ ಕೇವಲ ಕೆರೆಗಳಿಗೆ ನೀರು ತುಂಬಿಸುವುದು ಮಾತ್ರ ಉದ್ದೇಶವಾಗಿತ್ತು. ಇದು ಕುಡಿಯಲು ಯೋಗ್ಯವಲ್ಲ ಎನ್ನುವುದು ಎಲ್ಲರಿಗೂ ಗೊತ್ತಿತ್ತು ಎಂದರು.

**ಎತ್ತಿನಹೊಳೆ ಯೋಜನೆ:** ಎರಡು ವರ್ಷದಲ್ಲಿ ಎತ್ತಿನಹೊಳೆ ಯೋಜನೆ ತರುತ್ತೇವೆ ಎಂದು ಹೇಳಲಾಗಿತ್ತು. 2014ರಲ್ಲಿ ಲೋಕಸಭಾ ಚುನಾವಣೆಯ ವೇಳೆ ಕಾಮಗಾರಿಯ ಉದ್ಘಾಟನಾ ಕಾರ್ಯಕ್ರಮವನ್ನು ಕಾಂಗ್ರೆಸ್‌ನಿಂದ ಮಾಡಲಾಗಿತ್ತು. 12 ವರ್ಷ ಕಳೆದರೂ ಕಾಮಗಾರಿ ಮುಗಿದಿಲ್ಲ. ಬಿಜೆಪಿ ಅಧಿಕಾರದಲ್ಲಿದ್ದಾಗಲೇ ಈ ಯೋಜನೆ ರೂಪಿಸಲಾಗಿತ್ತು. ಮೊದಲಿಗೆ 8,000 ಕೋಟಿ ರೂ. ಇದ್ದ ಯೋಜನೆಯ ಮೊತ್ತ ಈಗ 30 ಸಾವಿರ ಕೋಟಿ ರೂ.ಗೆ ತಲುಪಿದೆ. ಕಾಂಗ್ರೆಸ್‌ಗೆ ನಿಜವಾದ ಬದ್ಧತೆ ಇದ್ದಿದ್ದರೆ ಕಾಮಗಾರಿ ಪೂರ್ಣಗೊಳ್ಳಲು ಇಷ್ಟು ವರ್ಷಗಳು ಬೇಕಾಗಿರಲಿಲ್ಲ. 70–80 ಲಕ್ಷ ಜನರು ಯೋಜನೆಯ ಬಗ್ಗೆ ಅಪಾರ ನಿರೀಕ್ಷೆ ಹೊಂದಿದ್ದಾರೆ. ಎತ್ತಿನಹೊಳೆಯಿಂದ ನೀರು ಬಂದಿದ್ದರೆ ಎಚ್‌ಎನ್ ವ್ಯಾಲಿ, ಕೆ.ಸಿ ವ್ಯಾಲಿಯ ನೀರನ್ನು ಯಾರೂ ಬಳಸುತ್ತಿರಲಿಲ್ಲ. ಕೋವಿಡ್ ಇದ್ದಾಗಲೂ ಬಿಜೆಪಿ ಈ ಯೋಜನೆಗೆ ಹೆಚ್ಚು ಅನುದಾನ ನೀಡಿದೆ. ಬಸವರಾಜ ಬೊಮ್ಮಾಯಿ ಸಿಎಂ ಆಗಿದ್ದಾಗ 3,000 ಕೋಟಿ ರೂ. ನೀಡಲಾಗಿತ್ತು. ಆದರೆ ಬಳಿಕ ಸರಿಯಾದ ಅನುದಾನ ಸಿಕ್ಕಿಲ್ಲ. ಕಾಂಗ್ರೆಸ್ ಸರ್ಕಾರ ಅತಿ ಶೀಘ್ರದಲ್ಲಿ ಕಾಮಗಾರಿ ಮುಗಿಸಿ ರೈತರ ಋಣ ತೀರಿಸಬೇಕು ಎಂದು ಆಗ್ರಹಿಸಿದರು.

### ರಾಜಕೀಯದ ಹುಚ್ಚು, ಅಭಿವೃದ್ಧಿ ಹಾಳು

ಕರ್ನಾಟಕದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದ್ದು, ಜನರ ಬದುಕಿನ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಜನರು ಬಹುಮತ ನೀಡಿದ್ದರೂ ರಾಜಕೀಯ ಅಸ್ಥಿರತೆಯಿಂದ ಆಡಳಿತ ಹಾಳಾಗಿದೆ. ಒಂದು ಬಣದ ಶಾಸಕರು ಒಂದು ಸಲ ಲಾಬಿ ಮಾಡಿದರೆ, ಮತ್ತೊಂದು ಬಣದ ಶಾಸಕರು ಮತ್ತೊಂದು ಸಲ ಲಾಬಿ ಮಾಡುತ್ತಾರೆ. ಈ ನಡುವೆ ಕುದುರೆ ವ್ಯಾಪಾರ ಕೂಡ ನಡೆಯುತ್ತಿದೆ. ಜನರು ಇಷ್ಟೆಲ್ಲ ಅಧಿಕಾರ ನೀಡಿದ್ದರೂ ಕಾಂಗ್ರೆಸ್ ಶಾಸಕರು ಜನರಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಆಕ್ರೋಶ ಹೊರಹಾಕಿದರು.

ಯುಪಿಎ ಸರ್ಕಾರಕ್ಕೆ ಹೋಲಿಸಿದರೆ ರೈಲ್ವೆ ಕ್ಷೇತ್ರದಲ್ಲಿ ಹತ್ತು ಪಟ್ಟು ಅನುದಾನವನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ನೀಡಿದೆ. ಹೆಣ್ಣುಮಕ್ಕಳ ಸರ್ವಿಕಲ್ ಕ್ಯಾನ್ಸರ್ ಲಸಿಕೆಗೆ ಸುಮಾರು 6000 ರೂ. ಖರ್ಚಾಗುತ್ತದೆ. ಆ ಲಸಿಕೆಯನ್ನು ಸಂಪೂರ್ಣ ಉಚಿತವಾಗಿ ನೀಡುವ ಕೆಲಸವನ್ನು ಮೋದಿ ಸರ್ಕಾರ ಮಾಡಿದೆ. ಇಂತಹ ಅನೇಕ ಯೋಜನೆಗಳನ್ನು ಕೇಂದ್ರ ಸರ್ಕಾರ ನೀಡಿದೆ. ಜೊತೆಗೆ ಹೆಚ್ಚು ಅನುದಾನ, ತೆರಿಗೆ ಹಂಚಿಕೆಯನ್ನು ಕರ್ನಾಟಕಕ್ಕೆ ನೀಡಲಾಗಿದೆ ಎಂದು ದೂರಿದರು.




ಎಲ್‌ಪಿಜಿ ಕೊರತೆ ಬಗ್ಗೆ ಬಜೆಟ್ ಅಧಿವೇಶನದ ನಡುವೆ ವಿಪಕ್ಷ ಸದಸ್ಯರು ನವದೆಹಲಿಯ ಪಾರ್ಲಿಮೆಂಟ್ ಭವನದ ಬಳಿ ಶುಕ್ರವಾರ ಪ್ರತಿಭಟನೆ ನಡೆಸಿದರು.

# ಆಪರೇಷನ್ ಕಮಲ ಭೀತಿ: ಒಡಿಶಾ ಕೈ ಶಾಸಕರಿಗೆ ಬಿಡದಿ ರೆಸಾರ್ಟ್‌ನಲ್ಲಿ ಆಶ್ರಯ

**ಬೆಂಗಳೂರು, ಮಾ.13:** ರಾಜ್ಯಸಭೆ ಚುನಾವಣೆಯ ಹಿನ್ನೆಲೆಯಲ್ಲಿ ಆಪರೇಷನ್ ಕಮಲ ತಡೆಯಲು ಹೊರ ರಾಜ್ಯದ ಶಾಸಕರನ್ನು ಕರ್ನಾಟಕಕ್ಕೆ ಕರೆತರಲಾಗಿದ್ದು, ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಆಶ್ರಯದಲ್ಲಿ ರಕ್ಷಣೆ ನೀಡಲಾಗಿದೆ. ಶಾಸಕರನ್ನು ಬಿಡದಿಯ ಈಗಲ್‌ಟನ್ ರೆಸಾರ್ಟ್‌ನಲ್ಲಿ ಇರಿಸಲಾಗಿದ್ದು, ಡಿ.ಕೆ. ಶಿವಕುಮಾರ್ ಶಾಸಕರನ್ನು ಶುಕ್ರವಾರ ಸಂಜೆ ಭೇಟಿ ಮಾಡಿ ಯೋಗಕ್ಷೇಮ ವಿಚಾರಿಸಿದರು. ಒಡಿಸ್ಸಾದಿಂದ ರಾಜ್ಯಸಭೆ ಚುನಾವಣೆಗೆ ಡಾ. ದತ್ತೇಶ್ವರ ಹೋಟ, ದಿಲೀಪ್‌ಕುಮಾರ್ ರಾಯ್, ಮನಮೋಹನ್ ಸಮಲ್, ಸಂತೃಪ್ತ್ ಮಿಶ್ರಾ, ಸುಜಿತ್‌ಕುಮಾರ್, ಕಂಟೆ ಸಯನ್ನ ಅವರು ಅಭ್ಯರ್ಥಿಗಳಾಗಿದ್ದಾರೆ.



ಒಡಿಶಾ ವಿಧಾನಸಭೆಯಲ್ಲಿ ಬಿಜೆಪಿ 79, ಕಾಂಗ್ರೆಸ್ 14, ಬಿಜು–ಜನತಾದಳ 50, ಪಕ್ಷೇತರರು 3 ಸದಸ್ಯರಿದ್ದಾರೆ. ಶತಾಯಗತಾಯ ಒಂದು ಸ್ಥಾನದಲ್ಲಿ ಗೆಲ್ಲಲೇಬೇಕೆಂಬ ಕಾರಣಕ್ಕಾಗಿ ಆಪರೇಷನ್ ಕಮಲದಿಂದ ತಮ್ಮ ಸದಸ್ಯರನ್ನು ರಕ್ಷಿಸಿಕೊಳ್ಳಲು ಕಾಂಗ್ರೆಸ್ ಮುಂದಾಗಿದೆ. ಹಾಗಾಗಿ ಕಾಂಗ್ರೆಸ್ 14 ಸದಸ್ಯರ ಜತೆ ಪಕ್ಷೇತರ ಇಬ್ಬರು ಸದಸ್ಯರನ್ನು ಒಳಗೊಂಡಂತೆ ಒಟ್ಟು 16 ಶಾಸಕರನ್ನು ರೆಸಾರ್ಟ್‌ನಲ್ಲಿ ಇರಿಸಲಾಗಿದೆ. ಮತ್ತೊಂದೆಡೆ ಒಡಿಶಾ ರಾಜ್ಯಸಭಾ ಚುನಾವಣೆಯಲ್ಲಿ ಬಿಜೆಪಿಗೆ ಮೂವರು ಪಕ್ಷೇತರ ಶಾಸಕರು ಬೆಂಬಲ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಮನಮೋಹನ್ ಸಮಲ್ ಮತ್ತು ಸುಜಿತ್‌ಕುಮಾರ್ ಎಂಬ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಜೊತೆಗೆ ಮಾಜಿ ಕೇಂದ್ರ ಸಚಿವ ದಿಲೀಪ್‌ರಾಯ್ ಅವರನ್ನು ಬೆಂಬಲಿಸುತ್ತಿದೆ. ಬಿಜೆಡಿ ಡಾ. ಸಂತೃಪ್ತ ಮಿಶ್ರಾ ಅವರನ್ನು ಅಧಿಕೃತವಾಗಿ ಕಣಕ್ಕಿಳಿಸಿದ್ದು, ಡಾ. ದತ್ತೇಶ್ವರ ಹೋಟ ಅವರನ್ನು ನಾಲ್ಕನೇ ಸ್ಥಾನಕ್ಕಿಳಿಸಲಾಗಿದೆ. ಅಡ್ಡ ಮತದಾನದ ಆತಂಕ ಇರುವುದರಿಂದಾಗಿ ಕಾಂಗ್ರೆಸ್ ತನ್ನ ಅಭ್ಯರ್ಥಿಗಳನ್ನು ರಕ್ಷಿಸಿಕೊಳ್ಳುವ ಪ್ರಯತ್ನ ನಡೆಸಿದೆ. ಈ ಹಿಂದೆಯೂ ಗುಜರಾತ್‌ನ ಹಾಗೂ ಮಹಾರಾಷ್ಟ್ರ ಶಾಸಕರನ್ನು ಬೆಂಗಳೂರಿನ ರೆಸಾರ್ಟ್‌ಗೆ ಕರೆತಂದು ರಕ್ಷಣೆ ಮಾಡಿ ಡಿಕೆಶಿ ಅವರು ಟ್ರಬಲ್ ಶೂಟರ್ ಆಗಿ ಕೆಲಸ ಮಾಡಿದ್ದರು. ಈಗ ಒಡಿಶಾ ಕಾಂಗ್ರೆಸ್ ಶಾಸಕರ ರಕ್ಷಣೆಯ ಹೊಣೆಯನ್ನು ಹೈಕಮಾಂಡ್ ಡಿ.ಕೆ.ಶಿವಕುಮಾರ್ ಅವರ ಹೆಗಲಿಗೆ ಹಾಕಿದೆ.

### ಪಕ್ಷ ಹೇಳಿದ್ದನ್ನು ಮಾಡುತ್ತೇನೆ

ಒಡಿಶಾ ಶಾಸಕರನ್ನು ನಾನು ಕರೆಸಿಲ್ಲ, ಅವರೇ ಬೆಂಗಳೂರಿಗೆ ಬಂದಿದ್ದಾರೆ ಒಡಿಷಾ ರಾಜ್ಯದ ಪಿಸಿಸಿ ಅಧ್ಯಕ್ಷರು ಕರೆ ಮಾಡಿ ನಮ್ಮ ಶಾಸಕರು ಬರುತ್ತಿದ್ದಾರೆ ಎಂದು ಹೇಳಿದರು. ಹೀಗಾಗಿ ಅವರಿಗೆ ವ್ಯವಸ್ಥೆ ಮಾಡಲಾಗಿದೆ. ಪಕ್ಷ ಹೇಳಿದ್ದನ್ನು ಮಾಡಬೇಕು. ಎಲ್ಲಾ ರಾಜ್ಯಗಳಲ್ಲೂ ಈ ರೀತಿ ನಡೆಯುತ್ತಿರುತ್ತದೆ. ಇದು ಹೊಸತೇನಲ್ಲ ಎಂದರು.

**ಕಾಲ ನಿರ್ಣಯ ಮಾಡುತ್ತದೆ:** ಪಕ್ಷಕ್ಕೆ ಈ ರೀತಿ ಟ್ರಬಲ್ ಆದಾಗೆಲ್ಲಾ ನೀವೇ ತಲೆ ಕೊಡುತ್ತೀರಿ, ನಿಮ್ಮ ಸಮಸ್ಯೆ ಬಗೆಹರಿಯುತ್ತಿಲ್ಲವಲ್ಲ ಎಂದು ಕೇಳಿದಾಗ, ಕಾಲ ನಿರ್ಣಯ ಮಾಡುತ್ತದೆ ಎಂದು ತಿಳಿಸಿದರು. ಸಚಿವ ಸಂಪುಟ ಪುನಾರಚನೆಗೆ ಒತ್ತಡ ಹೆಚ್ಚುತ್ತಿರುವ ಬಗ್ಗೆ ಕೇಳಿದಾಗ, ಮಂತ್ರಿಯಾಗುವ ಆಸೆ ಇರುತ್ತದೆ. ನಾನು ಮೊದಲ ಬಾರಿಗೆ ಮಂತ್ರಿಯಾಗಿದ್ದೆ. ಈಗ ನಮಗೆ ವಯಸ್ಸಾಗಿದೆ. ಹಿರಿಯ ನಾಗರಿಕರಾಗಿದ್ದೇವೆ. ಅವರಿಗೂ ಆಸೆ ಇದೆ ಎಂದರು. ಬಜೆಟ್ ಕುರಿತಾಗಿ ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಅವರ ಅಸಮಾಧಾನದ ಹೇಳಿಕೆ ಬಗ್ಗೆ ಕೇಳಿದಾಗ, ಅವರು ಜಿಲ್ಲಾ ನ್ಯಾಯಾಲಯ ಬೇಕು ಎಂದು ಕೇಳಿದ್ದರು, ನಾವು ಅದನ್ನು ನೀಡಿದ್ದೇವೆ. ಬೇಕಾದಷ್ಟು ಕೆಲಸವನ್ನು ನೀಡಿದ್ದೇವೆ. ಅವುಗಳನ್ನು ಘೋಷಣೆ ಮಾಡುತ್ತೇವೆ ಎಂದು ತಿಳಿಸಿದರು.

# ಭಾರತೀಯರ ಸರಾಸರಿ ಆಯುಷ್ಯ 71ರಿಂದ 72 ವರ್ಷ: ಸಂಸದ ಡಾ.ಸಿ.ಎನ್. ಮಂಜುನಾಥ್

**ನವದೆಹಲಿ, ಮಾ.13:** ಲೋಕಸಭೆಯಲ್ಲಿಂದು ಪೂರಕ ಅನುದಾನಗಳ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ದೇಶದ ಸಾರ್ವಜನಿಕ ಆರೋಗ್ಯ ಪರಿಸರ ಸಂರಕ್ಷಣೆ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದ ಹಲವು ಮಹತ್ವದ ವಿಷಯಗಳ ಬಗ್ಗೆ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ.ಸಿ.ಎನ್. ಮಂಜುನಾಥ್ ಪ್ರಸ್ತಾಪಿಸಿದರು.

ಬಾಲಕಿಯರಲ್ಲಿ ಗರ್ಭಾಶಯ ಗ್ರೀವಾ ಕ್ಯಾನ್ಸರ್ ತಡೆಗಟ್ಟುವ ಉದ್ದೇಶದಿಂದ ಮಾನವ ಪ್ಯಾಪಿಲೋಮಾ ವೈರಸ್ ಲಸಿಕೆ ಕಾರ್ಯಕ್ರಮವನ್ನು ಆರಂಭಿಸಿರುವುದಕ್ಕೆ ಕೇಂದ್ರ ಸರ್ಕಾರವನ್ನು ಅಭಿನಂದಿಸಿದರು. ರಾಜಸ್ಥಾನದಲ್ಲಿ ಕಳೆದ ವಾರ ಪ್ರಾರಂಭವಾದ ಈ ಕಾರ್ಯಕ್ರಮವು ಮಹಿಳೆಯರ ಆರೋಗ್ಯ ಸಬಲೀಕರಣದ ದಿಸೆಯಲ್ಲಿ ಮಹತ್ವದ ಹೆಜ್ಜೆಯಾಗಿದೆ. ಭಾರತದಲ್ಲಿ ಆರೋಗ್ಯ ಮೂಲಸೌಕರ್ಯ ಹಾಗೂ ವೈದ್ಯಕೀಯ ಸೇವೆಗಳ ಸುಧಾರಣೆಯಿಂದ ಭಾರತೀಯರ ಸರಾಸರಿ ಆಯುಷ್ಯವು ಈಗ 71 ರಿಂದ 72 ವರ್ಷಗಳಷ್ಟಾಗಿದೆ. ಮಕ್ಕಳಿಗಾಗಿ ಭಾರತದಲ್ಲಿ ಯಶಸ್ವಿಯಾಗಿ ನಡೆಯುತ್ತಿರುವ ವಿಶ್ವವ್ಯಾಪಿ ಲಸಿಕಾ ಕಾರ್ಯಕ್ರಮದಡಿ ಶೇ.97 ರಷ್ಟು ಮಕ್ಕಳಿಗೆ ಲಸಿಕೆ ನೀಡಲಾಗುತ್ತಿದೆ ಎಂಬುದನ್ನು ಅವರು ಶ್ಲಾಘಿಸಿದರು. ಸಾರ್ವಜನಿಕ ಆರೋಗ್ಯ ಕ್ಷೇತ್ರದಲ್ಲಿ ಭಾರತ ಕೈಗೊಂಡಿರುವ ಕ್ರಮಗಳನ್ನು ವಿಶ್ವ ಆರೋಗ್ಯ ಸಂಸ್ಥೆ ಸಹ ಪ್ರಶಂಸಿಸಿರುವುದನ್ನು ಅವರು ಉಲ್ಲೇಖಿಸಿದರು. ನ್ಯೂಮೋನಿಯಾ ಸೋಂಕಿನಿಂದ ವಯಸ್ಕರು ಹಾಗೂ ವಿಶೇಷವಾಗಿ ಹಿರಿಯ ನಾಗರಿಕರಲ್ಲಿ ಸಾವಿನ ಪ್ರಮಾಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ವಯಸ್ಕರ ಲಸಿಕಾ ಕಾರ್ಯಕ್ರಮಕ್ಕೂ ಸಮಾನ ಮಹತ್ವ ನೀಡಬೇಕೆಂದು ಅವರು ಒತ್ತಾಯಿಸಿದರು.

### ದೇಶದ ಮೂಲಸೌಕರ್ಯ, ವೈದ್ಯ ಕ್ಷೇತ್ರದಲ್ಲಿನ ಸುಧಾರಣೆಯಿಂದ ಇದು ಸಾಧ್ಯವಾಗಿದೆ: ಸಂಸದ ಡಾ.ಸಿ.ಎನ್. ಮಂಜುನಾಥ್



**3 ಹಂತದಲ್ಲಿ ತ್ಯಾಜ್ಯ ಶುದ್ಧೀಕರಣವಾಗಲಿ:** ನಗರೀಕರಣ ಮತ್ತು ಕೈಗಾರೀಕರಣದಿಂದ ಮಹಾನಗರಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೊಳಚೆ ತ್ಯಾಜ್ಯ ಉತ್ಪಾದನೆಯಾಗುತ್ತಿದ್ದು, ಈ ತ್ಯಾಜ್ಯವನ್ನು ಸರಿಯಾಗಿ ಸಂಸ್ಕರಿಸದೆ ಕೆರೆಗಳಿಗೆ ಮತ್ತು ನದಿಗಳಿಗೆ ಬಿಡುತ್ತಿರುವ ಪರಿಣಾಮ ಸಾರ್ವಜನಿಕರ ಆರೋಗ್ಯ, ಜಾನುವಾರುಗಳ ಆರೋಗ್ಯ, ಕೃಷಿ ಬೆಳೆ ಸೇರಿದಂತೆ ಒಟ್ಟಾರೆ ಪರಿಸರದ ಮೇಲೆ ಆಗುತ್ತಿರುವ ಪರಿಣಾಮಗಳ ಬಗ್ಗೆ ವಿಸ್ತೃತವಾಗಿ ವಿವರಿಸಿದರು. ಭಾರತೀಯ ವಿಜ್ಞಾನ ಸಂಸ್ಥೆಯು ಪರಿಸರ ನಿರ್ವಹಣೆ ಮತ್ತು ಸಂಶೋಧನಾ ನೀತಿ ಬಗ್ಗೆ ಅಧ್ಯಯನ ನಡೆಸಿದ್ದು, ಬೆಂಗಳೂರಿನ ಸುತ್ತಮುತ್ತಲಿನ ಜಿಲ್ಲೆಗಳಾದ ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ ಪ್ರದೇಶಗಳಲ್ಲಿ ಸಂಸ್ಕರಿಸದ ನೀರು ನೇರವಾಗಿ ಕೆರೆಗಳಿಗೆ ಬಿಡುತ್ತಿರುವ ಪರಿಣಾಮ ಈ ಪ್ರದೇಶಗಳಲ್ಲಿ ಬೆಳೆಯಲಾಗುತ್ತಿರುವ ತರಕಾರಿ, ಹಣ್ಣು ಸೇರಿದಂತೆ ಇತರೆ ಪದಾರ್ಥಗಳಲ್ಲಿ ಲೀಡ್, ಆರ್ಸೆನಿಕ್, ಫಾಸ್ಪರಸ್ ಲೋಹಗಳು ಸೇರಿದಂತೆ ಮನುಷ್ಯರ ಮತ್ತು ಜಾನುವಾರುಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಹಾನಿಕಾರಕ ಅಂಶಗಳು ಇರುವುದನ್ನು ದೃಢಪಡಿಸಿವೆ ಎಂದು ತಿಳಿಸಿದರು. ಈ ಹಿನ್ನೆಲೆಯಲ್ಲಿ ಆಸ್ಪತ್ರೆಗಳ ತ್ಯಾಜ್ಯವನ್ನು ಸಂಸ್ಕರಿಸಿದ ರೀತಿಯಲ್ಲಿ ಕೈಗಾರಿಕಾ ತ್ಯಾಜ್ಯವನ್ನು ಸಂಸ್ಕರಿಸಬೇಕು ಮತ್ತು ಕೇಂದ್ರ ನಗರಾಭಿವೃದ್ಧಿ ಇಲಾಖೆಯ ಕೈಪಿಡಿಯಲ್ಲಿರುವಂತೆ ಕೈಗಾರಿಕಾ ತ್ಯಾಜ್ಯವನ್ನು ಮೂರನೇ ಹಂತದ ಶುದ್ಧೀಕರಣಕ್ಕೆ ಒಳಪಡಿಸಬೇಕು ಮತ್ತು ಎಲ್ಲ ಎರಡನೇ ಹಂತದ ಎಸ್‌ಟಿಪಿ ಘಟಕಗಳನ್ನು ಮೂರನೇ ಹಂತದ ಎಸ್‌ಟಿಪಿ ಘಟಕಗಳನ್ನಾಗಿ ಪರಿವರ್ತಿಸಬೇಕೆಂದು ಕೇಂದ್ರ ಜಲಶಕ್ತಿ ಇಲಾಖೆ, ಪರಿಸರ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಗೆ ಡಾ.ಸಿ.ಎನ್. ಮಂಜುನಾಥ್ ಮನವಿ ಸಲ್ಲಿಸಿದರು.

### ಆಯುಷ್ಮಾನ್‌ನಿಂದ 55 ಕೋಟಿ ಜನರಿಗೆ ಪ್ರಯೋಜನ

ಆಯುಷ್ಮಾನ್ ಭಾರತ ಯೋಜನೆ ವಿಶ್ವದ ಅತಿದೊಡ್ಡ ಆರೋಗ್ಯ ರಕ್ಷಣಾ ಯೋಜನೆಗಳ ಒಂದಾಗಿದೆ. ಈ ಯೋಜನೆಯಡಿ ಸುಮಾರು 55 ಕೋಟಿ ಜನರಿಗೆ ಪ್ರಯೋಜನ ದೊರೆಯುತ್ತಿದೆ. ಪ್ರಸ್ತುತ ಈ ಯೋಜನೆಯಡಿಯಲ್ಲಿ ಸುಮಾರು 1300 ವೈದ್ಯಕೀಯ ಕ್ರಮಗಳು ಒಳಗೊಂಡಿದ್ದು, ಇನ್ನೂ ಉಳಿದಿರುವ 600 ಚಿಕಿತ್ಸೆಗಳನ್ನು ಯೋಜನೆಗೆ ಸೇರಿಸಬೇಕೆಂದು ಅವರು ಸರ್ಕಾರಕ್ಕೆ ಮನವಿ ಮಾಡಿದರು. ಇದಲ್ಲದೆ ಒಂದು ಕುಟುಂಬಕ್ಕೆ ನೀಡಲಾಗುತ್ತಿರುವ 5 ಲಕ್ಷ ರೂ.ಗಳ ಆರೋಗ್ಯ ವಿಮೆ ಮಿತಿಯನ್ನು 8 ಲಕ್ಷ ರೂ.ಗಳಿಗೆ ಹೆಚ್ಚಿಸುವ ಮೂಲಕ ಗಂಭೀರ ಕಾಯಿಲೆಗಳ ಚಿಕಿತ್ಸೆಗೆ ಒಳಪಡುವ ಕುಟುಂಬಗಳಿಗೆ ಹೆಚ್ಚಿನ ಆರ್ಥಿಕ ನೆರವು ಒದಗಿಸಬೇಕು ಎಂದು ಅವರು ಸರ್ಕಾರವನ್ನು ವಿನಂತಿಸಿದರು.

### ಎಕ್ಸ್‌ಪ್ರೆಸ್ ಹೈವೇಯಲ್ಲಿ ವಿಶ್ರಾಂತಿ ಕೇಂದ್ರದ ಕೊರತೆ

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ಹೆದ್ದಾರಿ ಸುಮಾರು 150 ಕಿ.ಮೀ. ಉದ್ದವಿದ್ದು, ಮಧ್ಯದಲ್ಲಿ ಸಮರ್ಪಕ ವಿಶ್ರಾಂತಿ ಕೇಂದ್ರದ ಕೊರತೆ ಇದೆ ಎಂದು ಸಂಸದ ಡಾ.ಸಿ.ಎನ್. ಮಂಜುನಾಥ್ ಗಮನ ಸೆಳೆದರು. ಈ ಉದ್ದೇಶಕ್ಕಾಗಿ ರಾಮನಗರ ಜಿಲ್ಲಾಡಳಿತವು 8.5 ಎಕರೆ ಭೂಮಿಯನ್ನು ಗುರುತಿಸಿದೆ. ಅಲ್ಲಿ ವಿಶ್ರಾಂತಿ ಕೇಂದ್ರದ ಜೊತೆಗೆ ಗೊಂಬೆಗಳ ಉದ್ಯಾನವನ ಹಾಗೂ ರೇಷ್ಮೆ ವಸ್ತುಸಂಗ್ರಹಾಲಯ ಸ್ಥಾಪಿಸುವುದರಿಂದ ಪ್ರವಾಸೋದ್ಯಮಕ್ಕೂ ಉತ್ತೇಜನ ದೊರೆಯುತ್ತದೆ ಎಂದು ಅವರು ಹೇಳಿದರು. ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಕೆಲವು ಪ್ರದೇಶಗಳಲ್ಲಿ ಆನೆ–ಮಾನವ ಸಂಘರ್ಷ ಹೆಚ್ಚುತ್ತಿರುವುದರ ಬಗ್ಗೆ ಅವರು ಆತಂಕ ವ್ಯಕ್ತಪಡಿಸಿದರು.

## ನಿತ್ಯ ಪಂಚಾಂಗ 14.3.2026 ಶನಿವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯಣ ಶಿಶಿರ ಹೇಮಂತ ಋತು, ಚಾಂದ್ರಮಾನ, ಪಾಲ್ಗುಣ ಬಹುಳ

ಏಕಾದಶಿ,
ಉತ್ತರಾಷಾಢ ನಕ್ಷತ್ರ
ಬ್ಯಾಂಕ್ ರಜಾದಿನ, ಮೀನ ಸಂಕ್ರಮಣ,
ಪಾಪಮೋಚಿನೀ ಏಕಾದಶಿ, ಅಲಂಕಾರು
ದುರ್ಗಾಪರಮೇಶ್ವರಿ ಜಾತ್ರಾರಂಭ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ರಾಜಕೀಯವಾಗಿ ಸೋಲು-ಗೆಲುವು ಕಂಡಿದ್ದರೂ ಜನಸೇವೆ ಮರೆಯಲ್ಲ: ಸಿಎಂ ಸಿದ್ದರಾಮಯ್ಯ



**ಬೆಂಗಳೂರು ಮಾ.13:** ಕಳೆದ ನಾಲ್ಕೈದು ದಶಕಗಳ ರಾಜಕೀಯ ಬದುಕಿನಲ್ಲಿ ಅನೇಕ ಸೋಲು ಗೆಲುವುಗಳನ್ನು ಕಂಡಿದ್ದರೂ, ಜನಸೇವೆಯನ್ನು ಎಂದಿಗೂ ಮರೆಯುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವರಕೋಡು ಗಡಿ ಗುರುಮಠ ವರುಣದಲ್ಲಿ ಆಯೋಜಿಸಲಾಗಿದ್ದ ಬೀರೇಶ್ವರಸ್ವಾಮಿ ದೇವಸ್ಥಾನದ ಸಂಪ್ರೋಕ್ಷಣ ಪುನರ್ ಪ್ರತಿಷ್ಠಾಪನೆ ಕುಂಭಾಭಿಷೇಕ ಹಾಗೂ ಮಹಾದ್ವಾರ ಪೂಜಾ ಮಹೋತ್ಸವ ಭಾಗವಹಿಸಿ ಮಾತನಾಡಿ, ಭಕ್ತಿ ಪರಿಶುದ್ಧವಾಗಿರಬೇಕಲ್ಲದೇ, ಮಾನವೀಯತೆ ಹಾಗೂ ಪರರ ಹಿತಚಿಂತನೆಯಿಂದ ಮಾತ್ರ ದೇವರು ಒಲಿಯುತ್ತಾನೆ. ದೇವರು ಸರ್ವಾಂತರ್ಯಾಮಿಯಾಗಿದ್ದಾನೆ. ಎಲ್ಲ ಧರ್ಮಗಳೂ ಪ್ರೀತಿಯನ್ನೇ ಬೋಧಿಸುತ್ತವೆ. ಬೀರೇಶ್ವರಸ್ವಾಮಿ ದೇವಸ್ಥಾನದ ಪೂಜಾ ಮಹೋತ್ಸವಗಳು, ಜಾತ್ರೆಗಳಲ್ಲಿ ಜನರು ಸಂತೋಷದಿಂದ ಭಾಗವಹಿಸಿದ್ದಾರೆ. ಬೀರೇಶ್ವರಸ್ವಾಮಿ, ನಾಡಿನ ಸಮಸ್ತ ಜನತೆಗೆ ಮಂಗಳವನ್ನುಂಟು ಮಾಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದರು.

1978ರಲ್ಲಿ ಇಲ್ಲಿಂದಲೇ ನನ್ನ ರಾಜಕೀಯ ಜೀವನ ಪ್ರಾರಂಭವಾಗಿದ್ದು, ಅಪಾರ ಜನಬೆಂಬಲ ನನಗೆ ದೊರೆತಿದೆ. ಅಲ್ಲಿಂದ ಇಲ್ಲಿಯವರೆಗೆ ಚಾಮುಂಡೇಶ್ವರಿ ಮತ್ತು ವರುಣಾ ಕ್ಷೇತ್ರದ ಜನರು ನನ್ನನ್ನು ಬೆಂಬಲಿಸುತ್ತಲೇ ಬಂದಿದ್ದಾರೆ. ಇಲ್ಲಿನ ಜನರ ಆಶೀರ್ವಾದದಿಂದ ಮುಖ್ಯಮಂತ್ರಿಯಾಗಿ, ಆರ್ಥಿಕ ಸಚಿವನಾಗಿ 17 ಬಾರಿ ಆಯವ್ಯಯಗಳನ್ನು ಮಂಡಿಸುವ ಅವಕಾಶ ದೊರೆತಿದೆ. 13 ಬಾರಿ ಚುನಾವಣೆಗಳನ್ನು ಎದುರಿಸಿದ್ದು, ನಾಲ್ಕು ಬಾರಿ ಸೋತ ಸಂದರ್ಭದಲ್ಲಿಯೂ, ಈ ಭಾಗದ ಜನರು ನನ್ನನ್ನೇ ಬೆಂಬಲಿಸಿದ್ದೇನೆ. ನನ್ನ ರಾಜಕೀಯ ಬದುಕಿಗೆ ಇಲ್ಲಿನ ಜನರ ಕೊಡುಗೆ ಅನನ್ಯವಾಗಿದೆ ಎಂದರು.

ನನ್ನ ಗುರುಗಳ ಮಾರ್ಗದರ್ಶನದಿಂದ ಶಿಕ್ಷಣ ಪಡೆದು, ವಕೀಲನಾಗಿ, ರಾಜಕಾರಣಿಯಾಗಿ ಜನರ ಸೇವೆ ಮಾಡುವ ಅವಕಾಶ ದೊರೆತಿದೆ. ನನ್ನ ರಾಜಕೀಯ ಜೀವನ ಸೋಲುಗೆಲುವುಗಳನ್ನು ಕಂಡಿದ್ದರೂ, ಜನಸೇವೆಯನ್ನು ಎಂದಿಗೂ ಮರೆಯುವುದಿಲ್ಲ. ನನ್ನ ಕೊನೆ ಉಸಿರುವವರೆಗೆ ಜನ ಸೇವೆಯಲ್ಲಿ ಸದಾ ತೊಡಗಿರುತ್ತೇನೆ. ಯತೀಂದ್ರ ಸಿದ್ದರಾಮಯ್ಯ ಈ ಕ್ಷೇತ್ರದ ಅಭಿವೃದ್ಧಿಗೆ ಸೇವೆ ಸಲ್ಲಿಸುತ್ತಿದ್ದು, ಜನರು ಅವರನ್ನು ಬೆಂಬಲಿಸಬೇಕು ಎಂದರು. ರಾಜ್ಯದ ವಿವಿಧ ಜಾತಿ, ಧರ್ಮ, ವರ್ಗಗಳ ಬಡಜನರಿಗೆ ಅನೇಕ ಭಾಗ್ಯಗಳು ಹಾಗೂ ಗ್ಯಾರಂಟಿ ಕಾರ್ಯಕ್ರಮಗಳನ್ನು ನೀಡುತ್ತಾ ಬಂದಿದ್ದೇನೆ ಎಂದರು.

# ಮಾಜಿ ಉಪರಾಷ್ಟ್ರಪತಿ ಎಂ. ವೆಂಕಯ್ಯ ನಾಯ್ಡು ಅವರನ್ನು ಭೇಟಿ ಮಾಡಿದ ಸಂಸದ ಡಾ. ಸಿ.ಎನ್.ಮಂಜುನಾಥ್



**ನವದೆಹಲಿ, ಮಾ.13:** ಮಾಜಿ ಉಪರಾಷ್ಟ್ರಪತಿ ಎಂ. ವೆಂಕಯ್ಯ ನಾಯ್ಡು ಅವರನ್ನು ಭೇಟಿ ಮಾಡಿದ ಸಂಸದ ಡಾ. ಸಿ.ಎನ್.ಮಂಜುನಾಥ್, ಇದು ಸೌಜನ್ಯಯುತ ಮತ್ತು ಫಲಪ್ರದವಾದ ಸಂವಾದವಾಗಿತ್ತು, ಅಲ್ಲಿ ನಾವು ವಿವಿಧ ಕ್ಷೇತ್ರಗಳಲ್ಲಿ ಹಲವಾರು ಪ್ರಮುಖ ವಿಷಯಗಳನ್ನು ಚರ್ಚಿಸಿದ್ದೇವೆ, ವಿಶೇಷವಾಗಿ ಆರೋಗ್ಯ ವಲಯವನ್ನು ಬಲಪಡಿಸುವ ಅಗತ್ಯ, ಅಟಲ್ ಸ್ಮೃತಿ ನ್ಯಾಸ್ ಸೊಸೈಟಿಯ ಚಟುವಟಿಕೆಗಳು ಮತ್ತು ಹಿರಿಯ ನಾಗರಿಕರನ್ನು ಗಂಭೀರ ಉಸಿರಾಟದ ಕಾಯಿಲೆಗಳಿಂದ ರಕ್ಷಿಸಲು ನ್ಯುಮೋಕೊಕಲ್ ಲಸಿಕೆಯ ಪ್ರಾಮುಖ್ಯದ ಬಗ್ಗೆ ಮಾತನಾಡಿದರು.

ರಾಷ್ಟ್ರ ನಿರ್ಮಾಣದ ಕಡೆಗೆ ಅವರ ಮಾರ್ಗದರ್ಶನ, ಅನುಭವ ಮತ್ತು ನಿರಂತರ ಬದ್ಧತೆಯನ್ನು ನಾನು ಬಹಳವಾಗಿ ಗೌರವಿಸುತ್ತೇನೆ ಎಂದು ಮಂಜುನಾಥ್ ತಿಳಿಸಿದರು.

# ಸುಮ್ಮನಿದ್ದೇನೆ ಎಂದಾಕ್ಷಣ ಅದು ಬಲಹೀನತೆ ಎಂದು ಭಾವಿಸದಿರಿ

**ಸಚಿವರಿಗೆ ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್ ನೇರ ಎಚ್ಚರಿಕೆ**

**ಪ್ರಶ್ನೆಗಳಿಗೆ ಸಮರ್ಪಕ ಉತ್ತರ ದೊರೆಯುತ್ತಿಲ್ಲ ಎಂಬ ಪ್ರತಿಪಕ್ಷ ಸದಸ್ಯರ ಮಾತಿಗೆ ಬೆಂಬಲ**



**ಬೆಂಗಳೂರು, ಮಾ.13:** ನಾನು ಸುಮ್ಮನಿದ್ದೇನೆ ಎಂದಾಕ್ಷಣ ಅದನ್ನು ನನ್ನ ಬಲಹೀನತೆ ಎಂದು ಭಾವಿಸಬೇಡಿ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಸದನದಲ್ಲಿ ಸಚಿವರಿಗೆ ನೇರ ಎಚ್ಚರಿಕೆ ನೀಡಿದರು.

ಸದನದಲ್ಲಿ ಕೇಳಲಾದ ಪ್ರಶ್ನೆಗಳಿಗೆ ಇಲಾಖೆಗಳಿಂದ ಸರಿಯಾಗಿ ಉತ್ತರ ಬರುತ್ತಿಲ್ಲ ಎಂಬ ವಿಪಕ್ಷ ಸದಸ್ಯರುಗಳ ಮಾತಿಗೆ ದನಿಗೂಡಿಸಿದ ವಿಧಾನ ಸಭಾಧ್ಯಕ್ಷರು, ನಾನು ದಿನವೂ ಗಮನಿಸುತ್ತಿದ್ದೇನೆ. ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪೈಕಿ ಅತಿ ಕಡಿಮೆ ಪ್ರಶ್ನೆಗಳಿಗೆ ಉತ್ತರ ನೀಡಲಾಗುತ್ತಿದೆ. ಇದು ಸರಿಯಲ್ಲ. ನಾನು ಸೌಮ್ಯತೆಯಿಂದ ಸುಮ್ಮನಿದ್ದೇನೆ ಎಂದರೆ ಅದನ್ನು ನನ್ನ ಬಲಹೀತನೆ ಎಂಬುದಾಗಿ ಭಾವಿಸಬೇಡಿ ಎಂದು ಸಚಿವರಿಗೆ ನೇರವಾಗಿಯೇ ಹೇಳಿದರು.

ಯಾವುದೇ ಒಂದು ಪ್ರಶ್ನೆ ಕೇಳಿದ ನಂತರ ಉತ್ತರ ಕೊಡಲು 10 ದಿನ ಸಮಯ ಇರುತ್ತದೆ. 10 ದಿವಸದ ನಂತರವೂ ಉತ್ತರ ಬರಲ್ಲ ಎಂದರೆ ಏನರ್ಥ. ಸದಸ್ಯರು ಪ್ರಶ್ನೆ ಏಕೆ ಕೇಳಬೇಕು, ಅಧಿವೇಶನದ ಅರ್ಥ ಏನು ಬರುತ್ತದೆ. ಇದಕ್ಕೆಲ್ಲಾ ಪೂರ್ಣವಿರಾಮ ಇಡಿ. ಅಧಿಕಾರಿಗಳನ್ನು ಕರೆಸಿ ಸೂಚನೆ ಕೊಟ್ಟು ಎಲ್ಲಾ ಸದಸ್ಯರುಗಳ ಪ್ರಶ್ನೆಗಳಿಗೆ ಉತ್ತರ ಬರುವಂತೆ ನೋಡಿಕೊಳ್ಳಿ ಎಂದು ಸಚಿವರಿಗೆ ಕಿವಿಮಾತು ಹೇಳಿದರು.

ಸದನದಲ್ಲಿ ಕೇಳಿದ ಪ್ರಶ್ನೆಗಳಿಗೆ ಸದಸ್ಯರು ದುಂಬಾಲು ಬೀಳದಿದ್ದರೆ ಒಂದು ವರ್ಷವಾದರೂ ಉತ್ತರ ಬರುವುದಿಲ್ಲ. ಹೀಗಾದರೆ ಹೇಗೆ, ಇದನ್ನು ಗಂಭೀರವಾಗಿ ತೆಗೆದುಕೊಳ್ಳಿ, ಉತ್ತರ ಕೊಡಿ ಎಂದು ಸಭಾಧ್ಯಕ್ಷರು ಸಚಿವರಿಗೆ ತಾಕೀತು ಮಾಡಿದರು.

ಸದನದಲ್ಲಿ ಇದುವರೆಗೂ ಉತ್ತರ ಬಾರದ ಪ್ರಶ್ನೆಗಳಿಗೆ ಉತ್ತರ ಒದಗಿಸುವ ಸಂಬಂಧ ಉಪಸಭಾಧ್ಯಕ್ಷರ ನೇತೃತ್ವದಲ್ಲಿ ಸಮಿತಿ ರಚಿಸಿದ್ದೇನೆ. ಸೋಮವಾರ ಯಾವ ಯಾವ ಇಲಾಖೆಯಿಂದ ಎಷ್ಟೆಷ್ಟು ಉತ್ತರಗಳು ಬಾಕಿ ಇವೆ ಎಂಬುದನ್ನು ಸದನದ ಮುಂದಿಡುತ್ತೇನೆ ಎಂದು ಸಭಾಧ್ಯಕ್ಷರು ಹೇಳಿದರು.

ಸಭಾಧ್ಯಕ್ಷರ ಮಾತಿನ ಸಂದರ್ಭದಲ್ಲೇ ಮಧ್ಯೆ ಪ್ರವೇಶಿಸಿ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಸದನದಲ್ಲಿ ಉತ್ತರ ಕೊಡದ ಪ್ರಶ್ನೆಗಳ ಅಧ್ಯಯನಕ್ಕೆ ಒಂದು ಉಪಸಮಿತಿಯನ್ನು ರಚಿಸಿ ಬಿಡಿ ಎಂದು ವ್ಯಂಗ್ಯವಾಗಿ ಹೇಳಿದರು.

ಸಭಾಧ್ಯಕ್ಷರು ಸರ್ಕಾರದ ವಿರುದ್ಧ ಚಾಟಿ ಬೀಸಿದ ನಂತರ ಸರ್ಕಾರದ ಪರವಾಗಿ ಉತ್ತರ ನೀಡಿದ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು, ಸಭಾಧ್ಯಕ್ಷರ ಮಾತುಗಳನ್ನು ಗಂಭೀರವಾಗಿ ತೆಗೆದುಕೊಂಡಿದ್ದೇವೆ. ಮುಖ್ಯಮಂತ್ರಿಗಳು ಈಗಾಗಲೇ ಎಲ್ಲಾ ಸಚಿವರಿಗೂ ಈ ಬಗ್ಗೆ ಸೂಚನೆ ಕೊಟ್ಟಿದ್ದಾರೆ.

ಅಪರೂಪಕ್ಕೆ ಸಭಾಧ್ಯಕ್ಷರು ಬಹಳ ಗಡುಸಾಗಿ ಮಾತನಾಡಿದ್ದಾರೆ. ಮುಂದಿನ ದಿನಗಳಲ್ಲಿ ಸದಸ್ಯರ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಒದಗಿಸುವ ಪ್ರಯತ್ನವನ್ನು ಮಾಡುತ್ತೇವೆ ಎಂದು ಹೇಳಿದರು.

# ಕೆಎಸ್ಆರ್ಟಿಸಿ: 45 ಸಾರಿಗೆ, 70 ಪಲ್ಲಕ್ಕಿ ಬಸ್ಸುಗಳಿಗೆ ಚಾಲನೆ

**ಬೆಂಗಳೂರು, ಮಾ.13:** ಕ.ರಾ.ರ.ಸಾ.ನಿಗಮದ ಕೇಂದ್ರ ಕಚೇರಿಯಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ನೂತನ 45 ಕರ್ನಾಟಕ ಸಾರಿಗೆ ಹಾಗೂ 70 ಪಲ್ಲಕ್ಕಿ ಬಸ್ಸುಗಳಿಗೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಅಂತರಾಷ್ಟ್ರೀಯ ಮಹಿಳಾ ದಿನವನ್ನು ಪ್ರತಿ ವರ್ಷ ಮಾ.8 ರಂದು ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರು ನೀಡಿರುವ ಮಹತ್ವದ ಕೊಡುಗೆಗಳನ್ನು ಸ್ಮರಿಸುವುದು ಮತ್ತು ಅವರ ಹಕ್ಕುಗಳು, ಸಮಾನತೆ ಹಾಗೂ ಗೌರವವನ್ನು ಉತ್ತೇಜಿಸುವುದು ಈ ದಿನದ ಉದ್ದೇಶವಾಗಿದೆ.

ಕುಟುಂಬ, ಶಿಕ್ಷಣ, ವಿಜ್ಞಾನ, ಸಾಮಾಜಿಕ, ರಾಜಕೀಯ, ಆರ್ಥಿಕತೆ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಮಹಿಳೆಯರು ಮಹತ್ತರ ಸಾಧನೆಗಳನ್ನು ಮಾಡುತ್ತಿದ್ದಾರೆ. ಮಹಿಳೆಯರ ಸಬಲೀಕರಣವು ಸಮಾಜದ ಅಭಿವೃದ್ಧಿಗೆ ಅತ್ಯಂತ ಮುಖ್ಯವಾಗಿದ್ದು, ಅವರಿಗೆ ಸಮಾನ ಅವಕಾಶಗಳು ಮತ್ತು ಸುರಕ್ಷಿತ ವಾತಾವರಣವನ್ನು ಒದಗಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.

ತದನಂತರ, ಪದ್ಮಶ್ರೀ ಪುರಸ್ಕೃತರಾದ ಡಾ. ಶುಭ ವಿ. ರವರು ಭಾರತದ ಪ್ರಮುಖ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಗಳಲ್ಲಿ ಒಂದಾದ ಬೆಂಗಳೂರಿನ ಸಿ.ಎಸ್.ಐ.ಆರ್. ನ್ಯಾಷನಲ್ ಏರೋಸ್ಪೇಸ್ ಲ್ಯಾಬೋರೇಟರೀಸ್ (ಎನ್ಎಎಲ್)ನಲ್ಲಿ ದಶಕಗಳ ಕಾಲ ಕೆಲಸ ಮಾಡಿ, ಸ್ವದೇಶಿ ರನ್‌ವೇ ಗೋಚರತೆ ಮಾಪನ ವ್ಯವಸ್ಥೆ 'ದೃಷ್ಟಿ' ಅಭಿವೃದ್ಧಿಪಡಿಸಿದ ಕೀರ್ತಿಗೆ ಪಾತ್ರರಾಗಿದ್ದಾರೆ. ಇವರು ವಿಮಾನ ನಿಲ್ದಾಣಗಳಲ್ಲಿ ಮಂಜಿನ ಸಮಯದಲ್ಲಿ ಸುರಕ್ಷಿತ ಭೂಸ್ಪರ್ಶಕ್ಕೆ ನೆರವಾಗುವ ತಂತ್ರಜ್ಞಾನ ವನ್ನು ರೂಪಿಸಿರುವ ಬಗ್ಗೆ ಪ್ರಶಂಸಿದರು.




ನಾಲ್ಕು ರಸ್ತೆ ಸಾರಿಗೆ ಸಂಸ್ಥೆಗಳಲ್ಲಿ ಸುಮಾರು 1.04 ಲಕ್ಷ ಸಿಬ್ಬಂದಿಗಳಿದ್ದು, ಈ ಪೈಕಿ 8,956 ಮಹಿಳಾ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅವರಲ್ಲಿ 3167 ನಿರ್ವಾಹಕರು, 2254–ತಾಂತ್ರಿಕ ಸಿಬ್ಬಂದಿ, 3535–ಆಡಳಿತ ಸಿಬ್ಬಂದಿಯಾಗಿದ್ದಾರೆ.

**ಬಸ್ಸುಗಳ ಉದ್ಘಾಟನೆ**

70 ಹವಾನಿಯಂತ್ರಣ ರಹಿತ ಸ್ಲೀಪರ್ ಪಲ್ಲಕ್ಕಿ ಬಸ್ಸು ಹಾಗೂ 45 ಕರ್ನಾಟಕ ಸಾರಿಗೆ ಬಸ್ಸುಗಳಿಗೆ ಶುಕ್ರವಾರ ಸಚಿವರು ಚಾಲನೆ ನೀಡಿದರು.

**ಮಾರ್ಗಗಳು:** ಪಲ್ಲಕ್ಕಿ ಬಸ್ಸುಗಳನ್ನು ಉಡುಪಿ, ಮಂಗಳೂರು, ಮೈಸೂರು, ಧರ್ಮಸ್ಥಳ, ಶೃಂಗೇರಿ, ಹೊರನಾಡು, ಆಗುಂಬೆ, ಚಿಕ್ಕಮಗಳೂರು, ದಾವಣಗೆರೆ, ಚಿತ್ರದುರ್ಗ, ಹಂಪಿ, ರಾಯಚೂರು, ಜಮಖಂಡಿ, ಪುತ್ತೂರು, ಕಾಣಿಯೂರು, ಕುಕ್ಕೆ ಸುಬ್ರಹ್ಮಣ್ಯ, ಕಾಸರಗೋಡು, ಮಂತ್ರಾಲಯ, ತಿರುಚಿ, ಕೊಯಿಕ್ಕೋಡ್, ಮುನ್ನಾರ್, ಪುಧುಚೇರಿ, ತಂಜಾವೂರು,ಕೋಟ್ಟಯಂ, ಹೈದಾರಬಾದ್, ಚೆನ್ನೈ, ಪಣಜಿ, ಮಧುರೈ, ಕುಂಭಕೋಣಂ, ಎರ್ನಾಕುಲಂಗೆ ಕಾರ್ಯಾಚರಣೆ ಮಾಡಲಾಗುತ್ತದೆ.

ನಿಗಮಕ್ಕೆ ಒಟ್ಟು 805 ಸಂಖ್ಯೆಯ ಹೊಸ ಕರ್ನಾಟಕ ಸಾರಿಗೆ ಹಾಗೂ ನಗರ/ಗ್ರಾಮಾಂತರ ಸಾರಿಗೆ ವಾಹನಗಳು ಏಪ್ರಿಲ್, ಮೇ & ಜೂನ್–2026 ಮಾಹೆಗಳಲ್ಲಿ ಸೇರ್ಪಡೆಗೊಳ್ಳಲಿದೆ.

ಅಕ್ರಂ ಪಾಷ, ವ್ಯವಸ್ಥಾಪಕ ನಿರ್ದೇಶಕರು ಮಾತನಾಡಿ, ಪ್ರಸ್ತುತ ಎಲ್ಲಾ ರಂಗಗಳಲ್ಲಿಯೂ ಮಹಿಳೆಯರು ಅಭಿವೃದ್ದಿ ಹೊಂದುತ್ತಿರುವುದು ಸ್ವಾಗತಾರ್ಹ. ತಮ್ಮ ತಮ್ಮ ಮಕ್ಕಳಿಗೆ ಉತ್ತಮವಾದ ವಿದ್ಯಾಭ್ಯಾಸವನ್ನು ದೊರಕಿಸಿಕೊಟ್ಟು, ಸಬಲರನ್ನಾಗಿ ಮಾಡಬೇಕು ಎಂದು ತಿಳಿಸಿದರು. ಶಿಕ್ಷಣ ಒಂದೇ ಮಹಿಳೆಯರನ್ನು ಮತ್ತಷ್ಟು ಎತ್ತರಕ್ಕೆ ಕೊಂಡ್ಯೊಯಲು ಸಾಧನವಾಗಿದೆ ಎಂದು ತಿಳಿಸಿದರು.

ಈ ಸಮಾರಂಭದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿರುವ ಡಾ. ಶುಭಾ ವಿ ರವರನ್ನು ಗೌರವಿಸಿ ಸನ್ಮಾನಿಸುತ್ತಿರುವುದು ಹೆಮ್ಮೆಯ ವಿಷಯ. ಪ್ರಸಕ್ತ ವರ್ಷದ ಘೋಷವಾಕ್ಯವಾದ ಹಕ್ಕುಗಳು ನ್ಯಾಯ ಮತ್ತು ಕ್ರಮ, Give to Gain ಅಭಿಯಾನದಡಿಯಲ್ಲಿ ಮಹಿಳೆಯರಿಗೆ ಸಮನಾದ ಹಕ್ಕನ್ನು ನೀಡಿ, ಪ್ರೋತ್ಸಾಹಿ ಗೌರವಿಸಬೇಕೆಂದು ನಿರ್ದೇಶಕರು (ಸಿಬ್ಬಂದಿ ಮತ್ತು ಜಾಗೃತ) ರಾದ ಗಾಯಿತ್ರಿ ಕೆ.ಎಂ. ತಿಳಿಸಿದರು. ಈ ಸಂದರ್ಭದಲ್ಲಿ ಕರಾರಸಾ ನಿಗಮದ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

# ವಿಧಾನಸಭಾ ಉಪಚುನಾವಣೆ: ಬಿಜೆಪಿ ಆಕಾಂಕ್ಷಿಗಳ ಹೆಸರು ವರಿಷ್ಠರಿಗೆ ರವಾನೆ

**ಕೋರ್ ಕಮಿಟಿ ಸಭೆ ನಂತರ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿಕೆ**



**ಬೆಂಗಳೂರು, ಮಾ.13:** ಮುಂಬರುವ ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಅಭ್ಯರ್ಥಿಗಳ ಬಗ್ಗೆ ಉನ್ನತ ಸಮಿತಿ ಸಭೆಯಲ್ಲಿ ಚರ್ಚೆಯಾಯಿತು. ಸಭೆಯಲ್ಲಿ ಚರ್ಚಿಸಿದ ಹೆಸರುಗಳನ್ನು ಪಕ್ಷದ ವರಿಷ್ಠರಿಗೆ ಕಳುಹಿಸಿಕೊಡುತ್ತೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಶುಕ್ರವಾರ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ರಾಜ್ಯ ಕೋರ್ ಕಮಿಟಿ ಸಭೆ ಶುಕ್ರವಾರ ನಡೆಯಿತು. ರಾಜ್ಯ ಉಸ್ತುವಾರಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಪ್ರತಿಪಕ್ಷ ನಾಯಕರು ಮತ್ತು ಎಲ್ಲ ಕೋರ್ ಕಮಿಟಿ ಸದಸ್ಯರು ಭಾಗವಹಿಸಿದ್ದರು ಎಂದರು.

ವಿಧಾನಪರಿಷತ್ ಚುನಾವಣೆಗೆ ಅಭ್ಯರ್ಥಿಗಳ ಹೆಸರು ಘೋಷಿಸಿದ್ದೇವೆ. ವಿಧಾನಸಭೆ, ವಿಧಾನಪರಿಷತ್ ಚುನಾವಣೆಯ ಅಭ್ಯರ್ಥಿಗಳನ್ನು ಗೆಲ್ಲಿಸುವ ನಿಟ್ಟಿನಲ್ಲಿ ನಾವೆಲ್ಲ ಒಂದಾಗಿ, ಒಟ್ಟಾಗಿ ಪ್ರಯತ್ನ ಮಾಡಬೇಕು; ಸಂಪೂರ್ಣ ಶ್ರಮ ಹಾಕಬೇಕೆಂದು ಈ ಸಭೆಯಲ್ಲಿ ತೀರ್ಮಾನ ಆಗಿದೆ ಎಂದು ತಿಳಿಸಿದರು.

ಪ್ರಲ್ಹಾದ್ ಜೋಶಿ, ಗೋವಿಂದ ಕಾರಜೋಳ ಮತ್ತು ನಾನು, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಎಲ್ಲ ಆಕಾಂಕ್ಷಿಗಳು, ಪಕ್ಷದ ಪ್ರಮುಖರ ಜೊತೆ ಕುಳಿತು ಚರ್ಚಿಸಿ ಹಿಂದೆ ಆಗಿದ್ದನ್ನು ಮರೆತು, ಬದಿಗಿಟ್ಟು ನಾವೆಲ್ಲ ಒಟ್ಟಾಗಿ ಚುನಾವಣೆಯಲ್ಲಿ ಗೆಲ್ಲಲು ಶ್ರಮ ಹಾಕಬೇಕೆಂದು ಆ ಸಭೆ ನಡೆಸಿದ್ದೇವೆ ಎಂದು ಹೇಳಿದರು.

ಒಟ್ಟಾರೆಯಾಗಿ ಉನ್ನತಸಮಿತಿಯಲ್ಲಿ ಚರ್ಚೆ ಆದ ಪ್ರಕಾರ ಹೆಸರುಗಳನ್ನು 2 ದಿನದಲ್ಲಿ ದೆಹಲಿಗೆ ಕಳುಹಿಸುತ್ತೇವೆ ಎಂದು ತಿಳಿಸಿದರು. ಅಸಮಾಧಾನಿ ತರಿಗೆ ಏನು ಹೇಳಬೇಕೋ ಅದನ್ನು ನಾಲ್ಕು ಗೋಡೆ ಮಧ್ಯೆ ಹೇಳಿದ್ದೇವೆ ಎಂದು ಪ್ರಶ್ನೆಗೆ ಉತ್ತರ ಕೊಟ್ಟರು. ಎಲ್ಲರನ್ನೂ ಕೂರಿಸಿ ಮಾತನಾಡಿದ್ದೇವೆ. ಹಳೆಯದನ್ನೆಲ್ಲ ಮರೆತು ಪಕ್ಷದ ಹಿತದೃಷ್ಟಿಯಿಂದ ನಾವೆಲ್ಲ ಒಂದಾಗಿ, ಒಟ್ಟಾಗಿ ಕೆಲಸ ಮಾಡಬೇಕು ಎಂಬ ಸಂದೇಶ ಕೊಟ್ಟಿದ್ದೇವೆ ಎಂದರು.

ಎರಡೂ ತಂಡದ ಮುಖಂಡರನ್ನು ಕೂರಿಸಿ ಚರ್ಚೆ ಮಾಡಿದ್ದೇವೆ. ಎಲ್ಲವೂ ಸರಿಹೋಗುವ ವಿಶ್ವಾಸ ಇದೆ ಎಂದು ವಿಜಯೇಂದ್ರ ತಿಳಿಸಿದರು.

# ಪಶ್ಚಿಮ ಏಷ್ಯಾದಲ್ಲಿ ಸಿಲುಕಿರುವ ಪ್ರವಾಸಿಗರಿಗೆ ಕರ್ನಾಟಕದ ಆತಿಥ್ಯ

**ವೀಸಾ ನಿರ್ವಹಣೆ, ಸೂಕ್ತ ಸಹಾಯ ಒದಗಿಸುವುದೂ ಸೇರಿದೆ: ಸಚಿವ ಎಚ್.ಕೆ. ಪಾಟೀಲ್**

**ಮೂರು ದಿನಗಳ ಪ್ರಯಾಣ ಮತ್ತು ಪ್ರವಾಸೋದ್ಯಮ ಮೇಳದಲ್ಲಿ ಭಾಗಿ**



**ಬೆಂಗಳೂರು, ಮಾ.13:** ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷ ದಿಂದಾಗಿ ಸಿಲುಕಿರುವ ಅಂತಾರಾಷ್ಟ್ರೀಯ ಪ್ರವಾಸಿಗರ ಆತಿಥ್ಯ ವಹಿಸಿಕೊಳ್ಳಲು ರಾಜ್ಯ ಪೂರ್ವಭಾವಿ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ. ರಾಜ್ಯ ಸರಕಾರ ಈ ನೆಲದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಪ್ರಚುರಪಡಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ ಮತ್ತು ಪ್ರವಾಸೋದ್ಯಮ ಮೂಲ ಸೌಕರ್ಯವನ್ನು ಬಲಪಡಿಸುತ್ತಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್‌ಕೆ ಪಾಟೀಲ್ ತಿಳಿಸಿದರು.

ನಗರದ ಅರಮನೆ ಮೈದಾನದ ತ್ರಿಪುರ ವಾಸಿನಿಯ ಆರಂಭವಾದ ಮೂರು ದಿನಗಳ ಪ್ರಯಾಣ ಮತ್ತು ಪ್ರವಾಸೋದ್ಯಮ ಮೇಳ (ಟಿಟಿಎಫ್) ದಲ್ಲಿ ಮಾತನಾಡಿದ ಅವರು, ಪಶ್ಚಿಮ ಏಷ್ಯಾ ಸಂಘರ್ಷ ಭಾರತದ ಮೇಲೆ ಯಾವುದೇ ನೇರ ಪರಿಣಾಮ ಬೀರದಿದ್ದರೂ, ವಿಶೇಷವಾಗಿ ಮಧ್ಯಪ್ರಾಚ್ಯ ದೇಶಗಳಿಂದ ಬಂದ ವಿದೇಶಿ ಪ್ರವಾಸಿಗರ ಪ್ರಯಾಣವನ್ನು ಇದು ಅನಿಶ್ಚಿತ ಪರಿಸ್ಥಿತಿಗೆ ದೂಡಿದೆ. ವೀಸಾ ಮತ್ತು ಪ್ರಯಾಣ ನಿರ್ಬಂಧಗಳಿಂದಾಗಿ ಅನೇಕರು ತಮ್ಮ ತಾಯ್ನಾಡಿಗೆ ಮರಳಲು ಸಾಧ್ಯವಾಗುತ್ತಿಲ್ಲ. ಅಲ್ಲಿನ ಪರಿಸ್ಥಿತಿ ತಿಳಿಯಾಗುವವರೆಗೆ ಅವರ ವಾಸ್ತವ್ಯ ಆರಾಮದಾಯಕವಾಗಿದೆ ಎಂದು ಖಚಿತಪಡಿಸಿಕೊಳ್ಳಲು ಕರ್ನಾಟಕ ನಾನಾ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ, ಇದರಲ್ಲಿ ವೀಸಾಗಳ ನಿರ್ವಹಣೆ ಮತ್ತು ಸಹಾಯವನ್ನು ಒದಗಿಸುವುದು ಸೇರಿವೆ ಎಂದು ಅವರು ವಿವರಿಸಿದರು.

ಐತಿಹಾಸಿಕ ಸ್ಥಳಗಳಲ್ಲಿ ಉತ್ಖನನ ಯೋಜನೆಗಳು ಮತ್ತು ದೊಡ್ಡ ತೆರೆದ ವಸ್ತುಸಂಗ್ರಹಾಲಯಗಳನ್ನು ಅಭಿವೃದ್ಧಿಪಡಿಸುವತ್ತ ರಾಜ್ಯ ಗಮನಹರಿಸುತ್ತಿದೆ ಎಂದು ಸಚಿವರು ವಿವರಿಸಿದರು. ಲಕ್ಕುಂಡಿಯಲ್ಲಿ ಹೀಗೆ ಉತ್ಖನನ ಸಂದರ್ಭದಲ್ಲಿ ದೊರೆತ ಐತಿಹಾಸಿಕ ವಸ್ತುಗಳ ಪ್ರದರ್ಶನಕ್ಕೆಂದೇ ಒಂದು ವಸ್ತು ಸಂಗ್ರಹಾಲಯವನ್ನು ಸ್ಥಾಪಿಸಲಾಗು ವುದು. ಅಲ್ಲಿ 1,500 ಕಲಾಕೃತಿಗಳನ್ನು ಈಗಾಗಲೇ ಸಂಗ್ರಹಿಸಲಾಗಿದೆ ಮತ್ತು 3,500 ವಸ್ತುಗಳನ್ನು ಸಂಶೋಧಿಸ ಲಾಗಿದೆ. ಇತ್ತೀಚೆಗೆ, ಒಂದು ಕುಟುಂಬವು 600 ವರ್ಷಗಳಷ್ಟು ಹಳೆಯದಾದ ಆಭರಣವನ್ನು ದಾನ ಮಾಡಿದೆ. ಇದನ್ನು ಮೂಲತಃ ದೇವಿಯನ್ನು ಅಲಂಕರಿಸಲು ಬಳಸಲಾಗುತ್ತಿತ್ತು. ಇದರ ಮೌಲ್ಯ ಸುಮಾರು 5 ಕೋಟಿ ರೂಪಾಯಿ ಎಂದು ತಜ್ಞರು ತಿಳಿಸಿದ್ದಾರೆ," ಎಂದು ಅವರು ಹೇಳಿದರು.

ಪರಿಸರ ಪ್ರವಾಸೋದ್ಯಮ, ಸಾಹಸ ಪ್ರವಾಸೋದ್ಯಮ, ಶಿಕ್ಷಣ ಪ್ರವಾಸೋದ್ಯಮ ಮತ್ತು ರೈತರ ಪ್ರವಾಸೋದ್ಯಮ ಹೀಗೆ ಎಲ್ಲಾ ರೀತಿಯ ಪ್ರವಾಸೋದ್ಯಮ ಚಟುವಟಿಕೆಗಳಿಗೆ ಬೆಂಬಲ ನೀಡಲಾಗುತ್ತಿದೆ.


ಪ್ರವಾಸೋದ್ಯಮ ಪ್ರದರ್ಶನಗಳು, ಟಿಟಿಎಫ್‌ನಂತಹ ಮೇಳಗಳ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಮಹತ್ವವನ್ನು ವಹಿಸುತ್ತಿವೆ, ಈ ಪ್ರದರ್ಶನಗಳು ಸಾಮಾನ್ಯವಾಗಿ ಎಲ್ಲೂ ಕಾಣಸಿಗದ ಮಹತ್ವದ ಸಂಗತಿಗಳನ್ನು ಒಂದೆಡೆ ತರುತ್ತವೆ.

ವಿಯೆಟ್ನಾಂನಂತಹ ವಿದೇಶಗಳ ಪ್ರವಾಸಿಗರು ಮತ್ತು ಪ್ರವಾಸ ನಿರ್ವಾಹಕರು ಕರ್ನಾಟಕದ ಬಗ್ಗೆ ಪೂರ್ಣ ಮಾಹಿತಿಯನ್ನು ಇಲ್ಲಿ ಪಡೆಯುತ್ತಾರೆ. ಇದು ರಾಜ್ಯಾದ್ಯಂತದ ಪರಂಪರೆಯ ತಾಣಗಳಿಗೆ ಭೇಟಿ ನೀಡುವವರಿಗೆ ಮಾರ್ಗದರ್ಶನ ನೀಡಲು ಸಹಾಯ ಮಾಡುತ್ತದೆ ಎಂದು ಸಚಿವ ಪಾಟೀಲ್ ಅಭಿಪ್ರಾಯಪಟ್ಟರು.

ಹಂಪಿ, ಬೇಲೂರು, ಬಾದಾಮಿ, ಪಟ್ಟದಕಲ್ಲು ಮತ್ತು ಪಶ್ಚಿಮಘಟ್ಟ ಪ್ರದೇಶಗಳಂತಹ ವಿಶ್ವ ಪರಂಪರೆಯ ತಾಣಗಳು ಸೇರಿದಂತೆ 25,000 ಕ್ಕೂ ಹೆಚ್ಚು ಸ್ಮಾರಕಗಳನ್ನು ರಾಜ್ಯವು ಹೊಂದಿದೆ ಎಂದು ತಿಳಿಸಿದ ಸಚಿವರು, ಯುನೆಸ್ಕೋದ ತಾತ್ಕಾಲಿಕ ಪಟ್ಟಿಯಲ್ಲಿ ಲಕ್ಕುಂಡಿ, ಡೆಕ್ಕನ್, ಸೋಮನಾಥ್, ಗರಾಜ್, ವಿಜಯಪುರ, ಶ್ರೀರಂಗಪಟ್ಟಣ, ಮೈಸೂರು ಮತ್ತು ಹಳೇಬೀಡು ಸೇರಿವೆ. ಈ ಶ್ರೀಮಂತ ಪರಂಪರೆಯ ಹೊರತಾಗಿಯೂ, ಕರ್ನಾಟಕವು ಸಾಂಪ್ರದಾಯಿಕವಾಗಿ ಪ್ರವಾಸೋದ್ಯಮ ದಲ್ಲಿ ಕಡಿಮೆ ಪಾಲು ಹೊಂದಿದೆ. ಇದನ್ನು ಹೆಚ್ಚಿಸಬೇಕು ಎಂದು ಎಚ್.ಕೆ. ಪಾಟೀಲ್ ಹೇಳಿದರು.

# ಮಂತ್ರಿಗಿರಿಗಾಗಿ ಹಕ್ಕೊತ್ತಾಯ ಸೋಮವಾರ ದೆಹಲಿಗೆ

**ಕಾಂಗ್ರೆಸ್ ಹಿರಿಯ ಶಾಸಕರ ಸಭೆ ಬಗ್ಗೆ ಶಾಸಕ ಬೇಳೂರು ಗೋಪಾಲಕೃಷ್ಣ ಮಾಹಿತಿ**




**ಬೆಂಗಳೂರು, ಮಾ. 13:** ಮಂತ್ರಿಗಿರಿ ಬೇಡಿಕೆ ಇಟ್ಟುಕೊಂಡು ಹಿರಿಯ ಶಾಸಕರು ಗುರುವಾರ ಸಭೆ ನಡೆಸಿದ್ದೇವೆ. ಬರುವ ಸೋಮವಾರ ದೆಹಲಿಗೂ ಹೋಗುತ್ತೇವೆ ಎಂದು ಕಾಂಗ್ರೆಸ್ ಶಾಸಕ ಬೇಳೂರು ಗೋಪಾಲಕೃಷ್ಣ ಹೇಳಿದರು.

ಖಾಸಗಿ ಹೋಟೆಲ್‌ನಲ್ಲಿ ಹಿರಿಯ ಶಾಸಕರ ಸಭೆ ನಡೆಸಿದ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಸಮಾನ ಮನಸ್ಕ ಹಿರಿಯ ಶಾಸಕರು ಸಭೆ ಸೇರಿದ್ದೇವೆ. 25ಕ್ಕೂ ಹೆಚ್ಚು ಶಾಸಕರು ಇದ್ದೇವೆ. ಮಂತ್ರಿಗಿರಿ ಕೊಡಬೇಕು ಎಂಬ ಹಕ್ಕೊತ್ತಾಯ ಮಂಡಿಸಿದ್ದೇವೆ. ನಮ್ಮದು ಬೇಡಿಕೆಯಲ್ಲ, ಅವಕಾಶ ಕೊಡಿ ಎಂದು ಮನವಿ ಮಾಡಿದ್ದೇವೆ ಎಂದರು.

2028ಕ್ಕೂ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಬೇಕು ಎಂಬುದ ನಮ್ಮೆಲ್ಲರ ಆಸೆ. ಹಾಗಾಗಿ ನಿನ್ನೆ ಹಿರಿಯ ಶಾಸಕರು ಸಭೆ ಸೇರಿ ಸಂಪುಟ ಪುನಾರಚನೆ ಆಗಬೇಕು ಎಬ ಒತ್ತಾಯವನ್ನು ಹೈಕಮಾಂಡ್ ಮುಂದಿಡಲು ನಿರ್ಧರಿಸಿದ್ದವೆ. ಸೋಮವಾರ ದೆಹಲಿಗೆ ಹೋಗುತ್ತೇವೆ ಎಂದರು.

ನಮ್ಮದು ಭಿನ್ನಮತ ಅಲ್ಲ, ನಮ್ಮ ಹಕ್ಕು ಮುಕ್ತವಾಗಿ ನಾವು ಮಾತನಾಡುವುದು ಅಷ್ಟೇ. ಸರ್ಕಾರ ಗಟ್ಟಿ ಇದೆ. ಒಳ್ಳೆಯ ಬಜೆಟ್‌ನ್ನು ಮುಖ್ಯಮಂತ್ರಿಗಳು ಕೊಟ್ಟಿದ್ದಾರೆ. ಸಂಪುಟ ಪುನಾರಚನೆ ಮಾಡಿ 4–5 ಬಾರಿ ಗೆದ್ದಿರುವ ಶಾಸಕರನ್ನು ಮಂತ್ರಿ ಮಾಡಿ ಎಂಬ ಬೇಡಿಕೆ ಇಟ್ಟುಕೊಂಡು ನಿನ್ನೆ ಸಭೆ ನಡೆಸಿದ್ದೇವೆ ಎಂದರು.

ಬಜೆಟ್ ಬಗ್ಗೆ ಅಸಮಾಧಾನ ಹೊರಹಾಕಿದ ರಾಮನಗರ ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್ ಅವರನ್ನು ಪಕ್ಷದಿಂದ ಹೊರ ಹಾಕಬೇಕು ಎಂದು ಬೇಳೂರು ಗೋಪಾಲಕೃಷ್ಣ ಒತ್ತಾಯಿಸಿದರು.



ಕೆಲ ಮಂತ್ರಿಗಳು ಒಳ್ಳೆಯ ಕೆಲಸ ಮಾಡುತ್ತಿದ್ದಾರೆ. ಇನ್ನು ಕೆಲವರು ಕೈಗೆ ಸಿಗುವುದಿಲ್ಲ. ಕೆಲ ಮಂತ್ರಿಗಳ ಕಾರ್ಯವೈಖರಿ ಬಗ್ಗೆ ಅಸಮಾಧಾನ ಇದೆ. ಹಾಗಾಗಿ ಸಂಪುಟ ಪುನಾರಚಿಸಿ ಹೊಸಬರಿಗೆ ಅವಕಾಶ ಕೊಡಬೇಕು ಎಂಬುದು ನಮ್ಮ ಬೇಡಿಕೆ. ಶೀಘ್ರದಲ್ಲೇ ನಾವು ದೆಹಲಿಗೆ ಹೋಗಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುತ್ತೇವೆ.

–ಅಶೋಕ ಪಟ್ಟಣ, ಸರ್ಕಾರದ ಮುಖ್ಯ ಸಚೇತಕ, ವಿಧಾನಸಭೆ

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಗ್ಯಾರಂಟಿ ಹಿಂಪಡೆಯಿರಿ ಎಂದು ನಿರ್ಣಯ ಮಂಡಿಸಿ, ಚರ್ಚಿಸೋಣ: ಪ್ರತಿಪಕ್ಷಗಳಿಗೆ ಡಿಸಿಎಂ ಸವಾಲು



**ಬೆಂಗಳೂರು, ಮಾ.13:** ಗ್ಯಾರಂಟಿ ಯೋಜನೆಗಳನ್ನು ಹಿಂಪಡೆಯಿರಿ, ಮರುಪರಿಶೀಲನೆ ಮಾಡಿ ಎಂದು ಬಿಜೆಪಿಯಿಂದ ಅಧಿಕೃತ ತೀರ್ಮಾನ ಮಾಡಿ ಸದನದಲ್ಲಿ ನಿರ್ಣಯ ಮಂಡಿಸಲಿ, ನಂತರ ಸದನದಲ್ಲಿ ಇದರ ಬಗ್ಗೆ ಚರ್ಚೆ ನಡೆಸೋಣ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಸವಾಲೆಸೆದರು.

ವಿಧಾನಸಭೆಯಲ್ಲಿ 2026–27ನೇ ಸಾಲಿನ ಬಜೆಟ್ ಕುರಿತು ಚರ್ಚೆ ವೇಳೆ ಗ್ಯಾರಂಟಿ ಯೋಜನೆಗಳನ್ನು ರದ್ದುಗೊಳಿಸಬೇಕೆಂಬ ಬಿಜೆಪಿ ಶಾಸಕ ಸುರೇಶ್‌ಗೌಡ ಅವರಿಗೆ ಈ ತಿರುಗೇಟು ನೀಡಿದರು.

ಸುರೇಶ್ ಅವರೇ ನೀವು ಹಿರಿಯ ನಾಯಕರಿದ್ದೀರಿ, ಜತೆ ಮಾಜಿ ಡಿಸಿಎಂ ಇದ್ದಾರೆ. ಈ ಅಭಿಪ್ರಾಯ ಕೇವಲ ನಿಮ್ಮ ವೈಯಕ್ತಿಕವಲ್ಲ. ಅದು ಪಕ್ಷದ ಅಭಿಪ್ರಾಯ. ನೀವು ಏನು ಹೇಳುವಿರೋ ಅದರ ಬಗ್ಗೆ ಚಿಂತನೆ ನಡೆಸೋಣ. ನೀವು ಹೇಳುತ್ತಿರುವುದು ಸರಿಯಿಲ್ಲ ಎಂದು ಹೇಳುತ್ತಿಲ್ಲ. ಈ ಬಜೆಟ್ ಅಧಿವೇಶನದ ಒಳಗೆಯೇ ನಿಮ್ಮ ತೀರ್ಮಾನ ತಿಳಿಸಿ ಎಂದು ಹೇಳಿದರು.

ಕೋಳಿ ಕೇಳಿ ಖಾರ ಅರೆದಂತಿದೆ, ಗ್ಯಾರಂಟಿ ಕೊಡುವಾಗ ನಮ್ಮನ್ನು ನೀವು ಕೇಳಿದ್ರ ಎಂದು ಸುರೇಶ್ ಅವರು ಪ್ರತಿಕ್ರಿಯೆ ನೀಡಿದಾಗ, "ಯಡಿಯೂರಪ್ಪ ಅವರು ಒಂದು ಕಾಳು ಕಡಿಮೆ ಆದರೂ ಬಿಡುವುದಿಲ್ಲ ಎಂದು ಹೇಳಿದ್ದರು. ಆನಂತರ ಅದು ಕಡಿಮೆ ಆಯಿತು, ಇದು ಕಡಿಮೆ ಆಯಿತು ಎಂದವರು ನೀವು. ಅದಕ್ಕೆ ಆರು ತಿಂಗಳಲ್ಲಿ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೆವು. ನಿಮ್ಮ ಮಾತನ್ನೂ ಕೇಳಿ ಗ್ಯಾರಂಟಿ ಯೋಜನೆಗಳನ್ನು ನೀಡಿದ್ದೇವೆ ಎಂದು ತಿರುಗೇಟು ನೀಡಿದರು.

ಇತ್ತೀಚೆಗೆ ಅಸ್ಸಾಂ ರಾಜ್ಯಕ್ಕೆ ಹೋಗಿದ್ದೆ. ಅಸ್ಸಾಂನಲ್ಲಿ ಬಿಜೆಪಿ ಕಾರ್ಯಕರ್ತರಿಗೆ ಮಾತ್ರ ನೀಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷದವರಿಗೆ ಇಲ್ಲ. ಈಗ ಚಾಟ್ ಜಿಪಿಟಿಯಲ್ಲಿ 'ಹೌ ಟು ವಿನ್ ಗುಜರಾತ್ ಎಲೆಕ್ಷನ್' ಎಂದು ಹಾಕು, ಕರ್ನಾಟಕ ಮಾದರಿ ಅನುಸರಿಸಿ ಎಂದು ಬರಲಿಲ್ಲ ಎಂದರೆ ಕೇಳಿ. ಸರ್ಕಾರಿ ಅಧಿಕಾರಿಗಳಿಗೆ, ಉಳ್ಳವರಿಗೆ ಗ್ಯಾರಂಟಿ ಯೋಜನೆಗಳು ಬೇಕಿಲ್ಲ. ನಾವು ಒಂದು ತೀರ್ಮಾನ ಮಾಡಿದ್ದೇವೆ. ಅದೇ ರೀತಿ ನೀವು ಒಂದು ತೀರ್ಮಾನಕ್ಕೆ ಬನ್ನಿ ಎಂದರು.

# ಹೊಸ ವಿಮಾನಯಾನ ನೀತಿ ಜಾರಿಗೆ ಸರ್ಕಾರ ಚಿಂತನೆ: ಸಚಿವ ಎಂ.ಬಿ. ಪಾಟೀಲ್

## ಉಡಾನ್ ಯೋಜನೆಯನ್ನು 3ರಿಂದ 5 ವರ್ಷಕ್ಕೆ ವಿಸ್ತರಿಸುವಂತೆ ಕೇಂದ್ರಕ್ಕೆ ಮನವಿ

### 50:50 ಖರ್ಚು-ವೆಚ್ಚದ ಹಂಚಿಕೆ ಆಧಾರದ ಮುಂದುವರಿಸಲು ಆಗ್ರಹ

**ಬೆಂಗಳೂರು, ಮಾ.13:** ರಾಜ್ಯದಲ್ಲಿ ಹೊಸ ವಿಮಾನಯಾನ ನೀತಿ ತರಲು ಚಿಂತನೆ ನಡೆದಿದೆ ಎಂದು ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ವಿಧಾನಸಭೆಯಲ್ಲಿ ತಿಳಿಸಿದರು.

ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿಯ ಜನಾರ್ದನರೆಡ್ಡಿಗೆ ಉತ್ತರಿಸಿದ ಅವರು, ಈ ಹಿಂದೆ ವಿಮಾನ ನಿಲ್ದಾಣಗಳ ನಿರ್ಮಾಣ ಸಂದರ್ಭದಲ್ಲಿ ಸರಿಯಾದ ತೀರ್ಮಾನಗಳನ್ನು ಮಾಡದೆ ಹತ್ತಿರದಲ್ಲೇ ವಿಮಾನ ನಿಲ್ದಾಣಗಳನ್ನು ನಿರ್ಮಿಸಿರುವುದು ವಿಮಾನ ನಿಲ್ದಾಣಗಳ ಕಾರ್ಯಾಚರಣೆಗೆ ಸಂಕಷ್ಟ ತಂದಿದೆ. ಮುಂದಿನ ದಿನಗಳಲ್ಲಿ ವಿಮಾನ ನಿಲ್ದಾಣಗಳ ಬಳಕೆಯನ್ನು ಗಮನದಲ್ಲಿಟ್ಟುಕೊಂಡು ಯಾವ ಪ್ರದೇಶದಲ್ಲಿ ವಿಮಾನ ನಿಲ್ದಾಣ ಮಾಡಿದರೆ ಸೂಕ್ತ ಎಂಬುದನ್ನು ಅರಿತು ತೀರ್ಮಾನಗಳನ್ನು ಮಾಡುವ ಅಗತ್ಯವಿದೆ ಎಂದು ಹೇಳಿದರು.

ವಿಮಾನ ನಿಲ್ದಾಣಗಳ ನಿರ್ಮಾಣ, ಕಾರ್ಯಾಚರಣೆಗೆ ಸಂಬಂಧಿಸಿದಂತೆ ವಿಮಾನಯಾನ ನೀತಿಯನ್ನು ತರುವ ಚಿಂತನೆಯೂ ಇದೆ ಎಂದರು. ರಾಜ್ಯದಲ್ಲಿ ಈಗ ಹಲವು ವಿಮಾನ ನಿಲ್ದಾಣಗಳನ್ನು ನಿರ್ಮಿಸಿದ್ದೇವೆ. ಆದರೆ ವಿಮಾನ ನಿಲ್ದಾಣ ನಿರ್ಮಾಣವಾದ 3–4 ವರ್ಷಗಳಲ್ಲಿ ನಿಲ್ದಾಣಗಳು ಬಂದ್ ಆಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಬೀದರ್, ಕಲಬುರಗಿ, ಶಿವಮೊಗ್ಗ ವಿಮಾನ ನಿಲ್ದಾಣಗಳು ಇಂಥ ಸಂಕಷ್ಟ ಎದುರಿಸುತ್ತಿವೆ. ಇದಕ್ಕೆ ಕಾರಣ ಉಡಾನ್ ಯೋಜನೆ 3 ವರ್ಷಕ್ಕೆ ಪೂರ್ಣಗೊಂಡ ನಂತರ ವಿಮಾನ ಕಾರ್ಯಾಚರಣೆಗಳಿಗೆ ತೊಂದರೆ ಯಾಗುತ್ತಿದೆ. ಹಾಗಾಗಿ ಉಡಾನ್ ಯೋಜನೆಯನ್ನು 3ರಿಂದ 5 ವರ್ಷಕ್ಕೆ ವಿಸ್ತರಿಸುವಂತೆ ಕೇಂದ್ರಕ್ಕೂ ಮನವಿ ಮಾಡಿದ್ದೇವೆ. ಜತೆಗೆ 5 ವರ್ಷದ ನಂತರ ಉಡಾಣ್ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶೇ. 50 ರಷ್ಟು ಖರ್ಚು–ವೆಚ್ಚದ ಹಂಚಿಕೆ ಆಧಾರದ ಮೇಲೆ ಮುಂದುವರೆಸಬೇಕು ಎಂಬ ಆಗ್ರಹವನ್ನು ಇಟ್ಟಿದ್ದೇವೆ ಎಂದು ಅವರು ಹೇಳಿದರು.

ವಿಮಾನ ನಿಲ್ದಾಣ ಆರಂಭವಾದ 3 ವರ್ಷಗಳ ನಂತರ ನಿಲ್ದಾಣ ಬಂದ್ ಆಗುತ್ತಿರುವುದು ರಾಜ್ಯಕ್ಕೆ ಮಾತ್ರ ಸೀಮಿತವಲ್ಲ. ದೇಶದ ಎಲ್ಲೆಡೆಯೂ ಈ ರೀತಿಯ ಸಮಸ್ಯೆ ಇದೆ. ಹಾಗಾಗಿಯೇ ನಾವು ಬೀದರ್ ಮತ್ತು ಕಲ್ಬುರ್ಗಿ ವಿಮಾನ ನಿಲ್ದಾಣವನ್ನು ಕೆಕೆಆರ್‌ಡಿಬಿ ಅನುದಾನದಲ್ಲಿ ನಿರ್ವಹಿಸುತ್ತಿದ್ದೇವೆ. ಬೇರೆ ವಿಮಾನ ನಿಲ್ದಾಣಕ್ಕೂ ಸ್ಥಳೀಯವಾಗಿ ಹಣ ಒದಗಿಸುವ ಅಗತ್ಯವೂ ಇದೆ ಎಂದು ಅವರು ಹೇಳಿ, ಈ ಎಲ್ಲವನ್ನು ಗಮನದಲ್ಲಿಟ್ಟುಕೊಂಡು ಹೊಸ ವಿಮಾನಯಾನ ನೀತಿಯನ್ನು ಜಾರಿ ಮಾಡುವ ಚಿಂತನೆಯೂ ಇದೆ ಎಂದು ಹೇಳಿದರು.

ಬಳ್ಳಾರಿಯಲ್ಲಿ ವಿಮಾನ ನಿಲ್ದಾಣಕ್ಕೆ ಗುರುತಿಸಿರುವ ಜಾಗವನ್ನು ಹೊರತುಪಡಿಸಿ ಸುಮಾರು 20 ಕಿ.ಮೀ. ದೂರದಲ್ಲಿ ಬಳ್ಳಾರಿ, ಕೊಪ್ಪಳ, ವಿಜಯನಗರ ಮೂರು ಜಿಲ್ಲೆಗಳಿಗೆ ಅನುಕೂಲವಾಗುವ ಸ್ಥಳದಲ್ಲಿ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಮುಂದಾಗಿದ್ದೇವೆ. ಇದಕ್ಕಾಗಿ 2 ಕಡೆ ಸ್ಥಳವನ್ನು ಗುರುತು ಮಾಡಿದ್ದೇವೆ. ಎಲ್ಲ ಸಾಧಕ–ಬಾಧಕಗಳನ್ನು ನೋಡಿಕೊಂಡು ಬಳ್ಳಾರಿಯಲ್ಲಿ ಎಲ್ಲಿ ವಿಮಾನ ನಿಲ್ದಾಣ ನಿರ್ಮಿಸಬೇಕು ಎಂಬ ಬಗ್ಗೆ



ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಈ ಮೂರು ಜಿಲ್ಲೆಗಳ ಜನಪ್ರತಿನಿಧಿಗಳ ಸಭೆ ಕರೆದು ತೀರ್ಮಾನ ಕೈಗೊಳ್ಳುವುದಾಗಿಯೂ ಸಚಿವ ಎಂ.ಬಿ. ಪಾಟೀಲ್ ಹೇಳಿದರು.

### ಜಮೀನು ಪಡೆದು ಕೈಗಾರಿಕೆ ನಿರ್ಮಿಸದಿದ್ದರೆ ಜಾಗ ವಾಪಸ್

ರಾಜ್ಯದಲ್ಲಿ ಕೈಗಾರಿಕೆ ಸ್ಥಾಪಿಸಲು ಜಮೀನು ಪಡೆದು ಕೈಗಾರಿಕೆ ಸ್ಥಾಪಿಸದ ಜಮೀನುಗಳನ್ನು ವಾಪಸ್ ಪಡೆಯಲಾಗುವುದು ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ವಿಧಾನಸಭೆಗೆ ತಿಳಿಸಿದರು.

ರಾಜ್ಯದಲ್ಲಿ ಕೈಗಾರಿಕಾ ಉದ್ದೇಶಕ್ಕೆ ಜಮೀನು ಪಡೆದು ಕೈಗಾರಿಕೆ ಸ್ಥಾಪಿಸದವರಿಗೆ ನಿಯಮ 37 ಬಿ ಅಡಿ ಜಮೀನು ವಾಪಸ್ ಪಡೆಯುವ ಕ್ರಮಗಳನ್ನು ಜರುಗಿಸಲಾಗುವುದು. ಕೆಲವರು ನ್ಯಾಯಾಲಯಗಳಿಂದ ತಡೆಯಾಜ್ಞೆ ತಂದಿದ್ದಾರೆ. ತಡೆಯಾಜ್ಞೆಯನ್ನು ತೆರವುಗೊಳಿಸಿ ಜಮೀನುಗಳನ್ನು ವಾಪಸ್ ಪಡೆಯಲಾಗುವುದು ಎಂದು ಹೇಳಿದರು.

# ಒಂದು ವಾರ ತಾಳ್ಮೆಯಿಂದಿರಿ, ಅನಿಲ ಸಿಲಿಂಡರ್ ಪೂರೈಸಲಾಗುವುದು

### ಸಮಸ್ಯೆ ಬಗೆಹರಿಯಲಿದೆ: ವಾಣಿಜ್ಯ ಬಳಕೆದಾರರಿಗೆ ಸಚಿವ ಕೆ.ಎಚ್. ಮುನಿಯಪ್ಪ ಅಭಯ

**ಬೆಂಗಳೂರು, ಮಾ.13:** ಆಸ್ಪತ್ರೆ, ವಿದ್ಯಾರ್ಥಿ ನಿಲಯಗಳಿಗೆ ವಾಣಿಜ್ಯ ಬಳಕೆಯ ಅನಿಲದ ಸಿಲಿಂಡರ್‌ಗಳನ್ನು ಒದಗಿಸಲಾಗುವುದು. ಹೋಟೆಲ್‌ನವರು ಇನ್ನೂ ಒಂದು ವಾರ ತಾಳ್ಮೆಯಿಂದ ಇರಬೇಕಾಗುತ್ತದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ವಿಧಾನಪರಿಷತ್‌ನಲ್ಲಿಂದು ತಿಳಿಸಿದರು.

ಶೂನ್ಯವೇಳೆ ಕಲಾಪದಲ್ಲಿ ಆಡಳಿತ ಪಕ್ಷದ ಸದಸ್ಯರಾದ ಐವಾನ್ ಡಿಸೋಜ ಹಾಗೂ ಎಂ.ನಾಗರಾಜ ಯಾದವ್ ಅವರು ಮಾಡಿದ ಪ್ರಸ್ತಾಪಕ್ಕೆ ಸಚಿವರು ಇಂದು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ತೈಲ ಕಂಪನಿಗಳ ಅಧಿಕಾರಿಗಳ ಜೊತೆ ಸಭೆ ನಡೆಸಿ ಸಲಹೆ ಸೂಚನೆಗಳನ್ನು ನೀಡಲಾಗಿದೆ. ತಕ್ಷಣಕ್ಕೆ ವಾಣಿಜ್ಯ ಬಳಕೆ ಅನಿಲದ ಪೂರೈಕೆ ಸಮಸ್ಯೆಯಿದ್ದು, ಒಂದು ವಾರದ ಬಳಿಕ ಬಗೆಹರಿಯಲಿದೆ ಎಂದರು.

ಹೀಗಾಗಿ ಅಗತ್ಯವಿರುವಷ್ಟು ಅಡುಗೆ ತಯಾರು ಮಾಡಬೇಕು. ಉಳಿದಂತೆ ಎಲೆಕ್ಟ್ರಿಕ್ ಒಲೆ ಬಳಕೆ ಮಾಡಿಕೊಳ್ಳಬೇಕು ಎಂದರು. ಈಗಾಗಲೇ 2 ಹಡಗುಗಳು ಬಂದಿದ್ದು, ಇನ್ನೂ 10 ಹಡಗುಗಳು ಬರುತ್ತಿವೆ.



ಕಾಳ ಸಂತೆಯಲ್ಲಿ ಅನಿಲದ ಸಿಲಿಂಡರ್ ಗಳು ಮಾರಾಟವಾಗದಂತೆ ಎಚ್ಚರಿಕೆ ವಹಿಸಲು ಹಾಗೂ ತಕ್ಷಣ ಕ್ರಮ ಕೈಗೊಳ್ಳಲು ಇಲಾಖಾಧಿಕಾರಿಗಳಿಗೆ ಸೂಚಿಸಲಾಗಿದೆ. ಸದ್ಯಕ್ಕೆ ವಾಣಿಜ್ಯ ಬಳಕೆಯ ಅನಿಲದ ಸಿಲಿಂಡರ್ ದಾಸ್ತಾನು ಇಲ್ಲ. ತುರ್ತು ಕಾರ್ಯಗಳಿಗೆ ವಾಣಿಜ್ಯ ಬಳಕೆ ಸಿಲಿಂಡರ್‌ಗಳನ್ನು ಒದಗಿಸುತ್ತೇವೆ. ಆಟೋ ರಿಕ್ಷಾಗಳಿಗೆ ಬೆಂಗಳೂರಿನಲ್ಲಿ ಗ್ಯಾಸ್ ಒದಗಿಸಲು ಹಾಗೂ ಮಂಗಳೂರಿನಲ್ಲೂ ಗ್ಯಾಸ್ ಸಮಸ್ಯೆ ಬಗೆಹರಿಸಲು ಸೂಚಿಸಲಾಗಿದೆ ಎಂದರು.

ಇದಕ್ಕೂ ಮುನ್ನ ಮಾತನಾಡಿದ ಐವಾನ್ ಡಿಸೋಜಾ ಗ್ಯಾಸ್ ಸಮಸ್ಯೆಯಿಂದಾಗಿ ಕಟ್ಟಿಗೆ ದರ ಹೆಚ್ಚಾಗಿದೆ. ಮಂಗಳೂರು ಭಾಗದಲ್ಲಿ ಗ್ಯಾಸ್ ಸಿಲಿಂಡರ್ ಸಮಸ್ಯೆ ತೀವ್ರವಾಗಿದೆ ಎಂದರು.

# ಕಾನೂನು ಮೀರಿ ಬಡಾವಣೆ ನಿರ್ಮಿಸಿದರೆ ಕಠಿಣ ಕ್ರಮ: ಸಚಿವ ಕೃಷ್ಣಬೈರೇಗೌಡ

### ಅಕ್ರಮ ಬಡಾವಣೆಗಳ ನಿವೇಶನ ನೋಂದಣಿ ಸ್ಥಗಿತ, ನಿವೇಶನ ಖರೀದಿಸಿದರೆ ಸಂತ್ರಸ್ತರಾಗುತ್ತೀರಿ ಎಚ್ಚರಿಕೆ

**ಬೆಂಗಳೂರು, ಮಾ.13:** ಕಾನೂನುಬಾಹಿರವಾಗಿ ಅಕ್ರಮ ಬಡಾವಣೆ ನಿರ್ಮಾಣ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಧಾನಪರಿಷತ್‌ನಲ್ಲಿಂದು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ಎಚ್. ಗೋಪಿನಾಥ್ ಅವರ ಪ್ರಶ್ನೆಗೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಉತ್ತರಿಸುವಾಗ ಮಧ್ಯಪ್ರವೇಶಿಸಿ ಮಾತನಾಡಿದ ಅವರು, ಅಕ್ರಮ ಬಡಾವಣೆಯ ನಿವೇಶನ ನೋಂದಣಿ ಮಾಡುವುದನ್ನು ನಿಲ್ಲಿಸಲಾಗಿದೆ. ಬಡಾವಣೆ ನಿರ್ಮಾಣ ಮಾಡಿದವರು ಕಾನೂನು ಪ್ರಕಾರ ನಿಯಮ ಪಾಲನೆ ಮಾಡುತ್ತಿರಲಿಲ್ಲ. ಆದರೆ ಅಂತಹ ಬಡಾವಣೆಗಳಲ್ಲಿ ನಿವೇಶನ ಖರೀದಿ ಮಾಡಿದವರು ಸಂತ್ರಸ್ತರಾಗುತ್ತಿದ್ದಾರೆ. ಆ ಕಾರಣಕ್ಕಾಗಿ ಅಕ್ರಮ ಬಡಾವಣೆ ನಿವೇಶನ ನೋಂದಣಿಯನ್ನು ನಿಲ್ಲಿಸಿದ್ದೇವೆ ಎಂದರು.

ಬಡಾವಣೆಯಲ್ಲಿ ಅರ್ಧ ಉಳಿದಿರುವ ನಿವೇಶನಗಳಿಗೆ ನೋಂದಣಿ ಮಾಡಬೇಕಾದರೆ ನಿಯಮಗಳನ್ನು ಪಾಲಿಸಬೇಕು. ಬಡಾವಣೆ ವಿನ್ಯಾಸ ಯೋಜನೆಗೆ ಅನುಮೋದನೆ ಪಡೆದುಕೊಂಡರೆ ಅವಕಾಶ ಕೊಡಬಹುದು ಎಂದು ಸ್ಪಷ್ಟಪಡಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಅನಧಿಕೃತ ಬಡಾವಣೆಗಳಿಂದ ತೆರಿಗೆ ಬರುತ್ತಿಲ್ಲ. ನಿಯಮ ಮೀರಿ ಬಡಾವಣೆ ನಿರ್ಮಿಸಿದರೆ ಸಕ್ರಮ ಮಾಡುವುದಾದರೂ ಹೇಗೆ ಬಿ ಖಾತಾ ನೀಡುವ ವಿಚಾರದಲ್ಲೂ ನಿಯಮ ತರಬೇಕಾಗುತ್ತದೆ ಎಂದು ಹೇಳಿದರು.

ಸ್ವರಾಜ್ ಮತ್ತು ಪಂಚಾಯತ್ ರಾಜ್ ತಿದ್ದುಪಡಿ ಅಧಿನಿಯಮದ ಪ್ರಕಾರ, 1993, 190 ಎ ಪ್ರಕರಣದ ತರುವಾಯ 190 ಬಿ ಮತ್ತು 199 ಸಿ ಹೊಸ ಪ್ರಕರಣಗಳನ್ನು ಸೇರ್ಪಡೆ ಮಾಡಿದೆ ಎಂದರು.

ಕಂದಾಯ ಭೂಮಿಯಲ್ಲಿ ವಿನ್ಯಾಸ ಅನುಮೋದನೆ ಇಲ್ಲದ ಬಡಾವಣೆಗಳಲ್ಲಿ ನೋಂದಣಿಯಾಗದ ನಿವೇಶನಗಳ ಬಗ್ಗೆ ಕ್ರಮ ವಹಿಸಬಹುದಾಗಿದೆ. ಅಧಿಸೂಚಿತ ದಿನಾಂಕಕ್ಕೆ ಪೂರ್ವದಲ್ಲಿ ತೆರಿಗೆ ವ್ಯಾಪ್ತಿಗೆ ಒಳಪಡದ ಖಾಲಿ ನಿವೇಶನಗಳನ್ನು ಈಗಾಗಲೇ ಅಭಿವೃದ್ಧಿಪಡಿಸಲಾದ ಬಡಾವಣೆಗಳಲ್ಲಿ ಮೂಲ ಮಾಲೀಕರ ಹೆಸರಿನಲ್ಲಿರುವ ಕಂದಾಯ ಜಮೀನಿನಲ್ಲಿ ನಿವೇಶನಗಳೆಂಬ ಕಾರಣಕ್ಕಾಗಿ ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿಲ್ಲ ಎಂದು 2025ರ ಅ.15 ರಂದು ಅಧಿಸೂಚಿಸಲಾಗಿದೆ. ಈಗಾಗಲೇ ಭೂಪರಿವರ್ತನೆ ವರ್ಗಾವಣೆಗೆ ಒಳಪಟ್ಟಿರುವ ನಿವೇಶನಗಳನ್ನು ಹೊರತುಪಡಿಸಿ ಉಳಿಕೆ ಜಾಗವನ್ನು ಮಾಲೀಕನ ಹೆಸರಿನಲ್ಲಿ ಏಕ ನಿವೇಶನವೆಂದು ಪರಿಗಣಿಸಬಹುದು ಎಂದರು.



### ಕಲ್ಯಾಣ ಕರ್ನಾಟಕದಲ್ಲಿ 72 ನವೋದ್ಯಮ: ಖರ್ಗೆ

ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಳೆದ ಮೂರು ವರ್ಷಗಳಲ್ಲಿ 21 ಐಟಿ ಕಂಪನಿಗಳು ಪ್ರಾರಂಭವಾಗಿವೆ ಎಂದು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ, ಶಾಸಕ ಕೆ.ಎನ್.ನವೀನ್ ಅವರ ಪ್ರಶ್ನೆಗೆ ಉತ್ತರಿಸಿದರು,

ಬಳ್ಳಾರಿ ಜಿಲ್ಲೆಯಲ್ಲಿ ಇನ್‌ಕ್ಯುಬೇಷನ್ ಕೇಂದ್ರ, ಕಲಬುರಗಿಯಲ್ಲಿ ಕೃಷಿಕಲ್ಪ ಫೌಂಡೇಷನ್, ಆಧುನಿಕ ಕೃಷಿ ಉಪಕರಣಗಳ ಅಭಿವೃದ್ಧಿ ಕೇಂದ್ರವನ್ನು ಸ್ಥಾಪನೆ ಮಾಡಲಾಗಿದೆ. ರಾಯಚೂರಿನಲ್ಲಿ ಐಐಐಟಿ ಸ್ಥಾಪನೆಗೆ ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದ್ದು, ಲೀಪ್ ಯೋಜನೆಯಡಿಯಲ್ಲಿ ಲ್ಯಾಬ್‌ಗಳ ಸ್ಥಾಪನೆ ಮಾಡಲಾಗುತ್ತಿದೆ. ಕಲಬುರಗಿಯ ನಂದೂರಿನಲ್ಲಿ ಎಲೆಕ್ಟ್ರಾನಿಕ್ ಸಾಮಗ್ರಿಗಳ ತಯಾರಿಕೆಗೆ 36 ಎಕರೆ ಜಮೀನು ಮೀಸಲಿರಿಸಲಾಗಿದೆ ಎಂದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಳೆದ ಮೂರು ವರ್ಷಗಳಲ್ಲಿ 72 ನವೋದ್ಯಮಗಳು ನೋಂದಣಿಯಾಗಿವೆ. 20 ನವೋದ್ಯಮಿಗಳಿಗೆ 4.90 ಕೋಟಿ ರೂ. ಹಂಚಿಕೆ ಮಾಡಲಾಗಿದೆ. ಈ ಭಾಗದಲ್ಲಿ ಸಾಕಷ್ಟು ಪ್ರತಿಭಾವಂತರಿದ್ದು, ಮಾನವ ಸಂಪನ್ಮೂಲವೂ ಇದೆ. ಅಗತ್ಯವಿರುವ ಕೌಶಲ್ಯ ಪಡೆಯಲು ಉತ್ತೇಜನ ನೀಡಲಾಗುತ್ತಿದೆ ಎಂದು ಹೇಳಿದರು.

# ರಾಜ್ಯದ ಎಲ್ಲ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಯುಎಲ್‌ಎಂಎಸ್ ಜಾರಿ

### ಭೂದಾಖಲೆ, ಸಮೀಕ್ಷೆ, ಪರಿವರ್ತನೆ, ಆಸ್ತಿ ತೆರಿಗೆ, ಇ-ಖಾತಾ ಸೇವೆ ಎಲ್ಲವೂ ಒಂದೇ ವೇದಿಕೆಯಡಿ ಲಭ್ಯ: ಸಚಿವ ಬೈರತಿ ಸುರೇಶ್



**ಬೆಂಗಳೂರು ಮಾ.13:** ಸದ್ಯದಲ್ಲೇ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಏಕೀಕೃತ ಭೂ ನಿರ್ವಹಣಾ ವ್ಯವಸ್ಥೆ (ಯೂನಿಫೈಡ್ ಲ್ಯಾಂಡ್ ಮ್ಯಾನೇಜ್‌ಮೆಂಟ್ ಸಿಸ್ಟಂ ? (ಯುಎಲ್‌ಎಂಎಸ್–ಗಐಒಖ) ಜಾರಿಗೆ ಬರಲಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿ ಶುಕ್ರವಾರ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಜ್ಯೋತಿ ಗಣೇಶ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಭೂದಾಖಲೆಗಳು, ಸಮೀಕ್ಷೆ, ಭೂಪರಿವರ್ತನೆ, ಆಸ್ತಿ ತೆರಿಗೆ ಮತ್ತು ಇ–ಖಾತಾ ಸೇವೆಗಳನ್ನು ಒಂದೇ ಕಡೆ ಲಭ್ಯವಾಗುವಂತೆ ಮಾಡುವ ಪ್ಲಾಟ್ ಫಾರ್ಮ್ ಇದಾಗಿದೆ. ಪೈಲಟ್ ಯೋಜನೆಯಡಿ ಸದ್ಯದಲ್ಲಿಯೇ ಎಲ್ಲಾ ಮಹಾನಗರ ಪಾಲಿಕೆ ವ್ಯಾಪ್ತಿಗಳಲ್ಲಿ ಜಾರಿಗೆ ತರಲಾಗುತ್ತಿದೆ ಎಂದು ತಿಳಿಸಿದರು.

ಅನಧಿಕೃತ ಕಟ್ಟಡಗಳಿಗೆ, ಆಸ್ತಿಗಳಿಗೆ ಇ–ಖಾತಾ ಮಾಡಿಕೊಡಲೆಂದು ಇ–ಆಸ್ತಿ ತಂತ್ರಾಂಶವನ್ನು ಪರಿಚಯಿಸಲಾಗಿದೆ. ಕಟ್ಟಡ ಮತ್ತು ನಿವೇಶನಗಳು ಎಷ್ಟೇ ವಿಸ್ತೀರ್ಣದ್ದಾಗಿದ್ದರೂ ಇ–ಖಾತಾ ಮಾಡಿಕೊಡ ಲಾಗುತ್ತದೆ. ಅಲ್ಲದೇ, ನಾಗರಿಕರು ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಿ ಇ–ಖಾತೆಯನ್ನು ಪಡೆದುಕೊಳ್ಳಬಹುದಾಗಿದೆ ಎಂದರು.

# ಭಿಕ್ಷಾಟನೆ ಮುಕ್ತ ರಾಜ್ಯ ನಿರ್ಮಾಣಕ್ಕೆ ಕ್ರಮ

### ಮಾಫಿಯಾ ಇದ್ದರೆ ನಿರ್ಬಂಧಿಸಲು ಕಠಿಣ ಕ್ರಮ: ಸಚಿವ ಡಾ. ಎಚ್.ಸಿ. ಮಹದೇವಪ್ಪ

**ಬೆಂಗಳೂರು, ಮಾ.13:** ಬೆಂಗಳೂರು ನಗರ ಒಳಗೊಂಡಂತೆ ಸಂಪೂರ್ಣ ರಾಜ್ಯವನ್ನು ಭಿಕ್ಷಾಟನೆಮುಕ್ತ ಮಾಡಲು ಕ್ರಮ ವಹಿಸಲಾಗುವುದು ಎಂದು ಸಮಾಜಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ವಿಧಾನಪರಿಷತ್‌ನಲ್ಲಿ ತಿಳಿಸಿದರು.

ಪ್ರಶ್ನೋತ್ತರ ಅವಧಿಯಲ್ಲಿ ಶಾಸಕ ಕೆ.ಗೋವಿಂದರಾಜು ಅವರಿಗೆ ಉತ್ತರಿಸಿದ ಅವರು, ಭಿಕ್ಷಾಟನೆ ಹಿಂದೆ ಮಾಫಿಯಾ ಇದ್ದರೆ ಅದನ್ನು ನಿರ್ಬಂಧಿಸಲು ಕಠಿಣ ಕ್ರಮ ಕೈಗೊಳ್ಳಲಾಗುವುದು. ನಮ ಹಾಗೂ ಪೊಲೀಸ್ ಇಲಾಖೆಯವರೊಡನೆ ಚರ್ಚಿಸಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯದಲ್ಲಿ ಕೇಂದ್ರ ಪರಿಹಾರ ಸಮಿತಿಯ ಅಧೀನದಲ್ಲಿ ಬೆಂಗಳೂರು ಸೇರಿದಂತೆ ಒಟ್ಟು 15 ನಿರಾಶ್ರಿತರ ಪರಿಹಾರ ಕೇಂದ್ರಗಳಿವೆ. 2025–26ನೇ ಸಾಲಿನಲ್ಲಿ 5,649 ಮಂದಿಯನ್ನು ಬಂಧಿಸಿ 5,402 ಮಂದಿಯನ್ನು ಬಿಡುಗಡೆ ಮಾಡಲಾಗಿದೆ. ಈ ಸಾಲಿನಲ್ಲಿ ಭಿಕ್ಷುಕರ ಪುನರ್ ವಸತಿಗಾಗಿ 69.07 ಕೋಟಿ ವೆಚ್ಚ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಬೆಂಗಳೂರು ನಗರಕ್ಕೆ ಹೊರರಾಜ್ಯದವರು ವಿವಿಧ ಕಾರಣಗಳಿಂದಾಗಿ ಹೆಚ್ಚು ಬರುವುದರಿಂದ ಭಿಕ್ಷುಕರು ಹೆಚ್ಚಾಗಲು ಕಾರಣವಾಗಿದೆ. ಬೆಂಗಳೂರನ್ನು ಭಿಕ್ಷಾಟನೆ ಮುಕ್ತ ನಗರವನ್ನಾಗಿ ಮಾಡಲು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಕ್ರಮ ವಹಿಸಲಾಗಿದೆ. ಭಿಕ್ಷಾಟನೆ ವೃತ್ತಿಗೆ ಮತ್ತೆ ಮರಳಬಾರದೆಂದು ವಿವಿಧ ವೃತ್ತಿ ತರಬೇತಿಯನ್ನು ಪುನರ್ ವಸತಿ ಕೇಂದ್ರದಲ್ಲಿ ನೀಡಲಾಗುತ್ತಿದೆ ಎಂದು ಹೇಳಿದರು.

ಮಕ್ಕಳೊಂದಿಗೆ ಭಿಕ್ಷಾಟನೆ ಮಾಡುವುದನ್ನು ನಿರ್ಮೂಲನೆ ಮಾಡಲು ಭಿಕ್ಷಾಟನೆಯಲ್ಲಿ ಮಕ್ಕಳೊಂದಿಗೆ ತೊಡಗಿರುವ ಮಹಿಳೆಯರನ್ನು ಬಂಧಿಸಿ ಕಾನೂನು ರೀತಿ ಕ್ರಮ ಜರುಗಿಸಲಾಗುತ್ತಿದೆ. 2025–26ನೇ ಸಾಲಿನಲ್ಲಿ 936 ಮಂದಿ ವಿವಿಧ ತರಬೇತಿ ಪಡೆದಿದ್ದಾರೆ. 1,026 ಮಂದಿಯನ್ನು ಮರಳಿ ಅವರ ಕುಟುಂಬಗಳಿಗೆ ವಾಪಸ್ ಕಳುಹಿಸಲಾಗಿದೆ ಎಂದರು.

ನಿರಾಶ್ರಿತರ ಒಳಿತಿಗಾಗಿ ಮಾನಸಿಕ ಆರೋಗ್ಯ ಕೇಂದ್ರ, ಡಾ.ಬಿ.ಆರ್.ಅಂಬೇಡ್ಕರ್ ತರಬೇತಿ ಕೇಂದ್ರ ಮತ್ತು ಸಿದ್ಧ ಉಡುಪು ಘಟಕವನ್ನು ಸ್ಥಾಪಿಸಲು ಕೇಂದ್ರ ಪರಿಹಾರ ಸಮಿತಿಗೆ ಸೂಚಿಸಲಾಗಿದೆ. ಅಲ್ಲದೆ ಸಾಮಾಜಿಕ ಭದ್ರತೆಗಾಗಿ ಆಧಾರ್‌ಕಾರ್ಡ್, ವೃದ್ಧಾಪ್ಯವೇತನ, ವಿಕಲಚೇತನ ವೇತನ, ವಿಧವಾ ವೇತನ ಒದಗಿಸಲು ಸಂಬಂಧಿತ ಇಲಾಖೆಗಳೊಂದಿಗೆ ಮಂಜೂರಾತಿಗಾಗಿ ಕ್ರಮ ವಹಿಸಲಾಗುತ್ತಿದೆ ಎಂದು ಅವರು ಹೇಳಿದರು.

**ವಿದ್ಯಾರ್ಥಿ ವೇತನ ಬಾಕಿ ಇಲ್ಲ:** ಆಧಾರ್‌ಸೀಡ್ ಆಗಿರುವ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಸಕಾಲದಲ್ಲಿ ಅರ್ಜಿ ಸಲ್ಲಿಸಿದವರಿಗೆ ವಿದ್ಯಾರ್ಥಿ ವೇತನ ಪಾವತಿಸಲಾಗಿದ್ದು, ಯಾವುದೇ ಅರ್ಜಿಗಳು ಪಾವತಿಗೆ ಬಾಕಿ ಉಳಿದಿಲ್ಲ ಎಂದು ಶಾಸಕರಾದ ಹೇಮಲತಾ ನಾಯಕ್ ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ಬ್ಯಾಂಕ್ ಖಾತೆಗೆ ಆಧಾರ್‌ಸೀಡ್ ಆಗದಿರುವ ವಿದ್ಯಾರ್ಥಿಗಳ ವಿದ್ಯಾರ್ಥಿವೇತನ ನೀಡಿಕೆ



ವಿಳಂಬವಾಗಿದ್ದು, ಆಧಾರ್‌ಸೀಡ್ ಆದ ಕೂಡಲೇ ವಿದ್ಯಾರ್ಥಿವೇತನ ನೀಡಲಾಗುತ್ತದೆ ಎಂದರು.

### 27 ವಿದ್ಯಾರ್ಥಿಗಳ ಆತ್ಮಹತ್ಯೆ

ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ಶಾಲೆಗಳಲ್ಲಿ 10, ವಸತಿ ಶಾಲೆಯಲ್ಲಿ 5 ಹಾಗೂ ವಸತಿ ನಿಲಯಗಳಲ್ಲಿ 12 ವಿದ್ಯಾರ್ಥಿಗಳು ಸೇರಿ ಒಟ್ಟು 27 ಮಂದಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಎಂದು ಶಾಸಕ ತಿಪ್ಪಣ್ಣಪ್ಪ ಕಮಕನೂರು ಅವರ ಪ್ರಶ್ನೆಗೆ ಡಾ.ಎಚ್.ಸಿ. ಮಹದೇವಪ್ಪ ಉತ್ತರಿಸಿದರು. ಸಮಾಜ ಕಲ್ಯಾಣ ಇಲಾಖೆ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳು ಪ್ರೇಮ ವೈಫಲ್ಯ, ವೈಯಕ್ತಿಕ, ಮಾನಸಿಕ ಖಿನ್ನತೆ, ಆನ್‌ಲೈನ್ ಜೂಜಾಟ ಮೊದಲಾದ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದು, ಈ ರೀತಿ ಆತ್ಮಹತ್ಯೆ ತಡೆಗೆ ನೀತಿ ತರುತ್ತಿದ್ದೇವೆ. ಇದಕ್ಕೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ನೇತೃತ್ವದಲ್ಲಿ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದೆ. ಆತ್ಮಹತ್ಯೆ ತಡೆನೀತಿ 2025 ರಂತೆ 100 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿರುವ ಪ್ರತಿಯೊಂದು ಸಂಸ್ಥೆಯೂ ಕನಿಷ್ಠ ಒಬ್ಬ ಅರ್ಹ ಮನೋವೈದ್ಯರನ್ನು, ಮಂಡಳಿ ಅಥವಾ ಸಮಾಜ ಸೇವಕರನ್ನು ನೇಮಿಸಬೇಕಾಗುತ್ತದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಇಲಾಖಾ ನಿಲಯಗಳಲ್ಲಿ ಪ್ರತಿವಾರ ಮಹಿಳಾ ಸಮಾಲೋಚಕಿ ಅಥವಾ ಮಹಿಳಾ ವೈದ್ಯರ ಮೂಲಕ ಸಮಾಲೋಚನೆ ಮಾಡಲು ಆದೇಶಿಸಲಾಗಿದೆ ಎಂದು ಹೇಳಿದರು.

# ಚಿನ್ನ ಅಡಮಾನ ಸಾಲಗಾರರ ರಕ್ಷಣಾ ವಿಧೇಯಕ ಮಂಡನೆ


### ಖಾಸಗಿ ಸಂಸ್ಥೆಗಳಿಂದ ಮೋಸಹೊಂದ ಅನೇಕ ನಿದರ್ಶನಗಳಿವೆ: ಶಾಸಕ ರಮೇಶ್‌ಬಾಬು

**ಬೆಂಗಳೂರು, ಮಾ.13:** ಸಾರ್ವಜನಿಕ ಹಿತದೃಷ್ಟಿಯಿಂದ ಕಷ್ಟ ಸಂದರ್ಭದಲ್ಲಿ ಚಿನ್ನ ಅಡವಿಟ್ಟು ಸಾಲ ಪಡೆಯುವವರ ಹಿತರಕ್ಷಣೆ ಉದ್ದೇಶದ ಕರ್ನಾಟಕ ಚಿನ್ನ ಅಡಮಾನವಿಟ್ಟ ಸಾಲಗಾರರ ರಕ್ಷಣಾ ವಿಧೇಯಕ–2025 ಎಂಬ ಖಾಸಗಿ ಸದಸ್ಯರ ವಿಧೇಯಕವನ್ನು ಶಾಸಕ ರಮೇಶ್‌ಬಾಬು ವಿಧಾನಪರಿಷತ್‌ನಲ್ಲಿಂದು ಮಂಡಿಸಿದರು.

ವಿಧೇಯಕ ಮಂಡಿಸಿ ಮಾತನಾಡಿದ ಶಾಸಕರು, ಖಾಸಗಿ ಹಣಕಾಸು ಸಂಸ್ಥೆಗಳು ಚಿನ್ನವನ್ನು ಅಡವಿಟ್ಟುಕೊಂಡು ಸಾಲ ನೀಡುವಾಗ ಮೋಸ ಮಾಡುವ ನಿದರ್ಶನವಿದೆ. ಚಿನ್ನದ ಮಾರುಕಟ್ಟೆ ಮೌಲ್ಯದಲ್ಲಿ ಅರ್ಧಕ್ಕಿಂತಲೂ ಕಡಿಮೆ ಕೊಡಲಾಗುತ್ತದೆ.

ಸಾಲಗಾರರಿಗೆ ಸರಿಯಾದ ಮಾಹಿತಿ ದೊರೆಯದೆ ವಂಚನೆಗೊಳಗಾಗುತ್ತಾರೆ.

ಸಾಲ ಮರು ಪಾವತಿಸದ ಸಾಲಗಾರರ ಚಿನ್ನವನ್ನು ವ್ಂಂಟ್ಟಗ್ೋಲಂ ಹಾಕಲಾಗುತ್ತದೆ. ಚಿನ್ನ ಅಡವಿಟ್ಟವರಿಗೆ ಮಾರುಕಟ್ಟೆ ಮೌಲ್ಯದ ಶೇ.25 ರಷ್ಟು ಸಿಗುತ್ತದೆ. ಅಡವಿಟ್ಟ ಚಿನ್ನ ಹರಾಜು ಹಾಕುವ ಪ್ರಕ್ರಿಯೆಯು



ಪಾರದರ್ಶಕ ವಾಗಿರುವುದಿಲ್ಲ. ಬಡ್ಡಿ ವಿಧಿಸುವುದು ಸರಿಯಿರುವುದಿಲ್ಲ, ತೂಕದಲ್ಲಿ ಮೋಸವಾಗುತ್ತದೆ. ಸಾಲಗಾರರ ಶೋಷಣೆ ಮಾಡಲಾಗುತ್ತದೆ ಎಂದು ವಿವರಿಸಿದರು.

ಅಡಮಾನವಿಟ್ಟ ಚಿನ್ನ ಹರಾಜು ಹಾಕುವ ಮೊದಲು 180 ದಿನಗಳ ಕನಿಷ್ಠ ನೋಟಿಸಿನ ಅವಧಿಯನ್ನು ಖಚಿತಪಡಿಸಿಕೊಳ್ಳಬೇಕು. ಪಾರದರ್ಶಕ ಮೌಲ್ಯಮಾಪನ ಸೂಕ್ತವಾದ ಸಂವಹನ ಮತ್ತು ಬಿಡಿಸಿಕೊಳ್ಳುವಿಕೆಗೆ ಅವಕಾಶವನ್ನು ಕಡ್ಡಾಯಗೊಳಿಸುವ ಉದ್ದೇಶವನ್ನು ಈ ವಿಧೇಯಕ ಒಳಗೊಂಡಿದೆ. ಪರವಾನಗಿ ಪಡೆದವರಿಂದ ಮತ್ತು ಮೇಲ್ವಿಚಾರಣೆಯ ಕಾರ್ಯವಿಧಾನಗಳ ಮೂಲಕ ಹರಾಜು ಪ್ರಕ್ರಿಯೆಯನ್ನು ನಿಯಂತ್ರಿಸಬೇಕು.

# ಪಿಎಚ್‌ಸಿಗಳನ್ನು ಬಂದ್ ಮಾಡಿ ಬೇರೆಡೆಗೆ ವೈದ್ಯರ ನಿಯೋಜನೆಗೆ ವಿರೋಧ

### ಈ ಕ್ರಮ ತಡೆಯುವಂತೆ ವಿಧಾನಸಭೆಯಲ್ಲಿ ಪಕ್ಷಭೇದ ಮರೆತು ಸದಸ್ಯರ ಒತ್ತಾಯ

**ಬೆಂಗಳೂರು, ಮಾ. 13–** ರಾಜ್ಯದ ಹಲವೆಡೆ ಆರೋಗ್ಯ ಇಲಾಖೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಬಂದ್ ಮಾಡಿ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ರುವ ತಜ್ಞರನ್ನು ಬೇರೆಡೆಗೆ ನಿಯೋಜಿಸುತ್ತಿರುವ ವಿಚಾರ ವಿಧಾನಸಭೆಯಲ್ಲಿ ಪ್ರತಿಧ್ವನಿಸಿ ಪಕ್ಷಭೇದ ಮರೆತು ಸದಸ್ಯರು ಇದಕ್ಕೆ ತಡೆ ಹಾಕುವಂತೆ ಒತ್ತಾಯಿಸಿದರು.

ಪ್ರಶ್ನೋತ್ತರ ಅವಧಿಯ ನಂತರ ಆರೋಗ್ಯ ಇಲಾಖೆಯ ವಿಚಾರದ ಬಗ್ಗೆ ಚರ್ಚೆಗೆ ಅವಕಾಶ ನೀಡುವಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ್, ಜೆಡಎಸ್‌ನ ಸೂರ್ಯನಾಯಕ್ ಅವರು ಸಭಾಧ್ಯಕ್ಷರಲ್ಲಿ ಮನವಿ ಮಾಡಿದ ಸಂದರ್ಭದಲ್ಲಿ ಸಭಾಧ್ಯಕ್ಷರು ಸೋಮವಾರ ಚರ್ಚೆಗೆ ಅವಕಾಶ ನೀಡುವುದಾಗಿ ಹೇಳಿದಾಗ ಇಲ್ಲ, ಈ ಬಗ್ಗೆ ಈಗಲೇ ಚರ್ಚೆಗೆ ಅವಕಾಶ ಕೊಡಿ. ಪಿಹೆಚ್‌ಸಿಗಳನ್ನು ಬಂದ್ ಮಾಡಲಾಗುತ್ತಿದೆ. ಸಮುದಾಯ ಆರೋಗ್ಯ ಕೇಂದ್ರಗಳ ತಜ್ಞರನ್ನು ಬೇರೆಡೆಗೆ ನಿಯೋಜಿಸಲಾಗುತ್ತಿದೆ. ಆಶಾ ಕಾರ್ಯಕರ್ತೆಯರನ್ನು ಕೆಲಸದಿಂದ ತೆಗೆಯಲಾಗುತ್ತಿದೆ. ಆಸ್ಪತ್ರೆಗಳಲ್ಲಿ ವೈದ್ಯರಿಲ್ಲದೆ ತೊಂದರೆಯಾಗುತ್ತಿದೆ ಎಂದು ಬಿಜೆಪಿ, ಜೆಡಿಎಸ್ ಹಾಗೂ ಕಾಂಗ್ರೆಸ್‌ನ ಹಲವು ಸದಸ್ಯರು ಒಟ್ಟಿಗೆ ನಿಂತು ಹೇಳಿದ್ದು ಸದನದಲ್ಲಿ ಸ್ವಲ್ಪಮಟ್ಟಿಗೆ ಗದ್ದಲದ ವಾತಾವರಣಕ್ಕೆ ಕಾರಣವಾಯಿತು.

ಆಗ ಸಚಿವ ಶಿವಾನಂದ ಪಾಟೀಲ್ ಅವರು ಎದ್ದುನಿಂತು ಈ ಬಗ್ಗೆ ನಿನ್ನೆ ಸಚಿವ ಸಂಪುಟ ಸಭೆಯಲ್ಲೂ ಚರ್ಚೆಗಳಾಗಿವೆ. ಪಿಹೆಚ್‌ಸಿಗಳನ್ನು ಮುಚ್ಚಲ್ಲ, ತಜ್ಞ ವೈದ್ಯರನ್ನು ರೀ ಆರ್ಗನೈಸ್ ಮಾಡಲು ಈ ರೀತಿ ಮಾಡಲಾಗುತ್ತಿದೆ. ಆರೋಗ್ಯ ಸಚಿವರು ಈ ಬಗ್ಗೆ ಹೇಳಿಕೆ ನೀಡುತ್ತಾರೆ ಎಂದು ಹೇಳಿದರು. ಆಗ ಸದಸ್ಯರುಗಳು ಈಗ ತತ್‌ಕ್ಷಣಕ್ಕೆ ಯಾವ ವೈದ್ಯರನ್ನು ಸೇವೆಯಿಂದ ಬಿಡುಗಡೆ ಮಾಡದಂತೆ ಆದೇಶ ಹೊರಡಿಸಿ ಎಂದು ಒತ್ತಾಯಿಸಿದರು. ಆಗ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಸಹ ಸದಸ್ಯರ ಮಾತಿಗೆ ದನಿಗೂಡಿಸಿ, ಆರೋಗ್ಯ ಸಚಿವರು ಬರಲಿ, ಈ ಬಗ್ಗೆ ಚರ್ಚೆ ಮಾಡೋಣ ಎಂದು ಹೇಳಿ, ಈ ಕುರಿತ ಚರ್ಚೆಗೆ ತೆರೆ ಎಳೆದರು.

# ಹಿಂದುಳಿದ ವರ್ಗಗಳ ಆಯೋಗದಿಂದ ಎಲ್ಲ ಸಮುದಾಯಗಳ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ಪ್ರಗತಿ: ಸಚಿವ ತಂಗಡಗಿ ಮಾಹಿತಿ

**ಬೆಂಗಳೂರು, ಮಾ.13:** ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಅಲೆಮಾರಿ/ ಅರೆಅಲೆಮಾರಿ ಸಮುದಾಯವೂ ಸೇರಿದಂತೆ ರಾಜ್ಯದಲ್ಲಿ ವಾಸವಿರುವ ಎಲ್ಲಾ ಸಮುದಾಯಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ ತಂಗಡಗಿ ಮೇಲ್ಮನೆಯಲ್ಲಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಪಿಹೆಚ್ ಪೂಜಾರ್ ಅವರ ಪರವಾಗಿ ಬಿಜೆಪಿಯ ರವಿಕುಮಾರ್ ಅವರು ಕೇಳಿದ ಪ್ರಶ್ನೆಗೆ ಉತ್ತರ ನೀಡಿದ ಸಚಿವರು. ಸಮೀಕ್ಷೆಯಲ್ಲಿ ನಿವೇಶನ ಮತ್ತು ವಸತಿ ರಹಿತ ವಿವರಗಳೂ ಸಹ ಸೇರಿರುತ್ತವೆ. ಆಯೋಗದಿಂದ ಸರ್ಕಾರಕ್ಕೆ ಇನ್ನೂ ವರದಿ ಸಲ್ಲಿಕೆಯಾಗಿಲ್ಲ ಎಂದು ತಿಳಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲೆಮಾರಿ/ ಅರೆ ಅಲೆಮಾರಿ ಸಮುದಾಯದ ಅಭಿವೃದ್ಧಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ,ಮೆಟ್ರಿಕ್ ನಂತರ ವಿದ್ಯಾರ್ಥಿವೇತನ,

ಆಶ್ರಮ ಶಾಲೆಗಳ ನಿರ್ವಹಣೆ,ವಸತಿ ಯೋಜನೆ, ಸ್ವಯಂ ಉದ್ಯೋಗ ಯೋಜನೆಡಿ ಸಾಲ ಸೌಲಭ್ಯ ಮಂಜೂರು, ಗಂಗಾಕಲ್ಯಾಣ ನೀರಾವರಿ ಯೋಜನೆ,ಅರಿವು ಕಾರ್ಯಕ್ರಮದ ಯೋಜನೆಯಡಿ ಶೈಕ್ಷಣಿಕ ಸಾಲ ಮಂಜೂರು, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಬಡ್ಡಿರಹಿತ ಸಾಲ ಸೌಲಭ್ಯ, ಸ್ವಾವಲಂಬಿ ಸಾರಥಿ ಯೋಜನೆಯಡಿ ವಾಹನಗಳ ಖರೀದಿಗೆ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ ಎಂದು ಹೇಳಿದರು.

ನಿಗಮದ ಎಲ್ಲಾ ಯೋಜನೆಗಳನ್ನು ಆನ್‌ಲೈನ್ ಮೂಲಕ ಅರ್ಜಿ ಕರೆದು ವಿವಿಧ ಹಂತಗಳಲ್ಲಿ ವ್ಯಾಪಕ ಪ್ರಚಾರ ನೀಡಲಾಗುತ್ತಿದೆ ಪರಿಣಾಮವಾಗಿ ಎಲ್ಲಾ ವಿವಿಧ ಯೋಜನೆಗಳಲ್ಲಿ ನಿಗದಿತ ಗುರಿಗಿಂತ ಐದರಿಂದ ಹತ್ತು ಪಟ್ಟು ಹೆಚ್ಚು ಅರ್ಜಿಗಳು ಸ್ವೀಕೃತವಾಗುತ್ತಿವೆ ಎಂದರು.


# ಪಂಚರಾಜ್ಯ ವಿಧಾನಸಭೆ - ಕರ್ನಾಟಕದ 2 ಕ್ಷೇತ್ರಗಳ ಉಪಚುನಾವಣೆಗೆ ಮಾ.16ರಂದು ದಿನಾಂಕ ಘೋಷಣೆ ಸಾಧ್ಯತೆ

**ನವದೆಹಲಿ, ಮಾ.13:** ಕರ್ನಾಟಕದ ಎರಡು ಸ್ಥಾನಗಳ ಉಪಚುನಾವಣೆ ಸೇರಿ ದೇಶದ ಪಂಚ ರಾಜ್ಯಗಳ ವಿಧಾನಸಭೆ ಚುನಾವಣೆಗೆ ಕೇಂದ್ರ ಚುನಾವಣಾ ಆಯೋಗ ಮಾ.16ರಂದು ದಿನಾಂಕ ಘೋಷಿಸುವ ಸಾಧ್ಯತೆ ಇದೆ ಎನ್ನಲಾಗಿದೆ. ಕೊಲ್ಕತ್ತದ ಬ್ರಿಗೇಡ್ ಪರೇಡ್ ಮೈದಾನದಲ್ಲಿ ಮಾ.14ರಂದು ಪ್ರಧಾನಿ ನರೇಂದ್ರ ಮೋದಿ ಅವರು ಬಿಜೆಪಿಯ ಪರಿಬರ್ತನ್ ಯಾತ್ರೆಯ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಲಿದ್ದಾರೆ. ಇದಾದ ಎರಡು ದಿನಗಳ ನಂತರ, ಅಂದರೆ ಮಾ.16ರಂದು ಪ್ರಕಟಣೆ ಹೊರಬೀಳುವ ನಿರೀಕ್ಷೆಯಿದೆ. ಚುನಾವಣಾ ಆಯೋಗದ ಮೂಲಗಳ ಪ್ರಕಾರ ಬಂಗಾಳದಲ್ಲಿ ವಿಧಾನಸಭಾ ಚುನಾವಣೆ ಎರಡು ಹಂತಗಳಲ್ಲಿ ನಡೆಯಲಿದ್ದು, ಮೊದಲ ಹಂತವು ಏಪ್ರಿಲ್ ಎರಡನೇ ವಾರದ ಕೊನೆಯಲ್ಲಿ ಅಥವಾ ಮೂರನೇ ವಾರದಲ್ಲಿ ನಡೆಯಬಹುದು ಎನ್ನಲಾಗಿದೆ. ಉಳಿದಂತೆ ಇತರ ನಾಲ್ಕು ರಾಜ್ಯಗಳಾದ ಅಸ್ಸಾಂ, ತಮಿಳುನಾಡು, ಕೇರಳ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆಯ ದಿನಾಂಕಗಳನ್ನೂ ಅದೇ ದಿನ ಪ್ರಕಟಿಸಲಿದೆ ಎನ್ನಲಾಗಿದೆ..

ರಾಜ್ಯದ ಎರಡು ಕ್ಷೇತ್ರಗಳ ಉಪ ಚುನಾವಣೆ: ಮಾಜಿ ಸಚಿವ ಶಾಮನೂರು ಶಿವಶಂಕರಪ್ಪ ಅವರ ನಿಧನದ ಬಳಿಕ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ಮತ್ತು ವೈಎಸ್ ಮೇಟಿ ಅವರ ನಿಧನದ ಬಳಿಕ ಬಾಗಲಕೋಟೆ ವಿಧಾನಸಭಾ ಕ್ಷೇತ್ರ ತೆರವಾಗಿವೆ. ಈ ಎರಡು ಕ್ಷೇತ್ರಗಳಿಗೆ ಏಪ್ರಿಲ್ ಅಥವಾ ಮೇ ತಿಂಗಳಲ್ಲಿ ಚುನಾವಣೆ ನಡೆಸುವ ಸಾಧ್ಯತೆ ಇದೆ. ಈ ಉಪಚುನಾವಣೆಗೂ ಮಾ.16ರಂದೇ ದಿನಾಂಕವನ್ನು ಪ್ರಕಟಿಸುವ ಸಾಧ್ಯತೆ ಇದೆ.

# ಲೋಕಸಭೆಯಲ್ಲಿ ಎಲ್‌ಪಿಜಿ ಕೊರತೆ ಗದ್ದಲ; ಪ್ರತಿಭಟನೆ ನಡುವೆ ಪೂರಕ ಬೇಡಿಕೆಗಳಿಗೆ ಸದನ ಅಂಗೀಕಾರ


**ನವದೆಹಲಿ, ಮಾ.13:** ದೇಶದ ಹಲವಾರು ಭಾಗಗಳಲ್ಲಿ ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆ ಇದೆ ಎಂಬ ವಿಷಯವನ್ನು ವಿರೋಧ ಪಕ್ಷದ ಸದಸ್ಯರು ಎತ್ತಿದ್ದರಿಂದ ಶುಕ್ರವಾರ ಲೋಕಸಭೆಯಲ್ಲಿ ಪದೇ ಪದೇ ಕಲಾಪಕ್ಕೆ ಅಡ್ಡಿಯಾಯಿತು. ಇದರಿಂದಾಗಿ ಘೋಷಣೆಗಳು ಮತ್ತು ಮುಂದೂಡಿಕೆಗಳು ಸದನವನ್ನು ಸೀಮಿತ ಶಾಸಕಾಂಗ ವ್ಯವಹಾರಗಳನ್ನು ಮಾತ್ರ ಪೂರ್ಣಗೊಳಿಸಲು ಅವಕಾಶ ಮಾಡಿಕೊಟ್ಟವು.



ಮನೆಗಳು ಮತ್ತು ಸಣ್ಣ ವ್ಯವಹಾರಗಳ ಮೇಲೆ ಪರಿಣಾಮ ಬೀರುವ ಬೆಳೆಯುತ್ತಿರುವ ಬಿಕ್ಕಟ್ಟನ್ನು ಪರಿಹರಿಸಲು ಕೇಂದ್ರವು ವಿಫಲವಾಗಿದೆ ಎಂದು ವಿರೋಧ ಪಕ್ಷದ ಸಂಸದರು ಆರೋಪಿಸಿದರು. ಘೋಷಣೆಗಳನ್ನು ಕೂಗುತ್ತಾ ಮತ್ತು ತಕ್ಷಣದ ಚರ್ಚೆಗೆ ಒತ್ತಾಯಿಸುತ್ತಾ, ಕೊರತೆಯು ಅಡುಗೆ ಅನಿಲ ಮರುಪೂರಣಕ್ಕಾಗಿ ದೀರ್ಘ ಸರತಿ ಸಾಲುಗಳು ಮತ್ತು ಗ್ರಾಹಕರಲ್ಲಿ ಅನಿಶ್ಚಿತತೆಗೆ ಕಾರಣವಾಗಿದೆ ಎಂದು ಸದಸ್ಯರು ಹೇಳಿದರು. ಸದನವು ದಿನದ ಅಂತ್ಯದ ವೇಳೆಗೆ ಗದ್ದಲ ಪ್ರಾರಂಭವಾಯಿತು, ನಿರಂತರ ಪ್ರತಿಭಟನೆಗಳ ನಡುವೆ ಸಭಾಪತಿಯು ಎರಡು ಬಾರಿ ಕಲಾಪವನ್ನು ಮುಂದೂಡಬೇಕಾಯಿತು. ಅಡ್ಡಿ ಆತಂಕಗಳ ನಡುವೆಯೂ, ಸದನವು ಲಿಂಗಾಯತ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) ತಿದ್ದುಪಡಿ ಮಸೂದೆ, 2026 ಅನ್ನು ಪರಿಚಯಿಸುವಲ್ಲಿ ಯಶಸ್ವಿಯಾಯಿತು, ಇದು ಲಿಂಗಾಯತ ವ್ಯಕ್ತಿಗಳ ವ್ಯಾಖ್ಯಾನವನ್ನು ವಿಸ್ತರಿಸುವ ಮೂಲಕ ಕಾನೂನನ್ನು ಹೆಚ್ಚು ಒಳಗೊಳ್ಳುವಂತೆ ಮಾಡಲು 2019 ರ ಲಿಂಗಾಯತ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) ಕಾಯ್ದೆಗೆ ತಿದ್ದುಪಡಿ ತರಲು ಪ್ರಯತ್ನಿಸುತ್ತದೆ.

ಗದ್ದಲದ ನಡುವೆಯೇ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಅನುದಾನಕ್ಕಾಗಿ ಪೂರಕ ಬೇಡಿಕೆಗಳಿಗೆ ಸರ್ಕಾರದ ಪ್ರತಿಕ್ರಿಯೆಯನ್ನು ಮಂಡಿಸಿದರು. ನಂತರ ಸದನವು ದಿನದ ಮಟ್ಟಿಗೆ ಮುಂದೂಡಲ್ಪಡುವ ಮೊದಲು ಅನುದಾನಕ್ಕಾಗಿ ಪೂರಕ ಬೇಡಿಕೆಗಳು ಮತ್ತು ಸಂಬಂಧಿತ ವಿನಿಯೋಗ ಮಸೂದೆಯನ್ನು ಅಂಗೀಕರಿಸಿತು.

ಎಲ್‌ಪಿಜಿ ಕೊರತೆಯು ಸಾಮಾನ್ಯ ನಾಗರಿಕರಲ್ಲಿ ವ್ಯಾಪಕ ತೊಂದರೆಯನ್ನುಂಟುಮಾಡುತ್ತಿದೆ ಎಂದು ಆರೋಪಿಸಿ ವಿರೋಧ ಪಕ್ಷದ ಸದಸ್ಯರು ಕಲಾಪದ ಸಮಯದಲ್ಲಿ ತಮ್ಮ ಪ್ರತಿಭಟನೆಗಳನ್ನು ಮುಂದುವರಿಸಿದರು. ಅವರ ಪ್ರಕಾರ, ಹಲವಾರು ಪ್ರದೇಶಗಳಲ್ಲಿ ಸಿಲಿಂಡರ್ ಮರುಪೂರಣದಲ್ಲಿನ ವಿಳಂಬವು ದೇಶೀಯ ಅಡುಗೆಮನೆಗಳ ಮೇಲೆ ಮಾತ್ರವಲ್ಲದೆ ನಿಯಮಿತ ಎಲ್‌ಪಿಜಿ ಸರಬರಾಜುಗಳನ್ನು ಅವಲಂಬಿಸಿರುವ ರೆಸ್ಟೋರೆಂಟ್‌ಗಳು ಮತ್ತು ಸಣ್ಣ ತಿನಿಸುಗಳ ಮೇಲೂ ಪರಿಣಾಮ ಬೀರುತ್ತಿದೆ. ಪೂರೈಕೆ ನಿರ್ಬಂಧಗಳನ್ನು ತ್ವರಿತವಾಗಿ ಪರಿಹರಿಸದಿದ್ದರೆ ಪರಿಸ್ಥಿತಿ ದೊಡ್ಡ ಆಹಾರ ಭದ್ರತಾ ಕಾಳಜಿಯಾಗಿ ಉಲ್ಬಣಗೊಳ್ಳಬಹುದು ಎಂದು ವಿರೋಧ ಪಕ್ಷಗಳ ನಾಯಕರು ಹೇಳಿದರು. ವರದಿಯಾದ ಕೊರತೆಗಳ ಹಿಂದಿನ ಕಾರಣಗಳನ್ನು ವಿವರಿಸಲು ಮತ್ತು ದೇಶಾದ್ಯಂತ ಎಲ್‌ಪಿಜಿ ಲಭ್ಯತೆಯನ್ನು ಸ್ಥಿರಗೊಳಿಸಲು ಕ್ರಮಗಳನ್ನು ರೂಪಿಸಲು ಅವರು ಸರ್ಕಾರವನ್ನು ಒತ್ತಾಯಿಸಿದರು.




ಗುವಾಹಟಿಯಲ್ಲಿ ಶುಕ್ರವಾರ ವಿವಿಧ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ, ಭೂಮಿಪೂಜೆ, ರಾಷ್ಟ್ರಕ್ಕೆ ಸಮರ್ಪಣೆ ಮತ್ತು ಉದ್ಘಾಟನೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ.

# ಕಡ್ಡಾಯ ಮುಟ್ಟಿನ ರಜೆ ಕುರಿತ ಅರ್ಜಿಗೆ ಸುಪ್ರೀಂ ತಿರಸ್ಕಾರ

**ಮಹಿಳೆಯರನ್ನು ಯಾರೂ ಕೆಲಸಕ್ಕೆ ನೇಮಿಸಿಕೊಳ್ಳುವುದಿಲ್ಲ**

**ನವದೆಹಲಿ,ಮಾ.13:** ಮಹಿಳೆಯರಿಗೆ ಕಡ್ಡಾಯ ಮುಟ್ಟಿನ ರಜೆ ಅವರ ಉದ್ಯೋಗದ ಮೇಲೆ ಪ್ರತಿಕೂಲ ಪರಿಣಾಮ ಬೀರಬಹುದು ಏಕೆಂದರೆ ನಾವು ಅಂತಹ ಕಾನೂನನ್ನು ಜಾರಿಗೆ ತಂದರೆ ಉದ್ಯೋಗದಾತರು ಮಹಿಳೆಯರನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹೇಳಿದ್ದಾರೆ.



ಮುಟ್ಟಿನ ರಜೆ ನಿಯಮಗಳನ್ನು ರಾಜ್ಯ ಸರ್ಕಾರಗಳು ರೂಪಿಸಲು ನಿರ್ದೇಶನ ಕೋರಿ ವಕೀಲ ಶೈಲೇಂದ್ರ ಮಣಿ ತ್ರಿಪಾಠಿ ಸಲ್ಲಿಸಿದ ಅರ್ಜಿಯನ್ನು ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿಗಳು, ಇಂತಹ ಕಾನೂನು ದುಡಿಯುವ ಮಹಿಳೆಯರಲ್ಲಿ ಮಾನಸಿಕ ಭಯ ಅಥವಾ ಕೀಳರಿಮೆ ಉಂಟುಮಾಡುತ್ತದೆ. ಅವರು ಪುರುಷರಿಗಿಂತ ಕಡಿಮೆ ಎಂಬ ಭಾವನೆಯನ್ನು ಉಂಟುಮಾಡುತ್ತದೆ ಎಂದು ಅಭಿಪ್ರಾಯಪಟ್ಟರು.

ಈ ಬಗ್ಗೆ ಜಾಗೃತಿ ಮತ್ತು ಸಂವೇದನೆ ಮೂಡಿಸುವುದು ಬೇರೆ. ಆದರೆ, ಮುಟ್ಟಿನ ರಜೆಯನ್ನು ಕಡ್ಡಾಯಗೊಳಿಸುವ ಕಾನೂನನ್ನು ಜಾರಿಗೆ ತಂದ ತಕ್ಷಣ, ಯಾರೂ ಅವರನ್ನು ನೇಮಿಸಿಕೊಳ್ಳುವುದಿಲ್ಲ, ನಿಮಗೆ ಉದ್ಯೋಗದಾತರ ಮನಸ್ಥಿತಿ ತಿಳಿದಿಲ್ಲ. ನಾವು ಅಂತಹ ಕಾನೂನನ್ನು ಜಾರಿಗೊಳಿಸಿದರೆ ಮಹಿಳೆಯರನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದಿಲ್ಲ ಎಂದು ಅವರು ಅರ್ಜಿದಾರರಿಗೆ ಎಚ್ಚರಿಸಿದರು.

ನಿರ್ದಿಷ್ಟವಾಗಿ ಹೇಳುವುದಾದರೆ, ವಿದ್ಯಾರ್ಥಿನಿಯರಾಗಿರಲಿ ಅಥವಾ ಕೆಲಸ ಮಾಡುವ ವೃತ್ತಿಪರರಾಗಿರಲಿ, ಮುಟ್ಟಿನ ಸಮಯದಲ್ಲಿ ರಜೆ ನೀಡುವುದನ್ನು ಖಚಿತಪಡಿಸಬೇಕು ಎಂದು ಅರ್ಜಿದಾರರು ಬಯಸಿದ್ದರು. ಆದರೆ, ಅಂತಹ ಮನವಿಗಳು ಭಯವನ್ನು ಸೃಷ್ಟಿಸಲು ಮಾಡಲಾಗಿದೆ ಎಂದು ಮುಖ್ಯ ನ್ಯಾಯಮೂರ್ತಿ ಘೋಷಿಸಿದರು.

ಉದ್ಯೋಗದಾತರು ಮಹಿಳೆಯರನ್ನು ಕೀಳಾಗಿ ನೋಡುತ್ತಾರೆ, ಮುಟ್ಟು ಅವರಿಗೆ ಕೆಟ್ಟ ಸಂಗತಿಯಾಗಿದೆ ಎಂದು ಎಂದು ಹೇಳಿದರು. ಈ ವೇಳೆ ಕೇರಳ ಸರ್ಕಾರದ ನಿರ್ಧಾರವನ್ನು ನೆನಪಿಸಿದ ಹಿರಿಯ ವಕೀಲ ಎಂ.ಆರ್. ಶಂಶಾದ್, 2013 ರಲ್ಲಿ ಕೇರಳ ಸರ್ಕಾರವು ಎಲ್ಲಾ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಮಹಿಳಾ ವಿದ್ಯಾರ್ಥಿಗಳಿಗೆ ಮುಟ್ಟಿನರಜೆಯನ್ನು ಮಂಜೂರು ಮಾಡಿತ್ತು ಎಂಬುದನ್ನು ನೆನಪಿಸಿದರು. ಆಗ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಈ ನಿರ್ಧಾರವು ಲಿಂಗ ನ್ಯಾಯಯುತ ಸಮಾಜವನ್ನು ಸಾಕಾರಗೊಳಿಸುವ ಬದ್ಧತೆಯ ಭಾಗವಾಗಿದೆ ಎಂದು ಹೇಳಿದ್ದರು ಎಂದರು. ಖಾಸಗಿ ಕಂಪನಿಗಳು ಇದೇ ರೀತಿಯ ಸಡಿಲಿಕೆಗಳನ್ನು ನೀಡಿವೆ ಎಂದು ಶಂಶಾದ್ ಗಮನಸೆಳೆದರು.

ಆದರೆ, ಇವು ಸ್ವಯಂಪ್ರೇರಿತ ಕ್ರಮಗಳು ಎಂದು ಮುಖ್ಯ ನ್ಯಾಯಾಧೀಶರು ಹೇಳಿದರು. ನೀವು ಕಾನೂನಿನಲ್ಲಿ ಕಡ್ಡಾಯ ಎಂದು ಹೇಳಿದ ತಕ್ಷಣ, ಯಾರೂ ಅವರಿಗೆ ಉದ್ಯೋಗ ನೀಡುವುದಿಲ್ಲ, ಯಾರೂ ಅವರನ್ನು ನ್ಯಾಯಾಂಗ ಅಥವಾ ಸರ್ಕಾರಿ ಉದ್ಯೋಗಗಳಲ್ಲಿ ತೆಗೆದುಕೊಳ್ಳುವುದಿಲ್ಲ. ವೃತ್ತಿಜೀವನ ಮುಗಿದಿದೆ, ನೀವು ಮನೆಯಲ್ಲಿಯೇ ಕುಳಿತುಕೊಳ್ಳಿ ಎಂದು ಅವರು ಹೇಳುತ್ತಾರೆ ಎಂದರು.

ಜನವರಿಯಲ್ಲಿ ಸುಪ್ರೀಂ ಕೋರ್ಟ್ ಮುಟ್ಟಿನ ನೈರ್ಮಲ್ಯದ ಬಗ್ಗೆ ನಿರ್ಣಾಯಕ ತೀರ್ಪು ನೀಡಿತು. ಅದು ಹೆಣ್ಣು ಮಗುವಿನ ಜೀವನ, ಘನತೆ, ಆರೋಗ್ಯ ಮತ್ತು ಶಿಕ್ಷಣದ ಹಕ್ಕಿನ ಅವಿಭಾಜ್ಯ ಅಂಗ ಎಂದು ಹೇಳಿತ್ತು.

ಸಂವಿಧಾನದ 21ನೇ ವಿಧಿಯಡಿಯಲ್ಲಿ ಹುಡುಗಿಯರು ಮತ್ತು ಮಹಿಳೆಯರ ಆರೋಗ್ಯದ ಹಕ್ಕನ್ನು ರಕ್ಷಿಸಲು ಸರ್ಕಾರಗಳು ಸಕಾರಾತ್ಮಕ ಬಾಧ್ಯತೆಯನ್ನು ಹೊಂದಿವೆ ಎಂದು ನ್ಯಾಯಮೂರ್ತಿ ಜೆ.ಬಿ. ಪಾರ್ದಿವಾಲಾ ಮತ್ತು ನ್ಯಾಯಮೂರ್ತಿ ಆರ್. ಮಹಾದೇವನ್ ಅವರ ಪೀಠ ಹೇಳಿದ್ದಲ್ಲದೆ. ಉಚಿತ ಸ್ಯಾನಿಟರಿ ನ್ಯಾಪ್ಕಿನ್, ಕ್ರಿಯಾತ್ಮಕ ಲಿಂಗ–ಪ್ರತ್ಯೇಕ ಶೌಚಾಲಯಗಳು ಮತ್ತು ಮುಟ್ಟಿನ ಆರೋಗ್ಯ ಜಾಗೃತಿ ಅಭಿಯಾನಗಳನ್ನು ಖಚಿತಪಡಿಸಿಕೊಳ್ಳಲು ನ್ಯಾಯಾಲಯವು ಎಲ್ಲಾ ಸರ್ಕಾರಗಳಿಗೆ ಕಡ್ಡಾಯ ನಿರ್ದೇಶನಗಳನ್ನು ನೀಡಿತ್ತು.

# ದೇಶದ ವಿದ್ಯುತ್ ಉತ್ಪಾದನಾ ಸಾಮರ್ಥ್ಯದಲ್ಲಿ ನವೀಕರಿಸಬಹುದಾದ ಇಂಧನದ್ದೇ ಅಗ್ರ ಪಾಲು: ಜೋಶಿ

**ನವದೆಹಲಿ,ಮಾ.13:** ಭಾರತದ ಸ್ಥಾಪಿತ ವಿದ್ಯುತ್ ಸಾಮರ್ಥ್ಯದಲ್ಲಿ ಪ್ರಸ್ತುತ ಪಳೆಯುಳಿಕೆಗಿಂತ ಪಳೆಯುಳಿಕೆಯೇತರ, ನವೀಕರಿಸಬಹುದಾದ ಇಂಧನ ಪಾಲೇ ಹೆಚ್ಚಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.



ದೇಶದ ಒಟ್ಟು ವಿದ್ಯುತ್ ಉತ್ಪಾದನೆಯಲ್ಲಿ ಪಳೆಯುಳಿಕೆಯೇತರ ಇಂಧನ ಶೇ.52.3ರಷ್ಟಿದ್ದರೆ, ನವೀಕರಿಸಬಹುದಾದ ಇಂಧನ ಶೇ.50.6ರಷ್ಟಿದೆ. ಪಳೆಯುಳಿಕೆ ಇಂದಿನ ಮೂಲದಿಂದ ಶೇ.47.7ರಷ್ಟು ವಿದ್ಯುತ್ ಉತ್ಪಾದನಾ ಸಾಮರ್ಥ್ಯ ಕಂಡುಬಂದಿದೆ. 2026ರ ಜನವರಿ ಅಂತ್ಯದವರೆಗೆ ಭಾರತ 52,536.49 ಮೆಗಾವ್ಯಾಟ್ ಸ್ಥಾಪಿತ ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು ಸೇರಿಸಿದೆ ಎಂದು ಮಾಹಿತಿ ನೀಡಿದ್ದಾರೆ.

ಜನವರಿ 31ಕ್ಕೆ ಒಟ್ಟು ಸ್ಥಾಪಿತ ವಿದ್ಯುತ್ ಉತ್ಪಾದನಾ ಸಾಮರ್ಥ್ಯ 5,20,511 ಮೆಗಾವ್ಯಾಟ್ ಆಗಿದ್ದು, ಇದರಲ್ಲಿ 2,48,542 ಮೆಗಾವ್ಯಾಟ್ ಪಳೆಯುಳಿಕೆ–ಇಂಧನ ಮೂಲ ಮತ್ತು 2,71,969 ಮೆಗಾವ್ಯಾಟ್ ಪಳೆಯುಳಿಕೆಯೇತರ ಇಂಧನ ಮೂಲದ ವಿದ್ಯುತ್ ಉತ್ಪಾದನೆ ಆಗಿದೆ. ಒಟ್ಟು ಸ್ಥಾಪಿತ ಸಾಮರ್ಥ್ಯದಲ್ಲಿ 'ನವೀಕರಿಸಬಹುದಾದ ಇಂಧನ' ಮೂಲಗಳ ಪಾಲು 2,63,189 ಮೆಗಾವ್ಯಾಟ್ ಆಗಿದೆ ಎಂದಿದ್ದಾರೆ.

2025–26ರ ಆರ್ಥಿಕ ವರ್ಷದಲ್ಲಿ ಅಖಿಲ ಭಾರತ ಒಟ್ಟು ಸ್ಥಾಪಿತ ವಿದ್ಯುತ್ ಉತ್ಪಾದನಾ ಸಾಮರ್ಥ್ಯ ಸೇರ್ಪಡೆ 52,536.49 ಮೆ.ವ್ಯಾ. ಆಗಿದ್ದು, ನವೀಕರಿಸಬಹುದಾದ ಇಂಧನದ್ದೇ 43,026.49 ಮೆ.ವ್ಯಾ ಅಗ್ರ ಪಾಲಿದೆ. ಇನ್ನು ಮೀ, ಉಷ್ಣಶಕ್ತಿಯಲ್ಲಿ ಕಲ್ಲಿದ್ದಲು ಒಂದರಿಂದಲೇ 8,810 ಮೆ.ವ್ಯಾ. ವಿದ್ಯುತ್ ಉತ್ಪಾದನೆ ಆಗಿದೆ. ಅನಿಲದಿಂದ ಶೂನ್ಯವಾಗಿದೆ. ಹೈಡ್ರೋದಲ್ಲಿ 3,370 ಮೆ.ವ್ಯಾ, ಗಾಳಿಯಿಂದ 4,612.58 ಮೆ.ವ್ಯಾ, ಸೌರಶಕ್ತಿಯಿಂದ ಬರೋಬ್ಬರಿ 34,955.24 ಮೆ.ವ್ಯಾ, ಜೈವಿಕ ಶಕ್ತಿ–30.61,

ಸಣ್ಣ ಹೈಡ್ರೋದಿಂದ 58.06 ಮೆ.ವ್ಯಾ ಹಾಗೂ 700 ಮೆ.ವ್ಯಾ ಪರಮಾಣು ವಿದ್ಯುತ್ ಸಾಮರ್ಥ್ಯ ಸೇರ್ಪಡೆಯಾಗಿದೆ ಎಂದು ವಿವರಿಸಿದ್ದಾರೆ.

ಪಳೆಯುಳಿಕೆ ಇಂಧನದಲ್ಲಿ ಕಲ್ಲಿದ್ದಲು–2,21,210 ಮೆಗಾವ್ಯಾಟ್, (ಶೇ.42.5), ಲಿಗ್ನೈಟ್ –6,620

(ಶೇ.1.3), ಅನಿಲ–20,122 (ಶೇ.3.9), ಡೀಸೆಲ್– 589 (ಶೇ.0.1 ) ಒಟ್ಟು ಪಳೆಯುಳಿಕೆ ಇಂಧನದಿಂದ 2,48,542

(ಶೇ.47.7) ಹಾಗೂ ಪಳೆಯುಳಿಕೆಯಲ್ಲದ ಇಂಧನ RES (ಹೈಡ್ರೋ ಸೇರಿದಂತೆ)– 2,63,189 ಮೆಗಾವ್ಯಾಟ್ ಶೇ.50.6 ರಷ್ಟಿದೆ. ಹೈಡ್ರೋ – 51,165 (ಶೇ.9.8), ಪವನ, ಸೌರ ಮತ್ತು ಇತರ ನವೀಕರಿಸಬಹುದಾದ ವಿದ್ಯುತ್ – 2,12,025 ಮೆಗಾವ್ಯಾಟ್ ಶೇ.40.7ರಷ್ಟಿದೆ ಎಂದು ತಿಳಿಸಿದ್ದಾರೆ.

ಗಾಳಿಯಿಂದ 54,650 ಮೆಗಾವ್ಯಾಟ್ (ಶೇ.10.5), ಸೌರಶಕ್ತಿ –1,40,602 ಮೆಗಾವ್ಯಾಟ್ (27.0), ಬಿಎಂ ಪವರ್ ಕೋಜೆನ್. – 10,757 (ಶೇ.2.1), ತ್ಯಾಜ್ಯದಿಂದ ಶಕ್ತಿಗೆ– 857 (0.2), ಸಣ್ಣ ಜಲವಿದ್ಯುತ್ ಸ್ಥಾವರ – 5,159 (ಶೇ.1.0) ಹಾಗೂ ಪರಮಾಣು–8,780 (ಶೇ.1.7) ವಿದ್ಯುತ್ ಉತ್ಪಾದನೆ ಸೇರ್ಪಡೆ ಸಾಧ್ಯವಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

# ಅನಿಲ್ ಅಂಬಾನಿ ಪುತ್ರ 6.5 ಗಂಟೆಗಳ ಕಾಲ ಸಿಬಿಐ ವಿಚಾರಣೆ


**ನವದೆಹಲಿ, ಮಾ.13:** ರಿಲಯನ್ಸ್ ಹೋಮ್ ಫೈನಾನ್ಸ್ ಲಿಮಿಟೆಡ್ ಮತ್ತು ಇತರರ ವಿರುದ್ಧ ದಾಖಲಾಗಿರುವ 228 ಕೋಟಿ ರೂಪಾಯಿ ಬ್ಯಾಂಕ್ ಸಾಲ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ತನಿಖಾ ದಳ (ಸಿಬಿಐ) ಶುಕ್ರವಾರ ಅನಿಲ್ ಅಂಬಾನಿ ಅವರ ಪುತ್ರ ಜೈ ಅನ್ಮೋಲ್ ಅಂಬಾನಿ ಅವರ ಹೇಳಿಕೆಯನ್ನು ದಾಖಲಿಸಿದೆ. ಈ ಪ್ರಕರಣವನ್ನು ಡಿಸೆಂಬರ್ 6, 2025 ರಂದು ದಾಖಲಿಸಲಾಗಿತ್ತು.



ಜೈ ಅನ್ಮೋಲ್ ಅಂಬಾನಿ, ರವೀಂದ್ರ ಸುಧಾಲ್ಕರ್, ಜೊತೆಗೆ ಅಪರಿಚಿತ ವ್ಯಕ್ತಿಗಳು ಮತ್ತು ಅಪರಿಚಿತ ಸಾರ್ವಜನಿಕ ಸೇವಕರನ್ನು ಈ ಪ್ರಕರಣದಲ್ಲಿ ಆರೋಪಿಗಳೆಂದು ಹೆಸರಿಸಲಾಗಿದೆ. ಶುಕ್ರವಾರ ದೆಹಲಿಯ ಸಿಬಿಐ ಪ್ರಧಾನ ಕಚೇರಿಯಲ್ಲಿ ತನಿಖೆಗೆ ಹಾಜರಾಗುವಂತೆ ಸಿಬಿಐ ಜೈ ಅನ್ಮೋಲ್ ಅಂಬಾನಿ ಅವರಿಗೆ ಸಮನ್ಸ್ ಜಾರಿ ಮಾಡಿತ್ತು ಮತ್ತು ಸುಮಾರು 6.5 ಗಂಟೆಗಳ ಕಾಲ ವಿಚಾರಣೆ ನಡೆಸಲಾಯಿತು.

# ರೋವಿನಾ ಶರೊನ್ ಸೋನ್ಸ್‌ಗೆ ಡಾಕ್ಟರ್ ಆಫ್ ಫಿಲಾಸಫಿ ಪದವಿ

**ಮಂಗಳೂರು, ಮಾ.13:** ಡಾ.ರೋವಿನಾ ಶರೊನ್ ಸೋನ್ಸ್ ಅವರಿಗೆ ಮಂಗಳೂರು ವಿಶ್ವವಿದ್ಯಾಲಯವು ಕರ್ನಾಟಕದ ಕರಾವಳಿ ಜಿಲ್ಲೆಗಳಲ್ಲಿನ ಆಯ್ದ (ಮಾಹಿತಿ ತಂತ್ರಜ್ಞಾನ ಆಧಾರಿತ ಸೇವೆಗಳು) ಐಟಿಇಎಸ್ ಕಂಪನಿಗಳಲ್ಲಿ ಆರೋಗ್ಯ ಮತ್ತು ಕ್ಷೇಮ ಕಾರ್ಯಕ್ರಮಗಳ ಉದ್ಯೋಗಿಗಳ ಉತ್ಪಾದಕತೆಯ ಮೇಲೆ ಇರುವ ಪರಿಣಾಮ: ಒಂದು ಅಧ್ಯಯನ (Impact of Health and Wellness Programs on Employee Productivity in Select ITES Companies: A Study in the Coastal Districts of Karnataka) ವಿಷಯದ ಮೇಲೆ ಸಲ್ಲಿಸಿದ ಮಹಾಪ್ರಬಂಧಕ್ಕೆ ಡಾಕ್ಟರ್ ಆಫ್ ಫಿಲಾಸಫಿ (ಪಿಎಚ್‌ಡಿ) ಪದವಿಯನ್ನು ಪ್ರದಾನಿಸಿದೆ.



ಇತ್ತೀಚೆಗೆ ನಡೆದ ವೈವಾ ವೋಸ್ ಪರೀಕ್ಷೆಯಲ್ಲಿ ಅವರು ತಮ್ಮ ಮಹಾಪ್ರಬಂಧವನ್ನು ಯಶಸ್ವಿಯಾಗಿ ಸಮರ್ಥಿಸಿಕೊಂಡರು. ಈ ಸಂಶೋಧನಾ ಕಾರ್ಯವನ್ನು ಡಾ.ಶೇಖರ್ ನಾಯ್ಕ್ ಅವರ ಮಾರ್ಗದರ್ಶನದಲ್ಲಿ ನಡೆಸಲಾಗಿತ್ತು.

ಡಾ.ರೋವಿನಾ ಸೋನ್ಸ್ ಅವರು ಪ್ರಸ್ತುತ ಯೆನೆಪೊಯಾ ಇನ್‌ಸ್ಟಿಟ್ಯೂಟ್ ಆಫ್ ಆರ್ಟ್ಸ್, ಸಯನ್ಸ್, ಕಾಮರ್ಸ್ ಆಂಡ್ ಮ್ಯಾನೇಜ್‌ಮೆಂಟ್ ಸಂಸ್ಥೆಯಲ್ಲಿ ಸಹಾಯಕ ಪ್ರಾಧ್ಯಾಪಕಿ ಆಗಿ ಸೇವೆ ಸಲ್ಲಿಸುತ್ತಿದ್ದಾರೆ. ರೋನಿ ಸೋನ್ಸ್ ಮತ್ತು ರೋಝಿನಾ ಸೋನ್ಸ್ ಅವರ ಸುಪುತ್ರಿ ಆಗಿದ್ದಾರೆ.

# ಶಶಿ ತರೂರ್ – ಮಣಿಶಂಕರ್ ಅಯ್ಯರ್ ಪತ್ರ ಸಂಘರ್ಷ

**ನವದೆಹಲಿ, ಮಾ.13:** ಬಹಿರಂಗ ಪತ್ರಗಳಲ್ಲಿ ಮೂಲಕ ಕಾದಾಟಕ್ಕಿಳಿದ ಶಶಿತರೂರ್ ಮತ್ತು ಮಣಿಶಂಕರ್ ಅಯ್ಯರ್ ಅವರು, ವಿದೇಶಾಂಗ ನೀತಿ, ಸೈದ್ಧಾಂತಿಕ ಅಭಿಪ್ರಾಯ ಹಾಗೂ ವೈಯಕ್ತಿಕ ಹೇಳಿಕೆಗಳ ಕುರಿತು ಒಬ್ಬರಿಗೊಬ್ಬರು ಸಾರ್ವಜನಿಕವಾಗಿ ಬಿರುಸಿನ ಮಾತುಗಳನ್ನಾಡಿದ್ದಾರೆ.

ತರೂರ್‌ಗೆ ಅಯ್ಯರ್ ಬರೆದ ಪತ್ರ ನಿಯತಕಾಲಿಕೆಯೊಂದರಲ್ಲಿ ಪ್ರಕಟವಾದ ಬಳಿಕ ಈ ವಾದ–ವಿವಾದ ಮುನ್ನೆಲೆಗೆ ಬಂದಿದೆ. ಇತ್ತೀಚೆಗೆ ಖಾಸಗಿ ವಾಹಿನಿಯಲ್ಲಿ ನಡೆದ ಮಧ್ಯಪ್ರಾಚ್ಯ ಯುದ್ಧಗಳ ಕುರಿತಾದ ಚರ್ಚೆಯಲ್ಲಿ ಪಾಲ್ಗೊಂಡಿದ್ದ ಶಶಿ ತರೂರ್ ನೀಡಿರುವ ಹೇಳಿಕೆಗಳು ನಾನು ತಡರಾತ್ರಿ ನಿದ್ರೆಯಿಂದ ಎಚ್ಚರಗೊಂಡು ಈ ಸಂದೇಶ ಬರೆಯುವಂತೆ ಮಾಡಿವೆ ಎಂದು ಅಯ್ಯರ್ ಹೇಳಿದ್ದಾರೆ.

**ತರೂರ್ ಹೇಳಿಕೆಗಳಿಂದ ತೀವ್ರ ಆಘಾತಕ್ಕೆ ಒಳಗಾಗಿದ್ದೇನೆ:** ಕಾಂಗ್ರೆಸ್ ಅಧ್ಯಕ್ಷೀಯ ಚುನಾವಣೆಯಲ್ಲಿ ಶಶಿ ತರೂರ್ ಸೋತ ಮೇಲೂ ಅವರಿಗೆ ಯಾವುದಾದರು ಗೌರವಾನ್ವಿತ ಸ್ಥಾನ ಕೊಡುವಂತೆ ಖರ್ಗೆಯೊಂದಿಗೆ ಸಾರ್ವಜನಿಕವಾಗಿ ವಾದಿಸಿದ್ದೆ. ಆ ಕುರಿತು ಈಗ ನನಗೆ ವಿಷಾದವಿದೆ ಎಂದು ಅಯ್ಯರ್ ಹೇಳಿದ್ದಾರೆ. ಮುಂದುವರೆದು, ವಿದೇಶಾಂಗ ವ್ಯವಹಾರಗಳ ಕುರಿತ ಸಂಸತ್ತಿನ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ತರೂರ್ ಅಮೆರಿಕದ ಬಲಾಢ್ಯತೆಯನ್ನು ಸಮರ್ಥಿಕೊಂಡದ್ದನ್ನು, ಸಾಮ್ರಾಜ್ಯಶಾಹಿ ಅಮೆರಿಕದ ಎದುರು ಚೀನಾ ಮತ್ತು ರಷ್ಯಾ ತೋರಿದ ಗಟ್ಟಿತನ ಹಾಗೂ ಭಾರತ ತನ್ನ ನಿಲುವನ್ನು ನಿರ್ಭೀತವಾಗಿ ಹೇಳಲಾಗದ ಸ್ಥಿತಿಗೆ ತಲುಪುವಿರುವುದನ್ನು ಕಿಂಚಿತ್ತೂ ವಿರೋಧಿಸದ ತರೂರ್ ಅವರ ನಡೆಯನ್ನು ಕಟುವಾಗಿ ಟೀಕಿಸಿದ್ದಾರೆ.

ಶಬರಿಮಲೆ ದೇವಸ್ಥಾನಕ್ಕೆ ಋತುಸ್ರಾವದಲ್ಲಿರುವ ಮಹಿಳೆಯರ ಪ್ರವೇಶವನ್ನು ಸುಪ್ರೀಂ ಕೋರ್ಟ್ ತೀರ್ಪು ಎತ್ತಿಹಿಡಿದಾಗ ತರೂರ್ ಸುಪ್ರೀಂ ತೀರ್ಪಿನ ಕುರಿತು ಅಸಮಾಧಾನ ವ್ಯಕ್ತಪಡಿಸಿದ್ದರು. ಆ ಸಂದರ್ಭದಲ್ಲೇ ಶಶಿ ತರೂರ್ ಸೈದ್ಧಾಂತಿಕ ನಿಲುವುಗಳ ಕುರಿತು ತಮಗೆ ಅನುಮಾನ ಮೂಡಿತ್ತು. ಈ ಭಿನ್ನಾಭಿಪ್ರಾಯಗಳು ನಮ್ಮ ದಾರಿಗಳನ್ನು ಬೇರ್ಪಡಿಸುವ ಹಂತಕ್ಕೆ ತಂದಿವೆ ಎಂದರು. ಇದಕ್ಕೆ ಬಹಿರಂಗ ಪತ್ರದ ಮೂಲಕವೇ ಪ್ರತಿಕ್ರಿಯಿಸಿರುವ ತರೂರ್, ರಾಜಕೀಯದಲ್ಲಿ ಭಿನ್ನಾಭಿಪ್ರಾಯ ಸಹಜ. ಅಯ್ಯರ್ ಅವರು ನನ್ನ ವ್ಯಕ್ತಿತ್ವ



- ಮಧ್ಯಪ್ರಾಚ್ಯದ ಪರಿಸ್ಥಿತಿ ಬಗ್ಗೆ ತರೂರ್ ನಿಲುವಿಗೆ ಅಯ್ಯರ್ ಟೀಕೆ
- ದೇಶದ ಆರ್ಥಿಕ ಪರಿಣಾಮಗಳನ್ನು ಸರಿದೂಗಿಸುವಾಗ ನೈತಿಕತೆಯ ರಾಜಿ ಬಗ್ಗೆ ಚಿಂತಿಸುವುದು ಸರಿಯಲ್ಲ ಎಂದು ತರೂರ್ ತಿರುಗೇಟು

ಹಾಗೂ ಉದ್ದೇಶಗಳನ್ನು ಪ್ರಶ್ನೆ ಮಾಡಿರುವುದು ಸರಿಯಲ್ಲವೆಂದು ಟೀಕಿಸಿದರು. ಅಂತಾರಾಷ್ಟ್ರೀಯ ವ್ಯವಹಾರಗಳ ಬಗ್ಗೆ ತಮ್ಮ ಅಭಿಪ್ರಾಯಗಳು ಸ್ಪಷ್ಟ ರಾಷ್ಟ್ರೀಯವಾದಿ ದೃಷ್ಟಿಕೋನದಿಂದ ಹುಟ್ಟಿಕೊಂಡಿದೆ ಎಂದು ತರೂರ್ ಹೇಳಿದರು. ಜಾಗತಿಕ ರಾಜಕೀಯ ಹಾಗೂ ಇದರಿಂದ ಭಾರತಕ್ಕೆ ಉಂಟಾಗುವ ಆರ್ಥಿಕ ಪರಿಣಾಮಗಳನ್ನು ಸರಿದೂಗಿಸುವಾಗ ನೈತಿಕತೆಯ ರಾಜಿಯ ಕುರಿತಾಗಿ ಯೋಚಿಸುವುದು ಸಲ್ಲ ಎಂದಿದ್ದಾರೆ.

ಯಾವುದೇ ಪೀಳಿಗೆಯು ದೇಶಭಕ್ತಿಯ ಮೇಲೆ ಅಥವಾ ಗಾಂಧಿ ಅಥವಾ ನೆಹರು ಅವರ ವ್ಯಾಖ್ಯಾನದ ಮೇಲೆ ಏಕಸ್ವಾಮ್ಯ ಹೊಂದಿಲ್ಲ. ಅವರ ಪರಂಪರೆಗೆ ನಿಜವಾದ ಗೌರವ ಸಲ್ಲಿಸುವುದೇ ಆದರೆ ಅವರ ಮೌಲ್ಯಗಳನ್ನು ನಮ್ಮ ಕಾಲದ ವಾಸ್ತವಗಳಿಗೆ ಬುದ್ಧಿವಂತಿಕೆಯಿಂದ ಅನ್ವಯಿಸಿಕೊಳ್ಳುವುದರಲ್ಲಿದೆ ಎಂದು ತರೂರ್ ಬರೆದಿದ್ದಾರೆ. ಶಬರಿಮಲೆಯ ವಿಷಯದ ಕುರಿತಾದ ಟೀಕೆಗೆ ಪ್ರತಿಕ್ರಿಯಿಸಿದ ತರೂರ್ ಈ ಹಿಂದೆ ಕಾಂಗ್ರೆಸ್ ಪಕ್ಷದ ಅಧಿಕೃತ ನಿಲುವನ್ನು ಬೆಂಬಲಿಸಿದ್ದೇನೆ ಹಾಗೂ ತಮ್ಮ ನಿಲುವನ್ನು ವಿವರವಾಗಿ ಸ್ಪಷ್ಟ ಪಡಿಸಿದ್ದೇನೆ ಎಂದಿದ್ದಾರೆ. ಕಾಂಗ್ರೆಸ್ ಅಧ್ಯಕ್ಷೀಯ ಚುನಾವಣೆಯಲ್ಲಿ ಅಯ್ಯರ್ ಬೆಂಬಲವನ್ನು ಒಪ್ಪಿಕೊಂಡ ಅವರು, ಈ ಹಿಂದೆ ಹಲವು ಬಾರಿ ತಾನೂ ಅಯ್ಯರ್ ಅವರನ್ನು ಸಮರ್ಥಿಸಿಕೊಂಡಿದ್ದೇನೆ ಎಂದರು.

ಈ ಹಿಂದೆಯು ಅಯ್ಯರ್ – ತರೂರ್ ನಡುವೆ ಹುಟ್ಟಿಕೊಂಡ ಸಾಕಷ್ಟು ಭಿನ್ನಾಭಿಪ್ರಾಯಗಳು ಚರ್ಚೆಗೆ ಗ್ರಾಸವಾಗಿದ್ದು ಒಬ್ಬರು ಇನ್ನೊಬ್ಬರ ರಾಜಕೀಯ ನಿಲುವುಗಳನ್ನು ಕಟುವಾಗಿ ಟೀಕಿಸಿದ್ದರು ಹಿಂದೊಮ್ಮೆ ಅಯ್ಯರ್ ತರೂರರನ್ನು ತತ್ವರಹಿತ ವೃತ್ತಿಜೀವನಕಾರ ಎಂದು ಕರೆದಿದ್ದರೆ, ಅಯ್ಯರ್ ಓರ್ವ ರಾಹುಲೀಯನ್ ಎಂದು ತರೂರ್ ಹಂಗಿಸಿದ್ದರು.

# ದ.ಕ.ಜಿಲ್ಲೆಯ ಕಲ್ಕೂರರ ಮನೆಯಲ್ಲಿ ಮತ್ತೆ ಒಲೆಯೂಟಕ್ಕೆ ಸಿದ್ಧತೆ

**ಮುಂಬಯಿ, ಮಾ.13:** ಆಧುನಿಕ ಜೀವನ ಶೈಲಿಯಲ್ಲಿ ಗ್ಯಾಸ್ ಒಲೆ, ಸೌರ ಒಲೆ ಹಾಗೂ ವಿದ್ಯುತ್ ಒಲೆಗೆ ಒಗ್ಗಿಕೊಂಡಿರುವ ಇಂದಿನ ದಿನಮಾನದಲ್ಲಿ ಹಳೆ ತಲೆಮಾರಿನ ಸೌದೆ ಒಲೆಯನ್ನು ಮತ್ತೊಮ್ಮೆ ಬಳಸುವ ಮೂಲಕ ಅಡುಗೆ ಮಾಡುವ ಸಿದ್ಧತೆಯಲ್ಲಿದ್ದಾರೆ... ದ.ಕ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಎಸ್.ಪ್ರದೀಪ ಕುಮಾರ ಕಲ್ಕೂರ..!



ಪ್ರಸ್ತುತ ದಿನಗಳಲ್ಲಿ ಮಧ್ಯಪ್ರಾಚ್ಯ ದೇಶಗಳಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮ ಗ್ಯಾಸ್ ಇಂಧನ ಪೂರೈಕೆಯಲ್ಲಿ ವ್ಯತ್ಯಯವಾಗುತ್ತಿದ್ದು, "ಬೆಂಕಿ ಬೀಳುವ ಮೊದಲೇ ಬಾವಿ ತೋಡುವುದು ಒಳಿತು" ಎನ್ನುವ ಗಾದೆಯ ಮಾತಿನಂತೆ, ಸಾಧ್ಯತೆ ಹೊಂದಿರುವವರು ತಮ್ಮ ಪರಿಸರದಲ್ಲಿ ಲಭಿಸುವ ಉರುವಲನ್ನು ಬಳಸಿಕೊಂಡು ಒಲೆಯಲ್ಲೇ ಅಡುಗೆಯನ್ನು ತಯಾರಿಸುವುದು ಹೆಚ್ಚು ಸೂಕ್ತ ಎಂಬುದು ಕಲ್ಕೂರ ಅವರ ಅಭಿಮತವಾಗಿದೆ.

ಈಗಾಗಲೇ ಕೊರೋನ ಹಾವಳಿಯ ಬಳಿಕ ತನ್ನ ಮನೆ ತೋಟದಲ್ಲೇ ಬೆಳೆದ ಬಾಳೆ ಎಲೆಯಲ್ಲಿ ಉಣ್ಣುತ್ತಿರುವ ಕಲ್ಕೂರರು ಇಂದಿನ ವರೆಗೂ ಈ ಪದ್ಧತಿಯನ್ನು ಮುಂದುವರಿಸಿಕೊಂಡು ಬಂದಿದ್ದಾರೆ, ಕಲ್ಕೂರ ಅವರು ಇದೀಗ ತಮ್ಮ ಮನೆಯಲ್ಲಿ ಕೋಡು ಒಲೆ ಸಹಿತವಾದ ಹೊಸ ಮಣ್ಣಿನ ಒಲೆಯೊಂದನ್ನು ಜೊತೆಗೆ ಇದ್ದಿಲಿನ ಒಲೆಯನ್ನೂ ಇಟ್ಟಿಗೆಯ ಪೀಠದ ಮೇಲೆ ಸಿದ್ಧಗೊಳಿಸುತ್ತಿದ್ದಾರೆ.

ಈ ಮೂಲಕ ಹಳೆ ತಲೆಮಾರಿನ ಸಾಂಪ್ರದಾಯಿಕ ಒಲೆಯಲ್ಲಿ ಸಿದ್ಧಪಡಿಸಿದ ಅನ್ನ,ಸಾರು, ಪಲ್ಯವನ್ನು ಮನೆಯಲ್ಲೇ ಬೆಳೆದ ಬಾಳೆ ಎಲೆಯಲ್ಲಿ ಊಟ ಮಾಡುವ ಪದ್ಧತಿಯನ್ನು ಮತ್ತೊಮ್ಮೆ ಮುನ್ನೆಲೆಗೆ ತರುವಲ್ಲಿ ಪ್ರದೀಪ ಕಲ್ಕೂರರು ಇತರರಿಗೆ ಪ್ರೇರಣೆ ನೀಡಿದ್ದಾರೆ.


### ಯಾರ ಪರವಾಗಿದ್ದೇವೆ ಎನ್ನುವ ಅರಿವು ಮಾಧ್ಯಮದವರಿಗೆ ಇರಬೇಕು

## ವೃತ್ತಿ ಧರ್ಮ ರಕ್ಷಣೆ ಮುಖ್ಯ: ಪತ್ರಕರ್ತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಿವಿಮಾತು

### ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಪತ್ರಕರ್ತರಿಗೆ ಸನ್ಮಾನ, ಪ್ರಶಸ್ತಿ ಪ್ರದಾನ

**ಬೆಂಗಳೂರು ಮಾ.13:** ನಾವು ಯಾರ ಪರವಾಗಿ ಇದ್ದೇವೆ ಎನ್ನುವ ಸ್ಪಷ್ಟ ಅರಿವು ಮಾಧ್ಯಮದವರಿಗೆ ಇರಬೇಕು. ಸರ್ಕಾರ ಕಟ್ಟಕಡೆಯ ಮನುಷ್ಯರ ಪರವಾಗಿದೆಯಾ ಎನ್ನುವ ಬಗ್ಗೆ ಗಮನ ಹರಿಸಿ, ವೃತ್ತಿಧರ್ಮವನ್ನು ಬಹಳ ಮುಖ್ಯವಾಗಿ ಕಾಪಾಡಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಶುಕ್ರವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪತ್ರಕರ್ತರಿಗೆ 2025ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನುವಿತರಿಸಿ, ಸನ್ಮಾನಿಸಿ ಪತ್ರಕರ್ತರೂ ಆಗಿದ್ದ ಮಹಾತ್ಮಗಾಂಧಿಯವರ ಮಾತಿನಂತೆ ಸರ್ವೋದಯ, ಅಂತ್ಯೋದಯದ ಪರವಾಗಿ ಪತ್ರಕರ್ತರು ಇರಬೇಕು. ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳಾದರೂ ಇನ್ನೂ ಅಸಮಾನತೆ ಕಾಣುತ್ತಿದ್ದೇವೆ. ಅಂಬೇಡ್ಕರ್ ಅವರೂ ಪತ್ರಕರ್ತರಾಗಿದ್ದರು. ಈ ಅಸಮಾನತೆ ಹೋಗದೆ ಹೋದರೆ ಸ್ವಾತಂತ್ರ್ಯಕ್ಕೆ ಅರ್ಥವಿಲ್ಲ ಎನ್ನುವ ಮಾತನ್ನು ಅಂಬೇಡ್ಕರ್ ಹೇಳಿದ್ದನ್ನು ಮುಖ್ಯಮಂತ್ರಿಗಳು ಉಲ್ಲೇಖಿಸಿದರು. ನಾನು ನಿತ್ಯ ದಿನಪತ್ರಿಕೆಗಳನ್ನು



ಓದಿದ ಬಳಿಕವೇ ಇತರೆ ಕಾರ್ಯಗಳಿಗೆ ಮುಂದಾಗುತ್ತೇನೆ. ಪತ್ರಿಕೆಗಳು ಇನ್ನೂ ಹೆಚ್ಚಿನ ವಿಶ್ವಾಸಾರ್ಹತೆಯನ್ನು ಉಳಿಸಿಕೊಂಡಿವೆ. ನಾನು ಟಿವಿ ನೋಡುವುದು ಕಡಿಮೆ ಎಂದರು.

ಈಗ ಕಲ್ಪಿತ ಪತ್ರಿಕೋದ್ಯಮದ ಹಾವಳಿ ಹೆಚ್ಚುತ್ತಿದೆ. ಸತ್ಯ ಬರೆಯುವ ಮತ್ತು ಸಂಶೋಧನೆ ನಡೆಸಿ ಬರೆಯುವ ಪತ್ರಕರ್ತರ ಸಂಖ್ಯೆ ಸುಳ್ಳು ಬರೆಯುವ ಪತ್ರಕರ್ತರ ಸಂಖ್ಯೆಗಿಂತ ಹೆಚ್ಚಾಗಬೇಕು ಎಂದು ಕರೆ ನೀಡಿದರು. ಒಂದು ಗುಂಪು ಅಥವಾ ಒಂದು ಸಿದ್ಧಾಂತಕ್ಕೆ ಮಾರು ಹೋಗದೆ ವಾಸ್ತವಾಂಶಕ್ಕೆ ಕನ್ನಡಿ ಹಿಡಿಯಬೇಕು ಎಂದರು. ಹೊಸ ತಂತ್ರಜ್ಞಾನದ ಜೊತೆಗೆ ಮಾಧ್ಯಮ ರಂಗ ಮತ್ತು ಪತ್ರಕರ್ತರೂ ತಮ್ಮನ್ನು ತಾವು ಉನ್ನತೀಕರಿಸಿಕೊಳ್ಳಬೇಕು.

ಹೊಸ ಸವಾಲುಗಳಿಗೆ ತಮ್ಮನ್ನು ತಾವು ಸಜ್ಜುಗೊಳಿಸಿಕೊಂಡು ಹದಗೊಳ್ಳಬೇಕು ಎಂದರು.

ಶಾಸಕ ರಿಜ್ವಾನ್ ಅರ್ಷದ್ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ, ಹಿರಿಯ ಸಾಹಿತಿ ಹಂಪನಾ, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೆಷಾ ಖಾನುಂ, ವಾರ್ತಾ ಇಲಾಖೆ ಆಯುಕ್ತ ಹೇಮಂತ್ ನಿಂಬಾಳ್ಕರ್, ನಾಟಕ ಅಕಾಡೆಮಿ ಅಧ್ಯಕ್ಷ ನಾಗರಾಜಮೂರ್ತಿ ಮತ್ತಿತರರು ಇದ್ದರು.




ಬೆಂಗಳೂರಿನ ವಿಧಾನಸೌಧದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2025ನೇ ಸಾಲಿನ ಕರ್ನಾಟಕ ಮಾಧ್ಯಮ ಅಕಾಡೆಮಿ ವಾರ್ಷಿಕ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

### ಬಿಜೆಪಿ ಟಿಕೆಟ್ ಕೊಡಿಸುವ ಆಮಿಷವೊಡ್ಡಿ ಹಣ ಸುಲಿಗೆ ಮಾಡಿದ್ದ ಪ್ರಕರಣ

## ಕೇಂದ್ರ ಸಚಿವರ ಸೋದರ ಗೋಪಾಲ್ ಜೋಶಿ ಮತ್ತಿತರ ವಿರುದ್ಧದ ಪ್ರಕರಣ ರದ್ದುಪಡಿಸಿದ ಹೈಕೋರ್ಟ್

**ಬೆಂಗಳೂರು, ಮಾ.13:** ಕಳೆದ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಟಿಕೆಟ್ ಕೊಡಿಸುವ ಆಮಿಷವೊಡ್ಡಿ ವಿಜಯಪುರ ಜಿಲ್ಲೆಯ ನಾಗಠಾಣ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ದೇವಾನಂದ್ ಚವ್ಹಾಣ್ ಅವರಿಂದ 2 ಕೋಟಿ ಸುಲಿಗೆ ನಡೆಸಿದ್ದ ಆರೋಪದ ಸಂಬಂಧ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ಸಹೋದರ ಗೋಪಾಲ್ ಜೋಶಿ ಮತ್ತಿತರರ ವಿರುದ್ಧ ದಾಖಲಾಗಿದ್ದ ಪ್ರಕರಣ ಮತ್ತು ವಿಚಾರಣಾ ಪ್ರಕ್ರಿಯೆಯನ್ನು ಹೈಕೋರ್ಟ್ ಶುಕ್ರವಾರ ರದ್ದುಪಡಿಸಿದೆ.

ವಿಜಯಪುರದ ಮಾಜಿ ಶಾಸಕ ದೇವಾನಂದ ಚವ್ಹಾಣ್ ಪತ್ನಿ ಸುನೀತಾ ಚವ್ಹಾಣ್ ದಾಖಲಿಸಿರುವ ಎಫ್‌ಐಆರ್ ಹಾಗೂ ವಿಚಾರಣಾಧೀನ ನ್ಯಾಯಾಲಯದಲ್ಲಿ ನಡೆಯುತ್ತಿರುವ ವಿಚಾರಣೆ ರದ್ದುಪಡಿಸಲು ಕೋರಿ ಹುಬ್ಬಳ್ಳಿಯ ಗೋಪಾಲ್ ಜೋಶಿ, ಪುತ್ರ ಅಜಯ್ ಜೋಶಿ ಹಾಗೂ ವಿಜಯಲಕ್ಷ್ಮೀ ಜೋಶಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಪುರಸ್ಕರಿಸಿದೆ.

ಅರ್ಜಿಯನ್ನು ಪುರಸ್ಕರಿಸಲಾಗಿದೆ. ಅಪರಾಧ ಪ್ರಕರಣವನ್ನು ವಜಾಗೊಳಿಸಲಾಗಿದೆ. ಆದೇಶದಲ್ಲಿ ವ್ಯಕ್ತಪಡಿಸಿರುವ ಅಭಿಪ್ರಾಯವು ಹಾಲಿ ಪ್ರಕರಣಕ್ಕೆ ಮಾತ್ರ ಸಂಬಂಧಿಸಿದ್ದು, ಉಭಯ ಪಕ್ಷಕಾರರ ನಡುವೆ ಬಾಕಿ ಇರುವ ಪ್ರಕರಣಗಳ ಮೇಲೆ ಇದು ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ವಿಸ್ತೃತ ಆದೇಶ ಇನ್ನಷ್ಟೇ ಬಿಡುಗಡೆಯಾಗಬೇಕಿದೆ.

ಪ್ರಕರಣದ ಹಿನ್ನೆಲೆ: ಪ್ರಕರಣದ ಸಂಬಂಧ ಬೆಂಗಳೂರಿನ ಬಸವೇಶ್ವರ ನಗರ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ದೇವಾನಂದ್ ಚವ್ಹಾಣ್ ಅವರು ಗೋಪಾಲ ಜೋಶಿ ಅವರನ್ನು ಹುಬ್ಬಳ್ಳಿಯ ನಿವಾಸದಲ್ಲಿ ಭೇಟಿ ಮಾಡಿದ್ದರು.

ಸೋಮಶೇಖರ್ ನಾಯಕ್ ಅವರು




ಗೋಪಾಲ ಜೋಶಿ ಅವರನ್ನು ಭೇಟಿ ಮಾಡಿಸಿದ್ದರು. ಕೇಂದ್ರದಲ್ಲಿ ನನ್ನ ಸಹೋದರ ಪ್ರಲ್ಹಾದ್ ಜೋಶಿ ಅವರ ವರ್ಚಸ್ಸು ಚೆನ್ನಾಗಿದ್ದು, ವಿಜಯಪುರ ಕ್ಷೇತ್ರದಿಂದ ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಗೋಪಾಲ ಜೋಶಿ ಆಮಿಷವೊಡ್ಡಿದ್ದರು. ಇದಕ್ಕಾಗಿ 5 ಕೋಟಿ ಸಿದ್ಧತೆ ಮಾಡಿ ಕೊಳ್ಳುವಂತೆಯೂ ಸೂಚಿಸಿದ್ದರು. ಗೋಪಾಲ ಜೋಶಿ ಸೂಚಿಸಿದ್ದ ವಿಜಯಲಕ್ಷ್ಮೀ ಜೋಶಿ ಅವರ ಖಾತೆಗೆ 1.25 ಕೋಟಿ ಹಾಗೂ ಮನೆಗೆ 75 ಲಕ್ಷ ತಲುಪಿಸಲಾಗಿತ್ತು. ಅಲ್ಲದೇ, 5 ಕೋಟಿ ಮೌಲ್ಯ ನಮೂದಿಸಿದ್ದ ಚೆಕ್ ಸಹ ಪಡೆದುಕೊಂಡಿದ್ದರು ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸ ಲಾಗಿತ್ತು.

ಟಿಕೆಟ್ ಸಂಬಂಧ ಅಮಿತ್ ಶಾ ಅವರ ಆಪ್ತ ಸಹಾಯಕರ ಜೊತೆಗೆ ಮಾತನಾಡಿರುವುದಾಗಿ ಗೋಪಾಲ ಜೋಶಿ ಹೇಳಿದ್ದರು. ಆದರೆ, ಟಿಕೆಟ್ ಕೊಡಿಸದೇ ವಂಚಿಸಿದ್ದಾರೆ. ಅದಾದ ಮೇಲೆ ಬಸವೇಶ್ವರನಗರದ ವಿಜಯಲಕ್ಷ್ಮೀ ಜೋಶಿ ಅವರ ಮನೆಗೆ ಕರೆಸಿಕೊಂಡು ಚೆಕ್ ವಾಪಸ್ ನೀಡಿದ್ದರು.

25 ಲಕ್ಷ ವಾಪಸ್ ನೀಡುವಂತೆ ಕೇಳಿದಾಗ 200 ಕೋಟಿ ಮೊತ್ತದ ಯೋಜನೆಗಳ ಬಿಲ್ ತೋರಿಸಿ 1.75 ಕೋಟಿ ನೀಡಿದರೆ 20 ದಿನಗಳಲ್ಲಿ ಎಲ್ಲಾ ಹಣವನ್ನೂ ವಾಪಸ್ ನೀಡುವುದಾಗಿ ಹೇಳಿದ್ದರು. ಅವರ ಮಾತು ನಂಬಿ ಹಂತಹಂತವಾಗಿ 1.75 ಕೋಟಿ ನೀಡಿದ್ದೆ ಎಂದು ದೇವಾನಂದ್ ಚವ್ಹಾಣ್ ಅವರ ಪತ್ನಿ ಸುನೀತಾ ಚವ್ಹಾಣ್ ನೀಡಿರುವ ದೂರಿನಲ್ಲಿ ವಿವರಿಸಿದ್ದನ್ನು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿತ್ತು.

## ಅಡುಗೆ ಅನಿಲ ಅಕ್ರಮ ಮಾರಾಟ ಮಾಡಿದರೆ ಕಠಿಣ ಕ್ರಮ: ಹೆಚ್ಚುವರಿ ಪೊಲೀಸ್ ಆಯುಕ್ತ ಹಿತೇಂದ್ರ ಎಚ್ಚರಿಕೆ

**ಬೆಂಗಳೂರು, ಮಾ.13:** ವಾಣಿಜ್ಯ ಮತ್ತು ಗೃಹ ಬಳಕೆ ಗ್ಯಾಸ್ ಸಿಲಿಂಡರ್‌ಗಳನ್ನು ಅಕ್ರಮವಾಗಿ ಮಾರಾಟ ಮಾಡಿದರೆ ಯಾರೇ ಆಗಲಿ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಹೆಚ್ಚುವರಿ ಪೊಲೀಸ್ ಆಯುಕ್ತ ಹಿತೇಂದ್ರ ಅವರು ಎಚ್ಚರಿಕೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಮೂರು ದಿನಗಳಿಂದ ನಮ್ಮ ಪೊಲೀಸರು ರಾಜ್ಯದಾದ್ಯಂತ ಪರಿಶೀಲನೆ ಮಾಡು



ತ್ತಿದ್ದಾರೆ. ಇದುವರೆಗೂ ಅಕ್ರಮವಾಗಿ ಸಿಲಿಂಡರ್ ಸಂಗ್ರಹ, ಸಾಗಾಟದಂತಹ ಯಾವುದೇ ಪ್ರಕರಣ ದಾಖಲಾಗಿಲ್ಲ ಎಂದು ಹೇಳಿದರು. ನಗರ, ಜಿಲ್ಲೆ, ತಾಲ್ಲೂಕುಗಳಲ್ಲೂ ಸಹ ಆಯಾಯ ಠಾಣಾ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ. ಸಿಲಿಂಡರ್ ದಾಸ್ತಾನು ಗೋದಾಮುಗಳಿಗೆ ಹಾಗೂ ಸಂಬಂಧಿಸಿದ ಕಚೇರಿಗಳಿಗೂ ಭೇಟಿ ನೀಡಿ ಪರಿಶೀಲಿಸುತ್ತಿದ್ದಾರೆ ಎಂದು ವಿವರಿಸಿದರು.

ಒಂದು ವೇಳೆ ಗ್ಯಾಸ್ ಸಿಲಿಂಡರ್‌ಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವುದು ಕಂಡು ಬಂದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಅವರು ಎಚ್ಚರಿಸಿದ್ದಾರೆ. ಸಿಲಿಂಡರ್ ಗಳನ್ನು ಸಾಗಾಣೆ ಮಾಡುವವರ ಬಳಿ ಬುಕ್ಕಿಂಗ್ ರಸೀದಿ ಇರಬೇಕು. ಒಂದು ವೇಳೆ ರಸೀದಿ ಇಲ್ಲದಿದ್ದರೆ ಅಂತಹ ಸಿಲಿಂಡರ್‌ಗಳನ್ನು ವಶಕ್ಕೆ ಪಡೆಯಲಾಗುವುದು ಎಂದರು.

## ಡಾ. ಮನಮೋಹನ್ ಸಿಂಗ್ ವಿವಿ: ಎಂ.ಇ.ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿಗೆ ಐದು ರ್‍ಯಾಂಕ್

**ಬೆಂಗಳೂರು, ಮಾ.13:** ಬೆಂಗಳೂರು ನಗರ ಡಾ. ಮನಮೋಹನ್ ಸಿಂಗ್ ವಿಶ್ವವಿದ್ಯಾಲಯ ವ್ಯಾಪ್ತಿಯ ಎಂ.ಇ.ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿ ಗಮನ ಸೆಳೆದಿದ್ದಾರೆ.

ಎಂ.ಎಸ್.ಸಿಯಲ್ಲಿ [86.81%] ಉತ್ತಮ ಸಾಧನೆಯೊಂದಿಗೆ ಜಿ.ಎಸ್.ಶಿಲ್ಪಾ 2ನೇ ರ್‍ಯಾಂಕ್, ಬಿಎಯಲ್ಲಿ ಪಿ.ನಿಸರ್ಗಾ [95.49%] 3ನೇ ರ್‍ಯಾಂಕ್, ಬಿಕಾಂನಲ್ಲಿ ಎಂ.ಹರಿಣಿ [96.41%] 3ನೇ ರ್‍ಯಾಂಕ್, ಎಚ್.ಸಿ.ಚೈತ್ರಾ [96.19%] 8ನೇ ರ್‍ಯಾಂಕ್, ಬಿಕಾಂನಲ್ಲಿ ಆರ್.ಮನೀಶ್ [96.14%] 9ನೇ ರ್‍ಯಾಂಕ್ ಗಳಿಸಿದ್ದಾರೆ ಎಂದು ಆಡಳಿತ ಮಂಡಳಿ ಅಧ್ಯಕ್ಷ ಡಾ.ಎಸ್.ಸಿ.ಶರ್ಮ ತಿಳಿಸಿದ್ದಾರೆ.

## ಕಲಬುರಗಿ ನೀರಿನ ಸಮಸ್ಯೆ ನೀಗಿಸಲು ಬೋರ್‌ವೆಲ್, ಟ್ಯಾಂಕರ್ ನೀರು ಪೂರೈಕೆ: ಸಚಿವ ಬೈರತಿ ಸುರೇಶ್

**ಬೆಂಗಳೂರು/ಕಲಬುರಗಿ, ಮಾ.13:** ಕಲಬುರಗಿ ನಗರದಲ್ಲಿ ಕುಡಿಯುವ ನೀರು ಸಮಸ್ಯೆ ನೀಗಿಸಲು ಅಗತ್ಯವಿರುವ ಕಡೆಗಳಲ್ಲಿ ಬೋರ್‌ವೆಲ್ ಮತ್ತು ಟ್ಯಾಂಕರ್ ಮೂಲಕ ನೀರು ಸರಬರಾಜಿಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿ ಶುಕ್ರವಾರ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಅಲ್ಲಮಪ್ರಭು ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ನಂದಿಕೂರು ಗ್ರಾಮದ ಬಳಿ ರೊಚ್ಚು ನೀರಿನ ಸಂಸ್ಕರಣ ಘಟಕದ ಕೆಲವು ಕಡೆ ದುರಸ್ತಿ ಕಾರ್ಯ ನಡೆಯುತ್ತಿರುವುದು, ಭೀಮಾನದಿಯ ಮೂಲಸ್ಥಾವರದ ಮೇಲ್ಭಾಗದಲ್ಲಿ ಗ್ರಾಮಗಳಿಂದ ನೈಸರ್ಗಿಕ ನಾಲಾದಿಂದ ಹರಿದು ಬರುತ್ತಿರುವ ತ್ಯಾಜ್ಯ ನೀರಿನಿಂದಾಗಿ ಕೆಲವು ಪ್ರದೇಶಗಳಲ್ಲಿ ಕುಡಿಯುವ ನೀರಿನಲ್ಲಿ ಕಲುಷಿತ ನೀರು ಮಿಶ್ರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ ಎಂದು ತಿಳಿಸಿದರು.

ಕೂಡಲೇ ಇದನ್ನು ತಪ್ಪಿಸಿ ಶುದ್ಧ ಕುಡಿಯುವ ನೀರು ಪೂರೈಕೆಗೆ ಕ್ರಮ ಕೈಗೊಳ್ಳಲಾಗಿದೆ. ಕಲುಷಿತ ನೀರಿಗೆ ಕಾರಣವಾಗಿದ್ದ ಎಸ್ ಟಿಪಿ ಘಟಕವನ್ನು 3 ಕೋಟಿ ರೂಪಾಯಿ ವೆಚ್ಚದಲ್ಲಿ ದುರಸ್ತಿ, ನೈಸರ್ಗಿಕ ನಾಲದಲ್ಲಿ ಹರಿದು ಬರುತ್ತಿರುವ ತ್ಯಾಜ್ಯ ನೀರನ್ನು ಬ್ಯಾರೇಜಿನ ತಳ ಭಾಗಕ್ಕೆ ಹರಿದುಹೋಗುವಂತೆ ಮಾಡುವುದಕ್ಕಾಗಿ 10 ಕೋಟಿ ರೂಪಾಯಿ ವೆಚ್ಚದಲ್ಲಿ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಈ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡಲು ಸರ್ಕಾರ



ಬದ್ಧವಾಗಿದ್ದು, ಬೋರ್ ವೆಲ್‌ಗಳು ಮತ್ತು ಟ್ಯಾಂಕರ್ ಗಳ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ ವಾರ್ಡ್ ಗಳಿಗೆ ನಿರಂತರ ಕುಡಿಯುವ ನೀರು ಪೂರೈಸಲು ವಿಶ್ವಬ್ಯಾಂಕ್ ನೆರವಿನ ಯೋಜನೆಯನ್ನು ಜಾರಿಗೊಳಿಸ ಲಾಗಿದೆ. ಭೌಗೋಳಿಕವಾಗಿ 47 ವಲಯ ಗಳನ್ನಾಗಿ ವಿಂಗಡಿಸಲಾಗಿದ್ದು, ಪ್ರಸ್ತುತ ಹಣಕಾಸಿನ ಲಭ್ಯತೆ ಅನುಸಾರವಾಗಿ 32 ವಲಯಗಳಿಗೆ ವಿಶ್ವಬ್ಯಾಂಕ್ ನೆರವಿನ ಯೋಜನೆಯಡಿ ಸದ್ಯ ಇರುವ ಎಲ್ಲಾ ವಿತರಣಾ ಜಾಲವನ್ನು ವಿನ್ಯಾಸಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುತ್ತದೆ ಎಂದು ಸಚಿವ ಬೈರತಿ ಸುರೇಶ್ ತಿಳಿಸಿದರು.

ನಗರದ ಮನೆಗಳಿಗೆ ಕುಡಿಯುವ ನೀರು ಪೂರೈಕೆಗಾಗಿ 800 ಕೋಟಿ ರೂ.ಗಳ ಯೋಜನೆ ಕಾಮಗಾರಿ ಪ್ರಗತಿಯಲ್ಲಿದೆ. ನಾನಾ ಕಾರಣಗಳಿಂದ ಕಾಮಗಾರಿಯನ್ನು ವಿಳಂಬ ಮಾಡಿದ ಗುತ್ತಿಗೆದಾರ ಸಂಸ್ಥೆಯಾದ ಎಲ್ ಅಂಡ್ ಟಿ ಗೆ 60 ಕೋಟಿ ರೂಪಾಯಿ ದಂಡ ವಿಧಿಸಲಾಗಿದೆ ಎಂದರು.


ಈಗಾಗಲೇ 8 ಸಾವಿರ ಮನೆಗಳಿಗೆ ನೀರು ಪೂರೈಕೆ ಮಾಡಲಾಗುತ್ತಿದ್ದು, ಇನ್ನುಳಿದ ಮನೆಗಳಿಗೆ ನೀರು ನೀಡಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು.

**1800 ಕೋಟಿ ಯೋಜನೆ:** ಕಲಬುರಗಿ ನಗರಕ್ಕೆ ಶಾಶ್ವತ ಕುಡಿಯುವ ನೀರು ಪೂರೈಕೆಗೆ ನಾರಾಯಣಪುರ ಬ್ಯಾರೇಜ್ ನಿಂದ ನೀರು ತರುವ 1800 ಕೋಟಿ ರೂಪಾಯಿಗಳ ಯೋಜನೆಯನ್ನು ಈ ಬಜೆಟ್ ನಲ್ಲಿ ಘೋಷಣೆ ಮಾಡಲಾಗಿದೆ ಎಂದು ಸಚಿವ ಬೈರತಿ ಸುರೇಶ್ ಸದನದ ಗಮನಕ್ಕೆ ತಂದರು.

### ಜಿ.ಟಿ.ದೇವೇಗೌಡ ಪ್ರಶ್ನೆಗೆ ಬೈರತಿ ಸುರೇಶ್ ಮಾಹಿತಿ

## ಮೈಸೂರಿನ ಕುಡಿಯುವ ನೀರು, ಯುಜಿಡಿಗೆ 750-800 ಕೋಟಿ ರೂ.

**ಬೆಂಗಳೂರು, ಮಾ.13:** ಸಾಂಸ್ಕೃತಿಕ ನಗರ ಮೈಸೂರಿನ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆ ಅಭಿವೃದ್ಧಿಗೆ ಈ ಬಾರಿ ಬಜೆಟ್‌ನಲ್ಲಿ 750 ರಿಂದ 800 ಕೋಟಿ ರೂಪಾಯಿ ಮೀಸಲಿಡಲಾ ಗುತ್ತದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.



ವಿಧಾನಸಭೆಯಲ್ಲಿ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಜಿ.ಟಿ.ದೇವೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮೈಸೂರು ನಗರದ ವಿವಿಧ ಬಡಾವಣೆಗಳಲ್ಲಿ ಮಳೆನೀರು ಚರಂಡಿ ನಿರ್ಮಾಣ ಮಾಡಲಾಗಿದೆ. ಆದರೆ, ಕೆಲವು ಕಡೆ ಸಂಪರ್ಕ ಕಲ್ಪಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಈ ಕಾಮಗಾರಿ ಕೈಗೊಳ್ಳಲು 27 ಕೋಟಿ ವಿಶೇಷ ಅನುದಾನಕ್ಕಾಗಿ ಮೈಸೂರು ಮಹಾನಗರ ಪಾಲಿಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ, ಆರ್ಥಿಕ ಇಲಾಖೆ ಈ ಪ್ರಸ್ತಾವನೆಯನ್ನು ತಿರಸ್ಕರಿಸಿತ್ತು ಎಂದು ವಿವರಣೆ ನೀಡಿದರು. ಇತ್ತೀಚೆಗೆ ಮಂಡಿಸಲಾದ ಬಜೆಟ್ ನಲ್ಲಿ ಮೈಸೂರಿನ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಗಾಗಿ 1500 ಕೋಟಿ ರೂ.ಗಳನ್ನು ಮೀಸಲಿಡುವಂತೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಇದನ್ನು ಪುರಸ್ಕರಿಸಿರುವ ಮುಖ್ಯಮಂತ್ರಿಗಳು 750 ರಿಂದ 800 ಕೋಟಿ ರೂ.ಗಳನ್ನು ಈ ಉದ್ದೇಶಕ್ಕಾಗಿ ಮೀಸಲಿಡಲಾಗುತ್ತಿದೆ ಎಂದು ಸಚಿವರು ಸದನಕ್ಕೆ ತಿಳಿಸಿದರು.

**ಎಂಡಿಎದಿಂದ 300 ಕೋಟಿ**

ಮೈಸೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳ ಸರ್ವಾಂಗೀಣ ಅಭಿವೃದ್ಧಿಗೆಂದು ಮೈಸೂರು ಅಭಿವೃದ್ಧಿ ಪ್ರಾಧಿಕಾರವನ್ನು ರಚನೆ ಮಾಡಲಾಗಿದೆ. ಇದಕ್ಕೆ 200 ಕೋಟಿ ರೂಪಾಯಿಗಳನ್ನೂ ನೀಡಲಾಗಿದೆ. ಇದೇ ವೇಳೆ, ಅರಮನೆ ನಗರದ ರಸ್ತೆಗಳಿಗೆ ವೈಟ್ ಟಾಪಿಂಗ್ ಯೋಜನೆಗಳಿಗಾಗಿ 300 ಕೋಟಿ ರೂಪಾಯಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ಅವರು ಹೇಳಿದರು.

**ಸಿಎ ನಿವೇಶನಗಳ ಮಾರಾಟ**

ವಿವಿಧ ಬಡಾವಣೆಗಳಲ್ಲಿ ಇರುವ ಸಿಎ ನಿವೇಶನಗಳನ್ನು ಮಾರಾಟ ಮಾಡುವಂತೆ ಜಿ.ಟಿ.ದೇವೇಗೌಡ ಅವರು ನೀಡಿದ ಸಲಹೆಗೆ ಸ್ಪಂದಿಸಿದ ಸಚಿವ ಬೈರತಿ ಸುರೇಶ್ ಅವರು, ಸಿಎ ನಿವೇಶನಗಳನ್ನು ಮಾರಾಟ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಇದರಿಂದ 4 ರಿಂದ 5 ಸಾವಿರ ಕೋಟಿ ರೂ ಆದಾಯವನ್ನು ನಿರೀಕ್ಷಿಸಲಾಗಿದೆ. ಈ ಹಣವನ್ನು ಮೈಸೂರು ಮತ್ತು ಹೊಸ ಬಡಾವಣೆಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿಗೆ ಬಳಸಲು ರೂಪುರೇಷೆ ರೂಪಿಸಲಾಗುತ್ತದೆ ಎಂದು ಭರವಸೆ ನೀಡಿದರು.

### ಸಮಾಜ ಕಲ್ಯಾಣ ಇಲಾಖೆ ಅಧೀನ ಸಂಸ್ಥೆಯಲ್ಲಿ ನೂರಾರು ಕೋಟಿ ರೂ ಭ್ರಷ್ಟಾಚಾರ

## ಇಂದಿರಾಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದ ಆಡಳಿತಾಧಿಕಾರಿ ಅಮಾನತಿಗೆ ಆಗ್ರಹ, ಸಿಬಿಐ ತನಿಖೆಗೆ ಒತ್ತಾಯ

**ಬೆಂಗಳೂರು, ಮಾ.13:** ಸಮಾಜ ಕಲ್ಯಾಣ ಇಲಾಖೆಯ ಅಧೀನ ಸಂಸ್ಥೆಯಾದ ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ನಿಧಿಯಲ್ಲಿ ಬಹಿರಂಗ ಲೂಟಿ ನಡೆಯುತ್ತಿದ್ದು, ಅಧಿಕಾರ ದುರುಪಯೋಗ, ನಕಲಿ ಟೆಂಡರ್ ಮತ್ತಿತರೆ ವಾಮಮಾರ್ಗದ ಮೂಲಕ ನೂರಾರು ಕೋಟಿ ರೂ ಅಕ್ರಮ ನಡೆಸಲಾಗಿದೆ. ಈ ಬಗ್ಗೆ ಸಿಬಿಐ ತನಿಖೆ ನಡೆಸಬೇಕು ಎಂದು ಭೀಮಪುತ್ರಿ ಬ್ರಿಗೇಡ್ ಸ್ಥಾಪಕಿ ಭೀಮಪುತ್ರಿ ರೇವತಿರಾಜ್ ಆರೋಪಿಸಿದ್ದಾರೆ.

ಈ ಎಲ್ಲಾ ಅಕ್ರಮಗಳಿಗೆ ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದ ಆಡಳಿತಾಧಿಕಾರಿ ಡಾ. ಕೆ. ಅಂಜುಂ ಹಫೀಜ್ ಕಾರಣಕರ್ತರಾಗಿದ್ದು, ಇವರನ್ನು ಕೂಡಲೇ ಅಮಾನತ್ತಿನಲ್ಲಿಟ್ಟು, ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಡಾ. ಅಂಜು ಅವರು ತಮ್ಮ ಸ್ವಂತ ತಾಯಿಯ ಖಾತೆಗೆ ಅಕ್ರಮವಾಗಿ ಹಣ ವರ್ಗಾವಣೆ ಮಾಡಿಸಿಕೊಂಡು ಭಾರೀ ಅಕ್ರಮಗಳಿಗೆ ಕಾರಣಕರ್ತರಾಗಿದ್ದಾರೆ. ಜೊತೆಗೆ ಎಲ್ಲಾ ಗುತ್ತಿಗೆಗಳಲ್ಲಿ ಶೇ 40 ರಷ್ಟು ಕಮೀಷನ್ ಪಡೆಯುತ್ತಿದ್ದು, ಕೆಟಿಪಿಪಿ ಕಾಯ್ದೆಯನ್ನು ಗಂಭೀರವಾಗಿ ಉಲ್ಲಂಘಿಸಿದ್ದಾರೆ. ಹೀಗಾಗಿ ಇವರ ಮತ್ತು ಇವರ ಕುಟುಂಬದ ಎಲ್ಲಾ ಬ್ಯಾಂಕ್ ಖಾತೆಯನ್ನು ತಕ್ಷಣವೇ ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಆಗ್ರಹಿಸಿದರು.

ಸಾಫ್ಟ್‌ವೇರ್ ಹಗರಣ, ಬೋಗಸ್ ತರಬೇತಿ ಕಾರ್ಯಕ್ರಮಗಳು, ಡ್ರೋನ್ ತರಭೇತಿ ಹಗರಣ, ಜಿ.ಎಸ್.ಟಿ. ಅಕ್ರಮ, ಹೀಗೆ ಸಾಲು, ಸಾಲು ಹಗರಣ ಸರಮಾಲೆ ಇರುವ ಡಾ.ಅಂಜುಂ ಹಫೀಜ್ ವಿರುದ್ಧ ಸಿಬಿಐ ತನಿಖೆಯಾಗಬೇಕು. ಇವರು ಸಮಾಜಕಲ್ಯಾಣ ಇಲಾಖೆಯ ವೃಂದ ನೇಮಕಾತಿ ನಿಯಮಗಳನ್ನು ಉಲ್ಲಂಘಿಸಿದ್ದು, ಕರ್ನಾಟಕ ಆಡಳಿತಾತ್ಮಕ ನ್ಯಾಯಾಧೀಕರಣದ ತೀರ್ಪುಗಳನ್ನು ಧಿಕ್ಕರಿಸಿದ್ದಾರೆ. ಅದೇ ರೀತಿ, ಈ ಪ್ರಕರಣದಲ್ಲಿ ಭಾಗಿಯಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು, ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.



ಸರ್ಕಾರದ ಖಜಾನೆಯಲ್ಲಿ ಎಲ್ಲವೂ ಆನ್‌ಲೈನ್ ಮೂಲಕ ಪಾವತಿಯಾಗಬೇಕಿದ್ದರೂ ಇವರು ವಿಭಾಗೀಯ ಬ್ಯಾಂಕ್ ಖಾತೆಗಳನ್ನು ದುರುಪಯೋಗಪಡಿಸಿಕೊಂಡು ದೊಡ್ಡ ಮೊತ್ತವನ್ನು ನೇರವಾಗಿ ಚೆಕ್ ಮೂಲಕ ವಿತರಿಸಿದ್ದಾರೆ. ಸರ್ಕಾರದ ಅನುಮತಿ ಇಲ್ಲದೇ ಕೋಟ್ಯಂತರ ರೂ ಮೊತ್ತವನ್ನು ಮುಂಗಡ ಪಾವತಿಸಿದ್ದಾರೆ. ಕೆಲವು ಚೆಕ್‌ಗಳನ್ನು ಡಾ. ಅಂಜುಂ ಹಫೀಜ್ ಅವರು ಏಕಪಕ್ಷೀಯವಾಗಿ ತಮ್ಮ ಸಹಿಯೊಂದಿಗೆ ನೀಡಿದ್ದು, ಇದು ಅಧಿಕಾರದ ದುರುಪಯೋಗವಾಗಿದೆ ಎಂದು ಆರೋಪಿಸಿದರು.

ಡಾ. ಕೆ. ಅಂಜುಂ ಹಫೀಜ್ ವಿರುದ್ಧ ಜನವರಿ 29 ರಂದು ಲೋಕಾಯುಕ್ತರಿಗೆ ದೂರು ಸಲ್ಲಿಸಿದ್ದು, ರಾಜ್ಯದ ಮುಖ್ಯ ಕಾರ್ಯದರ್ಶಿ, ಸಮಾಜಕಲ್ಯಾಣ ಸಚಿವ ಡಾ. ಎಚ್.ಸಿ. ಮಹದೇವಪ್ಪ, ಇಲಾಖಾ ಆಯುಕ್ತರು ಮತ್ತಿತರೆ ಹಿರಿಯ ಅಧಿಕಾರಿಗಳಿಗೆ ದೂರು ನೀಡಲಾಗಿದೆ. ಇವರ ವಿರುದ್ಧ ದೂರು ನೀಡಿ ಕಾನೂನು ಕ್ರಮಕ್ಕೆ ಮುಂದಾದ ಹಿನ್ನೆಲೆಯಲ್ಲಿ ಡಾ. ಕೆ. ಅಂಜುಂ ಹಫೀಜ್ ಅವರು ತಮ್ಮ ಮೇಲೆ ಸುಲಿಗೆ ಆರೋಪ ಹೊರಿಸಿ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ದಾಖಲಿಸಿದ್ದಾರೆ. ಪೊಲೀಸರ ಮೂಲಕ ತಮ್ಮನ್ನು ಬಂಧಿಸಿ ತಮ್ಮ ಹೋರಾಟವನ್ನು ಹತ್ತಿಕ್ಕಲು ವ್ಯವಸ್ಥಿತ ಪಿತೂರಿ ನಡೆಸಿದ್ದಾರೆ. ಜೊತೆಗೆ ಅಕ್ರಮಗಳನ್ನು ಮುಚ್ಚಿ ಹಾಕಲು ತಮ್ಮ ಜೊತೆ ರಾಜೀ ಸಂಧಾನದ ಪ್ರಯತ್ನಕ್ಕೂ ಸಹ ಮುಂದಾಗಿದ್ದರು. ಆದರೆ ತಾವು ಇದಕ್ಕೆ ಸಮ್ಮತಿಸಲಿಲ್ಲ ಎಂದು ರೇವತಿರಾಜ್ ಹೇಳಿದರು.

## ಮಧ್ಯಪ್ರಾಚ್ಯ ಯುದ್ಧ: ವಿದ್ಯುತ್ ಸ್ಟೌ ಬಳಕೆಯಲ್ಲಿ ಏರಿಕೆ, ಗೃಹಜ್ಯೋತಿ ಬಳಕೆ ಗರಿಷ್ಠ ಮಟ್ಟಕ್ಕೆ

**ಬೆಂಗಳೂರು, ಮಾ.13:** ಇರಾನ್–ಇಸ್ರೇಲ್ ಮತ್ತು ಅಮೆರಿಕಾ ನಡುವಿನ ಯುದ್ಧದ ಪರಿಣಾಮ ರಾಜ್ಯಸರ್ಕಾರದ ಮಹತ್ವಾಕಾಂಕ್ಷಿಯ ಗೃಹಜ್ಯೋತಿ ಯೋಜನೆಯ ಮೇಲೆ ಪರಿಣಾಮ ಬೀರಲಿದ್ದು, ವಿದ್ಯುತ್ ಪೂರೈಕೆ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ.

ಅಡುಗೆ ಅನಿಲ ಪೂರೈಕೆ ಮೇಲೆ ಪ್ರತಿಕೂಲ ಪರಿಣಾಮ ಬೀರಿದ್ದು, ಹೋಟೆಲ್ ಗಳು, ಮನೆಗಳಲ್ಲಿ ಅಡುಗೆ ಮಾಡಲು ವಿದ್ಯುತ್ ಬಳಕೆ ಹೆಚ್ಚಾಗುತ್ತಿದೆ. ವಿದ್ಯುತ್ ಸ್ಟೌ ಗಳಿಗೆ ಇನ್ನಿಲ್ಲದ ಬೇಡಿಕೆ ಕಂಡು ಬಂದಿದೆ. ಗೃಹಜ್ಯೋತಿ ವಿದ್ಯುತ್ ಬಳಕೆದಾರರು ಇದೀಗ ವಿದ್ಯುತ್ ಸ್ಟೌ ಗಳ ಬಳಕೆಗೆ ಒತ್ತು ನೀಡಿದ್ದಾರೆ. ಇದರಿಂದ ಗೃಹ ಜ್ಯೋತಿ ಬಳಕೆ ಪ್ರಮಾಣ ಗರಿಷ್ಠ ಮಟ್ಟಕ್ಕೆ ಏರುವ ನಿರೀಕ್ಷೆ ಇದೆ.

ಇದರಿಂದ ಬೇಡಿಕೆಗೆ ತಕ್ಕಂತೆ ವಿದ್ಯುತ್ ಪೂರೈಕೆ ಮಾಡುವ ಬಹುದೊಡ್ಡ ಸವಾಲು ಎದುರಾಗಲಿದೆ. ಇದು ಗೃಹಜ್ಯೋತಿ ವಿದ್ಯುತ್ ಪೂರೈಕೆಗೆ ಹೊಡೆತ ಬೀಳುವ ನಿರೀಕ್ಷೆಯಿದೆ. ಗೃಹಬಳಕೆ ವಿದ್ಯುತ್ ಪೂರೈಕೆ ವ್ಯತ್ಯಯವಾಗುವ ಸಂಭವವಿದೆ.

ಯುದ್ಧದ ಪರಿಣಾಮದಿಂದಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಕಚ್ಚಾತೈಲ ಸರಬರಾಜಿನಲ್ಲಿ ವ್ಯತ್ಯಯವಾಗಿದೆ. ಲೂಬ್ರಿಕೆಂಟ್ ಸೇರಿದಂತೆ ತೈಲ ಉತ್ಪನ್ನಗಳ ಆಮದು ಕೂಡ ಗಾಸಿಗೊಂಡಿದೆ. ಪೆಟ್ರೋಲ್, ಡೀಸೆಲ್ ಸೇರಿದಂತೆ ಇಂಧನಗಳ ದರ ಏರಿಕೆಯ ಆತಂಕ ಒಂದುಕಡೆಯಾದರೆ, ಅಡುಗೆ ಅನಿಲದ ಕೊರತೆ ಜನ ಜೀವನವನ್ನು ಬೆಚ್ಚಿಬೀಳಿಸುವಂತೆ ಮಾಡಿದೆ. ಸಾಂಪ್ರದಾಯಕ ಸೌದೆ ಒಲೆ ಹಾಗೂ ಇತರ ಪದ್ಧತಿಗಳನ್ನು ಕೈ ಬಿಟ್ಟು ಅಡುಗೆ ಅನಿಲಕ್ಕೆ ಶೇ. 99ರಷ್ಟು ಜನ ಅವಲಂಭಿತರಾಗಿದ್ದಾರೆ. ಈಗ ಅಡುಗೆ ಅನಿಲದ ಕೊರತೆ ಗೃಹಿಣಿಯರನ್ನು ಕಂಗಾಲಾಗುವಂತೆ ಮಾಡಿದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಯಾವುದೇ ಕೊರತೆ ಇಲ್ಲ. ಪೂರೈಕೆ ಅಭಾದಿತವಾಗಲಿದೆ. ಜನರು ಆತಂಕ ಕ್ಕೊಳಗಾಗುವುದು ಬೇಡ ಎಂದು ಪದೇ ಪದೇ ಸ್ಪಷ್ಟನೆ ನೀಡುತ್ತಲೇ ಇವೆ. ಅಡುಗೆ ಸಿಲಿಂಡರ್‌ಗಳ ಕೊರತೆ ಇದೆ ಎಂದು ಅಪಪ್ರಚಾರ ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವು ದಾಗಿಯೂ ಎಚ್ಚರಿಕೆ ನೀಡಲಾಗುತ್ತಿದೆ. ಆದರೆ ವಾಸ್ತವದಲ್ಲಿ ಕೊರತೆ ಇರುವುದು, ಸಿಲಿಡಂರ್‌ಗಳ ಕೊರತೆ ವ್ಯತ್ಯಯವಾಗಿರುವುದು ಕಣ್ಣೆದುರಿಗೆ ಇದೆ.

ಈ ಮೊದಲೆಲ್ಲಾ ಸಿಲಿಂಡರ್ ಬುಕ್ ಮಾಡಿದರೆ ಗರಿಷ್ಠ 24 ಗಂಟೆಗೊಳಗಾಗಿ ಪೂರೈಕೆಯಾಗುತಿತ್ತು. ಪ್ರಸ್ತುತ ಸನ್ನಿವೇಶದಲ್ಲಿ ಸಿಲಿಂಡರ್ ಬುಕ್ ಮಾಡುವ ಐವಿಆರ್



ಸೇವೆಯನ್ನೇ ಕೆಲಕಾಲ ಅಮಾನತು ಗೊಳಿಸುವುದು ಇದ್ದಕ್ಕಿದ್ದಂತೆ ಚಾಲುಗೊಳಿಸುವ ಕಣ್ಣಾಮುಚ್ಚಾಲೆಯನ್ನು ತೈಲ ಕಂಪನಿಗಳು ಮಾಡುತ್ತಿವೆ.

ಅಡುಗೆ ಸಿಲಿಂಡರ್‌ಗಳ ಕೊರತೆಯಲ್ಲಿ ಉಳಿತಾಯಕ್ಕಾಗಿ ಗೃಹಬಳಕೆಗೆ ವಿದ್ಯುತ್ ವಲಯಗಳನ್ನೂ ಹೆಚ್ಚು ಬಳಸಲಾಗುತ್ತಿದೆ. ಬೇಸಿಗೆ ಕಾಲದಲ್ಲಿ ತಾಪಮಾನ ಹೆಚ್ಚಿರುವುದರಿಂದಾಗಿ ಫ್ಯಾನ್, ಎ.ಸಿ. ಸೇರಿದಂತೆ ಇತರ ಮೂಲಗಳಿಗೆ ಹೆಚ್ಚು ವಿದ್ಯುತ್ ಬಳಕೆಯಾಗುತ್ತದೆ. ಅದರ ಜೊತೆಗೆ ಈ ಭಾರಿ ವಿದ್ಯುತ್‌ವಲಯಗಳ ಬಳಕೆಯೂ ಹೆಚ್ಚಿರುವುದರಿಂದ ವಿದ್ಯುತ್ತಿನ ಬಳಕೆ ಮತ್ತಷ್ಟು ಹೆಚ್ಚಾಗುತ್ತಿದೆ. ವಿದ್ಯುತ್ ವೇದಿಕೆ ಗರಿಷ್ಠ ಮಟ್ಟ ತಲುಪಿ ಪರಿಸ್ಥಿತಿ ನಿಭಾಯಿಸಲು ಇಂಧನ ಇಲಾಖೆ ಪರದಾಡುವ ಸನ್ನಿವೇಶವು ಸೃಷ್ಟಿಯಾಗುತ್ತಿದೆ. ಪಂಚಖಾತ್ರಿಗಳಲ್ಲಿ ಒಂದಾಗಿರುವ ಗೃಹಜ್ಯೋತಿ ಯೋಜನೆಯಡಿ ಪ್ರತಿ ಮನೆಗೆ ಈ ಹಿಂದೆ ಒಂದು ವರ್ಷ ಸರಾಸರಿ ಬಳಕೆಯ ವಿದ್ಯುತ್ ಅನ್ನು ಅಂದಾಜು ಮಾಡಿ ಅದಕ್ಕೆ ಹೆಚ್ಚುವರಿ ಶೇ. 10ರಷ್ಟನ್ನು ಸೇರ್ಪಡೆಗೊಳಿಸಿ ಗೃಹಜ್ಯೋತಿಯಡಿ ಅರ್ಹತಾ ಮೊತ್ತವನ್ನು ನಿರ್ಧರಿಸಲಾಗಿತ್ತು.

ಗ್ರಾಹಕರು ಒಂದು ವೇಳೆ ಅರ್ಹತೆಯ ಯೂನಿಟ್‌ಗಳನ್ನು ನೀಡಿ, ಬಳಸಿದ ಹೆಚ್ಚುವರಿ ವಿದ್ಯುತ್‌ಗೆ ಶುಲ್ಕ ಪಾವತಿಸ ಬೇಕಾಗುತ್ತಿತ್ತು. ಗೃಹಜ್ಯೋತಿ ಮೂಲ ನಿಯಮದ ಪ್ರಕಾರ ಗರಿಷ್ಠ 200 ಯೂನಿಟ್‌ಗಳ ಬಳಕೆಯನ್ನು ದಾಟಿದರೆ ಯೋಜನೆಯ ಸೌಲಭ್ಯ ಅನ್ವಯವಾಗುವುದಿಲ್ಲ. ಆಗ ಗ್ರಾಹಕರು ಸಂಪೂರ್ಣವಾದ ವಿದ್ಯುತ್ ಶುಲ್ಕವನ್ನು ಪಾವತಿಸಬೇಕಾಗುತ್ತದೆ.

ರಾಜ್ಯ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ಎರಡು ಬಾರಿ ವಿದ್ಯುತ್ ದರವನ್ನು ಪರಿಷ್ಕರಣೆ ಮಾಡಿದೆ. ದುಬಾರಿ ಶುಲ್ಕದಿಂದಾಗಿ ವಾಣಿಜ್ಯ ಬಳಕೆಯ ಗ್ರಾಹಕರು ಈಗಾಲೇ ಕಣ್ಣು, ಬಾಯಿ ಬಿಡುವಂತಾಗಿದೆ. ಗೃಹಜ್ಯೋತಿಯಡಿ ಉಚಿತ ವಿದ್ಯುತ್ ದೊರೆಯುತ್ತಿರುವುದರಿಂದಾಗಿ ಗೃಹ ಬಳಕೆಯ ಗ್ರಾಹಕರಿಗೆ ವಿದ್ಯುತ್ ಬಳಕೆಯ ಬಿಸಿ ತಟ್ಟಿರಲಿಲ್ಲ. ಈಗ ಅಡುಗೆ ಅನಿಲದ ಸಿಲಿಂಡರ್‌ಗಳ ಕೊರತೆಯಿಂದಾಗಿ ವಿದ್ಯುತ್‌ವಲಯಗಳ ಬಳಕೆ ಮತ್ತು ಬೇಸಿಗೆಯ ಪರಿಣಾಮದಿಂದಾಗಿ ಅರ್ಹತಾ ಯೂನಿಟ್‌ಗಳನಷ್ಟೇ ಅಲ್ಲದೇ, ಗೃಹ ಜ್ಯೋತಿಯ ಮೂಲ ನಿಯಮದ ಗರಿಷ್ಠ ಸಮಿತಿ 200 ಯೂನಿಟ್‌ಗಳನ್ನು ದಾಟಿ ವಿದ್ಯುತ್ ಬಳಕೆಯಾಗುವ ಸಾಧ್ಯತೆ ಇದೆ.

ಆ ವೇಳೆ ಗರಿಷ್ಠ 2000 ರೂ.ಗಳಷ್ಟು ವಿದ್ಯುತ್ ಬಿಲ್ ಪಾವತಿಸುವ ಸ್ಥಿತಿ ಮಧ್ಯಮ ವರ್ಗದ ಗ್ರಾಹಕರಿಗೆ ಬಂದೊದಗಲಿದೆ. ಆ ವೇಳೆ ಮತ್ತೆ ರಾಜ್ಯ ಸರ್ಕಾರಕ್ಕೆ ಜನ ಹಿಡಿಶಾಪ ಹಾಕುವ ಸಾಧ್ಯತೆಗಳಿವೆ. ಅಡುಗೆ ಅನಿಲ ಸಿಲಿಂಡರ್‌ಗಳ ಪೂರೈಕೆಗೆ ಯುದ್ಧವೇ ಕಾರಣ. ಜಾಗತಿಕ ಸಮಸ್ಯೆಯೆಂದು ಸಮಾಧಾನ ಪಡಿಸಿಕೊಳ್ಳುತ್ತಿರುವ ನಾಗರಿಕರು ಯಾವ ಸಂದರ್ಭದಲ್ಲೂ ಕೇಂದ್ರ ಸರ್ಕಾರವನ್ನು ಟೀಕಿಸುವ ಗೋಜಿಗೆ ಹೋಗಿಲ್ಲ. ಆದರೆ ವಿದ್ಯುತ್ ಶುಲ್ಕ ಪಾವತಿಸುವ ವೇಳೆಯಲ್ಲಿ ಸಿದ್ದರಾಮಯ್ಯ ಸರ್ಕಾರವನ್ನು ಟೀಕೆಗೊಳಪಡಿಸುವ ಸಾಧ್ಯತೆಗಳಿವೆ.

### ಕಾರ್ಗಲ್‌ನಲ್ಲಿ 2 ದಿನಗಳಿಂದ ಜನರಲ್ಲಿ ವಾಂತಿ-ಭೇದಿ: ಮಹಿಳೆ ಸಾವು

## ಜಾತ್ರೆಯಲ್ಲಿ ತಿಂದ ಐಸ್‌ಕ್ರೀಂ, ಆಲೂಗಡ್ಡೆ ಟ್ವಿಸ್ಟರ್ ಕಾರಣ ಎಂದು ಅಧಿಕಾರಿಗಳ ಶಂಕೆ

**ಶಿವಮೊಗ್ಗ, ಮಾ.13:** ಸಾಗರ ತಾಲೂಕಿನ ಕಾರ್ಗಲ್‌ನಲ್ಲಿ ಕಳೆದ ಎರಡು ದಿನಗಳಿಂದ ವಾಂತಿ ಭೇದಿ ಪ್ರಕರಣ ಕಾಣಿಸಿಕೊಂಡಿದ್ದು, ಓರ್ವ ಮಹಿಳೆ ಮೃತಪಟ್ಟಿದ್ದಾರೆ.

ಜಯಲಕ್ಷ್ಮೀ (65) ಮೃತ ಮಹಿಳೆ. ಕಾರ್ಗಲ್‌ನ ಚೌಡೇಶ್ವರಿ ದೇವಿಯ ಜಾತ್ರೆ ಕಳೆದ ಮೂರು ದಿನಗಳಿಂದ ನಡೆಯುತ್ತಿದೆ. ಇಲ್ಲಿಗೆ ಬಂದಿದ್ದ ಕೆಲ ಭಕ್ತರಿಗೆ ವಾಂತಿ ಭೇದಿ ಕಾಣಿಸಿಕೊಂಡಿದೆ. ಇದರಲ್ಲಿ ಜಾತ್ರೆಯಲ್ಲಿ ಮಾರಾಟಕ್ಕಿದ್ದ ಐಸ್‌ಕ್ರೀಂ ಹಾಗೂ ಆಲೂಗೆಡ್ಡೆ ಟ್ವಿಸ್ಟರ್ ತಿಂದು ಅಸ್ವಸ್ಥರಾಗಿರುವವರು ಹೆಚ್ಚು. ಈ ಬಗ್ಗೆ ಅಧಿಕಾರಿಗಳು ಕೂಡ ಅನುಮಾನ ವ್ಯಕ್ತಪಡಿಸಿದ್ದಾರೆ.

ಸದ್ಯಕ್ಕೆ ಅಲ್ಲಿನ ಎಲ್ಲ ರೀತಿಯ ನೀರುಗಳನ್ನು ಪರೀಕ್ಷಿಸಲಾಗಿದೆ. ಆದರೆ ನೀರಿನಲ್ಲಿ ಯಾವುದೇ ಅಪಾಯ ಕಂಡು ಬಂದಿಲ್ಲ. ಇದರಿಂದ ಐಸ್ ಕ್ರೀಂ ಹಾಗೂ ಆಲೂ ಟ್ವಿಸ್ಟರ್ ಪರೀಕ್ಷೆಗಾಗಿ ಹುಡುಕಾಟ ನಡೆಸಲಾಗುತ್ತಿದೆ.

ಸದ್ಯಕ್ಕೆ ಕಾರ್ಗಲ್ ಆಸ್ಪತ್ರೆಯಲ್ಲಿ ಯಾರೂ ಚಿಕಿತ್ಸೆ ಪಡೆಯುತ್ತಿಲ್ಲ.



ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದವರು ಹುಷಾರಾಗಿದ್ದು, ಅವರು ಮನೆಗೆ ವಾಪಸ್ ಆಗಲಿದ್ದಾರೆ ಎಂದು ಕಾರ್ಗಲ್ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆಗೆ ತೆರಳಿರುವ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ನಾಗರಾಜ್ ನಾಯ್ಕ್ ಈಟಿವಿ ಭಾರತಕ್ಕೆ ದೂರವಾಣಿಯಲ್ಲಿ ತಿಳಿಸಿದ್ದಾರೆ.

ನೂರಕ್ಕೂ ಹೆಚ್ಚು ಜನರಲ್ಲಿ ವಾಂತಿ – ಭೇದಿ ಕಾಣಿಸಿಕೊಂಡಿತ್ತು. ಇದರಲ್ಲಿ ಮೃತ ಮಹಿಳೆ ಹಾಗೂ ಐವರನ್ನು ಬಿಟ್ಟರೆ ಉಳಿದವರು ಚಿಕಿತ್ಸೆ ಪಡೆದು ವಾಪಸ್ ಆಗಿದ್ದಾರೆ. ಮೃತ ಮಹಿಳೆಯನ್ನು ಚಿಕಿತ್ಸೆಗಾಗಿ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ರವಾನೆ ಮಾಡಲಾಗಿತ್ತು. ಆದರೆ, ಚಿಕಿತ್ಸೆ ಸ್ಪಂದಿಸದೆ ಜಯಲಕ್ಷ್ಮೀ ಅವರು ಸಾವನ್ನಪ್ಪಿದ್ದಾರೆ.

ಕಳೆದ ಎರಡು ದಿನಗಳಿಂದ ಕಾರ್ಗಲ್ ವ್ಯಾಪ್ತಿಯಲ್ಲಿ ವಾಂತಿ ಭೇದಿ ಪ್ರಕರಣಗಳು ಕಾಣಿಸಿಕೊಂಡಿದ್ದವು. ಸುಮಾರು 100 ಜನರಿಗೆ ವಾಂತಿ ಭೇದಿಯಾಗಿತ್ತು. ಐದು ಜನ ಒಳರೋಗಿಗಳಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ದುರದೃಷ್ಟವಶಾತ್ ಒಬ್ಬರು ನಿಧನ ಹೊಂದಿದ್ದಾರೆ. ಸಾವಿಗೆ ನಿಖರ ಕಾರಣ ತಿಳಿದು ಬಂದಿಲ್ಲ. ಈ ಕುರಿತು ವರದಿಗಾಗಿ ಕಾಯುತ್ತಿದ್ದೇವೆ. ನೀರಿನ ಗುಣಮಟ್ಟ ಪರೀಕ್ಷೆ ಮಾಡಲಾಗಿದೆ.

ನೀರಿನಲ್ಲಿ ಯಾವುದೇ ನ್ಯೂನತೆ ಕಂಡು ಬಂದಿಲ್ಲ. ಚೌಡೇಶ್ವರಿ ಜಾತ್ರೆ ಆಗಿತ್ತು. ಪ್ರಾಥಮಿಕ ಮಾಹಿತಿ ಪ್ರಕಾರ ಐಸ್ ಕ್ರೀಂ ಮತ್ತು ಆಲೂ ಟ್ವಿಸ್ಟರ್ ಸೇವಿಸಿದವರಲ್ಲಿ ವಾಂತಿ ಭೇದಿ ಕಾಣಿಸಿಕೊಂಡಿದೆ. ಅದರ ಪರೀಕ್ಷೆ ನಡೆಸಲಾಗುತ್ತಿದೆ ಮುನ್ನೆಚ್ಚರಿಕೆ ಕ್ರಮವಾಗಿ ನೀರನ್ನು ಕಾಯಿಸಿ, ಆರಸಿ ಕುಡಿಯಬೇಕು ಎಂದು ತಿಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ತಿಳಿಸಿದ್ದಾರೆ.

### ಬೀದರ್‌ನಲ್ಲಿ ಅಂಬೇಡ್ಕರ್ ಅಂತಾರಾಷ್ಟ್ರೀಯ ಸಮ್ಮೇಳನ

## ಸಮ್ಮೇಳನ ಆಯೋಜನೆ: ಏಕಪಕ್ಷೀಯ ನಿರ್ಧಾರಕ್ಕೆ ಖಂಡನೆ

**ಬೀದರ್, ಮಾ. 13:** ಡಾ. ಬಿ.ಆರ್.ಅಂಬೇಡ್ಕರ್ ಅವರ ವಿಚಾರಗಳ ಕುರಿತು ನಡೆಸಲು ಉದ್ದೇಶಿಸಿರುವ ಅಂತರರಾಷ್ಟ್ರೀಯ ಮಟ್ಟದ ಸಮ್ಮೇಳನದ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಜಿಲ್ಲಾಧಿಕಾರಿಗಳು ಏಕಪಕ್ಷೀಯ ವಾಗಿ ನಿರ್ಧಾರ ಕೈಗೊಂಡಿರುವುದನ್ನು ಬಹು ಜನ ಸಮಾಜ ಪಕ್ಷದ (ಬಿಎಸ್‌ಪಿ) ಜಿಲ್ಲಾಧ್ಯಕ್ಷ ಕಪಿಲ ಗೋಡಬೋಲೆ ತೀವ್ರವಾಗಿ ಖಂಡಿಸಿದ್ದಾರೆ.




ಸುದ್ದಿಗಾರರೊಂದಿಗೆ, ಸರ್ಕಾರದ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾರತದ ಪ್ರಸ್ತುತ ಸವಾಲುಗಳು, ಚಿಂತನೆಗಳು ಮತ್ತು ಸಮಕಾಲೀನ ಪರಿಹಾರಗಳು ಎಂಬ ವಿಷಯದ ಕುರಿತು ಅಂತರರಾಷ್ಟ್ರೀಯ ಮಟ್ಟದ ಸಮ್ಮೇಳನ ನಡೆಸಲು ನಿರ್ಧರಿಸಲಾಗಿತ್ತು.

ಈ ಕುರಿತು ಫೆಬ್ರವರಿ 16ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ನಡೆದಿತ್ತು. ಸಭೆಯಲ್ಲಿ ಸಮ್ಮೇಳನವನ್ನು ಅಚ್ಚುಕಟ್ಟಾಗಿ ನಡೆಸಲು ಜಿಲ್ಲೆಯ ದಲಿತ ಮುಖಂಡರು, ಚಿಂತಕರು, ಬುದ್ಧಿಜೀವಿಗಳು ಹಾಗೂ ಸಮಾಜ ಸೇವಕರನ್ನು ಒಳಗೊಂಡ ಮತ್ತೊಂದು ಸಭೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಲಾಗಿತ್ತು. ಅಲ್ಲದೆ ಸಮ್ಮೇಳನವನ್ನು ಬೀದರ ನಗರದ ನೆಹರು ಕ್ರೀಡಾಂಗಣದಲ್ಲಿ ನಡೆಸುವ ಬಗ್ಗೆ ಕೂಡ ಚರ್ಚಿಸಲಾಗಿತ್ತು.

ಆದರೆ ಇದೀಗ ಮತ್ತೊಂದು ಸಭೆ ನಡೆಸದೆ ಹಾಗೂ ಸಾರ್ವಜನಿಕರ ಗಮನಕ್ಕೂ ತರದೇ ಮಾರ್ಚ್ 14 ಮತ್ತು 15ರಂದು ಎರಡು ದಿನಗಳ ಕಾಲ ಚೆನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಸಮ್ಮೇಳನ ನಡೆಸಲು ತೀರ್ಮಾನಿಸಿರುವುದು ಪ್ರಶ್ನೆಗೆ ಕಾರಣವಾಗಿದೆ ಎಂದು ಅವರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಭಾರತ ಸಂವಿಧಾನದ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಹೆಸರಿನಲ್ಲಿ ನಡೆಯುವಂತಹ ಅಂತರರಾಷ್ಟ್ರೀಯ ಮಟ್ಟದ ಸಮ್ಮೇಳನದ ವಿಷಯದಲ್ಲಿ ಈ ರೀತಿಯ ತುರ್ತು ಮತ್ತು ಏಕಪಕ್ಷೀಯ ನಿರ್ಧಾರ ಕೈಗೊಳ್ಳುವುದು ಸರಿಯಲ್ಲ. ದಲಿತ ಸಮುದಾಯ ಹಾಗೂ ಅಂಬೇಡ್ಕರ್ ವಿಚಾರಗಳ ಬಗ್ಗೆ ಜಿಲ್ಲೆಯಲ್ಲಿ ಹಲವಾರು ಬಾರಿ ಇದೇ ರೀತಿಯ ಏಕಪಕ್ಷೀಯ ನಿರ್ಧಾರಗಳು ತೆಗೆದುಕೊಳ್ಳುತ್ತಿರುವುದು ದುರದೃಷ್ಟಕರವಾಗಿದೆ ಎಂದರು.

ಡಾ.ಅಂಬೇಡ್ಕರ್ ಅವರ ವಿಚಾರಗಳನ್ನು ರಾಜ್ಯ, ದೇಶ ಹಾಗೂ ವಿಶ್ವಮಟ್ಟಕ್ಕೆ ತಲುಪಿಸುವ ಉದ್ದೇಶ ದಿಂದ ಬೃಹತ್ ಮಟ್ಟದಲ್ಲಿ ಮತ್ತು ಬಹಿರಂಗವಾಗಿ ಸಮ್ಮೇಳನ ನಡೆಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಶೀಘ್ರದಲ್ಲೇ ಜಿಲ್ಲೆಯ ದಲಿತ ಮುಖಂಡರು, ಚಿಂತಕರು, ಬುದ್ಧಿಜೀವಿಗಳು ಮತ್ತು ಸಮಾಜಸೇವಕರ ಸಮ್ಮುಖದಲ್ಲಿ ಮತ್ತೊಂದು ಸಭೆ ಕರೆದು ಸಮ್ಮೇಳನದ ಕುರಿತು ಸಮಗ್ರ ತೀರ್ಮಾನ ಕೈಗೊಳ್ಳಬೇಕು. ಇಲ್ಲವಾದಲ್ಲಿ ಈ ವಿಚಾರವನ್ನು ಜನತೆಗೆ ತಿಳಿಸುವ ಕಾರ್ಯವನ್ನು ಹಳ್ಳಿ ಹಳ್ಳಿಗೂ ಹೋಗಿ ಮಾಡುವುದಾಗಿ ಅವರು ಎಚ್ಚರಿಸಿದ್ದಾರೆ.

## ದೇಶದ ಅಭಿವೃದ್ಧಿಗೆ ತೆರಿಗೆ ಹಣ ಬಳಕೆ: ಅವ್ವಾರು ಮಂಜುನಾಥ್

**ಬಳ್ಳಾರಿ, ಮಾ. 13:** ಸರ್ಕಾರ ಸಂಗ್ರಹ ಮಾಡುವ ತೆರಿಗೆಯು ದೇಶದ ಸರ್ವಾಂಗೀಣ ಅಭಿವೃದ್ಧಿಗಾಗಿ ಬಳಕೆ ಆಗಲಿದೆ ಎಂದು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಅವ್ವಾರು ಮಂಜುನಾಥ ತಿಳಿಸಿದ್ದಾರೆ.




ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನೇತೃತ್ವದಲ್ಲಿ ಭಾರತ ಸರ್ಕಾರದ ಆದಾಯ ತೆರಿಗೆ ಇಲಾಖೆಯ ಬಳ್ಳಾರಿ ಕಚೇರಿಯು ವ್ಯಾಪಾರಿಗಳು ಮತ್ತು ವಾಣಿಜ್ಯೋದ್ಯಮಿಗಳ ಜೊತೆ ಶುಕ್ರವಾರ ನಡೆಸಿದ 'ಔಟ್ ರೀಚ್' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲಾ ರೀತಿಯ ತೆರಿಗೆಗಳು ದೇಶದ ಆರ್ಥಿಕ ಸಂಪನ್ಮೂಲಗಳು. ದೇಶದ ಆರ್ಥಿಕ ಭವಿಷ್ಯವನ್ನು ನಿರ್ಧರಿಸುವಲ್ಲಿ – ಅಭಿವೃದ್ಧಿ ಯೋಜನೆಗಳನ್ನು ರೂಪಿಸುವಲ್ಲಿ ತೆರಿಗೆಯನ್ನು ದೇಶದ ಭದ್ರತೆ, ಅಭಿವೃದ್ಧಿ, ವಿಜ್ಞಾನ, ಆರೋಗ್ಯ, ಶಿಕ್ಷಣ, ಆಡಳಿತ, ರಸ್ತೆ, ಕೃಷಿ, ಕೈಗಾರಿಕೋದ್ಯಮ, ಮೂಲಭೂತ ಸೌಲಭ್ಯಗಳು ಹೀಗೆ ಹತ್ತಾರು ಕ್ಷೇತ್ರಗಳಲ್ಲಿ ವಿನಿಯೋಗ ಆಗುತ್ತಿವೆ.

ಆದರೆ, ಆದಾಯ ತೆರಿಗೆಯ ಹೊಸ ಕಾಯ್ದೆಗಳು, ನೀತಿಗಳು – ನಿಯಮಗಳು ಮತ್ತು ಷರತ್ತುಗಳ ಕುರಿತು ಹೆಚ್ಚಿನ ಜ್ಞಾನದ ಅಗತ್ಯವಿದೆ. ಈ ಕ್ಷೇತ್ರದ ಪರಿಣಿತರ ಜೊತೆಯಲ್ಲಿ ಚರ್ಚೆ ನಡೆಸಿ ಆದಾಯ ತೆರಿಗೆಯ ಸಮಗ್ರ ಮಾಹಿತಿ ಪಡೆದು, ಸಮಸ್ಯೆಗಳಿಗೆ ಪರಿಹಾರ ಪಡೆದಲ್ಲಿ ನೆಮ್ಮದಿ ಸಿಗಲಿದೆ ಎಂದರು.

ಬಳ್ಳಾರಿಯ ಆದಾಯ ತೆರಿಗೆ ಇಲಾಖೆಯ ಡೆಪ್ಯುಟಿ ಕಮೀಷನರ್ ಶಿವಶಂಕರ್ ಅವರು, ಆದಾಯ ತೆರಿಗೆ ಪಾವತಿ ಇಲಾಖೆಯಲ್ಲಿ ಆರ್ಟಿಫಿಷಿಯಲ್ ಇಂಟಲಿಜೆನ್ಸಿ ಬಳಕೆ ಮಾಡಲಾಗುತ್ತಿದೆ. ತೆರಿಗೆ ಪಾವತಿಯ ಕುರಿತು ಎಲೆಕ್ಟ್ರಾನಿಕ್ ಸಂವಹನ (ಇ–ಮೇಲ್) ಬಳಕೆ ಆಗುತ್ತಿದೆ. ತೆರಿಗೆ ಪಾವತಿದಾರರು ಎಚ್ಚೆತ್ತುಕೊಳ್ಳ ಬೇಕು ಎಂದು ಹೇಳಿದರು.

### ಮಾನವ ಅಭಿವೃದ್ಧಿ ವರದಿ-2025 ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ-2031

## ವರದಿಗಳ ತಯಾರಿಕೆಗೆ ನಿಖರ – ಸಮಗ್ರ ಮಾಹಿತಿ ಒದಗಿಸಿ: ಸಿಇಓ ರಿಷಿ ಆನಂದ

**ವಿಜಯಪುರ,ಮಾ.13–** ಜಿಲ್ಲಾ ಮಾನವ ಅಭಿವೃದ್ಧಿ ವರದಿ–2025 ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ–2031 ವರದಿ ತಯಾರಿಕೆಗೆ ನಿಖರವಾದ ಮತ್ತು ಸ್ಪಷ್ಟವಾದ ದತ್ತಾಂಶಗಳಿಂದ ಕೂಡಿದ ನಿಗಧಿತ ನಮೂನೆಯಲ್ಲಿ ದೃಢೀಕರಿಸಿ, ವಿಳಂಬ ಮಾಡದೇ ನಿಗದಿತ ಕಾಲಾವಧಿಯೊಳಗೆ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾದ ರಿಷಿ ಆನಂದ ಅವರು ಸೂಚಿಸಿದರು.



ಮಾರ್ಚ್ 13 ರಂದು ಜಿಲ್ಲಾ ಪಂಚಾಯತಿಯ ಸಭಂಗಣದಲ್ಲಿ ನಡೆದ ಜಿಲ್ಲಾ ಮಾನವ ಅಭಿವೃದ್ಧಿ ವರದಿ–2025 ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ–2031 ವರದಿ ತಯಾರಿಸುವ ಕುರಿತು ವಲಯವಾರು ಉಪಸಮಿತಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಮಾನವ ಅಭಿವೃದ್ಧಿ ವರದಿ–2025ಕ್ಕೆ ಸಂಬಂಧಸಿದಂತೆ 126 ಸೂಚ್ಯಂಕಗಳ ಪೈಕಿ 47 ಸೂಚ್ಯಂಕಗಳ ಮಾಹಿತಿಯನ್ನು ಸಲ್ಲಿಸಿದ್ದು, ಬಾಕಿ 79 ಸೂಚ್ಯಂಕಗಳ ಮಾಹಿತಿಯನ್ನು ಸಲ್ಲಿಸಲು ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ–2031ಕ್ಕೆ ಸಂಬಂಧಸಿದಂತೆ 176 ಸೂಚ್ಯಂಕಗಳ ಪೈಕಿ 69 ಸೂಚ್ಯಂಕಗಳ ಮಾಹಿತಿಯನ್ನು ಸಲ್ಲಿಸಿದ್ದು, ಬಾಕಿ 107 ಸೂಚ್ಯಂಕಗಳ ಮಾಹಿತಿಯನ್ನು ಸಂಬಂಧಿಸಿದ ಜಿಲ್ಲಾಮಟ್ಟದ ಅಧಿಕಾರಿಗಳು ನಿಖರ ಮತ್ತು ಸ್ಪಷ್ಟ ದತ್ತಾಂಶಗಳುಳ್ಳ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿಗಳಾದ ಸಿ. ಬಿ. ಕುಂಬಾರ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾ ಅಧಿಕಾರಿಗಳಾದ ನಾಗಭೂಷಣ ಮಾಡಗಿ, ತಾಂತ್ರಿಕ ಬೆಂಬಲ ಸಂಸ್ಥೆಯಾದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವ ವಿದ್ಯಾಲಯದ ಸಂಯೋಜಕರಾದ ಪ್ರೊ. ಡಿ. ಎಮ್. ಮದರಿ, ಜಿಲ್ಲಾ ಪಂಚಾಯಿತಿ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿ ಇದ್ದರು.

## ಎಲ್ಲ ಧರ್ಮಗಳ ಅಂತಿಮ ಗುರಿ ಪರಮ ಸತ್ಯ: ಜ್ಯೋತಿರ್ಮಯಾನಂದ ಮಹಾರಾಜ್

**ಬೀದರ್, ಮಾ.13:** ರಾಮಕೃಷ್ಣರು ವಿವಿಧ ಧರ್ಮಗಳನ್ನು ಸ್ವಯಂ ಅನುಭವದ ಅವರ ಜೀವನವೆ ಸರ್ವಧರ್ಮ ಸಮಭಾವಕ್ಕೆ ಜೀವಂತ ಸಾಕ್ಷಿಯಾಗಿದ್ದು, ಎಲ್ಲ ಮಾರ್ಗಗಳೂ ಅಂತಿಮವಾಗಿ ಪರಮ ಸತ್ಯದೆಡೆಗೆ ಕೊಂಡೊಯ್ಯುತ್ತವೆ ಎಂದು ಹೇಳಿದ್ದರು ಎಂದು ರಾಮಕೃಷ್ಣ ವಿವೇಕಾನಂದ ಆಶ್ರಮದ ಸ್ವಾಮಿ ಜ್ಯೋತಿ ರ್ಮಯಾನಂದ ಮಹಾರಾಜ್ ಹೇಳಿದರು.



ಇಲ್ಲಿನ ಶಿವನಗರದ ರಾಮಕೃಷ್ಣ ಆಶ್ರಮದ ಗೋಶಾಲೆ ಪರಿಸರದಲ್ಲಿ ರಾಮಕೃಷ್ಣರ ಜಯಂತಿ ಉತ್ಸವ ಮತ್ತು ಸುಸಜ್ಜಿತ ಸ್ವಾಮಿ ಬ್ರಹ್ಮಾನಂದ ಭವನದ ಉದ್ಘಾಟನೆ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದ ಆಶ್ರಮದ ಅಧ್ಯಕ್ಷರೂ ಆದ ಸ್ವಾಮಿ ಜ್ಯೋತಿರ್ಮಯಾನಂದ ಮಹಾರಾಜ, ರಾಮಕೃಷ್ಣ ಪರಮಹಂಸರ ಜೀವನವೇ ಸರ್ವಧರ್ಮ ಸಮಭಾವಕ್ಕೆ ಜೀವಂತ ಸಾಕ್ಷಿ. ಯಾವ ಧರ್ಮವಿದ್ದರೂ ಅದರ ಅಂತಿಮ ಗುರಿ ಪರಮ ಸತ್ಯದ ಅನುಭವವಾಗಿದೆ. ಧರ್ಮಗಳ ನಡುವೆ ವೈಮನಸ್ಯವಲ್ಲ, ವೈವಿಧ್ಯತೆಯಲ್ಲಿ ಏಕತೆ ಕಾಣುವ ಮನೋಭಾವ ಬೆಳೆಸಬೇಕಿದೆ ಎಂದು ತಿಳಿಸಿದರು.

ಧರ್ಮದ ಹೆಸರಿನಲ್ಲಿ ಇಂದು ಸಮಾಜದಲ್ಲಿ ವೈಷಮ್ಯ ಹೆಚ್ಚುತ್ತಿರುವುದು ಕಳವಳಕಾರಿ ಸಂಗತಿ. ಈ ಸ್ಥಿತಿ ತಿಳಿಗೊಳಿಸಿ ಸಮಾಜದಲ್ಲಿ ಪರಸ್ಪರ ಗೌರವ, ಸಹಿಷ್ಣುತೆ, ಶಾಂತಿ ಸ್ಥಾಪನೆಗೆ ಭಗವಾನ್ ರಾಮಕೃಷ್ಣ ಪರಮಹಂಸರ ಸರ್ವಧರ್ಮ ಸಮಭಾವ, ಎಲ್ಲ ಮಾರ್ಗಗಳು ಪರಮಸತ್ಯದ ಕಡೆಗೆ ಎಂಬ ಸಂದೇಶ ಅತ್ಯಂತ ಪ್ರಸ್ತುತವಾಗಿದೆ ಎಂದರು.

ರಾಮಕೃಷ್ಣರ ಚಿಂತನೆಗಳಲ್ಲಿ ಆಧ್ಯಾತ್ಮಿಕತೆ ಮತ್ತು ವೈಜ್ಞಾನಿಕ ಮನೋಭಾವದ ಸಮನ್ವಯ ಕಾಣಬಹುದು. ಅನುಭವವೇ ಪರಮ ಪ್ರಮಾಣ ಎಂಬ ಅವರ ನಿಲುವು ಇಂದಿನ ವಿಜ್ಞಾನ ಯುಗಕ್ಕೂ ಅನ್ವಯಿಸುತ್ತದೆ. ಆತ್ಮಜ್ಞಾನ ಮತ್ತು ವೈಜ್ಞಾನಿಕ ಮನೋಭಾವ ಪರಸ್ಪರ ಪೂರಕವಾಗಿವೆ. ಹಸಿದವನಿಗೆ ಅನ್ನ, ಬಡವನಿಗೆ ನೆರವು, ಅಶಕ್ತನಿಗೆ ಆಧಾರ ನೀಡುವುದೇ ನಿಜವಾದ ಪೂಜೆ ಎಂಬ ಅವರ ಮೌಲಿಕ ವಿಚಾರ ಸಮಾಜಕ್ಕೆ ಬೆಳಕು ನೀಡುವ ಶಕ್ತಿಯಾಗಿವೆ ಎಂದು ಪ್ರತಿಪಾದಿಸಿದರು.

> **ರಾಮಕೃಷ್ಣರು ವ್ಯಕ್ತಿಯ ಒಳ ಮನಸ್ಸಿನ ಪರಿವರ್ತನೆ ತಿಳಿಸಿದ್ದರು. ವ್ಯಕ್ತಿ ಬದಲಾದಾಗ ಸಮಾಜ ಸ್ವಯಂ ಬದಲಾಗುತ್ತದೆ ಎಂಬ ಅವರ ತತ್ವ ಸಾರ್ವಕಾಲಿಕ ಸತ್ಯ.**
> –ಸ್ವಾಮಿ ಜ್ಯೋತಿರ್ಮಯಾನಂದ ಮಹಾರಾಜ, ಅಧ್ಯಕ್ಷ ರಾಮಕೃಷ್ಣ ಆಶ್ರಮ

### ಆನೇಕಲ್ ಠಾಣೆಯಲ್ಲಿ ರೌಡಿಶೀಟರ್‌ಗಳ ಪರೇಡ್

## ಸ್ವಸ್ಥ ಸಮಾಜಕ್ಕೆ ನೆರವಾಗುವಂತೆ ಬೆಂ.ಗ್ರಾಮಾಂತರ ಎಸ್‌ಪಿ ಚಂದ್ರಕಾಂತ್ ಕಿವಿಮಾತು


**ಆನೇಕಲ್, ಮಾ.13:** ಆನೇಕಲ್ ಪೊಲೀಸ್ ಉಪವಿಭಾಗದ ಸಕ್ರಿಯ ಲಭ್ಯ ರೌಡಿಗಳನ್ನು ಇಂದು ಆನೇಕಲ್ ಠಾಣೆಗೆ ಕರೆಸಿದ ಬೆಂಗಳೂರು ಗ್ರಾಮಾಂತರ ಎಸ್‌ಪಿ ಚಂದ್ರಕಾಂತ್ ಎಚ್ಚರಿಕೆ ನೀಡಿದ್ದಲ್ಲದೇ, ಮುಂದೆ ಆಗುವ ಅಪರಾಧ ಕೃತ್ಯಗಳ ಪೂರ್ವ ಯೋಜಿತ ಸಂಚುಗಳ ಬಗ್ಗೆ ಮಾಹಿತಿ ನೀಡಿ ಸ್ವಸ್ಥ ಸಮಾಜಕ್ಕೆ ನೆರವಾಗಿ, ಉತ್ತಮ ಬದುಕು ಕಟ್ಟಿಕೊಳ್ಳಿ ಎಂಬ ಕಿವಿಮಾತು ಹೇಳಿದರು.

ಪರೇಡ್‌ಗೆ ಆರು ಠಾಣೆಗಳ ವ್ಯಾಪ್ತಿಯ 564 ರೌಡಿಗಳಲ್ಲಿ 110 ಕ್ಕೂ ಕಡಿಮೆ ರೌಡಿಗಳು ಹಾಜರಿದ್ದರು. ಆನೇಕಲ್ ಪೊಲೀಸ್ ರೌಡಿ ಪರೇಡ್‌ಗೆ ಅತ್ಯಂತ ಕಡಿಮೆ ಹಾಜರಾತಿ ಕಂಡು ಸಾರ್ವಜನಿಕರು ಮೂಗುಮುರಿಯುತ್ತಿದ್ದಾರೆ.

ಇತ್ತೀಚೆಗಷ್ಟೇ ಆನೇಕಲ್ ಭಾಗದಲ್ಲಿ ತಲ್ಲಣಗೊಳಿಸಿದ್ದ ಹೊನ್ನ ಕಳಸಾಪುರ ಗೋಪಾಲ್ ಅಪಹರಣ ಹತ್ಯೆ ಕುರಿತು ಜನರು ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಿ ಆನೇಕಲ್ ಪೊಲೀಸ್ ಕಾನೂನು ಸುವ್ಯವಸ್ಥೆ ವಿರುದ್ಧ ಆಕ್ರೋಶ ಹೊರಹಾಕಿದ್ದರು.

ಮುಂದುವರೆದು ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಆಗಮಿಸಿ ಸಾಂತ್ವನ ಹೇಳಿದ್ದರು. ಜೊತೆಗೆ ಸದನದಲ್ಲಿ ಸಿಐಡಿಗೆ ಪ್ರಕರಣ ಹಸ್ತಾಂತರಿಸಲು ಪ್ರಸ್ತಾಪಿಸಿದ್ದರು. ಗೃಹ ಸಚಿವರ ಆದೇಶದಂತೆ ಪ್ರಕರಣವನ್ನು ಸಿಐಡಿ ಎಸ್ಪಿ ಡಾ.ಹರ್ಷ ಪ್ರಿಯಂವಧಾ ನೇತೃತ್ವದಲ್ಲಿ ತನಿಖೆಗೆ ಹಸ್ತಾಂತರಿಸ ಲಾಗಿದೆ.

ಈಗಾಗಲೇ ಜೈಲಿಂದ ಹೊರ ಬಂದಿರುವ ರೌಡಿಗಳನ್ನು ಪ್ರತ್ಯೇಕವಾಗಿ ಕರೆಸಿ ಎಚ್ಚರಿಕೆ ನೀಡಿ, ನೆರಳಿನಂತೆ ಹಿಂಬಾಲಿಸುತ್ತಿದ್ದೇವೆ. ಒಟ್ಟು 564 ರೌಡಿಗಳಲ್ಲಿ 327 ರೌಡಿಗಳು ಸ್ಥಳೀಯರಾಗಿದ್ದಾರೆ. ಉಳಿದ 236 ಮಂದಿ ಪರಕೀಯರಾಗಿದ್ದು, ಓರ್ವ ಬಡ್ಡಿಂಗ್ ರೌಡಿಯಾಗಿದ್ದಾನೆ. ಕೆಲವರಷ್ಟೇ ಇಲ್ಲಿ ಹಾಜರಾಗಿದ್ದಾರೆ. ಉಳಿದವರು ಬೇರೆ ಊರುಗಳಿಗೆ ತೆರಳಿದ್ದು, ಕೆಲವರು ತಂದೆ ತಾಯಿ ಪೋಷಣೆಯಲ್ಲಿದ್ದಾರೆ. ಪ್ರತ್ಯೇಕವಾಗಿ ರೌಡಿಗಳನ್ನು ಕರೆಸಿ ವಿಚಾರಿಸಿದಾಗ ಯಾರೂ ಹತ್ತನೇ ತರಗತಿವರೆಗೆ ಓದಿಲ್ಲ ಎಂದು ಹೇಳಿದರು.



ಕೆಲವರಂತೂ ಶಾಲಾ ಮೆಟ್ಟಿಲು ಹತ್ತಿಲ್ಲ. ಹೀಗಾಗಿ ಅಪರಾಧ ಪ್ರಕರಣಗಳಲ್ಲಿ ಸಿಲುಕಿಕೊಂಡಿದ್ದಾರೆ. ಅಂತಹವರಿಗೆ ಸಮಾಜದಲ್ಲಿ ಬದುಕುವ ಅವಕಾಶ ಕಲ್ಪಿಸಬೇಕಿದೆ. ಸನ್ನಡತೆ ಹಾಗು ಪೊಲೀಸರಿಗೆ ಸಮಾಜದಲ್ಲಿ ಆಗುವ ಕೃತ್ಯಗಳ ಕುರಿತು ಮೊದಲೇ ಮಾಹಿತಿ ನೀಡಿ ಉತ್ತಮವಾಗಿ ಮಕ್ಕಳಿಗಾಗಿಯಾದರೂ ವಿದ್ಯಾಭ್ಯಾಸ ಕೊಡಿಸಿ ಬದುಕಲಿ ಎಂಬ ಕಿವಿ ಮಾತುಗಳನ್ನು ತಿಳಿಸಿದ್ದೇವೆ ಎಂದರು.

ಕಾನೂನು ಸಲಹೆಗಳ ಕೊರತೆಯೂ ರೌಡಿಗಳಿಗಿದೆ. ಹೀಗಾಗಿ ಆಯಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಕ್ರಿಯರಲ್ಲದ ರೌಡಿಗಳ ಚಲನವಲನ ಗಮನಿಸಿ ಅವರನ್ನು ರೌಡಿ ಹಾಳೆಯಿಂದ ಕೈಬಿಡಲಾಗುವುದು. ಮಾತು ಕೇಳದಿದ್ದಲ್ಲಿ ಹಂತಹಂತವಾಗಿ ಕಾನೂನು ಬಿಗಿಯಲ್ಲಿ ಪಾಠ ಕಲಿಸುತ್ತೇವೆ. ಆಗಲೂ ಮಾತಿಗೆ ಬಗ್ಗದಿದ್ದರೆ, ಗೂಂಡಾ ಕಾಯಿದೆ ಜಡಿದು ಉತ್ತರಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

## ಖಮೇನಿ ಬೆಂಬಲಿಸುವವರನ್ನು ಕೂಡಲೇ ಬಂಧಿಸಿ: ಸಿದ್ದಲಿಂಗ ಸ್ವಾಮೀಜಿ

**ಕಲಬುರಗಿ, ಮಾ. 13:** ಮಧ್ಯ ಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದಲ್ಲಿ ಇರಾನ್ ಅಧ್ಯಕ್ಷ ಖಮೇನಿ ಹತ್ಯೆಯಾಗಿದ್ದಕ್ಕೆ ಕರ್ನಾಟಕದಲ್ಲಿ ಕೆಲವರು ಸಾರ್ವಜನಿಕವಾಗಿ ಕಂಬನಿ ಮಿಡಿದಿದ್ದು, ಖಮೇನಿ ಬೆಂಬಲಿಸುವವರನ್ನು ಕೂಡಲೇ ಜೈಲಿಗೆ ಹಾಕಬೇಕು ಎಂದು ಶಿವಸೇನಾ ಪಕ್ಷದ ರಾಜ್ಯಾಧ್ಯಕ್ಷರೂ ಆದ ಆಂದೋಲಾ ಕರುಣೇಶ್ವರ ಮಠದ ಶ್ರೀ ಸಿದ್ಧಲಿಂಗ ಸ್ವಾಮೀಜಿ ಆಗ್ರಹಿಸಿದರು.




ಜಿಲ್ಲೆಯ ಅಫಜಲಪುರದ ಶ್ರೀ ಸಿದ್ಧೇಶ್ವರ ಸ್ವಾಮೀಜಿ ಪ್ರವಚನ ಮೈದಾನದಲ್ಲಿ ಹಿಂದೂ ಸಂಘಟನೆ ಆಯೋಜಿಸಿದ ವಿರಾಟ ಹಿಂದೂ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಇರಾನ್ ಬಗ್ಗೆ ನಮಗೆ ದ್ವೇಷವಿಲ್ಲ. ಇರಾನ್ ಎಂದಿಗೂ ಭಾರತದ ಮಿತ್ರ ರಾಷ್ಟ್ರವಾಗಿರಲಿಲ್ಲ. ಶತ್ರುಕಾಟವೂ ಅಲ್ಲ. ಕೇವಲ ವ್ಯಾವಹಾರಿಕ ಸಂಬಂಧ ಹೊಂದಿತ್ತು. ಆದರೆ, ಅನೇಕ ಬಾರಿ ವಿಶ್ವಸಂಸ್ಥೆಯಲ್ಲಿ ಪಾಕಿಸ್ತಾನದ ಪರ ಮತ್ತು ಕಾಶ್ಮೀರ ವಿಷಯ ಮಾತನಾಡುವ ಮೂಲಕ ಭಾರತ ವಿರೋಧಿ ನಿಲುವನ್ನು ಪ್ರದರ್ಶಿಶಿತ್ತು.

ಇರಾನ್‌ನ ಖಮೇನಿ ಬಗ್ಗೆ ಅಲ್ಲಿನ ನಿವಾಸಿಗಳಿಗೇ ವಿರೋಧವಿದೆ. ಅನೇಕ ಹೋರಾಟಗಳು ನಡೆದಿದ್ದು, ಮಹಿಳೆಯರನ್ನು ಬಹಿರಂಗವಾಗಿ ನೇಣಿಗೇರಿಸಿದ ಖಮೇನಿ ಬೆಂಬಲಿಸಿ ಕಂಬನಿ ಸುರಿಸಿ ಬೆಂಬಲಿಸುವವರನ್ನು ಅಲ್ಲಿಗೇ ಕಳಿಸಬೇಕು. ಜಗತ್ತಿಗೆ ಸಂಸ್ಕಾರ, ಧರ್ಮದ ಹಾದಿಯನ್ನು ತಿಳಿಸಿದ ಸನಾತನ ಧರ್ಮ ನಾಶ ಮಾಡಲು ಪ್ರಯತ್ನಿಸಿದವರನ್ನು ಎಂದಿಗೂ ಕ್ಷಮಿಸಲು ಸಾಧ್ಯವಿಲ್ಲ. ಯಾರಿಂದಲೂ ನಾಶ ಮಾಡಲು ಸಾಧ್ಯವಿಲ್ಲ. ಸನಾತನ ಧರ್ಮಕ್ಕೆ ಎದುರಾಗಿ ಬರುವವರು ಬೂದಿಯಾಗುತ್ತಾರೆ. ಪ್ರತಿ ಗ್ರಾಮಗಳಲ್ಲಿ ಹಿಂದುಗಳು ಒಂದಾಗುತ್ತಿರುವುದು ನೋಡಿ ವಿರೋಧಿಗಳಿಗೆ ನಿದ್ದೆ ಹತ್ತುತ್ತಿಲ್ಲ ಎಂದರು.

ಮುಸ್ಲಿಮರಿಂದಲೇ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿದ್ದಾರೆಂದು ಖಮೇನಿಯನ್ನು ಬೆಂಬಲಿಸಿದವರನ್ನು ಬಂಧಿಸುತ್ತಿಲ್ಲ ಎಂದ ಅವರು, ಇದು ರಾಜ್ಯದ ದುರ್ದೈವ. ಹಿಂದೂ ಸಮ್ಮೇಳನವೆಂದರೆ ಉರಿದು ಕೊಳ್ಳುವವರು, ಇಫ್ತಿಯಾರ್ ಕೂಟಕ್ಕೆ ಮಾತ್ರ ಸಂತೋಷ ಪಡುತ್ತಾರೆ. ಕಲಬುರಗಿ ಕೆಲ ನಾಯಕರು ಚುನಾವಣೆ ಬಂದಾಗ ಮಾತ್ರ ನಾಮಪತ್ರದಲ್ಲಿ ಹಿಂದೂ ಎಂದು ಬರೆಯುತ್ತಾರೆ. ಹಿಂದೂ ಎಂದು ಬರೆದಿರುವ ಕಾರಣಕ್ಕೆ ಪಂಚಾಯತ್ ರಾಜ್ ಮತ್ತು ಐಟಿ–ಬಿಟಿ ಇಲಾಖೆ ಸಚಿವರಾಗಲು ಕಾರಣವಾಗಿದೆ ಎಂದು ಟೀಕಿಸಿದರು.

ಶ್ರೀ ಕೈಲಾಸಲಿಂಗ ಶಿವಾಚಾರ್ಯ, ಶ್ರೀ ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯ, ಶ್ರೀ ಗಂಗಾಧರ ಸ್ವಾಮೀಜಿ, ಶ್ರೀ ಮರುಳಾರಾಧ್ಯ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು. ಹಿಂದೂ ಸಮ್ಮೇಳನ ಆಯೋಜನಾ ಸಮಿತಿ ಅಧ್ಯ ಮಳೇಂದ್ರ ಡಾಂಗೆ, ಪ್ರಮುಖರಾದ ಸಂತೋಷ ದಾಮಾ, ಮಲ್ಲಿಕಾರ್ಜುನ ನಿಂಗದಳ್ಳಿ, ರಮೇಶ ನೀಲಗಾರ, ಗಂಗಾಧರ ಶ್ರೀಗಿರಿ, ಪ್ರಭಾವತಿ ಮೇತ್ರಿ, ಶರಣು ಶೆಟ್ಟಿ, ಶಂಕರ ಮ್ಯಾಕೇರಿ, ಮುರುಂದ್ರ ಮಸಳಿ, ಮೌನೇಶ ಪತ್ತಾರ್ ಇತರರಿದ್ದರು. ಪ್ರಮುಖ ಬೀದಿಗಳಲ್ಲಿ ಭಾರತ ಮಾತೆ, ಶರಣರು, ಸಂತರು ಹಾಗೂ ಸ್ವಾತಂತ್ರ ಹೋರಾಟಗಾರರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಿತು.

> **ಮುಸ್ಲಿಮರನ್ನು ಒಲೈಸುವುದಕ್ಕಾಗಿ ಕಾಂಗ್ರೆಸ್ ಪಕ್ಷ ವಂದೇ ಮಾತರಂ ನಿಷೇಧ ಮಾಡಿತ್ತು. ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಇದೀಗ ವಂದೇ ಮಾತರಂ ಕಡ್ಡಾಯ ಮಾಡಿದೆ. ಕೆಲವರು ಗೀತೆಯನ್ನು ವಿರೋಧಿಸುತ್ತಿದ್ದು, ಅವರೆಲ್ಲರನ್ನು ಪಾಕಿಸ್ತಾನಕ್ಕೆ ಕಳಿಸಬೇಕು.**
> **–ಶ್ರೀ ಸಿದ್ಧಲಿಂಗ ಸ್ವಾಮೀಜಿ, ರಾಜ್ಯಾಧ್ಯಕ್ಷ, ಶಿವಸೇನಾ.**

## ಕುಡಿಯುವ ನೀರಿನ ತೊಂದರೆಯಾಗದಂತೆ ಕ್ರಮ ವಹಿಸಿ-ಡಾ. ಆನಂದ ಕೆ.

**ವಿಜಯಪುರ,ಮಾ.13–** ಜಿಲ್ಲೆಯಲ್ಲಿ ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ತೊಂದರೆಯಾಗಂತೆ ಈಗಿನಿಂದಲೇ ಮುಂಜಾಗೃತ ಕ್ರಮಕ್ಕಾಗಿ ಯೋಜನೆ ರೂಪಿಸಿ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ತಿಳಿಸಿದರು.



ಜಿಲ್ಲೆಯಲ್ಲಿ ದುರಸ್ತಿ ಇರುವ ಬೋರವೆಲ್‌ಗಳನ್ನು ಪುನಶ್ಚೇತನಗೊಳಿಸಿ ನೀರಿನ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಜಿಲ್ಲೆಯಲ್ಲಿರುವ ದುರಸ್ತಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ತಿಗೊಳಿಸಿ ಕುಡಿಯುವ ನೀರು ಸಮರ್ಪಕವಾಗಿ ದೊರೆಯು ವಂತೆ ನೋಡಿಕೊಳ್ಳಬೇಕು. ಕುಡಿಯುವ ನೀರಿನ ಶುದ್ಧತೆ ಕುರಿತು ಮೇಲಿಂದ ಮೇಲೆ ಪರೀಕ್ಷಿಸಿ ಶುದ್ಧ ನೀರು ದೊರಕುವಂತ ಕ್ರಮ ವಹಿಸಬೇಕು. ಪ್ರಸಕ್ತ ವರ್ಷ ಏಪ್ರೀಲ್ 3ರ ನಂತರ ಜಿಲ್ಲೆಯಲ್ಲಿರುವ ಕುಡಿಯುವ ನೀರಿಗಾಗಿ ಕಾಲುವೆಗಳ ಮೂಲಕ ಕೆರೆಗಳಿಗೆ ನೀರನ್ನು ಹರಿ ಬಿಡಲಾಗುತ್ತಿದ್ದು, ಕುಡಿಯುವ ನೀರಿಗಾಗಿ ಬಳಸಲು ಮಾತ್ರ ಉಪಯೋಗಿಸುವಂತೆಯೂ ಹಾಗೂ ಯಾವುದೇ ಕಾರಣಕ್ಕೂ ಇತರ ಕಾರಣಕ್ಕೆ ಬಳಸದಂತೆ ಮುನ್ನೆಚ್ಚರಿಕೆ ವಹಿಸಬೇಕು. ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರಿಗಾಗಿ ಸಮಸ್ಯೆಯಾಗದಂತೆ ಕಾಲುವೆಗಳ ಮೇಲೆ ಪಂಪ್ ಸೆಟ್ ಇರದಂತೆ ನೋಡಿಕೊಳ್ಳಬೇಕು. ಹಗಲು ಮತ್ತು ರಾತ್ರಿ ವೇಳೆಯಲ್ಲಿ ನಿಗಾ ವಹಿಸುವಂತೆ ಅಗತ್ಯ ಸಿಬ್ಬಂದಿ ನೇಮಿಸಬೇಕು.ಅದರೊಂದಿಗೆ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿ ಸಹಕರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.


ಜಿಲ್ಲೆಯಲ್ಲಿರುವ ವಸತಿ ನಿಲಯ, ಅಂಗನ ವಾಡಿ, ಶಾಲಾ ಕಾಲೇಜುಗಳಲ್ಲಿ ನೀರಿನ ಅಭಾವವಾಗದಂತೆ ಈಗಿಂದಲೇ ಯೋಜನೆ ರೂಪಿಸಿ ಸಮರ್ಪಕವಾಗಿ ಶುದ್ಧ ಕುಡಿಯುವ ನೀರು ಸರಬರಾಜುವಿಗೆ ಕ್ರಮ ವಹಿಸಬೇಕು. ಕುಡಿಯುವ ನೀರಿನ ತೊಂದರೆಯಾಗದಂತೆ ಜಿಲ್ಲೆಯ ಎಲ್ಲ ತಾಲೂಕು ತಹಶೀಲ್ದಾರರು ಸಭೆ ಕರೆದು ಕ್ರಮ ವಹಿಸಬೇಕು. ಕುಡಿಯುವ ನೀರು ಸಂಗ್ರಹ ಘಟಕಗಳನ್ನು ಪ್ರತಿ 15 ದಿನಗಳಿಗೊಮ್ಮೆ ಸ್ವಚ್ಚಗೊಳಿಸಿ, ಶುದ್ಧ ಕುಡಿಯುವ ನೀರು ಸರಬರಾಜಾಗುವಂತೆ ನೋಡಿಕೊಳ್ಳಬೇಕು ಎಂದು ಕಟ್ಟುನಿಟ್ಟಾಗಿ ಸೂಚಿಸಿದರು.

ಏಪ್ರಿಲ್‌ನಿಂದ ಬಿಸಿಲಿನ ಪ್ರಖರತೆ ಹೆಚ್ಚಾಗುವ ಹಿನ್ನೆಲೆಯಲ್ಲಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ಸಾರ್ವಜನಿಕರ ಆರೋಗ್ಯದ ಹಿತ ದೃಷ್ಟಿಯಿಂದ ಸಾರ್ವಜನಿಕರಿಗೆ ಅಗತ್ಯ ತಿಳಿವಳಿಕೆ ಮೂಡಿಸಬೇಕು. ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಜನನಿಬಿಡ ಪ್ರದೇಶಗಳಲ್ಲಿ ಕರ ಪತ್ರ ವಿತರಣೆ, ಪ್ರಚಾರ ಫಲಕ, ಧ್ವನಿವರ್ಧಕಗಳನ್ನು ಬಳಸಿ, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಈ ಕುರಿತು ಈಗಾಗಲೇ ಯೋಜನೆ ರೂಪಿಸಿ ಕಾರ್ಯರೂಪಕ್ಕೆ ತರಬೇಕು. ಮಳೆಗಾಲದ ಸಮಯದಲ್ಲಿ ಸಾರ್ವಜನಿಕರು ಗುಡುಗು ಮತ್ತು ಸಿಡಿಲುಗಳಿಂದ ಸುರಕ್ಷಿತವಾಗಿ ರಕ್ಷಿಸಿಕೊಳ್ಳಲು ಹಾಗೂ ಪ್ರಾಣಾಪಾಯದಿಂದ ಪಾರಾಗಲು ಮಾರ್ಗ ಸೂಚಿಗಳ ಜಾಗೃತಿ ಮೂಡಿಸುವಂತೆ ಸಭೆಯಲ್ಲಿ ಅಧಿಕಾರಿಗಳಿಗೆ ತಿಳಿಸಿದರು.

ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳಾದ ರಿಷಿ ಆನಂದ್, ಜಿಲ್ಲೆಯ ಎಲ್ಲ ಪಟ್ಟಣ ಪಂಚಾಯತಿ ಗ್ರಾ,ಮ ಪಂಚಾಯತಿಗಳಲ್ಲಿ ಕುಡಿಯುವ ನೀರು ಹಾಗೂ ಬಿಸಿಲಿನ ಪ್ರಖರತೆಯಿಂದ ಸಾರ್ವಜನಿಕರ ಸುರಕ್ಷತೆಗಾಗಿ ಜಾಗೃತಿ ಕಾರ್ಯಕ್ರಮಗಳು ಮತ್ತು ಸಭೆಗಳನ್ನು ನಡೆಸಲಾಗಿದ್ದು, ಬೇಸಿಗೆ ಸಮಯದಲ್ಲಿ ನೀರಿನ ತೊಂದರೆಯಾಗದಂತೆ ಕ್ರಮ ವಹಿಸಲಾಗುತ್ತಿದೆ ಎಂದು ಅವರು ಹೇಳಿದರು.

## ಗ್ಯಾಸ್ ಸಿಲಿಂಡರ್ ಬುಕಿಂಗ್‌ನಲ್ಲಿ ತಾಂತ್ರಿಕ ವ್ಯತ್ಯಯ; ಆತಂಕ ಪಡುವ ಅಗತ್ಯವಿಲ್ಲ– ನಾಗೇಂದ್ರ ಪ್ರಸಾದ್.ಕೆ

**ಬಳ್ಳಾರಿ,ಮಾ.13.** ಇತ್ತೀಚಿನ ದಿನಗಳಲ್ಲಿ ಅಂತರರಾಷ್ಟ್ರೀಯ ಇಂಧನ ಮಾರುಕಟ್ಟೆಯಲ್ಲಿ ಉಂಟಾಗಿ ರುವ ಬೆಲೆ ಏರಿಳಿತ ಹಾಗೂ ಎಲ್.ಪಿ.ಜಿ ಪೂರೈಕೆಯಲ್ಲಿನ ವ್ಯತ್ಯಯ ದಿಂದಾಗಿ ಅಡುಗೆ ಅನಿಲ ವಿತರಣಾ ವ್ಯವಸ್ಥೆಯಲ್ಲಿ ಕೆಲವು ಬದಲಾವಣೆಗಳಾಗಿವೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ತಿಳಿಸಿದ್ದಾರೆ.



ಮುಖ್ಯವಾಗಿ ತಾಂತ್ರಿಕ ಕಾರಣಗಳಿಂದಾಗಿ ಗ್ಯಾಸ್ ಬುಕಿಂಗ್ ಮಾಡುವ ಸಮಯದಲ್ಲಿ 'Booking Crash' ಸಮಸ್ಯೆ ಎದುರಾಗುತ್ತಿದೆ. ತಾಂತ್ರಿಕ ದೋಷದಿಂದಾಗಿ ಗ್ಯಾಸ್ ಬುಕಿಂಗ್ ತಕ್ಷಣಕ್ಕೆ ಸಾಧ್ಯವಾಗದಿದ್ದರೂ, ಗ್ರಾಹಕರು ಆತಂಕಪಡುವ ಅಗತ್ಯವಿಲ್ಲ. ಸರಬರಾಜಿನ ಲಭ್ಯತೆಗೆ ಅನುಗುಣವಾಗಿ ಸಿಲಿಂಡರ್‌ಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಎರಡು ಸಿಲಿಂಡರ್ ಹೊಂದಿರುವ ಗ್ರಾಹಕರು ಯಾವುದೇ ಆತಂಕ ಒಳಗಾಗಬಾರದು ಹಾಗೂ ಏಕ ಸಿಲಿಂಡರ್ ಇದ್ದವರಿಗೆ ಆದ್ಯತೆ ಮೇಲೆ ಸಿಲಿಂಡರ್ ಪೂರೈಕೆಗೆ ಕ್ರಮ ವಹಿಸಲಾಗುತ್ತಿದೆ ಹಾಗೂ ಎಂದಿನಂತೆ ಹೊಮ್‌ಡೆಲಿವರಿ ಮೂಲಕ ಮನೆಗಳಿಗೆ ಸಿಲಿಂಡರ್ ಒದಗಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಗೃಹ ಬಳಕೆಯ ಸಿಲಿಂಡರ್ಗಳನ್ನು ಒಮ್ಮೆ ಬುಕ್ ಮಾಡಿದ ನಂತರ, ಮುಂದಿನ ಬುಕಿಂಗ್ ಮಾಡಲು ಕನಿಷ್ಠ 25 ದಿನಗಳ ಕಾಲಾವಕಾಶ ನೀಡಲಾಗಿದೆ.

ಸಾರ್ವಜನಿಕರು ಹಾಗೂ ಗ್ರಾಹಕ ಸಂಘ ಸಂಸ್ಥೆಗಳು ಅಡುಗೆ ಅನಿಲವನ್ನು ಮಿತವಾಗಿ ಬಳಸಬೇಕು. ಹೋಟೆಲ್ ಹಾಗೂ ಇನ್ನಿತರ ಕೈಗಾರಿಕೆಗಳಲ್ಲಿ ಜೈವಿಕ ಇಂಧನ, ಸೋಲಾರ್ ಅಥವಾ ವಿದ್ಯುತ್ ಶಕ್ತಿಯನ್ನು ಪರ್ಯಾಯವಾಗಿ ಬಳಸಲು ಉತ್ತೇಜಿಸಲಾಗುತ್ತಿದೆ ಎಂದಿದ್ದಾರೆ.

### ೩೦ ಸಾವಿರ ಮಂದಿಗೆ ಸೌದೆ ಒಲೆಯಿಂದಲೇ ಆಹಾರ ತಯಾರಿಕೆ

# ಗಮನ ಸೆಳೆಯುತ್ತಿದೆ ಸಿದ್ದಗಂಗಾ ಮಠದ ವ್ಯವಸ್ಥೆ ನಿತ್ಯ 9 ಸಾವಿರ ಮಕ್ಕಳಿಗೆ ಮೂರು ಹೊತ್ತು ಊಟ

**ತುಮಕೂರು, ಮಾ.13:** ಸಿದ್ದಗಂಗಾ ಮಠದಲ್ಲಿ ಪ್ರತಿನಿತ್ಯ 30 ಸಾವಿರ ಮಂದಿಗೆ ಸೌದೆ ಒಲೆಯಿಂದಲೇ ಆಹಾರ ತಯಾರಿಸಿ ಉಣಬಡಿಸಲಾಗುತ್ತಿದೆ. ಎಲ್‌ಪಿಜಿ ಮೇಲೆ ಮಠ ಅವಲಂಬಿತವಾಗದೇ ಇರುವುದು ಪ್ರಸ್ತುತ ಸನ್ನಿವೇಶದಲ್ಲಿ ವಿಶೇಷವಾಗಿ ಗಮನ ಸೆಳೆಯುತ್ತಿದೆ.

ಮಠದಲ್ಲಿ ನಿತ್ಯ 9 ಸಾವಿರ ಮಕ್ಕಳು ಮೂರು ಹೊತ್ತು ಊಟ ಮಾಡುತ್ತಾರೆ. ಇವರೆಲ್ಲರಿಗೂ ಅನ್ನ, ಸಾಂಬಾರು ಹಾಗೂ ಮುದ್ದೆ ನೀಡಲಾಗುತ್ತದೆ. ಸೌದೆ ಬಳಸಿ ಆಹಾರ ತಯಾರಿಸಲಾಗುತ್ತದೆ. ಅನೇಕ ವರ್ಷಗಳಿಂದಲೂ ಎಲ್ಪಿಜಿ ಸಿಲಿಂಡರ್‌ಗಳನ್ನು ಅವಲಂಬಿಸದೇ ಇಲ್ಲಿ ಅಡುಗೆ ಕೆಲಸ ನಡೆಯುತ್ತಿದೆ.

ಪ್ರಸ್ತುತ ಸನ್ನಿವೇಶದ ಕುರಿತು ಮಾತನಾಡಿರುವ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿ, "ಆದಷ್ಟು ಬೇಗ ಯುದ್ಧ ಪೂರ್ಣಗೊಳ್ಳಲಿ. ವಿವಿಧ ದೇಶಗಳಲ್ಲಿ ನಿರ್ಮಾಣವಾಗಿರುವ ಆತಂಕ ನಿವಾರಣೆಯಾಗಲಿ. ಯುದ್ಧ ನಿಲ್ಲದಿದ್ದರೆ ಜನರು ಸೌದೆಗಾಗಿ ಅರಣ್ಯ ಪ್ರದೇಶಗಳತ್ತ ಹೋಗುತ್ತಾರೆ. ಮರಗಿಡಗಳನ್ನು ಕಡಿಯಲು



ಮುಂದಾಗುತ್ತಾರೆ" ಎಂದು ಆತಂಕ ವ್ಯಕ್ತಪಡಿಸಿದರು.

"ಅಂಗನವಾಡಿ ಕಾರ್ಯಕರ್ತೆಯರು ಹಾಗು ವಿವಿಧ ಸಂಘಟನೆಗಳ ಕಾರ್ಯಕರ್ತರು ಬೆಂಗಳೂರಿಗೆ ತೆರಳುವ ಮಾರ್ಗಮಧ್ಯೆ ಮಠಕ್ಕೆ ಬಂದು ಊಟ ಮಾಡಿ ಹೋಗುತ್ತಾರೆ. ಹೀಗಾಗಿ ಪ್ರತಿದಿನ ಮಠದಲ್ಲಿನ ಮಕ್ಕಳನ್ನು ಹೊರತುಪಡಿಸಿ ಸಾವಿರಾರು ಮಂದಿ ಊಟ ಸೇವಿಸುತ್ತಾರೆ. ಪ್ರತಿನಿತ್ಯ ಅನ್ನ ಹಾಗೂ ಸಾಂಬಾರು ತಯಾರು ಮಾಡಲು ಸೌದೆ ಒಲೆಯನ್ನು ಸ್ಟೀಮ್ ಆಗಿ ಪರಿವರ್ತಿಸಿ ಬಳಸಿಕೊಳ್ಳಲಾಗುತ್ತದೆ. ಮಠದಲ್ಲಿ ಸೌರಶಕ್ತಿಯನ್ನೂ ಬಳಸಿಕೊಳ್ಳಲಾಗುತ್ತದೆ. ಸಂಜೆಯ ವೇಳೆ ಒಂದು ಹೊತ್ತು ಅಡುಗೆ ತಯಾರಿಸಲು ಅದನ್ನು ಬಳಸಿಕೊಳ್ಳಲಾಗುತ್ತದೆ" ಎಂದು ಸ್ವಾಮೀಜಿ ವಿವರಿಸಿದರು.

"ಸಾಂಬಾರು ಹಾಗೂ ಚಪಾತಿ ಮಾಡಲು ಸೌದೆ ಹೊಟ್ಟನ್ನು ಕೂಡ ಬಳಸಿಕೊಳ್ಳುತ್ತೇವೆ. ಸೌದೆ ಬಳಸುವ ಮುನ್ನ ರೈಸ್ ಮಿಲ್‌ಗಳಲ್ಲಿ ದೊರೆಯುವ ಭತ್ತದ ಹೊಟ್ಟನ್ನು ಬಳಸುತ್ತಿದ್ದೆವು. ಆದರೆ ಪ್ರಸ್ತುತ ರೈಸ್ ಮಿಲ್‌ಗಳು ಕಡಿಮೆ ಇರುವುದರಿಂದ ಭತ್ತದ ಹೊಟ್ಟನ್ನು ಬಳಸುತ್ತಿಲ್ಲ.


ಪ್ರಸ್ತುತ ಅಡಿಕೆ ಸಿಪ್ಪೆಯನ್ನು ರಸ್ತೆಗೆ ಸುರಿದು ಹೋಗುತ್ತಾರೆ. ಹೀಗಾಗಿ ನಮ್ಮ ಮಠದ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಅಂತಹ ಅಡಿಕೆ ಸಿಪ್ಪೆಯನ್ನು ಸಂಗ್ರಹಿಸಿ ತರುತ್ತಾರೆ. ಅದನ್ನು ಒಣಗಿಸಿ ನಂತರ ಉರುವಲಾಗಿ ಬಳಸಿಕೊಳ್ಳಲಾಗುತ್ತಿದೆ" ಎಂದು ಮಾಹಿತಿ ನೀಡಿದರು.

ಇನ್ನೊಂದೆಡೆ, ಕೊಪ್ಪಳದ ಧಾರ್ಮಿಕ ಕೇಂದ್ರ ಗವಿಮಠ ಹಾಗೂ ಹುಬ್ಬಳ್ಳಿಯ ಸಿದ್ಧಾರೂಢರ ಮಠದಲ್ಲಿಯೂ ಅಡುಗೆ ಅನಿಲ ಕೊರತೆಯ ನಡುವೆಯೂ ದಾಸೋಹ ಹಾಗೂ ವಸತಿ ನಿಲಯದ ಊಟ ವ್ಯವಸ್ಥೆಗೆ ಯಾವುದೇ ತೊಂದರೆ ಉಂಟಾಗಿಲ್ಲ.

# ಎರಡು ವರ್ಷ ಪೂರ್ಣಗೊಳಿಸಿದ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು: ಮಾಜಿ ಸಂಸದ ಡಾ.ಜಾಧವ ಅಭಿನಂದನೆ

**ಕಲಬುರಗಿ, ಮಾ. 13:** ಕಲಬುರಗಿ–ಬೆಂಗಳೂರು ಮಧ್ಯೆ ವಂದೇ ಭಾರತ್ ಎಕ್ಸ್‌ಪ್ರೆಸ್ ಆರಂಭವಾಗಿ ಇಂದು ಎರಡು ವರ್ಷಗಳನ್ನು ಪೂರ್ಣಗೊಳಿಸಿದ್ದು, ರಾಜಧಾನಿಯಿಂದ ದೂರದಲ್ಲಿರುವ ನಮ್ಮ ನಗರಕ್ಕೆ ಇಂಥ ಒಂದು ಸೌಲಭ್ಯ ಕಲ್ಪಿಸಿದ ಪ್ರಧಾನಿ ನರೇಂದ್ರ ಮೋದಿ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಹಾಗೂ ಯಶಸ್ವಿಗೊಳಿಸಿರುವ ಪ್ರಯಾಣಿಕರಿಗೆ, ರೈಲ್ವೆ ಇಲಾಖೆಗೆ ಮಾಜಿ ಸಂಸದ ಡಾ. ಉಮೇಶ್ ಜಾಧವ್ ಅಭಿನಂದಿಸಿದರು.

ಮಾದ್ಯಮಗಳೊಂದಿಗೆ, ಮಾಜಿ ಸಂಸದ ಡಾ.ಉಮೇಶ ಜಾಧವ ಅವರು, ಕಲ್ಯಾಣ ಕರ್ನಾಟಕ ಪ್ರದೇಶದ ಪ್ರಯಾಣಿಕರಿಗೆ ಎರಡು ವರ್ಷಗಳ ಮೀಸಲಾದ ಸೇವೆಯನ್ನು ಯಶಸ್ವಿಯಾಗಿ ಪೂರೈಸಿ 2026 ಫೆಬ್ರವರಿ ತಿಂಗಳ ಅಂತ್ಯದ ವರೆಗೆ ಶೇ. 103.52 ರಷ್ಟು ಪ್ರಯಾಣಿಕರ ದಟ್ಟಣೆಯೊಂದಿಗೆ 5.72 ಲಕ್ಷಕ್ಕೂ ಹೆಚ್ಚು ಪ್ರಯಾಣಿಕರಿಗೆ ಸೇವಾ ಸೌಲಭ್ಯ ಒದಗಿಸಿದೆ. ಇದು ಆಧುನಿಕ ರೈಲು ಸಂಪರ್ಕ ಮತ್ತು ಪ್ರಯಾಣಿಕರ ಸೌಕರ್ಯದಲ್ಲಿ ಮಹತ್ವದ ಮೈಲಿಗಲ್ಲನ್ನು ಗುರುತಿಸುವುದರ ಜೊತೆಗೆ ಸಮಯದ ಉಳಿತಾಯವನ್ನು ಕಲ್ಪಿಸಿದೆ. ಈ ಪ್ರತಿಷ್ಠಿತ ಸೇವೆಯನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಮಾರ್ಚ್ 12, 2024 ರಂದು ವೀಡಿಯೊ ಕಾನ್ಫರೆನ್ಸಿಂಗ್ ಮೂಲಕ ಉದ್ಘಾಟಿಸಿ ಚಾಲನೆ ನೀಡಿದ್ದರು. ರಾಜಧಾನಿ ಹಾಗೂ ಐಟಿ–ಬಿಟಿ ಕೇಂದ್ರ ಬೆಂಗಳೂರು ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಕಲಬುರಗಿ ನಡುವೆ ವೇಗದ ಮತ್ತು ವಿಶ್ವ ದರ್ಜೆಯ ರೈಲು ಸಂಪರ್ಕವನ್ನು ಹೆಚ್ಚಿಸಬೇಕೆಂಬ ಬೇಡಿಕೆಯನ್ನು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರ ಜೊತೆ ಚರ್ಚಿಸಿ



ರೈಲ್ವೆ ಇಲಾಖೆಯು ಈ ಮಹತ್ವದ ಕೊಡುಗೆ ನೀಡಿದ್ದರು. . ವಂದೇ ಭಾರತ್ ಸೇವೆಯನ್ನು, ಅಧಿಕಾರಿಗಳು, ವಾಣಿಜ್ಯೋದ್ಯಮಿಗಳು ವಿದ್ಯಾರ್ಥಿಗಳು, ಹಿರಿಯ ನಾಗರಿಕರು, ಮಕ್ಕಳ ಜೊತೆ ಮಹಿಳೆಯರು ಹಾಗೂ ವೃತ್ತಿನಿರತರು ಕಳೆದ ಎರಡು ವರ್ಷಗಳಲ್ಲಿ ಸೇವೆಯನ್ನು ಬಳಸಿ ರೈಲ್ವೆ ಇಲಾಖೆಗೂ ಲಾಭದಾಯಕವನ್ನಾಗಿಸಿದೆ ಎಂದರು.

ವೈದ್ಯಕೀಯ ಸೇವೆ ಪಡೆಯಲು ಬೆಂಗಳೂರಿಗೆ ಪ್ರಯಾಣಿಸುವವರಿಗೂ ಸುಗಮ ಸೇವೆ ಒದಗಿಸುತ್ತಿದೆ. ಪ್ರಯಾಣಿಕರ ಬೇಡಿಕೆ ಮನ್ನಿಸಿ ಯಾದಗಿರಿ ಮತ್ತು ಪ್ರಶಾಂತಿ ನಿಲಯಂ ನಿಲುಗಡೆಯನ್ನು ಕಲ್ಪಿಸಲಾಗಿದೆ. ಕಲಬುರಗಿ, ಯಾದಗಿರಿ ಮತ್ತು ರಾಯಚೂರು ಮುಂತಾದ ಪ್ರಮುಖ ಪಟ್ಟಣಗಳಿಗೆ ಪ್ರಾದೇಶಿಕ ಸಂಪರ್ಕ ಸುಧಾರಿಸಿದೆ, ಜೊತೆಗೆ ಮಂತ್ರಾಲಯ ಮತ್ತು ಪುಟ್ಟಪರ್ತಿ (ಶ್ರೀ ಸತ್ಯಸಾಯಿ ಪ್ರಶಾಂತಿ ನಿಲಯಂ ಮೂಲಕ) ಮುಂತಾದ ಶ್ರದ್ಧಾ ಕೇಂದ್ರಗಳಿಗೆ ಸಂಪರ್ಕ ಒದಗಿಸಿದ ಹೆಗ್ಗಳಿಕೆ ಹೊಂದಿದೆ. ಮಾತ್ರವಲ್ಲದೆ ವಂದೇ ಭಾರತ್ ಎಕ್ಸ್‌ಪ್ರೆಸ್ ಕೇವಲ 8 ಗಂಟೆಗಳಲ್ಲಿ 561 ಕಿಮೀ ದೂರವನ್ನು ಕ್ರಮಿಸುತ್ತದೆ, ಈಗ ಅಸ್ತಿತ್ವದಲ್ಲಿರುವ ಸೂಪರ್‌ಫಾಸ್ಟ್ ಸೇವೆಗಳು 10 ರಿಂದ 12 ಗಂಟೆಗಳಿಗೆ ಹೋಲಿಸಿದರೆ, ಇದರಿಂದಾಗಿ ಸುಮಾರು 2 ರಿಂದ 4 ಗಂಟೆಗಳ ಪ್ರಯಾಣದ ಸಮಯ ಉಳಿಸುತ್ತದೆ. ಪ್ರಸ್ತುತ ರೈಲು ವಾರದಲ್ಲಿ ಆರು ದಿನಗಳು ಯಾದಗಿರಿ, ರಾಯಚೂರು, ಮಂತ್ರಾಲಯ ರಸ್ತೆ, ಗುಂತಕಲ್, ಅನಂತಪುರ, ಸಾಯಿ ಪ್ರಶಾಂತಿ ನಿಲಯಂ ಮತ್ತು ಯಲಹಂಕದಲ್ಲಿ ನಿಲುಗಡೆಗಳೊಂದಿಗೆ ಕಾರ್ಯನಿರ್ವಹಿಸುತ್ತಿದ್ದು, 8 ಬೋಗಿಗಳನ್ನು ಹೊಂದಿದೆ ಎಂದರು.

ಈ ರೈಲು 400 ಚೇರ್ ಕಾರ್ ಸೀಟುಗಳು ಮತ್ತು 52 ಎಕ್ಸಿಕ್ಯುಟಿವ್ ಚೇರ್ ಕಾರ್ ಸೀಟುಗಳನ್ನು ಒಳಗೊಂಡ ಒಟ್ಟು 452 ಸೀಟುಗಳ ಸಾಮರ್ಥ್ಯ ಹೊಂದಿದೆ. ರೈಲಿನ ಅಪಾರ ಜನಪ್ರಿಯತೆಯು ಅದರ ಗಮನಾರ್ಹ ಕಾರ್ಯಕ್ಷಮತೆ ಪ್ರತಿಫಲಿಸುತ್ತದೆ. ರೈಲಿನಲ್ಲಿ ಉತ್ತಮ ಊಟೋಪಚಾರ ಹಾಗೂ ಗುಣಮಟ್ಟದ ಸೇವೆಯೊಂದಿಗೆ ವಂದೇ ಭಾರತ್ ಎಕ್ಸ್‌ಪ್ರೆಸ್ ಎರಡು ವರ್ಷಗಳ ಯಶಸ್ವಿ ಸೇವೆ ಯನ್ನು ಪೂರ್ಣಗೊಳಿಸಿದ್ದು, ರಸ್ತೆ ರೈಲು ಮತ್ತು ವಾಯು ಯಾನಗಳ ಮೂಲಕ ಪ್ರಾದೇಶಿಕ ಅಭಿವೃದ್ಧಿ ಮತ್ತು ರಾಷ್ಟ್ರೀಯ ಸಂಪರ್ಕಕ್ಕೆ ಗಮನಾರ್ಹವಾಗಿ ಕೊಡುಗೆ ನೀಡಬೇಕು ಎನ್ನುವ ಪ್ರಧಾನಿಯವರ ಕನಸು ಸಾಕಾರಗೊಳ್ಳುವ ಅಂಗ ವಾಗಿ ವಂದೇಭಾರತ್ ರೈಲುಸೇವೆ ಕೂಡ ಪ್ರಯಾಣಿಕರಿಗೆ ವರದಾನವಾಗಿದೆ. ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಮತ್ತು ಸಹಾಯಕ ಸಚಿವರಾದ ವಿ.ಸೋಮಣ್ಣ ಅವರಿಗೆ ಅಭಿನಂದನೆ ಸಲ್ಲಿಸುವುದಲ್ಲದೆ ಇದರ ಸೇವೆಯನ್ನು ಪ್ರಯಾಣಿಕರು ಇನ್ನಷ್ಟು ಹೆಚ್ಚಾಗಿ ಬೆಳಸಿ ಯಶಸ್ವಿಗೊಳಿಸಬೇಕು ಎಂದರು.

**ಕಾಂಗ್ರೆಸ್ ಎಲ್ಲದರಲ್ಲೂ ರಾಜಕೀಯ ಮಾಡುತ್ತಿದೆ ಎಂದು ಅಡುಗೆ ಅನಿಲ ಕೊರತೆಯ ವಿಷಯ ಕುರಿತು ಮಾತನಾಡಿದ ಅವರು, ಕೊಲ್ಲಿ ಯುದ್ಧ ಪರಿಣಾಮವಾಗಿ ಅನಿಲ ಸಾಗಣೆಯಲ್ಲಿ ತೊಂದರೆಯಾಗಿದೆ. ಇದು ಕೇಂದ್ರದಲ್ಲಿ ಯಾವುದೇ ಸರ್ಕಾರ ಅಸ್ತಿತ್ವದಲ್ಲಿದ್ದರೂ ಯುದ್ಧ ಸಂದರ್ಭದಲ್ಲಿ ಈ ತೊಂದರೆ ಆಗುತ್ತದೆ. ಆದರೂ ಪ್ರಧಾನಿ ಮೋದಿ ಮತ್ತು ವಿದೇಶಾಂಗ ಸಚಿವ ಎಸ್.ಜೈಶಂಕರ್ ಅವರ ಪ್ರಯತ್ನದ ಫಲವಾಗಿ ನಿನ್ನೆಯಷ್ಟೇ ಅನಿಲ ಹೊತ್ತ ಮತ್ತೊಂದು ಹಡಗು ಮುಂಬಯಿ ಬಂದರ ತಲುಪಿದೆ. ಇಂಥ ಯುದ್ಧಕಾಲದಲ್ಲಿ ಕಾಂಗ್ರೆಸ್ ಕೊಳಕು ರಾಜಕೀಯ ಮಾಡಿ ಪ್ರತಿಭಟನೆ ನಡೆಸುವ ಮೂಲಕ ತನ್ನ ಸಣ್ಣತನವನ್ನು ತೋರಿಸುತ್ತಿದೆ. ಹಿಂದೆ ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಅಡುಗೆ ಅನಿಲ ಸ್ಥಿತಿ ಹೇಗಿತ್ತು? ಯುದ್ಧವಿರಲಿಲ್ಲ ಏನೂ ಇರಲಿಲ್ಲ. ಆದರೂ ಅಂದು ಸಿಲೆಂಡರ್ ಗಳಿಗಾಗಿ ಗ್ರಾಹಕರು ತಿಂಗಳುಗಟ್ಟಲೇ ಕಾಯಬೇಕಿತ್ತು. ಅಲ್ಲದೇ ಅಂದಿನ ದರ ಸಾವಿರದ ಮೇಲಿತ್ತು. ಯಾಕೆ? ಈಗ ಮೋದಿ ಅವರು ಎಲ್ಲ ಸರಳಗೊಳಿಸಿದ್ದರು. ಫೋನ್ ಮಾಡಿದ ತಕ್ಷಣ ಸಿಲಿಂಡರ್ ಮನೆಗೆ ಬರುವಂತೆ ವ್ಯವಸ್ಥೆಯಾಗಿತ್ತು. ಯುದ್ಧ ಕಾಲ ಎಂದರೆ ಇಡೀ ವಿಶ್ವಕ್ಕೆ ಅನಿಲದ ತೊಂದರೆಯಾಗಿದೆ ಎಂಬುದನ್ನು ಕಾಂಗ್ರೆಸ್ ಮುಖಂಡರು ಅರಿಯಬೇಕು. ಎಲ್ಲದರಲ್ಲೂ ಕೊಳಕು ರಾಜಕೀಯ ಮಾಡಬೇಡಿ ಎಂದು ಡಾ.ಜಾಧವ ಹೇಳಿದರು.**

# ವಿಶಾಖಪಟ್ಟಣ ಸಮ್ಮೇಳನದಲ್ಲಿ, ಕಲಬುರಗಿ ಜಿಲ್ಲಾಧಿಕಾರಿ ಪ್ರಬಂಧ ಮಂಡನೆ

**ಕಲಬುರಗಿ, ಮಾ.13:** ನೀತಿ ಆಯೋಗವು ದಕ್ಷಿಣ ಭಾರತದ ಮಹತ್ವಾಕಾಂಕ್ಷಿ ಜಿಲ್ಲೆಗಳಲ್ಲಿನ ಆರೋಗ್ಯ ಮತ್ತು ಅಪೌಷ್ಠಿಕತೆ ನಿವಾರಣೆಗೆ ಕೈಗೊಂಡ ಕ್ರಮಗಳ ಕುರಿತು ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಆಯೋಜಿಸಿದ್ದ ಜಿಲ್ಲಾಧಿಕಾರಿಗಳ ಸಭೆಯಲ್ಲಿ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಜಿಲ್ಲೆಯಲ್ಲಿ ಆರೋಗ್ಯ ಸೌಕರ್ಯಗಳ ಸುಧಾರಣೆಗೆ ಕೈಗೊಂಡ ಕ್ರಮಗಳ ಕುರಿತು ಪ್ರಬಂಧ ಮಂಡಿಸಿದರು ಗರ್ಭಿಣಿಯರಿಗೆ ಆರಂಭದ ಹಂತದಿಂದಲೇ ಪೌಷ್ಠಿಕ ಆಹಾರ ವಿತರಣೆಗೆ ಕ್ರಮ ಕೈಗೊಳ್ಳುವುದು,

ಆಶಾ ಕಾರ್ಯಕರ್ತೆಯರು, ಎಎನ್‌ಎಂ ಗಳು ನಿಯಮಿತವಾಗಿ ಗರ್ಭಿಣಿಯರನ್ನು ತಪಾಸಣೆಗಾಗಿ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗುವುದು ಹಾಗೂ ಸಾಂಸ್ಥಿಕ





ಹೆರಿಗೆ ಮಾಡಿಸಿ ಕೊಳ್ಳುವ ಕುರಿತ ಹಾಗೃತಿಯಿಂದಾಗಿ ಸುಲಲಿತ ಹೆರಿಗೆ, ತಾಯಿ, ಶಿಶುಮರಣ ತಪ್ಪಿ ಸಲು ಸಾಧ್ಯ ಎಂಬುದನ್ನು ಅಂಕಿ ಅಂಶಗಳ ಮೂಲಕ ತಿಳಿಸಿದರು.

ನೀತಿ ಆಯೋಗದ ಹೆಚ್ಚುವರಿ ಕಾರ್ಯದರ್ಶಿ ರೋಹಿತ್ ಕುಮಾರ್ ಸೇರಿದಂತೆ ಆಯೋಗದ ಹಿರಿಯ ಅಧಿಕಾರಿಗಳು, ಬೀದರ್ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೇರಿದಂತೆ ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು, ಕೇರಳ, ತೆಲಂಗಾಣ, ಕೇಂದ್ರಾಡಳಿತ ಪ್ರದೇಶವಾದ ಅಂಡಮಾನ್ ಮತ್ತು ನಿಕೋಬಾರ್‌ನ ಅಧಿಕಾರಿಗಳು ಭಾಗವಹಿಸಿದ್ದರು.

## ರಾಯಚೂರಲ್ಲೂ ಸಿಗ್ತಿಲ್ಲ ವಾಣಿಜ್ಯ ಸಿಲಿಂಡರ್; ಕೇಂದ್ರ ಸಚಿವರಿಗೆ ಜಿ.ಕುಮಾರ್ ನಾಯಕ್ ಪತ್ರ

**ರಾಯಚೂರು, ಮಾ. 13:** ಮಧ್ಯಪ್ರಾಚ್ಯ ದೇಶಗಳಲ್ಲಿ ನಡೆಯುತ್ತಿರುವ ಯುದ್ಧದ ಭೀಕರ ಪರಿಣಾಮ ಈಗ ಭಾರತದ ಮೇಲೂ ಬಿಸಿ ತಟ್ಟಿದೆ. ಯುದ್ಧದ ಹಿನ್ನೆಲೆಯಲ್ಲಿ ದೇಶದ ವಿವಿಧೆಡೆ ಕಮರ್ಷಿಯಲ್ (ವಾಣಿಜ್ಯ) ಸಿಲಿಂಡರ್ ಸರಬರಾಜಿನಲ್ಲಿ ಭಾರೀ ವ್ಯತ್ಯಯ ಉಂಟಾಗಿದ್ದು, ಪೂರೈಕೆ ಸಂಪೂರ್ಣ ಸ್ಥಗಿತಗೊಂಡಿದೆ. ಇದು ಬೆಂಗಳೂರು ಸೇರಿದಂತೆ



ರಾಜ್ಯದ ಪ್ರಮುಖ ನಗರಗಳಲ್ಲಿ ವಾಣಿಜ್ಯ ಚಟುವಟಿಕೆಗಳ ಮೇಲೆ ಕೆಟ್ಟ ಪರಿಣಾಮ ಬೀರಿದೆ.

ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆಯಿಂದಾಗಿ ಹೋಟೆಲ್ ಉದ್ಯಮಿಗಳು ಹಾಗೂ ಪಿಜಿ ಮಾಲೀಕರು ಕಂಗಾಲಾಗಿದ್ದಾರೆ. ಸಿಲಿಂಡರ್ ಸಿಗದೇ ಅಡುಗೆ ಮಾಡಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರಿಂದ ಲಕ್ಷಾಂತರ ಗ್ರಾಹಕರು ಮತ್ತು ಜನಸಾಮಾನ್ಯರಿಗೆ ಊಟದ ಸಮಸ್ಯೆ ಎದುರಾಗಿದೆ. ವ್ಯಾಪಾರ ವಹಿವಾಟು ನಂಬಿಕೊಂಡಿದ್ದ ಸಾವಿರಾರು ಕುಟುಂಬಗಳು ಈಗ ಬೀದಿಗೆ ಬೀಳುವ ಆತಂಕದಲ್ಲಿವೆ.

ವಾಣಿಜ್ಯ ಸಿಲಿಂಡರ್ ಅಭಾವದ ತೀವ್ರತೆಯನ್ನು ಮನಗಂಡು ರಾಯಚೂರು ಸಂಸದ ಜಿ. ಕುಮಾರ್ ನಾಯಕ್ ಅವರು ಕೇಂದ್ರ ಸರ್ಕಾರದ ಇಬ್ಬರು ಪ್ರಭಾವಿ ಸಚಿವರಿಗೆ ತುರ್ತು ಪತ್ರ ಬರೆದಿದ್ದಾರೆ.




**ಸಿಎನ್‌ಜಿ, ಎಲ್‌ಪಿಜಿ ಕೊರತೆಯಿಂದಾಗಿ ಶುಕ್ರವಾರ ಕೋಲಾರದ ಫಿಲ್ಲಿಂಗ್ ಸ್ಟೇಷನ್‌ನಲ್ಲಿ ಆಟೋಗಳು ಸಾಲುಗಟ್ಟಿ ನಿಂತಿದ್ದವು. ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಇರಾನ್–ಇಸ್ರೇಲ್–ಅಮೆರಿಕ ಸಂಘರ್ಷವು ಅನಿಲ ಬಿಕ್ಕಟ್ಟಿಗೆ ಕಾರಣವಾಗಿದೆ.**

## ಒಳಿತಿನತ್ತ ಹೆಜ್ಜೆ ಹಾಕುವುದೇ ಮಾನವನ ಗುರಿಯಾಗಲಿ

**ಜೇವರ್ಗಿ ಮಾ–12–**ಮಾನವನ ಉಸಿರಾಟಕ್ಕೆ ಗಾಳಿ ಎಷ್ಟು ಮುಖ್ಯವೋ ಅಷ್ಟೇ ಜೀವನದ ಉಜ್ವಲ ಭವಿಷ್ಯಕ್ಕೆ ಮಹಾತ್ಮರ ಮಾರ್ಗದರ್ಶನ ಅವಶ್ಯಕವಾಗಿದೆ. ಕೆಡಕುಗಳನ್ನು ಮೆಟ್ಟಿ ನಿಂತು ಒಳಿತಿನತ್ತ ಹೆಜ್ಜೆ ಹಾಕುವುದೇ ಮಾನವನ ಗುರಿಯಾಗಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಭೌತಿಕ ಬದುಕಿಗೆ ಆಧ್ಯಾತ್ಮದ ಜ್ಞಾನ ಅವಶ್ಯಕ. ಮನುಷ್ಯ ಧರ್ಮದಿಂದ ವಿಮುಖನಾದರೆ ಜೀವನ ಅಶಾಂತಿಯ ಕಡಲಾಗುತ್ತದೆ. ಮನುಷ್ಯನ ಬದುಕು ಇನ್ನೊಬ್ಬರಿಗೆ ಮಾದರಿಯಾಗಬೇಕಲ್ಲದೇ ಮಾರಕವಾಗಬಾರದು. ಹಿರಿಯರ ಮೌಲ್ಯಾಧಾರಿತ ಚಿಂತನಗಳು ಬಾಳಿನ ಆಶಾ ಕಿರಣಗಳು.

ಸುಳ್ಳು ಹೇಳಲು ಹಲವು ದಾರಿ. ಆದರೆ ಸತ್ಯಕ್ಕೆ ಇರುವು ದೊಂದೇ ದಾರಿ. ಬಾಳಿನ ಬೆಳಕಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯರ ಜೀವನ ದರ್ಶನ ವಿಚಾರ ಧಾರೆಗಳು ದಿಕ್ಸೂಚಿಯಾಗಿವೆ.



ಶ್ರೀ ವಿಶ್ವಾರಾಧ್ಯ–ಬಸವಾಂಬೆಯರ ಹೆಸರಿನಲ್ಲಿ ಭವ್ಯ ಜಾತ್ರಾ ಮಹೋತ್ಸವ ಹಮ್ಮಿಕೊಂಡಿರುವ ತಪೋವನ ಮಠದ ಡಾ॥ ಸಿದ್ಧರಾಮ ಶಿವಾಚಾರ್ಯ ಸ್ವಾಮಿಗಳವರ ಕ್ರಿಯಾಶೀಲ ಬದುಕು ಮಠದ ಅಭಿವೃದ್ಧಿಗೆ ಸಾಕ್ಷಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿ ಶ್ರೀಗಳವರಿಗೆ ರೇಶ್ಮೆ ಮಡಿ ಸ್ಮರಣಿಕೆ ಫಲ ಪುಷ್ಪವಿತ್ತು ಶುಭ ಹಾರೈಸಿದರು.

ಮಾಜಿ ಶಾಸಕರಾದ ದೊಡ್ಡಪ್ಪಗೌಡ ಪಾಟೀಲ ಅವರು ಧರ್ಮ ಸಮಾರಂಭವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಭಾರತೀಯ ಉತ್ಕೃಷ್ಟ ಸಂಸ್ಕೃತಿಗೆ ಸರಿಸಾಟಿಯಾದುದು ಇನ್ನೊಂದಿಲ್ಲ. ಸರ್ವ ಜನಾಂಗದ ತೋಟವಾಗಿರುವ ಈ ನಾಡಿನಲ್ಲಿ ಎಲ್ಲರೂ ಸಹ ಬಾಳಿ ಬದುಕುತ್ತಿದ್ದಾರೆ.

ಸ್ವಧರ್ಮದ ಪರಿಪಾಲನೆ ಅನ್ಯ ಧರ್ಮದವರೊಂದಿಗೆ ಸದ್ಭಾವನೆಯನ್ನು ಹೊಂದಿ ಬಾಳಿದರೆ ಈ ಭೂಮಿ ಸ್ವರ್ಗವಾಗುವುದರಲ್ಲಿ ಸಂದೇಹವಿಲ್ಲ. ತಪೋವನ ಮಠದ ಡಾ॥ಸಿದ್ಧರಾಮ ಶಿವಾಚಾರ್ಯ ಸ್ವಾಮಿಗಳವರು ಕೃಷಿ ಕಾಯಕ ಯೋಗಿಗಳಾಗಿ ಶ್ರಮದ ಬದುಕಿನ ಹಿರಿಮೆಯನ್ನು ಸಾರುತ್ತಿದ್ದಾರೆ. ಧರ್ಮ ಉಳಿಯಬೇಕು ಬೆಳೆಯಬೇಕು. ಭಕ್ತರ ಬಾಳು ಉಜ್ವಲಗೊಳ್ಳಬೇಕೆಂಬ ಶ್ರೀಗಳವರ ಉನ್ನತ ಚಿಂತನೆಗೆ ಕೃತಜ್ಞತೆ ಸಲ್ಲಿಸುವೆ ಎಂದರು.

# ಮಹಿಳೆಯರ ಗೌರವಾರ್ಥ ವಿಶೇಷ ಪರೇಡ್

**ರಾಯಚೂರು, ಮಾ.13–** ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಇಲ್ಲಿಯ ಪೊಲೀಸ್ ಕವಾಯತು ಮೈದಾನದಲ್ಲಿ ಭಾನುವಾರ ಮಹಿಳೆಯರ ಗೌರವಾರ್ಥ ವಿಶೇಷ ಪರೇಡ್ ನಡೆಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಮಾತನಾಡಿ, 'ಬೆಂಗಳೂರಲ್ಲಿ ಪೊಲೀಸ್ ಇಲಾಖೆಯಿಂದ ಮೊದಲ ಬಾರಿಗೆ ಮಹಿಳೆಯರ ವಿಶೇಷ ಪರೇಡ್ ಆಯೋಜಿಸಲಾಗಿತ್ತು.

ರಾಜಧಾನಿ ಹೊರತು ಪಡಿಸಿ ರಾಜ್ಯದಲ್ಲಿ ಮೊದಲ ಬಾರಿಗೆ ರಾಯಚೂರಲ್ಲಿ ವಿಶೇಷ ಪರೇಡ್ ನಡೆಸಿ ಮಹಿಳೆಯರಿಗೆ ಗೌರವ ಸಲ್ಲಿಸಲಾಗಿದೆ' 'ಮಹಿಳಾ ಅಧಿಕಾರಿ ಹಾಗೂ ಸಿಬ್ಬಂದಿ ಸಹ ದೇಶ ಹಾಗೂ ಸಮಾಜದಲ್ಲಿ ಶಾಂತಿ ಕಾಪಾಡುವಲ್ಲಿ ನೆರವಾಗುತ್ತಿದ್ದಾರೆ.



ಮಹಿಳೆಯರು, ಮಕ್ಕಳಿಗೆ ಸಂಬಂಧಿಸಿದ ಅಪರಾಧ ಪ್ರಕರಣಗಳನ್ನು ಇತ್ಯರ್ಥಗೊಳಿಸುವಲ್ಲಿ ಹೆಚ್ಚು ಮುತುವರ್ಜಿಯಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ' ಎಂದು ಹೇಳಿದರು.

ನಂತರ ಅರುಣಾಂಗ್ಷು ಗಿರಿ ಅವರು ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸಿದ ಜಿಲೆಯ ವಿವಿಧ ಪೊಲೀಸ್ ಠಾಣೆಗಳ 38 ಸಿಬ್ಬಂದಿಗೆ ಪ್ರಶಂಸಾ ಪತ್ರಗಳನ್ನು ವಿತರಿಸಿದರು.

ಪೊಲೀಸ್ ಅಧಿಕಾರಿಗಳು, ಮಹಿಳಾ ಕಾನ್‌ಸ್ಟೆಬಲ್, ಡಿಎಆರ್, ವೈರ್‌ಲೆಸ್, ಮಿನಿಸ್ಟಿಯಲ್ ಸ್ಟಾಫ್ ಸೇರಿ ಒಟ್ಟು 116 ಮಹಿಳಾ ಪೊಲೀಸ್ ಸಿಬ್ಬಂದಿ ಪೊಲೀಸ್ ಪರೇಡ್‌ನಲ್ಲಿ ಭಾಗವಹಿಸಿದ್ದರು. ಮಹಿಳಾ ಪೊಲೀಸ್ ಅಧಿಕಾರಿಗಳಾದ ಸದರ್ ಬಜಾರ್ ಪಿಎಸ್‌ಐ ದೇವಮ್ಮ, ಪಿಎಸ್‌ಐ ಅಶ್ವಿನಿ, ಕಾನ್‌ಸ್ಟೆಬಲ್ ಲಕ್ಷ್ಮಿ, ಡಿಎಆರ್‌ನ ರಮ್ಯಾ ತಮ್ಮ ವೃತ್ತಿ ಅನುಭವ ಹಂಚಿಕೊಂಡರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರು ಮಹಿಳೆಯರ ಗೌರವಾರ್ಥ ವಿಶೇಷ ಪರೇಡ್ ಆಯೋಜಿಸಿದ್ದಕ್ಕೆ ಕೃತಜ್ಞತೆ ವ್ಯಕ್ತಪಡಿಸಿದರು. ಝಾನ್ಸಿರಾಣಿ ಲಕ್ಷ್ಮಿಬಾಯಿ, ಕಿತ್ತೂರು ರಾಣಿ ಚನ್ನಮ್ಮ, ಬಾಹ್ಯಾಕಾಶಕ್ಕೆ ಹಾರಿದ ಭಾರತೀಯ ಮೂಲದ ಮೊದಲ ಮಹಿಳಾ ಗಗನಯಾತ್ರಿ ಕಲ್ಪನಾ ಚಾವ್ಲಾ, 300 ದಿನಗಳಿಗಿಂತ ಹೆಚ್ಚು ಕಾಲ ಬಾಹ್ಯಾಕಾಶದಲ್ಲಿ ಬಹು ಕಾರ್ಯಾಚರಣೆಗಳನ್ನು ನಡೆಸಿದ ಗಗನಯಾತ್ರಿ ಸುನೀತಾ ವಿಲಿಯಮ್ಸ್ ಅವರ ಭಾವಚಿತ್ರಗಳನ್ನು ಆಮಂತ್ರಣ ಪತ್ರಿಕೆಯಲ್ಲೇ ಮುದ್ರಿಸಿ ಗೌರವ ಸಮರ್ಪಿಸಿದ್ದು ವಿಶೇಷವಾಗಿತ್ತು.

ತಿಳಿ ಗುಲಾಬಿ ಬಣ್ಣದ ಬಟ್ಟೆ ಬಳಸಿ ವೇದಿಕೆ ನಿರ್ಮಿಸಲಾಗಿತ್ತು. ವೇದಿಕೆಯಲ್ಲಿ ಗುಲಾಬಿ ಬಣ್ಣದ ಪುಷ್ಪಗುಚ್ಛಗಳನ್ನು ಇರಿಸಲಾಗಿತ್ತು. ಕಾರ್ಯಕ್ರಮಕ್ಕೆ ಪೊಲೀಸ್ ಬ್ಯಾಂಡ್ ವಿಶೇಷ ಮೆರುಗು ನೀಡಿತು. ಇಲಾಖೆಯಿಂದ ಮಹಿಳೆಯರಿಗೆ ಉಪಾಹಾರದ ವ್ಯವಸ್ಥೆಯನ್ನೂ ಮಾಡಲಾಗಿತ್ತು.

### ಮನೆ ಅಂಗಳದಲ್ಲಿ ವಿದ್ಯಾರ್ಥಿಗಳೊಂದಿಗೆ ಡಿಸಿ ಸಂವಾದ

# ಧೈರ್ಯದಿಂದ ಪರೀಕ್ಷೆ ಬರೆಯಿರಿ, ರಾಜ್ಯಕ್ಕೆ ಅಗ್ರಸ್ಥಾನಿಗಳಾಗಿ: ಫೌಜಿಯಾ ತರನ್ನುಮ್

**ಕಲಬುರಗಿ, ಮಾ. 13:** ಜಿಲ್ಲಾಧಿಕಾರಿ ಬಿ.ಫೌಜಿಜಿಯಾ ತರನ್ನುಮ್ ಅವರು ಇಂದು ಬೆಳಿಗ್ಗೆ ತಮ್ಮ ಅಧಿಕೃತ ನಿವಾಸದ ಅಂಗಳದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆ ಬರೆಯಲು ಅಣಿಯಾಗಿರುವ ಜಿಲ್ಲೆಯ ಆಯ್ದ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಯಾವುದೇ ಆತಂಕಕ್ಕೆ ಒಳಗಾಗದೆ ಧೈರ್ಯದಿಂದ ಪರೀಕ್ಷೆ ಬರೆಯಿರಿ, ರಾಜ್ಯಕ್ಕೆ ಅಗ್ರಸ್ಥಾನಿಗಳಾಗಿ ಹೊರಹೊಮ್ಮಿ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ನಗರದ ಜಗತ್ ವೃತ್ತದಲ್ಲಿರುವ ತಮ್ಮ ನಿವಾಸದಲ್ಲಿ ಪ್ರಸಕ್ತ 2025–26ನೇ ಶೈಕ್ಷಣಿಕ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ–1 ಇದೇ ಮಾರ್ಚ್ 18 ರಿಂದ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಜಿಲ್ಲೆಯ 20 ಶಾಲೆಗಳ 40 ವಿದ್ಯಾರ್ಥಿಗಳೊಂದಿಗೆ ಮುಕ್ತ ಸಂವಾದ ನಡೆಸಿ ಅವರ ಸಮಸ್ಯೆಗಳಿಗೆ ಕಿವಿಯಾಗಿದಲ್ಲದೆ ಪರೀಕ್ಷೆ ಎದುರಿಸಲು ಇರುವ ಆತಂಕಗಳನ್ನು, ಸವಾಲು, ಸಮಯ ಪರಿಪಾಲನೆ ಕುರಿತು ವಿದ್ಯಾರ್ಥಿಗಳ ಪ್ರಶ್ನೆಗೆ ಉತ್ತರಿಸಿದರು.

ಸಂವಾದದಲ್ಲಿ ಭಾಗವಹಿಸಿದ ಅನೇಕ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಪಿ. ಪರೀಕ್ಷೆ



ಕ್ರ್ಯಾಕ್ ಮಾಡಲು ಎಷ್ಟು ಸಮಯ ಓದಿಗೆ ಮೀಸಲಿಡಬೇಕು, ಸಮಯ ಪರಿಪಾಲನೆ ಹೇಗೆ, ಮಾದರಿ ಮತ್ತು ಪೂರ್ವಭಾವಿ ಪ್ರಶ್ನೆ ಪತ್ರಿಕೆಯಲ್ಲಿನ ಪ್ರಶ್ನೆಗಳೇ ಮುಖ್ಯ ಪರೀಕ್ಷಗೆ ಕೇಳಲಾಗುತ್ತಾ ಹೀಗೆ ಅನೇಕ ಪ್ರಶ್ನೆಗಳನ್ನು ಡಿ.ಸಿ. ಮುಂದಿಟ್ಟು ಪರಿಹಾರ ಪಡೆದರು.

ನಂತರ ಮಾತನಾಡಿದ ಜಿಲ್ಲಾಧಿಕಾಯಿರಿಗಳು, ಉಜ್ವಲ ಭವಿಷ್ಯಕ್ಕೆ ಪ್ರೌಢಶಿಕ್ಷಣ ಭದ್ರ ಬುನಾದಿಯಾಗಿದೆ. ಮುಂದೆ ನೀವು ಮೆಡಿಕಲ್, ಇಂಜಿನೀಯರಿಂಗ್ ಐ.ಐ.ಟಿ.ದಂತಹ ಉನ್ನತ ಶಿಕ್ಷಣ ಕೋರ್ಸ್ ಪಡೆಯುವುದಕ್ಕಾಗಲಿ ಅಥವಾ ಕೆ.ಎ.ಎಸ್, ಐ..ಎ.ಎಸ್., ಐ.ಪಿ.ಎಸ್. ಪರೀಕ್ಷೆ ಎದರಿಸಬೇಕಾದರೆ ಎಸ್.ಎಸ್.ಎಲ್.ಸಿ., ಪಿ.ಯು.ಸಿ. ಅಂಕ ಪ್ರಮುಖ ಪಾತ್ರ ವಹಿಸುತ್ತದೆ ಎಮದರು.

ವಿದ್ಯಾರ್ಥಿ ದೆಸೆಯ ಪ್ರಮುಖ ಘಟ್ಟ ಇದಾಗಿದೆ. ಸಹಪಾಠಿ ಅಥವಾ ಶಾಲೆಗೆ ಟಾಪರ್ ಆಗಬೇಕೆಂಬ ಸಣ್ಣ ಸವಾಲುಗಳನ್ನು ಬದಿಗೊತ್ತಿ ನಿಮ್ಮ ಉಜ್ವಲ ಭವಿಷ್ಯಕ್ಕೆ, ಒಳ್ಳೆಯ ಹುದ್ದೆಯ ನೌಕರಿ ಪಡೆಯಲು, ಹೆತ್ತವರ ಆಸೆ ಈಡೇರಿಸಲು, ಮಂದೆ ಏನನ್ನಾದರು ಸಾಧನೆಗೆ ದೊಡ್ಡ ಸವಾಲನ್ನು ಎದುರಿಸಲು ಸಜ್ಜಾಗಬೇಕು. ಇದಕ್ಕಾಗಿ ಜ್ಞಾನಾರ್ಜನೆ, ಕೌಶಲ್ಯ, ಉತ್ತಮ ಅಂಕ ಮುಖ್ಯ ಪಾತ್ರ ವಹಿಸುತ್ತದೆ ಎಂಬುದನ್ನು ಮರೆಯಬಾರದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಲಬುರಗಿಯಲ್ಲಿ ಜಿಲ್ಲಾಧಿಕಾರಿಗಳಾಗಿ ಸೇವೆ ಸಲ್ಲಿಸಲು ಬಹತೇಕ ಅಧಿಕಾರಿಗಳೆ ಇಲ್ಲಿಗೆ ಬರುತ್ತಾರೆ, ನೀವ್ಯಾಕ್ಯಾಗಬಾರದು ಎಂದು ವಿದ್ಯಾರ್ಥಿಗಳನ್ನು ಮರು ಪ್ರಶ್ನಿಸಿದ ಡಿ.ಸಿ. ಬಿ.ಫೌಜಿಯಾ ತರನ್ನುಮ್ ನೀವು ದೊಡ್ಡ ಗುರಿ, ಕನಸು ಇಟ್ಟುಕೊಳ್ಳಿ. ಅದನ್ನು ಈಡೇರಿಸಲು ಹಗಲು ರಾತ್ರಿ ಶ್ರಮಪಟ್ಟು ಓದಿದಲ್ಲಿ ಯಶಸ್ಸು ಕಟ್ಟಿಟ್ಟಬುತ್ತಿ. ಗುರಿ ಬೆನ್ನತ್ತಿ ಸಾಗಬೇಕು. ಸಾಗುವಾಗ ಶಾಟ್‌ಕಟ್ ದಾರಿ ಬೇಡ. ನಾವು ಹಿಂದುಳಿದವರು, ಹಳ್ಳಿಯಿಂದ ಬಂದವರು, ನಮ್ಮಿಂದ ಆಗಲ್ಲ ಎಂಬಿತ್ಯಾದಿ ಕೀಳರಿಮೆ ಬಿಟ್ಟು ನಾವು ಮುಂದೆ ಸಾಗಬೇಕಿದೆ. ತಾನು ಸಹ ದಿಲ್ಲಿ ಕೋಚಿಂಗ್ ಪಡೆಯದೆ ಲೈಬ್ರರಿ ಸಹಾಯ ಪಡೆದೆ, ಮನೆಯಲ್ಲೇ ಓದಿ ಐ.ಎ.ಎಸ್. ಪರೀಕ್ಷೆ ಪಾಸಾದೆ ಎಂದು ಬಿ.ಫೌಜಿಯಾ ತರನ್ನುಮ್ ಹೇಳಿಕೊಂಡರು. ಇನ್ನು ಕೊನೆಗೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಸಂವಾದದಲ್ಲಿ ಭಾಗವಹಿಸಿದ ಶಾಲಾ ಮಕ್ಕಳಿಗೆ ಪೆನ್, ಬಿಸ್ಕತ್, ಚಾಕೊಲೇಟ್, ಜ್ಯೂಸ್, ಹಣ್ಣುಗಳನ್ನು ನೀಡಿ ಸರಿಯಾಗಿ ಪರೀಕ್ಷೆ ಬರೆಯುವಂತೆ ಶುಭ ಕೋರಿದೆ. ಶಾಲಾ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕಿ ಶಂಕ್ರಮ್ಮ ಢವಳಗಿ, ವಿಷಯ ನಿರ್ವಾಹಕ ರಮೇಶ ಇದ್ದರು.

# ಖಾಸಗಿ ವಚನ ವಿಶ್ವವಿದ್ಯಾಲಯಕ್ಕೆ ವಿರೋಧ: ಡಾ.ಶಶಿಕಾಂತ ಪಟ್ಟಣ್

**ಬೀದರ್, ಮಾ. 13:** ಮುಖ್ಯಮಂತ್ರಿಗಳೂ ತಮ್ಮ ಬಜೆಟ್ ಮಂಡನೆಯಲ್ಲಿ ವಚನ ವಿಶ್ವವಿದ್ಯಾಲಯ ಸ್ಥಾಪನೆಗೆ 25 ಎಕರೆ ಜಮೀನು ಮಂಜೂರು ಮಾಡಿರುವುದು ಸ್ವಾಗತಾರ್ಹ. ಆದರೆ, ವಚನ ವಿಶ್ವವಿದ್ಯಾಲಯ ಸರ್ಕಾರಿ ವಿವಿಯಾಗಬೇಕೇ ಹೊರತು ಖಾಸಗಿ ಸಂಸ್ಥೆ ಅಥವಾ ಮಠದವರು ನಡೆಸುವ ವಿವಿ ಆಗಬಾರದು ಎಂದು ಪುಣೆಯ 'ಬಸವ ಅಂಡರ್ ಸ್ಟ್ಯಾಂಡಿಂಗ್ ಅಂಡ್ ರಿಸರ್ಚ್ ಸೆಂಟರ್' ತಿಳಿಸಿದೆ. ಈ ಸಂಬಂಧ ಸಂಘಟನೆಯ ಅಧ್ಯಕ್ಷ ಡಾ. ಶಶಿಕಾಂತ ಆರ್. ಪಟ್ಟಣ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

ಯಾವುದೇ ಕಾರಣಕ್ಕೂ ವಚನ ವಿಶ್ವವಿದ್ಯಾಲಯ ಖಾಸಗಿ ಸ್ವಾಮ್ಯತೆಗೆ ಕೊಡಬಾರದು. ಬೇಕಾದರೆ ವಿಜಯಪುರ ಹಾಗೂ ಕೂಡಲಸಂಗಮದಲ್ಲಿ ಜಾಗವಿದ್ದು, ಅಲ್ಲಿ ಸರ್ಕಾರಿ ವಚನ ವಿಶ್ವವಿದ್ಯಾಲಯ ಸ್ಥಾಪಿಸಬೇಕೆಂದು ಆಗ್ರಹಿಸಿದ್ದಾರೆ.

ಹಿಂದಿನ ಬಜೆಟ್‌ನಲ್ಲಿ ಬೆಂಗಳೂರಿನಲ್ಲಿ ವಚನ ಅಧ್ಯಯನ ಸಂಸ್ಥೆ ಸ್ಥಾಪಿಸುವ ಘೋಷಣೆ ಮಾಡಲಾಗಿತ್ತು. ಆದರೆ, ಇದುವರೆಗೆ ಅದು ಅನುಷ್ಠಾನಕ್ಕೆ ಬಂದಿಲ್ಲ. ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್‌ದಾಸ್ ವರದಿ ಆಧರಿತ ಸರ್ಕಾರದ ನಿರ್ಣಯದ ಪ್ರಸ್ತಾವ ಲಿಂಗಾಯತ ಧರ್ಮದ ಮಾನ್ಯತೆ ಮತ್ತು ಅಲ್ಪಸಂಖ್ಯಾತ ಸ್ಥಾನಮಾನದ ಬೇಡಿಕೆಗೆ ಪೂರಕ ಪರಿಹಾರ ಇನ್ನೂ ದೊರೆತಿಲ್ಲ. ಕೇಂದ್ರ ಸರ್ಕಾರದ ಅಲ್ಪಸಂಖ್ಯಾತ ಕಚೇರಿಗೆ ಕರ್ನಾಟಕ ಸರ್ಕಾರದ ನಿರ್ಣಯದ ಪ್ರಸ್ತಾವ ಅರ್ಜಿ ಮರು ಸಲ್ಲಿಕೆಗೆ ಅವಕಾಶವಿದೆ. ಇದಕ್ಕೆ ಮೀನಮೇಷ ಮಾಡುತ್ತಿರುವುದೇಕೆ ಎಂದು ಪ್ರಶ್ನಿಸಿದ್ದಾರೆ.

ವಿಜಯಪುರ ಅಕ್ಕಮಹಾದೇವಿ



ವಿಶ್ವವಿದ್ಯಾಲಯದಲ್ಲಿ ಬಸವ ಅಧ್ಯಯನ ಪೀಠ, ಕರ್ನಾಟಕದ ಎಲ್ಲ ವಿಶ್ವವಿದ್ಯಾಲಯಗಳಲ್ಲಿ ಬಸವ ಅಧ್ಯನ ಪೀಠ ಸ್ಥಾಪಿಸಬೇಕು. ಅಕ್ಕಮಹಾದೇವಿ ಮಹಿಳಾ ವಿವಿ ಆವರಣದಲ್ಲಿರುವ ಅಕ್ಕನ ಬೆತ್ತಲೆ ಪುತ್ಥಳಿ ಕೂಡಲೇ ತೆರವುಗೊಳಿಸಲು ವಿಜಯಪುರ ಜಿಲ್ಲಾಧಿಕಾರಿಗೆ ನಿರ್ದೇಶನ ನೀಡಬೇಕು ಎಂದು ಆಗ್ರಹಿಸಿದ್ದಾರೆ.

# ಒತ್ತಡದಲ್ಲಿ ಕೊಲ್ಲಿ ರಾಷ್ಟ್ರಗಳ ಪೆಟ್ರೋ-ಡಾಲರ್ ವ್ಯವಸ್ಥೆ: ಬ್ರಿಕ್ಸ್ ಪಾತ್ರ ಈಗ ಮುಖ್ಯ

**ನವದೆಹಲಿ, ಮಾ.13:** ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರು ಇಂದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ದೂರವಾಣಿ ಸಂಭಾಷಣೆಯ ಸಮಯದಲ್ಲಿ, ಈ ಪ್ರದೇಶದಲ್ಲಿ ಶಾಂತಿ, ಸ್ಥಿರತೆ ಮತ್ತು ಭದ್ರತೆಯನ್ನು ಕಾಪಾಡಲು ಬ್ರಿಕ್ಸ್‌ನ ಸಕ್ರಿಯ ಮತ್ತು ರಚನಾತ್ಮಕ ಪಾತ್ರದ ಅಗತ್ಯವನ್ನು ಒತ್ತಿ ಹೇಳಿದರು. ಅಮೆರಿಕ ಮತ್ತು ಇಸ್ರೇಲ್ ಇರಾನ್‌ನ ಪ್ರಮುಖ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡಿದ್ದರೂ, ಬ್ರಿಕ್ಸ್ ಮತ್ತು ಶಾಂಘೈ ಸಹಕಾರ ಸಂಸ್ಥೆ (ಎಸ್‌ಸಿಒ) ಸೇರಿದಂತೆ ಅಂತರರಾಷ್ಟ್ರೀಯ ಸಂಸ್ಥೆಗಳ ಚೌಕಟ್ಟಿನೊಳಗೆ ಭಾರತ ಮತ್ತು ಸ್ನೇಹಪರ ರಾಷ್ಟ್ರಗಳೊಂದಿಗೆ ಸಹಕಾರ ಮತ್ತು ಸಂವಹನವನ್ನು ವಿಸ್ತರಿಸಲು ಇರಾನ್ ಬದ್ಧವಾಗಿದೆ ಎಂದು ಪೆಜೆಶ್ಕಿಯಾನ್ ಹೇಳಿದರು.

ಪ್ರಸ್ತುತ ಇರಾನ್-ಅಮೆರಿಕ-ಇಸ್ರೇಲ್ ಯುದ್ಧದಲ್ಲಿ ಬ್ರಿಕ್ಸ್ ಅನ್ನು ಉಲ್ಲೇಖಿಸಿರುವುದು ಬಹುಶಃ ಇದೇ ಮೊದಲು, ಇದು ಈಗ ಎರಡನೇ ವಾರದಲ್ಲಿದೆ, ಇರಾನ್ ಸಹ ಸಕ್ರಿಯ ಸದಸ್ಯನಾಗಿರುವ 11 ಸದಸ್ಯರ ಗುಂಪು ತನ್ನ ಬೆಂಬಲಕ್ಕೆ ಬರುತ್ತದೆ ಎಂಬ ಇರಾನ್ನ ನಿರೀಕ್ಷೆಗಳನ್ನು ಸೂಚಿಸುತ್ತದೆ.

ಉಲ್ಬಣಗೊಳ್ಳುತ್ತಿರುವ ಸಂಘರ್ಷವು ಬ್ರಿಕ್ಸ್‌ಗೆ ತೀವ್ರ ಬೆದರಿಕೆಯನ್ನು ಒಡ್ಡುತ್ತದೆ ಎಂಬುದನ್ನು ಅಲ್ಲಗಳೆಯುವಂತಿಲ್ಲ. ಸಂಘರ್ಷವು ಬ್ರಿಕ್ಸ್ ಕೊಟದೊಳಗಿನ ಆಳವಾದ ದೋಷ ರೇಖೆಗಳನ್ನು ಬಹಿರಂಗಪಡಿಸಿದೆ. ಬ್ರಿಕ್ಸ್ ಸ್ಥಾಪಕ ಸದಸ್ಯರಾದ ಬ್ರೆಜಿಲ್, ರಷ್ಯಾ, ಚೀನಾ ಮತ್ತು ದಕ್ಷಿಣ ಆಫ್ರಿಕಾಗಳು ಇರಾನ್ ಮೇಲಿನ ಅಮೆರಿಕ-ಇಸ್ರೇಲಿ ದಾಳಿಗಳನ್ನು ಅಂತರರಾಷ್ಟ್ರೀಯ ಕಾನೂನಿನ ಉಲ್ಲಂಘನೆ ಎಂದು ಬಹಿರಂಗವಾಗಿ ಖಂಡಿಸಿವೆ. 2026 ರ ಬ್ರಿಕ್ಸ್ ಅಧ್ಯಕ್ಷರಾಗಿರುವ ಭಾರತವು ದಾಳಿಗಳನ್ನು ಬಹಿರಂಗವಾಗಿ ಖಂಡಿಸಿಲ್ಲ, ಆದರೆ ಶಾಂತಿಯನ್ನು ಪುನಃಸ್ಥಾಪಿಸಲು ಸಂವಾದ ಮತ್ತು ರಾಜತಾಂತ್ರಿಕತೆಗೆ ಕರೆ ನೀಡಿದೆ.

ಪ್ರಧಾನಿ ಮೋದಿ, ಅಧ್ಯಕ್ಷ ಪೆಜೆಶ್ಕಿಯನ್ ಅವರೊಂದಿಗಿನ ದೂರವಾಣಿ ಸಂಭಾಷಣೆಯ ಸಮಯದಲ್ಲಿ, ಶಾಂತಿ ಮತ್ತು ಸ್ಥಿರತೆಗೆ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದರು ಮತ್ತು ಸಂವಾದ ಮತ್ತು ರಾಜತಾಂತ್ರಿಕತೆಗೆ ಒತ್ತಾಯಿಸಿದರು. ಹೆಚ್ಚುತ್ತಿರುವ ಉದ್ವಿಗ್ನತೆ ಮತ್ತು ನಾಗರಿಕ ಜೀವಗಳ ನಷ್ಟ ಹಾಗೂ ನಾಗರಿಕ ಮೂಲಸೌಕರ್ಯಕ್ಕೆ ಹಾನಿಯ ಬಗ್ಗೆ ಅವರು ಆಳವಾದ ಕಳವಳ ವ್ಯಕ್ತಪಡಿಸಿದರು.

ರಾಜತಾಂತ್ರಿಕತೆಯ ಹಾದಿಯಲ್ಲಿ ರಚನಾತ್ಮಕ ಪಾತ್ರವನ್ನು ವಹಿಸಲು ಭಾರತ ತನ್ನ ಅತ್ಯುತ್ತಮ ಪ್ರಯತ್ನ ಮಾಡುತ್ತದೆ ಎಂದು ಪ್ರಧಾನಿ ಒತ್ತಿ ಹೇಳಿದರು.

ಯುಎಇ ಮತ್ತು ಸೌದಿ ಅರೇಬಿಯಾ ಮೇಲಿನ ಇರಾನ್ನ ದಾಳಿಗಳು ಬ್ರಿಕ್ಸ್ ಸದಸ್ಯರನ್ನು ಪರಸ್ಪರ ವಿರುದ್ಧವಾಗಿ ನಿಲ್ಲಿಸಿವೆ, ಇದು ಯುದ್ಧದ ಕುರಿತು ಜಂಟಿ ಹೇಳಿಕೆಯನ್ನು ಬಹುತೇಕ ಅಸಾಧ್ಯವಾಗಿಸಿದೆ.

ಬಿಕ್ಕಟ್ಟು ಗುಂಪಿನ ಆಂತರಿಕ ಬಿರುಕುಗಳನ್ನು ಎತ್ತಿ ತೋರಿಸುತ್ತಿದ್ದರೂ, ಅದು ಪರ್ಯಾಯ ಹಣಕಾಸು ವ್ಯವಸ್ಥೆಗಳಿಗೆ ಯೋಜನೆಗಳನ್ನು ವೇಗಗೊಳಿಸಿದೆ ಮತ್ತು ಪಾಶ್ಚಿಮಾತ್ಯ ವ್ಯವಸ್ಥೆಗಳಿಂದ ಆರ್ಥಿಕ ಸ್ವಾತಂತ್ರ್ಯಕ್ಕಾಗಿ



ಒತ್ತಡವನ್ನು ತೀವ್ರಗೊಳಿಸಿದೆ.

SWIFT ನೆಟ್‌ವರ್ಕ್‌ಗೆ ಸ್ಥಿತಿಸ್ಥಾಪಕ ಪರ್ಯಾಯವಾಗಿ ಬ್ರಿಕ್ಸ್ ಪೇ ವೇದಿಕೆ ಅಭಿವೃದ್ಧಿಯು ಗಮನ ಸೆಳೆಯುತ್ತಿದೆ. ರಷ್ಯಾ ಮತ್ತು ಇರಾನ್ ಈಗಾಗಲೇ ದ್ವಿಪಕ್ಷೀಯ ವ್ಯಾಪಾರದ ಶೇ.90ರಷ್ಟು ಭಾಗವನ್ನು ತಮ್ಮ ರಾಷ್ಟ್ರೀಯ ಕರೆನ್ಸಿಗಳಿಗೆ ಬದಲಾಯಿಸಿವೆ. ಇತರ ಕೆಲವು ಸದಸ್ಯರು ಸ್ಥಳೀಯ-ಕರೆನ್ಸಿ ವಸಾಹತುಗಳನ್ನು ಬಲಪಡಿಸುತ್ತಿದ್ದಾರೆ ಡಾಲರ್ ಚಂಚಲತೆಯಿಂದ ತಮ್ಮ ಇಂಧನ ಆಮದು ರಕ್ಷಿಸಿಕೊಳ್ಳಿ.

ಡಾಲರ್ ಅನ್ನು ಬದಲಿಸಲು ಉದ್ದೇಶಿಸಿರುವ ಬ್ರಿಕ್ಸ್ ಕರೆನ್ಸಿಯನ್ನು ಬೆಂಬಲಿಸುವ ಯಾವುದೇ ಃಖಚಅಖ ರಾಷ್ಟ್ರದ ವಿರುದ್ಧ ಅಮೆರಿಕ ಗಖ ಈಗಾಗಲೇ 100 ಪ್ರತಿಶತ ಸುಂಕಗಳನ್ನು ವಿಧಿಸುವ ಬೆದರಿಕೆ ಹಾಕಿದೆ. ಇರಾನ್ ಮತ್ತು UAE ಸದಸ್ಯರಾಗಿರುವ ಬ್ರಿಕ್ಸ್ ಈಗ ರಜಾಗತಿಕ ಕಚ್ಚಾತೈಲದ ಶೇ.40 ಕ್ಕಿಂತ ಹೆಚ್ಚು ನಿಯಂತ್ರಿಸುತ್ತದೆ. ಇದು ದೀರ್ಘಾವಧಿಯಲ್ಲಿ ಜಾಗತಿಕ ಇಂಧನ ಬೆಲೆಯನ್ನು 'ಪೆಟ್ರೋ-ಡಾಲರ್' ನಿಂದ ದೂರ ಬದಲಾಯಿಸಲು ಬಣಕ್ಕೆ ಗಮನಾರ್ಹ ಹತೋಟಿ ನೀಡುತ್ತದೆ.

ಕತಾರ್, ಬಹ್ರೇನ್, ಕುವೈತ್ ಮತ್ತು ಯುಎಇ ನಂತಹ ರಾಷ್ಟ್ರಗಳನ್ನು ಹೊಡೆಯುವ ಮೂಲಕ, ಆ ಮೂಲಕ ಯುದ್ಧಭೂಮಿಯನ್ನು ವಿಸ್ತರಿಸುವ ಮೂಲಕ, ಗಲ್ಫ್ ದೇಶಗಳು ಮತ್ತು ಅಮೆರಿಕ ನಡುವಿನ 'ಪೆಟ್ರೋ-ಡಾಲರ್' ತಿಳಿವಳಿಕೆಯು ಇನ್ನು ಮುಂದೆ ಮಾನ್ಯವಾಗಿಲ್ಲ ಏಕೆಂದರೆ ಅಮೆರಿಕ ಅವರಿಗೆ ಭದ್ರತೆಯನ್ನು ಒದಗಿಸಲು ಸಾಧ್ಯವಾಗುತ್ತಿಲ್ಲ ಎಂದು ಇರಾನ್ ತಿಳಿಸಲು ಬಯಸುತ್ತದೆ.

ಚಿನ್ನದ ಬೆಂಬಲಿತ ವಿತ್ತೀಯ ವ್ಯವಸ್ಥೆಯ ಕುಸಿತ ಮತ್ತು 1973 ರ ತೈಲ ಬಿಕ್ಕಟ್ಟಿಗೆ ಕಾರ್ಯತಂತ್ರದ ಪ್ರತಿಕ್ರಿಯೆಯಾಗಿ ಪೆಟ್ರೋ-ಡಾಲರ್ ವ್ಯವಸ್ಥೆಯು ಅಧ್ಯಕ್ಷ ರಿಚರ್ಡ್ ನಿಕ್ಸನ್ ಅವರ ಆಡಳಿತದಲ್ಲಿ ಪ್ರಾರಂಭವಾಯಿತು. ನಿಕ್ಸನ್ ಗಖ ಡಾಲರ್ ಅನ್ನು ಚಿನ್ನಕ್ಕೆ ನೇರ ಪರಿವರ್ತನೆಯನ್ನು ಕೊನೆಗೊಳಿಸಿದರು, ಬ್ರೆಟನ್‌ವುಡ್ಸ್ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಕೊನೆಗೊಳಿಸಿದರು.

ಇದು ಡಾಲರ್ ಅನ್ನು ಸರಕು ಆಧಾರವಿಲ್ಲದೆ ಬಿಟ್ಟಿತು, ಇದರ ಮೌಲ್ಯ ಕುಸಿಯಲು ಕಾರಣವಾಯಿತು. ಡಾಲರ್‌ಗೆ ಜಾಗತಿಕ ಬೇಡಿಕೆಯನ್ನು ಕಾಪಾಡಿಕೊಳ್ಳಲು, ಅಮೆರಿಕ ಭದ್ರಪಡಿಸಿಕೊಳ್ಳಲು ಪ್ರಯತ್ನಿಸಿತು. ಇದು ವಿಶ್ವದ ಅತ್ಯಂತ ಅಗತ್ಯ ಸರಕು ತೈಲಕ್ಕೆ. ಆದ್ದರಿಂದ, 'ಪೆಟ್ರೋ-ಡಾಲರ್' ಎಂಬ ಪದ. 1973 ರ ಅರಬ್ ತೈಲ ನಿರ್ಬಂಧದ ನಂತರ, ಅಮೆರಿಕ ಜೂನ್ 8, 1974 ರಂದು ಸೌದಿ ಅರೇಬಿಯಾದೊಂದಿಗೆ ಒಂದು ಹೆಗ್ಗುರುತು ಒಪ್ಪಂದವನ್ನು ಮಾಡಿಕೊಂಡಿತು, ಅದರ ಅಡಿಯಲ್ಲಿ ಸೌದಿ ಅರೇಬಿಯಾ ತನ್ನ ತೈಲವನ್ನು ಪ್ರತ್ಯೇಕವಾಗಿ ಅಮೆರಿಕ ಡಾಲರ್‌ಗಳಲ್ಲಿ ಬೆಲೆ ನಿಗದಿಪಡಿಸಲು ಮತ್ತು ಮಾರಾಟ ಮಾಡಲು ಒಪ್ಪಿಕೊಂಡಿತು. ಸೌದಿಗಳು ತಮ್ಮ ಅಪಾರ ಹೆಚ್ಚುವರಿ ತೈಲ ಆದಾಯವನ್ನು ಅಮೆರಿಕದ ಆರ್ಥಿಕತೆಗೆ ಹಿಂತಿರುಗಿಸಲು ಒಪ್ಪಿಕೊಂಡರು, ಪ್ರಾಥಮಿಕವಾಗಿ ಅಮೆರಿಕ ಖಜಾನೆ ಬಾಂಡ್‌ಗಳನ್ನು ಖರೀದಿಸುವ ಮೂಲಕ. ಪ್ರತಿಯಾಗಿ, ಅಮೆರಿಕ, ಸೌದಿ ಅರೇಬಿಯಾಕ್ಕೆ ಮಿಲಿಟರಿ ರಕ್ಷಣೆ, ಶಸ್ತ್ರಾಸ್ತ್ರಗಳು ಮತ್ತು ತಾಂತ್ರಿಕ ಬೆಂಬಲವನ್ನು ಒದಗಿಸಿತು. ಅತಿದೊಡ್ಡ ತೈಲ ರಫ್ತುದಾರನಾಗಿ, ಸೌದಿ ಅರೇಬಿಯಾದ ನಿರ್ಧಾರವು ಇತರ OPEC ದೇಶಗಳನ್ನು ಇದನ್ನು ಅನುಸರಿಸಲು ಒತ್ತಾಯಿಸಿತು, ಜಾಗತಿಕ ಇಂಧನ ವ್ಯಾಪಾರಕ್ಕಾಗಿ ಡಾಲರ್ ಅನ್ನು ಡೀಫಾಲ್ಟ್ ಕರೆನ್ಸಿಯನ್ನಾಗಿ ಮಾಡಿತು. ಈ ವ್ಯವಸ್ಥೆಯು ಡಾಲರ್‌ಗಳಿಗೆ ನಿರಂತರ ವಿಶ್ವಾದ್ಯಂತ ಬೇಡಿಕೆಯನ್ನು ಖಚಿತಪಡಿಸಿತು, ಚಿನ್ನದ ಬೆಂಬಲವಿಲ್ಲದೆ ವಿಶ್ವದ ಪ್ರಾಥಮಿಕ ಮೀಸಲು ಕರೆನ್ಸಿಯಾಗಿ ಅದರ ಸ್ಥಾನಮಾನವನ್ನು ಭದ್ರಪಡಿಸಿತು.

# 400 ದಶಲಕ್ಷ ಬ್ಯಾರಲ್ ತೈಲ ಬಿಡುಗಡೆಗೆ ಐಇಎ ಅನುಮೋದನೆ

**ಪ್ಯಾರಿಸ್, ಮಾ.13:** ಮಧ್ಯಪ್ರಾಚ್ಯದಲ್ಲಿನ ಯುದ್ಧವು ಜಾಗತಿಕ ಇಂಧನ ಪೂರೈಕೆಯನ್ನು ಅಡ್ಡಿಪಡಿಸುತ್ತಿರುವುದರಿಂದ, ಏಜೆನ್ಸಿಯ ಇತಿಹಾಸದಲ್ಲಿ ಅತಿದೊಡ್ಡ ಸಂಘಟಿತ ಬಿಡುಗಡೆಯಾದ ಕಾರ್ಯತಂತ್ರದ ನಿಕ್ಷೇಪಗಳಿಂದ 400 ದಶಲಕ್ಷ ಬ್ಯಾರಲ್ ತೈಲವನ್ನು ಬಿಡುಗಡೆ ಮಾಡಲು ಸದಸ್ಯ ರಾಷ್ಟ್ರಗಳು ಒಪ್ಪಿಕೊಂಡಿವೆ ಎಂದು ಅಂತರರಾಷ್ಟ್ರೀಯ ಇಂಧನ ಸಂಸ್ಥೆ ಹೇಳಿದೆ.



ಯುಎಸ್ ಇಂಧನ ಇಲಾಖೆಯು ಕಾರ್ಯತಂತ್ರದ ಪೆಟ್ರೋಲಿಯಂ ಮೀಸಲು ಪ್ರದೇಶದಿಂದ 172 ದಶಲಕ್ಷ ಬ್ಯಾರಲ್‌ಗಳನ್ನು ಕೊಡುಗೆ ನೀಡುವುದಾಗಿ ಹೇಳಿದೆ, ಮುಂದಿನ ವಾರ ಬಿಡುಗಡೆ ಪ್ರಾರಂಭವಾಗುವ ನಿರೀಕ್ಷೆಯಿದೆ.

ಇರಾನಿನ ದಾಳಿಗಳು ಮತ್ತು ಹಾರ್ಮುಜ್ ಜಲಸಂಧಿಯ ಸುತ್ತಲಿನ ಸಂಘರ್ಷವು ಮಧ್ಯಪ್ರಾಚ್ಯ ತೈಲ ರಫ್ತುಗಳನ್ನು ತಡೆಯುವುದನ್ನು ಮುಂದುವರಿಸಬಹುದು ಎಂಬ ಭಯದ ನಡುವೆ ಮಾರುಕಟ್ಟೆಗಳನ್ನು ಸ್ಥಿರಗೊಳಿಸಲು ಈ ಕ್ರಮವನ್ನು ಉದ್ದೇಶಿಸಲಾಗಿದೆ. ಐಇಎ ಕಾರ್ಯನಿರ್ವಾಹಕ ನಿರ್ದೇಶಕ ಫಾತಿಹ್ ಬಿರೋಲ್ ಅವರು ಬಿಕ್ಕಟ್ಟು ಇಂಧನ ಮಾರುಕಟ್ಟೆಗಳಿಗೆ ಅಭೂತಪೂರ್ವ ಸವಾಲನ್ನು ಪ್ರತಿನಿಧಿಸುತ್ತದೆ ಎಂದು ಹೇಳಿದರು. "ನಾವು ಎದುರಿಸುತ್ತಿರುವ ತೈಲ ಮಾರುಕಟ್ಟೆ ಸವಾಲುಗಳು ಅಭೂತಪೂರ್ವ ಪ್ರಮಾಣದಲ್ಲಿವೆ" ಎಂದು ಅವರು ಹೇಳಿದರು, ಜಾಗತಿಕ ಮಾರುಕಟ್ಟೆಯಲ್ಲಿನ ಅಡೆತಡೆಗಳನ್ನು ಪರಿಹರಿಸಲು ಜಾಗತಿಕ ಪ್ರತಿಕ್ರಿಯೆ ಅಗತ್ಯವಾಗಿದೆ ಎಂದು ಹೇಳಿದರು.

ಹಸ್ತಕ್ಷೇಪದ ಹೊರತಾಗಿಯೂ, ಬೆಲೆಗಳು ಅಸ್ಥಿರವಾಗಿ ಉಳಿದಿವೆ. ವಾರದ ಆರಂಭದಲ್ಲಿ $120 ರ ಸಮೀಪಕ್ಕೆ ಏರಿದ ಬ್ರೆಂಟ್ ಕಚ್ಚಾ ತೈಲ ಗುರುವಾರ ಬ್ಯಾರಲ್‌ಗೆ $100 ಕ್ಕಿಂತ ಸ್ವಲ್ಪ ಹೆಚ್ಚಾಗಿದೆ, ಆದರೆ ಅಮೆರಿಕ ಮಾನದಂಡದ ಕಚ್ಚಾ ತೈಲವು ಬ್ಯಾರಲ್‌ಗೆ 95 ಡಾಲರ್ ಏರಿತು. 13 ದಿನಗಳ ಸಂಘರ್ಷವು ಜಾಗತಿಕ ತೈಲ ಮಾರುಕಟ್ಟೆಯ ಇತಿಹಾಸದಲ್ಲಿ ಅತಿದೊಡ್ಡ ಪೂರೈಕೆ ಅಡಚಣೆಯನ್ನು ಉಂಟುಮಾಡಿದೆ ಎಂದು ಪ್ಯಾರಿಸ್ ಮೂಲದ ಸಂಸ್ಥೆ ಹೇಳಿದೆ, ಇದು 1970ರ ದಶಕದ ಆಘಾತಗಳನ್ನು ಮೀರಿಸಿದೆ.

IEA ಪ್ರಕಾರ, ಗಲ್ಫ್ ರಾಷ್ಟ್ರಗಳಿಂದ ತೈಲ ಉತ್ಪಾದನೆಯು ದಿನಕ್ಕೆ ಕನಿಷ್ಠ 10 ದಶಲಕ್ಷ ಬ್ಯಾರಲ್ ಕಡಿಮೆಯಾಗಿದೆ, ಹೋರಾಟದಲ್ಲಿ ಯಾವುದೇ ಕಡಿತದ ಲಕ್ಷಣಗಳಿಲ್ಲ. 400 ದಶಲಕ್ಷ ಬ್ಯಾರಲ್ ಬಿಡುಗಡೆಯು ಸರಿಸುಮಾರು 20 ದಿನಗಳ ಸಾಮಾನ್ಯ ತೈಲ ಹರಿವಿಗೆ ಸಮನಾಗಿದೆ. ಅಲ್ಲಿ ಸಾಮಾನ್ಯವಾಗಿ ಪ್ರತಿದಿನ 20 ದಶಲಕ್ಷ ಬ್ಯಾರಲ್ ಹಾದು ಹೋಗುತ್ತವೆ.


ಬುಧವಾರ ನಡೆದ G7 ವೀಡಿಯೊ ಸಮ್ಮೇಳನದಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಜಾಗತಿಕ ತೈಲ ಉತ್ಪಾದನೆಯನ್ನು ಹೆಚ್ಚಿಸುವುದು ಆದ್ಯತೆಯಾಗಿದೆ ಎಂದು ಹೇಳಿದರು ಮತ್ತು ಮಾರುಕಟ್ಟೆಗಳನ್ನು ಮತ್ತಷ್ಟು ಅಸ್ಥಿರಗೊಳಿಸಬಹುದಾದ ರಫ್ತು ನಿರ್ಬಂಧಗಳನ್ನು ತಪ್ಪಿಸಲು ದೇಶಗಳನ್ನು ಒತ್ತಾಯಿಸಿದರು.

ಪ್ರಸ್ತುತ ಪರಿಸ್ಥಿತಿಯು ಅವುಗಳನ್ನು ಸಡಿಲಿಸಲು ಸಮರ್ಥನೆಯನ್ನು ನೀಡುವುದಿಲ್ಲ ಎಂದು ಹೇಳುವ ಮೂಲಕ ಗುಂಪು ರಷ್ಯಾದ ಮೇಲಿನ ನಿರ್ಬಂಧಗಳನ್ನು ಪುನರುಚ್ಚರಿಸಿತು.

ಕಳೆದ ವಾರ, ಅಮೆರಿಕ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ 30 ದಿನಗಳ ವಿನಾಯಿತಿಯನ್ನು ಘೋಷಿಸಿದರು, ಇದು ಭಾರತೀಯ ಸಂಸ್ಕರಣಾಗಾರಗಳು ಈಗಾಗಲೇ ಸಮುದ್ರದಲ್ಲಿ ಸಿಲುಕಿರುವ ರಷ್ಯಾದ ತೈಲವನ್ನು ಖರೀದಿಸಲು ಅನುವು ಮಾಡಿಕೊಡುತ್ತದೆ. ಏಪ್ರಿಲ್ 4 ರಂದು ಮುಕ್ತಾಯಗೊಳ್ಳುವ ಈ ಕ್ರಮವು ಈಗಾಗಲೇ ಸಾಗಣೆಯಲ್ಲಿರುವ ಸರಕುಗಳಿಗೆ ಮಾತ್ರ ಅನ್ವಯಿಸುತ್ತದೆ ಮತ್ತು ಹೊಸ ಸಾಗಣೆಗಳನ್ನು ಒಳಗೊಂಡಿರುವುದಿಲ್ಲ.

# ಇರಾನ್ ಶೀಘ್ರವೇ ಶರಣಾಗಲಿದೆ ಎಂದ ಟ್ರಂಪ್: ಕೊಲ್ಲಿ ಯುದ್ಧ ಅಂತ್ಯ?

**ವಾಷಿಂಗ್ಟನ್, ಮಾ.13:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಒಂದು ಹೇಳಿಕೆಯಿಂದ ಕೊಲ್ಲಿ ಕದನ ಅಂತ್ಯವಾಗುತ್ತಾ ಎಂಬ ಪ್ರಶ್ನೆ ಎದ್ದಿದೆ. ಜಿ7 ರಾಷ್ಟ್ರಗಳ ಜೊತೆಗಿನ ವರ್ಚುಯಲ್ ಸಭೆಯಲ್ಲಿ ಇರಾನ್ ಶೀಘ್ರವೇ ಶರಣಾಗಲಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಯಾವಾಗ ಶರಣಾಗಬಹುದು ಮತ್ತು ಯುದ್ಧ ಯಾವಾಗ ಕೊನೆಗೊಳ್ಳಲಿದೆ ಎಂಬುದರ ಬಗ್ಗೆ ಯಾವುದೇ ಮಾಹಿತಿ ನೀಡಿಲ್ಲ ಎಂದು ವರದಿಯಾಗಿದೆ.



ಟ್ರಂಪ್ ಹೇಳಿಕೆಗೆ ಇರಾನ್ ಕಡೆಯಿಂದ ಯಾವುದೇ ಹೇಳಿಕೆ ಬಂದಿಲ್ಲ. ಅಮೆರಿಕದ ನೆಲೆಗಳು ಮತ್ತು ಮಧ್ಯಪ್ರಾಚ್ಯ ದೇಶಗಳ ಮೇಲೆ ನಡೆಯುತ್ತಿರುವ ದಾಳಿ ಕೊನೆಯಾಗಬೇಕಾದರೆ ನಮ್ಮ ಮೂರು ಷರತ್ತನ್ನುಗಳನ್ನು ಒಪ್ಪಿಕೊಳ್ಳಬೇಕೆಂದು ಇರಾನ್ ಗುರುವಾರ ಹೇಳಿತ್ತು.

ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರು, ಇರಾನ್‌ನ ಕಾನೂನುಬದ್ಧ ಹಕ್ಕುಗಳನ್ನು ಗುರುತಿಸಬೇಕು. ಸಂಘರ್ಷದ ಸಮಯದಲ್ಲಿ ಉಂಟಾದ ಹಾನಿಗಳಿಗೆ ಪರಿಹಾರ ನೀಡಬೇಕು. ಭವಿಷ್ಯದಲ್ಲಿ ಆಕ್ರಮಣ ಮಾಡುವುದಿಲ್ಲ ಎಂದು ದೃಢವಾದ ಅಂತರರಾಷ್ಟ್ರೀಯ ಖಾತರಿಗಳನ್ನು ನೀಡಬೇಕು ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ರಷ್ಯಾ ಮತ್ತು ಪಾಕಿಸ್ತಾನದ ನಾಯಕರ ಜೊತೆ ಮಾತನಾಡುವ ವೇಳೆ ನಾನು ಈ ವಿಚಾರಗಳ ಬಗ್ಗೆ ಮಾತನಾಡಿದ್ದೇನೆ. ಈ ಪ್ರದೇಶದಲ್ಲಿ ಶಾಂತಿಗೆ ಇರಾನ್ನ ಬದ್ಧತೆಯನ್ನು ನಾನು ಪುನರುಚ್ಚರಿಸಿದ್ದೇನೆ. ಜಿಯೋನಿಸ್ಟ್ ಆಡಳಿತ ಮತ್ತು ಅಮೆರಿಕ ಹೊತ್ತಿಸಿದ ಈ ಯುದ್ಧವನ್ನು ಕೊನೆಗೊಳಿಸಲು ಇರುವ ಏಕೈಕ ಮಾರ್ಗ ಇದು ಎಂದು ಬರೆದಿದ್ದಾರೆ.

# ತೈಲ ಪೂರೈಕೆ ಕುರಿತು ರಷ್ಯಾ ಜೊತೆ ಮಾತುಕತೆ: ಥೈಲ್ಯಾಂಡ್ ಉಪ ಪ್ರಧಾನಿ

**ಬ್ಯಾಂಕಾಕ್, ಮಾ.13:** ತೈಲ ಪೂರೈಕೆ ಕುರಿತು ರಷ್ಯಾ ಜೊತೆ ಮಾತುಕತೆ ಆರಂಭಿಸಲು ಥೈಲ್ಯಾಂಡ್ ಸಿದ್ಧವಾಗಿದೆ ಎಂದು ಥೈಲ್ಯಾಂಡ್ ಉಪ ಪ್ರಧಾನಿ ಫಿಪತ್ ರಾಟ್ಚಕಿಪ್ರಕರ್ನ್ ಶುಕ್ರವಾರ ಹೇಳಿದ್ದಾರೆ. "ಒಳ್ಳೆಯ ಸುದ್ದಿ ಇದೆ: ಅಮೆರಿಕ ರಷ್ಯಾದ ತೈಲ ರಫ್ತುಗಳನ್ನು ಬಹಿಷ್ಕರಿಸುವುದನ್ನು ನಿಲ್ಲಿಸಿದೆ ಎಂದು ಅಮೆರಿಕದ ಹೇಳಿಕೆಯಿಂದ ತಿಳಿದುಬಂದಿದೆ, ಆದ್ದರಿಂದ ಕಚ್ಚಾತೈಲ ಖರೀದಿ ಕುರಿತು ರಷ್ಯಾ ಜೊತೆ ಮಾತುಕತೆ ಆರಂಭಿಸುವ ದೇಶಗಳಲ್ಲಿ ಥೈಲ್ಯಾಂಡ್ ಕೂಡ ಒಂದಾಗಲಿದೆ. ಥೈಲ್ಯಾಂಡ್ ಇಂಧನ ಸಚಿವಾಲಯದಿಂದ ಮಾತುಕತೆಗಳನ್ನು ಪ್ರಾರಂಭಿಸಲಾಗುವುದು" ಎಂದು ಅಧಿಕಾರಿ ವರದಿಗಾರರಿಗೆ ತಿಳಿಸಿದರು. ಥೈಲ್ಯಾಂಡ್ ಪ್ರಸ್ತುತ 98 ದಿನಗಳ ಪೆಟ್ರೋಲಿಯಂ ಸಂಸ್ಕರಣೆಗೆ ಸಾಕಾಗುವಷ್ಟು ಕಚ್ಚಾತೈಲ ನಿಕ್ಷೇಪಗಳನ್ನು ಹೊಂದಿದೆ ಎಂದು ರಟ್ಚಕಿಪ್ರಕರ್ನ್ ಹೇಳಿದರು.



ಮಧ್ಯಪ್ರಾಚ್ಯ ಬಿಕ್ಕಟ್ಟು ಪರ್ಷಿಯನ್ ಗಲ್ಫ್ ತೈಲ ಪೂರೈಕೆಗೆ ಬೆದರಿಕೆ ಹಾಕುತ್ತದೆ, ಇದು ಸಾಮಾನ್ಯವಾಗಿ ಥೈಲ್ಯಾಂಡ್ನ ಸುಮಾರು 50% ಆಮದುಗಳನ್ನು ಒಳಗೊಂಡಿದೆ ಎಂದು ಅಧಿಕಾರಿ ಹೇಳಿದರು. ಉಳಿದ 50 ಪ್ರತಿಶತ ಪರ್ಯಾಯ ಮೂಲಗಳಿಂದ ಬಂದಿದೆ ಎಂದು ಅವರು ಹೇಳಿದರು.

ತನ್ನ, ಥಾಯ್ ಪ್ರಧಾನಿ ಅನುಟಿನ್ ಚಾರ್ನ್ವಿರಕುಲ್ ಮತ್ತು ಕ್ಯಾಬಿನೆಟ್ ಸದಸ್ಯರು ತೈಲ ಪೂರೈಕೆಯ ಪರ್ಯಾಯ ಮೂಲಗಳನ್ನು ಕಂಡುಹಿಡಿಯಲು ಸಾಧ್ಯವಿರುವ ಎಲ್ಲವನ್ನೂ ಮಾಡುತ್ತಿದ್ದಾರೆ ಎಂದು ರಟ್ಚಕಿಪ್ರಕರ್ನ್ ಹೇಳಿದರು. ಮಾರ್ಚ್ 17 ರಿಂದ, ರಾಷ್ಟ್ರೀಯ ಪೆಟ್ರೋಲಿಯಂ ನಿಧಿಯಿಂದ ಡೀಸೆಲ್ ಮತ್ತು ಭಾಗಶಃ ಗ್ಯಾಸೋಲಿನ್ ಮೇಲಿನ 15 ದಿನಗಳ ಸಬ್ಸಿಡಿ ಕೊನೆಗೊಂಡ ನಂತರ ಥೈಲ್ಯಾಂಡ್‌ನಲ್ಲಿ ಪೆಟ್ರೋಲ್ ಬೆಲೆಗಳು ಕ್ರಮೇಣ ಏರಿಕೆಯಾಗುತ್ತವೆ ಎಂದು ಅಧಿಕಾರಿ ತಿಳಿಸಿದ್ದಾರೆ. ಹೊಂದಾಣಿಕೆಗಳು ವಾರಕ್ಕೊಮ್ಮೆ ನಡೆಯುತ್ತವೆ ಎಂದು ಅವರು ಹೇಳಿದರು.

# ಯುರೋಪಿಯನ್ ಒಕ್ಕೂಟವು ಝೆಲೆನ್ಸ್ಕಿಯ ರಾಗಕ್ಕೆ ಕುಣಿಯಬಾರದು ರಷ್ಯಾದ ತೈಲ ವಿರುದ್ಧದ ನಿರ್ಬಂಧ ತೆಗೆಯಬೇಕು: ಸ್ಜಿಜಾರ್ಟೊ ಆಗ್ರಹ

ಬುಡಾಪೆಸ್ಟ್, ಮಾರ್ಚ್ 13: ಹಂಗೇರಿಯನ್ ವಿದೇಶಾಂಗ ಸಚಿವ ಪೀಟರ್ ಸ್ಜಿಜಾರ್ಟೊ ಶುಕ್ರವಾರ ಮತ್ತೊಮ್ಮೆ ಯುರೋಪಿಯನ್ ಒಕ್ಕೂಟಕ್ಕೆ ರಷ್ಯಾದ ಇಂಧನ ಸಂಪನ್ಮೂಲಗಳು ಯುರೋಪಿಯನ್ ಮಾರುಕಟ್ಟೆಗೆ ಮರಳಲು ಅನುವು ಮಾಡಿಕೊಡಲು ರಷ್ಯಾದ ತೈಲದ ಮೇಲಿನ ನಿರ್ಬಂಧಗಳನ್ನು ತೆಗೆದುಹಾಕುವಂತೆ ಕರೆ ನೀಡಿದರು.



ಅಮೆರಿಕದ ಉದಾಹರಣೆಯನ್ನು ಉಲ್ಲೇಖಿಸಿ, ಸ್ಜಿಜಾರ್ಟೊ "ವೊಲೊಡಿಮಿರ್ ಝೆಲೆನ್ಸ್ಕಿಯ ರಾಗಕ್ಕೆ ನೃತ್ಯ ಮಾಡುವ" ಬದಲು ರಷ್ಯಾದ ತೈಲದ ಮೇಲಿನ ನಿರ್ಬಂಧಗಳನ್ನು ತಾತ್ಕಾಲಿಕವಾಗಿ ಸಡಿಲಿಸುವಂತೆ ಸೂಚಿಸಿದರು. ಅಮೆರಿಕ ವಿದೇಶಿ ಆಸ್ತಿ ನಿಯಂತ್ರಣ ಕಚೇರಿಯ ಸಾಮಾನ್ಯ ಪರವಾನಗಿಯ ಪ್ರಕಾರ, ಮಾರ್ಚ್ 12 ರಿಂದ ಹಡಗುಗಳಲ್ಲಿ ಲೋಡ್ ಮಾಡಲಾದ ರಷ್ಯಾದ ಕಚ್ಚಾತೈಲ ಮತ್ತು ಪೆಟ್ರೋಲಿಯಂ ಉತ್ಪನ್ನಗಳನ್ನು ಮಾರಾಟ ಮಾಡಲು ಅಮೆರಿಕ ಅಧಿಕಾರ ನೀಡಿದೆ. "ಅಮೆರಿಕನ್ನರು ಏನು ಮಾಡುತ್ತಿದ್ದಾರೆ ಎಂಬುದರಲ್ಲಿ ಪರಿಹಾರವಿದೆ: ನಾವು ಝೆಲೆನ್ಸ್ಕಿಯವರ ರಾಗಕ್ಕೆ ನೃತ್ಯ ಮಾಡಬಾರದು, ರಷ್ಯಾದ ತೈಲದ ಮೇಲಿನ ನಿರ್ಬಂಧಗಳನ್ನು ತೆಗೆದುಹಾಕಬೇಕು ಮತ್ತು ರಷ್ಯಾದ ಇಂಧನ ಸಂಪನ್ಮೂಲಗಳನ್ನು ಯುರೋಪಿಯನ್ ಮಾರುಕಟ್ಟೆಗೆ ಮರಳಲು ಅನುಮತಿಸಬೇಕು. ದುರದೃಷ್ಟವಶಾತ್, ಬ್ರಸೆಲ್ಸ್ ಇನ್ನೂ ಈ ಹೆಜ್ಜೆ ಇಟ್ಟಿಲ್ಲ" ಎಂದು ಸ್ಜಿಜಾರ್ಟೊ ಸಾಮಾಜಿಕ ಮಾಧ್ಯಮದಲ್ಲಿ ವೀಡಿಯೊ ಸಂದೇಶದಲ್ಲಿ ಹೇಳಿದರು, ಹಂಗೇರಿ "ಅಮೆರಿಕನ್ನರಂತೆ ಬ್ರಸೆಲ್ಸ್ ಕೂಡ ರಷ್ಯಾದ ತೈಲದ ಮೇಲಿನ ನಿರ್ಬಂಧಗಳನ್ನು ಸ್ಥಗಿತಗೊಳಿಸಬೇಕೆಂದು ಒತ್ತಾಯಿಸುತ್ತದೆ" ಎಂದು ಹೇಳಿದರು.

"ನಾನು ರಷ್ಯಾದ ಉಪ ಇಂಧನ ಸಚಿವ ಪಾವೆಲ್ ಸೊರೊಕಿನ್ ಅವರೊಂದಿಗೆ ಮಾತನಾಡಿದ್ದೇನೆ, ಅವರು ರಷ್ಯಾದಲ್ಲಿ ಟರ್ಕ್‌ಸ್ಟ್ರೀಮ್ ಕೊಳವೆ ಮಾರ್ಗದ ನಿರ್ಣಾಯಕ ಮೂಲಸೌಕರ್ಯದ ವಿರುದ್ಧ ಉಕ್ರೇನ್ ಹಲವಾರು ದಾಳಿಗಳನ್ನು ಪ್ರಾರಂಭಿಸಿದೆ ಎಂದು ನನಗೆ ತಿಳಿಸಿದರು" ಎಂದು ಅವರು ಹೇಳಿದರು. "ಉಕ್ರೇನ್ ಈಗಾಗಲೇ ನಮ್ಮ ತೈಲ ವಿತರಣೆಯನ್ನು ನಿರ್ಬಂಧಿಸುತ್ತದೆ ಮತ್ತು ಈಗ ಅವರು ನಮ್ಮ ಅನಿಲ ಪೂರೈಕೆಯನ್ನು ಸಹ ಗುರಿಯಾಗಿಸಿಕೊಂಡಿದ್ದಾರೆ. ಟರ್ಕ್‌ಸ್ಟ್ರೀಮ್ ಹಂಗೇರಿಗೆ ಅತ್ಯಗತ್ಯ." "ಈ ಕೊಳವೆ ಮಾರ್ಗ ಅಸ್ತವ್ಯಸ್ತವಾದರೆ, ಹಂಗೇರಿ ಮತ್ತು ಹಲವಾರು ಮಧ್ಯ ಮತ್ತು ಆಗ್ನೇಯ ಯುರೋಪಿಯನ್ ದೇಶಗಳ ಸುರಕ್ಷಿತ ಅನಿಲ ಪೂರೈಕೆ ಅಪಾಯಕ್ಕೆ ಸಿಲುಕುತ್ತದೆ." ಏನಾಗುತ್ತಿದೆ ಎಂಬುದು ಸ್ಪಷ್ಟವಾಗಿದೆ ಎಂದು ಅವರು ಹೇಳಿದರು. ಹಂಗೇರಿಯನ್ ಚುನಾವಣೆಗಳು ಒಂದು ತಿಂಗಳು ದೂರದಲ್ಲಿವೆ, ಮತ್ತು ಚುನಾವಣೆಗಳಲ್ಲಿ ಹಸ್ತಕ್ಷೇಪ ಮಾಡಲು ಮತ್ತು ಟಿಸ್ಜಾ ಪಕ್ಷವನ್ನು ಬೆಂಬಲಿಸಲು ಉಕ್ರೇನ್ ಹಂಗೇರಿಯನ್ನು ಸಂಪೂರ್ಣ ಇಂಧನ ದಿಗ್ಬಂಧನಕ್ಕೆ ಒಳಪಡಿಸಲು ಪ್ರಯತ್ನಿಸುತ್ತಿದೆ, ಝೆಲೆನ್ಸ್ಕಿ ಮತ್ತು ಉಕ್ರೇನಿಯನ್ನರು "ಹಂಗೇರಿಯ ಪೂರೈಕೆಗೆ ನಿರ್ಣಾಯಕವಾದ ಇಂಧನ ಮೂಲಸೌಕರ್ಯದ ಮೇಲಿನ ದಾಳಿಯನ್ನು ನಿಲ್ಲಿಸಬೇಕು ಮತ್ತು ನಮ್ಮ ಚುನಾವಣೆಗಳಲ್ಲಿ ಹಸ್ತಕ್ಷೇಪ ಮಾಡುವುದನ್ನು ನಿಲ್ಲಿಸಬೇಕು" ಎಂದು ಅವರು ಹೇಳಿದರು.

# ರಾಹುಲ್ ದ್ರಾವಿಡ್‌ಗೆ ಪ್ರತಿಷ್ಠತ ಕರ್ನಲ್ ಸಿ.ಕೆ.ನಾಯ್ಡು ಜೀವಮಾನ ಸಾಧನೆ ಪ್ರಶಸ್ತಿ

**ನವದೆಹಲಿ, ಮಾ.13:** ಭಾರತೀಯ ಕ್ರಿಕೆಟ್ ಜಗತ್ತಿನ ಕಾಮ್ ಅಂಡ್ ಕೂಲ್ ಪ್ಲೇಯರ್ ಎಂದಾಕ್ಷಣ ನೆನಪಾಗುವುದು ಕನ್ನಡಿಗ ರಾಹುಲ್ ದ್ರಾವಿಡ್. ಇಂತಹ ರಾಹುಲ್ ದ್ರಾವಿಡ್ ಅವರಿಗೆ ಪ್ರತಿಷ್ಠಿತ ಕರ್ನಲ್ ಸಿ. ಕೆ.ನಾಯ್ಡು ಜೀವಮಾನ ಸಾಧನೆ ಪ್ರಶಸ್ತಿ ಲಭಿಸಿದೆ. ಟೀಂ ಇಂಡಿಯಾದ ಆಟಗಾರನಾಗಿ, ನಾಯಕನಾಗಿ, ನಿವೃತ್ತಿಯ ನಂತರ ತಂಡದ ಮುಖ್ಯ ತರಬೇತುದಾರನಾಗಿ ಸೇವೆ ಸಲ್ಲಿಸಿರುವ ದ್ರಾವಿಡ್ ಅವರಿಗೆ ಈ ಪ್ರಶಸ್ತಿ ಲಭಿಸಿರುವುದು ಸೂಕ್ತವಾಗಿದೆ. ಅರ್ಹ ಮತ್ತು ಯೋಗ್ಯ ಆಟಗಾರನಿಗೆ ಸಿಗುವ ಮೂಲಕ ಆ ಪ್ರಶಸ್ತಿಯ ಮೌಲ್ಯ ಹೆಚ್ಚಿದೆ.

ರಾಹುಲ್ ದ್ರಾವಿಡ್ ಅವರ ತರಬೇತಿಯಲ್ಲಿ ಭಾರತ ತಂಡ 2024ರ ಟಿ20 ವಿಶ್ವಕಪ್ ಗೆದ್ದಿತ್ತು. ಹಾಗೆಯೇ ಅವರ ಶಿಸ್ತು, ಶ್ರದ್ಧೆಯ ತರಬೇತಿಯಲ್ಲಿ ಸಾಕಷ್ಟು ಆಟಗಾರರು ಭಾರತಕ್ಕೆ ದಕ್ಕಿದ್ದರು. ಪ್ರತಿಭಾನ್ವಿತ ಆಟಗಾರರಾಗಿ ಅರಳಿದ್ದರು, ಕ್ರಿಕೆಟ್‌ಲೋಕವನ್ನು ಆಳುವ ಆಟಗಾರರಾಗಿ ಹೊರಹೊಮ್ಮಿದ್ದರು. ದೇಶಕ್ಕಾಗಿ ಆಡಿದ ಆಟದಿಂದ, ತರಬೇತಿಯಿಂದ, ನಿಸ್ವಾರ್ಥ ಸೇವೆಯಿಂದ ಕ್ರಿಕೆಟ್ ಲೋಕದಲ್ಲಿ ಹೆಸರುವಾಸಿಯಾಗಿರುವ 53ರ ಹರೆಯದ ದ್ರಾವಿಡ್ ಅವರಿಗೆ ಮಾರ್ಚ್ 15ರಂದು ದೆಹಲಿಯಲ್ಲಿ ನಡೆಯಲಿರುವ ಬಿಸಿಸಿಐ ವಾರ್ಷಿಕ ನಮನ್ ಪ್ರಶಸ್ತಿಗಳ ಸಮಾರಂಭದಲ್ಲಿ ಈ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.

ಈ ಸಂದರ್ಭ ಹೇಗಿದೆ ಎಂದರೆ, ದೇಶದ ಕ್ರಿಕೆಟ್ ಅಭಿಮಾನಿಗಳು ಭಾರತ ತಂಡ ನ್ಯೂಜಿಲೆಂಡ್ ವಿರುದ್ಧ ಟಿ20 ವಿಶ್ವಕಪ್ ವಿಜಯದ ಗುಂಗಿನಿಂದ ಇನ್ನೂ ಹೊರಬಂದಿಲ್ಲ. ಈ ಕ್ಷಣಕ್ಕೂ ಆ ಪಂದ್ಯದ ಒಂದೊಂದು ಕ್ಷಣವನ್ನು ಮೆಲುಕು ಹಾಕುತ್ತಿದ್ದಾರೆ. ಸಂಭ್ರಮದಲ್ಲಿ ತೇಲುತ್ತಿದ್ದಾರೆ. ಇದರ ನಡುವೆ, ಕ್ರಿಕೆಟ್ ಅಭಿಮಾನಿಗಳಿಗಿಂತಲೂ ದೊಡ್ಡದಾಗಿ ಸಂಭ್ರಮಿಸಿದ್ದು, ದೇಶದ ಆರ್ಥಿಕತೆ ಎಂಬ ಮಾತೂ ಕೇಳಿಬರುತ್ತಿದೆ. ಏಕೆಂದರೆ, 30 ದಿನಗಳ ಕ್ರಿಕೆಟ್ ಆಟದ ಸಮಯದಲ್ಲಿ 7ರಿಂದ 8 ಸಾವಿರ ಕೋಟಿ ರೂ.ಗಳ ಚಲಾವಣೆಯಾಗಿದೆ.



ಕ್ರಿಕೆಟ್ ಜಗತ್ತಿನಲ್ಲಿ ಚುಟುಕು ಕ್ರಿಕೆಟ್ ಎಂದೇ ಖ್ಯಾತಿಗೊಂಡ ಟಿ20 ಪಂದ್ಯಗಳು ಇತ್ತೀಚಿನ ದಿನಗಳಲ್ಲಿ ಹಣದ ಸುರಿಮಳೆ ಸುರಿಸುವ ಪಂದ್ಯಗಳಾಗಿ ಮಾರ್ಪಟ್ಟಿವೆ. ಒಂದು ಕ್ರಿಕೆಟ್ ಪಂದ್ಯ 240 ನಿಮಿಷಗಳ ಕಾಲ ನಡೆದರೆ, ಅದರ ಆರ್ಥಿಕ ಅಲೆಗಳು 240 ದಿನಗಳವರೆಗೆ ಏಳುತ್ತಿರುತ್ತವೆ ಎಂಬ ಮಾತು ಈಗ ಕ್ರಿಕೆಟ್ ಜಗತ್ತಿನಲ್ಲಿ ಚಾಲ್ತಿಯಲ್ಲಿದೆ. ಆ ಮಾತಿಗೆ ಒತ್ತು ನೀಡುವಂತೆ, ವಿಶ್ವಕಪ್ ಗೆದ್ದ ಭಾರತಕ್ಕೆ ತಂಡಕ್ಕೆ ಬಿಸಿಸಿಐ 131 ಕೋಟಿ ರೂ. ನಗದು ಬಹುಮಾನ ಘೋಷಿಸಿದೆ. ಜೊತೆಗೆ ಐಸಿಸಿ ಕಡೆಯಿಂದ 27.60 ಕೋಟಿ ಸಿಕ್ಕಿದೆ.

ಅಂದರೆ, ಕ್ರಿಕೆಟ್ ಎಂಬುದು ಈಗ ಆಟವಾಗಿಲ್ಲ, ವ್ಯಾಪಾರವಾಗಿದೆ. ಕೋಟ್ಯಂತರ ರೂಪಾಯಿಗಳ ವಹಿವಾಟುಳ್ಳ ಬೃಹತ್ ಉದ್ಯಮವಾಗಿ ಬೆಳೆದು ನಿಂತಿದೆ. ಕ್ರಿಕೆಟ್ ಆಟಗಾರ ರನ್ ಹೊಳೆ ಹರಿಸುವ, ವಿಕೆಟ್ ಉರುಳಿಸುವ, ಕ್ಯಾಚ್ ಹಿಡಿಯುವ ಮಷೀನ್ ಆಗಿದ್ದಾನೆ. ಪ್ರೇಕ್ಷಕರು ಹುಚ್ಚು ಅಭಿಮಾನಿಗಳಾಗಿ, ದೇಶಪ್ರೇಮಿಗಳಾಗಿ ರೂಪಾಂತರಗೊಂಡಿದ್ದಾರೆ. ಅದಕ್ಕೆ ಪುಷ್ಟಿ ನೀಡುವಂತೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಪುತ್ರ ಜಯ್ ಶಾ ಕೃಪೆಯಿಂದ ಈಗ ಆಟಕ್ಕೆ ಧರ್ಮದ ಲೇಪವೂ ಅಂಟಿಕೊಂಡಿದೆ. ಇವತ್ತಿನವರೆಗೆ ಆಟ ಎಂದರೆ, ಎಲ್ಲರ ಶ್ರಮ, ಪ್ರತಿಭೆ ಮತ್ತು ಒಗ್ಗಟ್ಟು-ಉತ್ಸಾಹ ಎನಿಸಿಕೊಂಡಿದ್ದು, ಈಗ ದೇವರು-ಧರ್ಮದ ಕೃಪೆಗೆ ಒಳಗಾಗಿದೆ.

ಮೊನ್ನೆ ಟಿ20 ವಿಶ್ವಕಪ್ ಗೆದ್ದ ನಂತರ, ಜಯ್ ಶಾ, ತರಬೇತುದಾರ ಗೌತಮ್ ಗಂಭೀರ್, ನಾಯಕ ಸೂರ್ಯಕುಮಾರ್ ಯಾದವ್- ಟ್ರೋಫಿಯನ್ನು ಎತ್ತಿಕೊಂಡು ಅರ್ಧರಾತ್ರಿಯಲ್ಲಿ ಹನುಮಂತನ ದರ್ಶನಕ್ಕೆ ಹೋಗಿದ್ದಾರೆ. ಕ್ರೀಡೆಯ ಕಿರೀಟಪ್ರಾಯವಾದ ಜಾತ್ಯತೀತ ಮೌಲ್ಯಕ್ಕೆ ಮಸಿ ಬಳಿದಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ ಕ್ರಿಕೆಟ್ ಅಭಿಮಾನಿಗಳು ಕೂಡ ಬದಲಾಗಿದ್ದಾರೆ. ಗೆದ್ದರೆ ಹೊಗಳುವ, ಸೋತರೆ ಕೆರಳುವ ಜನರಾಗಿ ಪರಿವರ್ತನೆ ಹೊಂದಿದ್ದಾರೆ. ಅದನ್ನೊಂದು ಆಟ, ಅಲ್ಲಿ ಸೋಲು-ಗೆಲುವು ಸಾಮಾನ್ಯ ಎನ್ನುವುದನ್ನೇ ಮರೆತಿದ್ದಾರೆ. ಇಂತಹ ಒತ್ತಡದಲ್ಲಿ ಆಡಬೇಕಾದ ಆಟಗಾರ, ಆಟದ ಸೊಗಸನ್ನು, ಕಲಾತ್ಮಕತೆಯನ್ನು ಕಡೆಗಣಿಸಿ, ತಂತ್ರಗಾರಿಕೆಗೆ ತಲೆಬಾಗಿದ್ದಾನೆ. ಪ್ರೇಕ್ಷಕರು, ಆಯ್ಕೆದಾರರು, ಜಾಹೀರಾತುದಾರರು, ಬೆಟ್ಟಿಂಗ್ ಕಟ್ಟುವವರ ಒತ್ತಡಕ್ಕೆ ಒಳಗಾಗಿ ಜೀವವನ್ನು ಒತ್ತೆಯಿಟ್ಟು ಮೈದಾನಕ್ಕಿಳಿಯಬೇಕಾದ ಸ್ಥಿತಿ ಎದುರಾಗಿದೆ.

ಆದರೆ ರಾಹುಲ್ ದ್ರಾವಿಡ್ ಎಂಬ ಆಟಗಾರನೂ ಬೇರೆ, ಆಟವೂ ಬೇರೆ. ಬ್ಯಾಟಿಂಗ್ ಶೈಲಿಯಂತೂ ಅದ್ಭುತ. ಕರ್ನಾಟಕದ ಹೆಮ್ಮೆಯ ಕ್ರಿಕೆಟಿಗ ಗುಂಡಪ್ಪ ವಿಶ್ವನಾಥ್ ಮತ್ತು ಮೊಹಮ್ಮದ್ ಅಜರುದ್ದೀನ್- ಇಬ್ಬರ ಶೈಲಿಯನ್ನು ಸೊಗಸಾಗಿ ಅಳವಡಿಸಿದ ಆಟವೇ ದ್ರಾವಿಡ್ ಶೈಲಿ. ಅವರ ಒಂದೊಂದು ಹೊಡೆತವನ್ನು ಕ್ರಿಕೆಟ್ ಪ್ರೇಮಿಗಳು ಆಸ್ವಾದಿಸುವಂತೆ, ಎದುರಾಳಿ ತಂಡ ಕೂತು ನೋಡಿ ಕಲಿಯುವಂತೆ, ಯೋಚಿಸುವಂತೆ ಹೊಡೆಯುತ್ತಿದ್ದರು. ಸೆಂಚುರಿ ಹೊಡೆಯಲಿ, ಪಂದ್ಯ ಗೆಲ್ಲಲಿ ಅಗತ್ಯಕ್ಕಿಂತ ಹೆಚ್ಚು ಮಾತನಾಡಿದ್ದಿಲ್ಲ, ಮೆರೆದಾಡಿದ್ದಂತೂ ಇಲ್ಲವೇ ಇಲ್ಲ. ಅವರಲ್ಲಿನ ಶಿಸ್ತು, ಶ್ರದ್ಧೆ ಮತ್ತು ತನ್ಮಯತೆ ಮಿಕ್ಕವರಿಗೆ ಮಾದರಿಯಾಗುವಂಥದ್ದು.

ಭಾರತೀಯ ಕ್ರಿಕೆಟ್ ತಂಡದ ಮಾಜಿ ನಾಯಕ ರಾಹುಲ್ ದ್ರಾವಿಡ್ ಎಂದಾಕ್ಷಣ ಎಲ್ಲರೂ ಹೇಳುವ ಮಾತು ಒಂದೇ- ಜಂಟಲ್ಮನ್. ಮೃದು ಮಾತಿನ, ಸೌಮ್ಯ ಸ್ವಭಾವದ, ಅಪಾರ ತಾಳ್ಮೆ, ಸಹನೆಯ, ವಿವಾದಗಳಿಲ್ಲದ, ವಿಪರೀತಕ್ಕೆ ಹೋಗದ ಅಪ್ರಥಮ ಕ್ರಿಕೆಟಿಗ. ಆಟದಲ್ಲೂ ಅಷ್ಟೆ, ಕಲಾತ್ಮಕ ಶೈಲಿಯ ಹೊಡೆತಕ್ಕೆ ಹೆಸರಾದ, ತಂಡವಾಗಿ ತುಡಿಯುವ, ದೇಶಕ್ಕಾಗಿ ಆಡುವ, ಜವಾಬ್ದಾರಿಯನ್ನೆಂದೂ ಮರೆಯದ ಆಟಗಾರ. ಗೆದ್ದಾಗ ಮೆರೆಯದ, ಸೋತಾಗ ಸೊರಗದ ಸ್ಥಿತಪ್ರಜ್ಞ, ಮೈದಾನದಿಂದ ಹೊರಗೆ, ಸಾಮಾಜಿಕ ಬದುಕಿನಲ್ಲೂ ಅದೇ ಸಂಯಮದ ನಡೆ-ನುಡಿಗೆ ಹೆಸರಾದವರು. ತಾನೊಬ್ಬ ಸ್ಟಾರ್ ಎಂಬ ಅಹಂನಿಂದ ಆಚೆಗೆ ನಿಂತವರು. ಹಾಗಾಗಿ ರಾಹುಲ್ ದ್ರಾವಿಡ್ರ ಆಟ ಮತ್ತು ಅವರು ಮೈಗೂಡಿಸಿಕೊಂಡ ವಿನಯವಂತ ವ್ಯಕ್ತಿತ್ವವೇ ಅವರನ್ನು ಇಷ್ಟು ಎತ್ತರಕ್ಕೆ ತಂದು ನಿಲ್ಲಿಸಿದೆ.